

ವೇಣು ಸಾರಥ್ಯದಲ್ಲಿ...


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನವೇ ನಿತ್ಯ

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 22, ಸಂಚಿಕೆ: 33, ಪುಟಗಳು: 8, ಮಂಗಳವಾರ, 12 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines


ಸುಭಾಷಿತ

ಎಂತಹ ಕಠಿಣ ಪರಿಸ್ಥಿತಿಯಲ್ಲೂ ಶರಣಾಗತವಾಗದಿರುವುದೆ ನಿಜವಾದ ಶಕ್ತಿ.

## ಪಂಚಾಂಗ

(ಮಂಗಳವಾರ 12, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ನಕ್ಷತ್ರ: ಶತಭಿಷ, ತಿಥಿ: ಏಕದಶಿ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

## ಸಂಕ್ಷಿಪ್ತ ಸುದ್ದಿ

### ಕರ್ನಾಟಕ ಸೇರಿ 9 ಕಡೆ ಎನ್‌ಐಎ ದಾಳಿ: ಮೊಬೈಲ್, ಬ್ಯಾಟರಿ ಹಾಗೂ ದಾಖಲೆಗಳು ವಶಕ್ಕೆ



**ಬೆಂಗಳೂರು:** ರಾಷ್ಟ್ರೀಯ ತನಿಖಾ ದಳ ಅಧಿಕಾರಿಗಳು ಸೋಮವಾರ (ನ.11) ಕರ್ನಾಟಕ ಸೇರಿದಂತೆ ಒಂಬತ್ತು ರಾಜ್ಯಗಳಲ್ಲಿ ಏಕಕಾಲಕ್ಕೆ ದಾಳಿ ಮಾಡಿ, ಶೋಧ ಕಾರ್ಯಾಚರಣೆ ನಡೆಸಿತು. ಭಾರತವನ್ನು ಅಸ್ಥಿರಗೊಳಿಸುವ ಅಲ್ ಖೈದಾ ಉಗ್ರ ಸಂಘಟನೆಯ ಸಂಚಿಗೆ ಸಂಬಂಧಿಸಿದಂತೆ ಈ ದಾಳಿ ನಡೆದಿದೆ ಎಂದು ತಿಳಿದುಬಂದಿದೆ. ಭಾರತದಲ್ಲಿ ನೆಲೆಸಿರುವ ಬಾಂಗ್ಲಾದೇಶ ಪ್ರಜೆಗಳು ಅಲ್ ಖೈದಾ ಜೊತೆಗೆ ನಂಟು ಹೊಂದಿದ್ದಾರೆ. ಜೊತೆಗೆ ಅಲ್ ಖೈದಾ ಉಗ್ರ ಸಂಘಟನೆ ಕುರಿತು ಪ್ರಚಾರ, ಚಟುವಟಿಕೆಗಳನ್ನು ಬೆಂಬಲಿಸುವ ಮತ್ತು ಧನಸಹಾಯ ಮಾಡುವ ವ್ಯಕ್ತಿಗಳ ವಿರುದ್ಧ ಜಮ್ಮು-ಕಾಶ್ಮೀರ, ಕರ್ನಾಟಕ, ಪಶ್ಚಿಮ ಬಂಗಾಳ, ಬಿಹಾರ, ಆಸ್ಸಾಂನ 9 ಕಡೆ ದಾಳಿ ಮಾಡಲಾಗಿದೆ.

### ಶಿಕ್ಷಣ ತಜ್ಞ, ಮಾಜಿ ಉಪಕುಲಪತಿ, ಪ್ರೊ.ಎಂಎಸ್ ತಿಮ್ಮಪ್ಪ ನಿಧನ



**ಬೆಂಗಳೂರು:** ಶಿಕ್ಷಣ ತಜ್ಞ, ಮಾಜಿ ಉಪಕುಲಪತಿ, ತತ್ವಜ್ಞಾನಿ ಪ್ರೊ.ಎಂ.ಎಸ್. ತಿಮ್ಮಪ್ಪ (83) ನಿಧನರಾಗಿದ್ದಾರೆ. ಪ್ರೊ. ಎಂ.ಎಸ್. ತಿಮ್ಮಪ್ಪ ಅವರು ಅಕ್ಟೋಬರ್ 11ರ ಮುಂಜಾನೆ ತಮ್ಮ ಮನೆಯಲ್ಲಿ ಕಾಲು ಜಾರಿ ಬಿದ್ದಿದ್ದರು. ಇದರಿಂದ ಅವರ ತಲೆಗೆ ಬಲವಾದ ಪೆಟ್ಟು ಬಿದ್ದಿತ್ತು. ತಕ್ಷಣವೇ ಅವರನ್ನು ಅಪೋಲೋ ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ಚಿಕಿತ್ಸೆ ಪಡೆಯುತ್ತಿದ್ದರು. ಆದರೆ, ಚಿಕಿತ್ಸೆ ಫಲಕಾರಿಯಾಗದೆ, ಮಂಗಳವಾರ ಬೆಳಗಿನ ಜಾವ 1.50ರ ಸುಮಾರಿಗೆ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರು ಎಳೆದರು.

## ಉಪಚುನಾವಣೆಗೆ ಇನ್ನೊಂದೇ ದಿನ: ಕ್ಷೇತ್ರಗಳಲ್ಲಿ ಭರ್ಜರಿ ತಯಾರಿ

**ಬೆಂಗಳೂರು:** ಕರ್ನಾಟಕದ ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಉಪ ಚುನಾವಣೆ ಕದನ ಕಣ ರಂಗೇರಿದೆ. ಮೂರು ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದೆ. ಮತದಾನಕ್ಕೆ ಕ್ಷಣಗಣನೆ ಶುರುವಾಗಿದೆ. ಇವತ್ತು ಮನೆ ಮನೆ ಪ್ರಚಾರಕ್ಕೆ ಅವಕಾಶ ನೀಡಲಾಗಿದೆ. ಕಳೆದ 15 ದಿನಗಳಿಂದ ಬಿಜೆಪಿ, ಜೆಡಿಎಸ್ ಹಾಗೂ ಕಾಂಗ್ರೆಸ್ ನಾಯಕರು ಗೆಲುವಿಗೆ ರಣತಂತ್ರ ರೂಪಿಸಿದ್ದಾರೆ. ಅಬ್ಬರದ ಪ್ರಚಾರ, ಬೃಹತ್ ಱಲಿ ನಡೆಸಿದ್ದಾರೆ. ಪ್ರಚಾರಕ್ಕೆ ತೆರೆ ಬೀಳುತ್ತಿದ್ದಂತೆ ಮತದಾರರಲ್ಲದವರು ಆಯಾ ಕ್ಷೇತ್ರ ತೊರೆದಿದ್ದಾರೆ.

ಬುಧವಾರ ಬೆಳಗ್ಗೆ 7 ಗಂಟೆಯಿಂದ ಸಂಜೆ 6ಗಂಟೆ ವರೆಗೂ ವೋಟಿಂಗ್ ನಡೆಯಲಿದೆ. ಇದಕ್ಕಾಗಿ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ. 3ಕ್ಷೇತ್ರಗಳ ಗಡಿಯಲ್ಲಿ ಆಯೋಗ ನಿಗಾವಹಿಸಿದ್ದು, ಕ್ಷೇತ್ರದ ಸುತ್ತ 5 ಕಿ.ಮೀ ಮದ್ಯ ಮಾರಾಟ ಸಂಪೂರ್ಣ ಬಂದ್ ಮಾಡಲಾಗಿದೆ. ಸೋಮವಾರ ಸಂಜೆ 6 ಗಂಟೆಯಿಂದ ಗುರುವಾರ ಬೆಳಗ್ಗೆ 6 ಗಂಟೆವರೆಗೂ ಮದ್ಯ ಮಾರಾಟ ನಿಷೇಧಿಸಲಾಗಿದೆ.

**ಶಿಗ್ಗಾಂವಿ ಕ್ಷೇತ್ರದಲ್ಲಿ ಹೇಗಿದೆ ಮತದಾನಕ್ಕೆ ಸಿದ್ಧತೆ:** ಶಿಗ್ಗಾಂವಿ ಕ್ಷೇತ್ರದಲ್ಲಿ ಒಟ್ಟು 241 ಮತಗಟ್ಟೆಗಳ ಸ್ಥಾಪಿಸಲಾಗಿದೆ. ಈಪೈಕಿ 92 ಸೂಕ್ಷ್ಮ ಮತಗಟ್ಟೆ ಎಂದು ಗುರುತಿಸಲಾಗಿದೆ. ಸೂಕ್ಷ್ಮ ಮತಗಟ್ಟೆಗಳಿಗೆ 10 ಮಂದಿ ವೀಕ್ಷಕರನ್ನು ನೇಮಿಸಲಾಗಿದೆ. 121 ಮತಗಟ್ಟೆಗಳಿಗೂ ವೆಬ್ ಕಾಸ್ಟಿಂಗ್ ಸೌಲಭ್ಯ ಮಾಡಲಾಗಿದೆ. ಕ್ಷೇತ್ರದಲ್ಲಿ 20 ವಿಡಿಯೋ ಗ್ರಾಫರ್ ಗಳನ್ನು ನಿಯೋಜಿಸಲಾಗಿದೆ. ಒಟ್ಟು 1,060 ಅಧಿಕಾರಿಗಳು, ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಭದ್ರತೆಗೆ ಪೊಲೀಸ್, ಸಿಆರ್ ಪಿಎಫ್, ಸಿಎಪಿಎಫ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.



ಮತಗಟ್ಟೆಗಳಲ್ಲಿ ರ ಯಾಂಪ್, ಕುಡಿಯುವ ನೀರು, ವ್ಹೀಲ್ ಚೇರ್ ಸೌಲಭ್ಯ ವ್ಯವಸ್ಥೆ ಮಾಡಲಾಗಿದ್ದು, ಹಿರಿಯ ನಾಗರಿಕರ ಮತದಾನಕ್ಕೆ ಆದ್ಯತೆ ಮೇರೆಗೆ ಅನುಕೂಲ ನೀಡಲಾಗಿದೆ.

ಶಿಗ್ಗಾಂವಿ ಕ್ಷೇತ್ರದಲ್ಲಿ 2,37,525 ಮತದಾರರಿದ್ದಾರೆ. ಇದರಲ್ಲಿ 1.21,443 ಪುರುಷರು ಹಾಗೂ 1,16, 076 ಮಹಿಳೆಯರು ಇದ್ದಾರೆ. ಇತರೆ 6 ಇದೆ.

**ಸಂಡೂರು ಕ್ಷೇತ್ರದಲ್ಲಿ ಹೇಗಿದೆ ಮತದಾನಕ್ಕೆ ಸಿದ್ಧತೆ:** ಸಂಡೂರು ಕ್ಷೇತ್ರದಲ್ಲಿ ಒಟ್ಟು 2,36,100 ಮತದಾರರಿದ್ದಾರೆ. ಇದ್ರಲ್ಲಿ 1,18,282 ಮಹಿಳೆಯರಿದ್ದರೆ, 1,17,789 ಪುರುಷರಿದ್ದಾರೆ. ಇನ್ನೂ ಇತರೆ ಮತದಾರರು 29 ಮಂದಿ ಇದ್ದಾರೆ. ಸಂಡೂರು ಕ್ಷೇತ್ರದ ವ್ಯಾಪ್ತಿಯಲ್ಲಿ 253 ಮತಗಟ್ಟೆ ಸ್ಥಾಪಿಸಲಾಗಿದೆ. 253 ಪೈಕಿ 55 ಮತಗಟ್ಟೆಗಳು ಸೂಕ್ಷ್ಮ ಎಂದು ಗುರುತಿಸಲಾಗಿದೆ. 608 ಮತಗಟ್ಟೆ ಅಧಿಕಾರಿಗಳು ಸೇರಿ 1,215 ಸಿಬ್ಬಂದಿ ನಿಯೋಜಿಸಲಾಗಿದೆ. ಮತದಾನ ಕರ್ತವ್ಯಕ್ಕಾಗಿ 304 ಪಿಆರ್ ಒ, 304 ಎಪಿಆರ್ ಒ ನಿಯೋಜಿಸಲಾಗಿದೆ. ಭದ್ರತೆಗಾಗಿ 344 ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಇದರ ಜೊತೆಗೆ ಕ್ಷೇತ್ರದಲ್ಲಿ 2 ಅಂತಾರಾಜ್ಯ ಸೇರಿದಂತೆ ಒಟ್ಟು 8 ಚೆಕ್ ಪೋಸ್ಟ್ ಸ್ಥಾಪಿಸಲಾಗಿದೆ.

**ಚನ್ನಪಟ್ಟಣದಲ್ಲಿ ಹೇಗಿದೆ ಸಿದ್ಧತೆ:** ಚನ್ನಪಟ್ಟಣ ಕ್ಷೇತ್ರದಲ್ಲಿ 2,32,836 ಮತದಾರರಿದ್ದಾರೆ. 1,12,271 ಪುರುಷರಿದ್ದಾರೆ. 1,20,557 ಮಹಿಳಾ ಮತದಾರರಿದ್ದಾರೆ. ಜೊತೆಗೆ ಇತರೆ 8 ಮತದಾರರು ಇದ್ದಾರೆ.

ಬುಧವಾರ ಮತದಾನ ನಡೆಯಲಿದ್ದು, ಮತದಾರರು ಅಭ್ಯರ್ಥಿಗಳ ಭವಿಷ್ಯ ಬರೆಯಲಿದ್ದಾರೆ. ಯಾರಿಗೆ ವಿಜಯಮಾಲೆ ಸಿಗಲಿದೆ ಎಂಬುದನ್ನು ತಿಳಿಯಲು ನವೆಂಬರ್ 23 ರವರೆಗೆ ಕಾಯಬೇಕಾಗಿದೆ.

## ಬಾಬಾ ಸಿದ್ದಿಕಿ ಕೊಲೆಯ ಪ್ರಮುಖ ಆರೋಪಿ ಶಿವಕುಮಾರ್ ಬಂಧನ

# ಬಯಲಾಯ್ತು ಭಯಾನಕ ವಿಚಾರ

**ಉತ್ತರ ಪ್ರದೇಶ:** ಎನ್‌ಸಿಪಿ ನಾಯಕ ಬಾಬಾ ಸಿದ್ದಿಕಿ ಹತ್ಯೆ ಪ್ರಕರಣದಲ್ಲಿ ಮತ್ತೊಬ್ಬ ಶೂಟರ್ ನನ್ನು ಪೊಲೀಸರು ಬಂಧಿಸಿದ್ದಾರೆ. ಎಸ್‌ಟಿಎಫ್ ಉತ್ತರ ಪ್ರದೇಶ ಮತ್ತು ಮುಂಬೈ ಕ್ರೈಂ ಬ್ರಾಂಚ್ ಜಂಟಿ ಕಾರ್ಯಾಚರಣೆಯಲ್ಲಿ ಶೂಟರ್ ಶಿವಕುಮಾರ್‌ನನ್ನು ಭಾನುವಾರ ನನ್ಪಾರಾ ಬಹ್ರೈಚ್ ಜಿಲ್ಲೆಯಲ್ಲಿ ಬಂಧಿಸಲಾಗಿದೆ.

ಅವರ ಬಂಧನದ ಬಳಿಕ ಹಲವು ವಿಚಾರಗಳು ಬಹಿರಂಗಗೊಂಡಿದೆ. ನಮಗೆ ಬಾಬಾ ಸಿದ್ದಿಕಿ ಅಥವಾ ಅವರ ಮಗ ಜೀಶಾನ್ ಸಿದ್ದಿಕಿಯನ್ನು ಕೊಲ್ಲುವಂತೆ ತಿಳಿಸಲಾಗಿತ್ತು ಎಂದು ಶಿವಕುಮಾರ್ ಹೇಳಿದ್ದಾರೆ. ಶಿವಕುಮಾರ್ ನೇಪಾಳಕ್ಕೆ ಪಲಾಯನ ಮಾಡಲು ಪ್ರಯತ್ನಿಸುತ್ತಿದ್ದಾಗ ಉತ್ತರ ಪ್ರದೇಶದ ಬಹ್ರೈಚ್‌ನಲ್ಲಿ ತನ್ನ ನಾಲ್ವರು ಸಹಾಯಕರೊಂದಿಗೆ ಭಾನುವಾರ ಬಂಧಿಸಲಾಯಿತು. ಅಕ್ಟೋಬರ್ 12ರಂದು ಜೀಶಾನ್ ಸಿದ್ದಿಕಿ ಅವರ ಕಚೇರಿಯ ಹೊರಗೆ ಬಾಬಾ ಸಿದ್ದಿಕಿಯನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು, ಪ್ರಮುಖ ಆರೋಪಿಗಳಲ್ಲಿ ಈ ಶಿವಕುಮಾರ್ ಕೂಡ ಒಬ್ಬ.

ಜೈಲಿನಲ್ಲಿರುವ ಗ್ಯಾಂಗ್ ಸ್ಟರ್ ಲಾರೆನ್ಸ್ ಬಿಷ್ಣೋಯ್ ಅವರ ಸಹೋದರ ಅಲ್ಮೋಲ್ ಬಿಷ್ಣೋಯ್ ಅವರು ಮೊದಲು ಯಾರನ್ನು ಕಂಡರೂ ಶೂಟ್ ಮಾಡುವಂತೆ ನಮಗೆ ಸೂಚನೆ ನೀಡಿದ್ದರು ಎಂದು ಹೇಳಿಕೆ ಕೊಟ್ಟಿರುವುದಾಗಿ ಪೊಲೀಸ್ ಮೂಲಗಳು ಎನ್‌ಡಿಟಿವಿಗೆ ತಿಳಿಸಿವೆ.

ಗುಂಡು ಹಾರಿಸಿದ್ದ ಮೂವರಲ್ಲಿ ಒಬ್ಬನಿಂದ ವಶಪಡಿಸಿಕೊಂಡ ಮೊಬೈಲ್ ನಲ್ಲಿ ಜಿಶಾನ್ ಸಿದ್ದಿಕಿ ಫೋಟೊ ಪತ್ತೆಯಾಗಿದೆ. ಬಾಬಾ ಸಿದ್ದಿಕಿ ಕೊಂದ ತಕ್ಷಣ, ಶಿವಕುಮಾರ್ ಗೌತಮ್ ತಕ್ಷಣ ತನ್ನ ಅಂಗಿಯನ್ನು ಬದಲಾಯಿಸಿ ಜನಸಂದಣಿಯಲ್ಲಿ ಕಣ್ಮರೆಯಾಗಿದ್ದರು. ಬಳಿಕ ಅಪರಾಧದ ಸ್ಥಳದಲ್ಲಿಯೇ ಇದ್ದರು.



ಅಪರಾಧ ಸ್ಥಳದಿಂದ ಕುರ್ಲಾಗೆ ಆಟೋದಲ್ಲಿ ಪ್ರಯಾಣಿಸಿ ನಂತರ ಥಾಣೆಗೆ ಸ್ಥಳೀಯ ರೈಲನ್ನು ಹತ್ತಿದ್ದರು. ಥಾಣೆಯಿಂದ ಪುಣೆಗೆ ರೈಲಿನಲ್ಲಿ ಹೋಗಿ ಪ್ರಯಾಣದ ವೇಳೆ ತನ್ನ ಮೊಬೈಲ್ ಫೋನ್ ಅನ್ನು ಎಸೆದಿದ್ದರು. ಸುಮಾರು ಏಳು ದಿನಗಳ ಕಾಲ ಪುಣೆಯಲ್ಲಿ ತಂಗಿದ್ದ ಶಿವಕುಮಾರ್ ನಂತರ ರೈಲಿನಲ್ಲಿ ಉತ್ತರ ಪ್ರದೇಶದ ಝಾನ್ಸಿಗೆ ತೆರಳಿದ್ದರು. ನಂತರ ಅವರು ಐದು ದಿನಗಳ ಕಾಲ ಅಲ್ಲಿಯೇ ಇದ್ದು ರಾಜ್ಯದ ರಾಜಧಾನಿ ಲಕ್ನೋಗೆ ತೆರಳಿದ್ದ.

ಪುಟ 2

## ಗುಂಡಿನ ಚಕಮಕಿ

### 11 ಶಂಕಿತ ಕುಕಿ ಬಂಡುಕೋರರ ಹತ್ಯೆ

**ಮಣಿಪುರ:** ಮಣಿಪುರದಲ್ಲಿ ಭದ್ರತಾ ಪಡೆಗಳು ಉತ್ತಮ ಯಶಸ್ಸನ್ನು ಸಾಧಿಸಿವೆ. ಜಿರಿಬಾಮ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್ ಕೌಂಟರ್‌ನಲ್ಲಿ ಕನಿಷ್ಠ 11 ಶಂಕಿತ ಕುಕಿ ಬಂಡುಕೋರರು ಹತರಾಗಿದ್ದಾರೆ. ಪರಿಸ್ಥಿತಿ ಇನ್ನೂ ಉದ್ವಿಗ್ನವಾಗಿದ್ದು, ಈ ಬಾರಿ ಹೆಚ್ಚಿನ ಮಾಹಿತಿಗಾಗಿ ಕಾಯಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಅಸ್ಸಾಂ ಗಡಿಯಲ್ಲಿರುವ ಜಿಲ್ಲೆಯಲ್ಲಿ ಶಂಕಿತ ಕುಕಿ ಉಗ್ರರು ನಡೆಸಿದ ದಾಳಿಯಲ್ಲಿ ಕೆಲವು ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಸಿಬ್ಬಂದಿಯೂ ಗಾಯಗೊಂಡಿದ್ದಾರೆ. ಶಂಕಿತ ಕುಕಿ ಉಗ್ರಗಾಮಿಗಳು ಜಿರಿಬಾಮ್‌ನಲ್ಲಿರುವ ಪೊಲೀಸ್ ಠಾಣೆಯ ಮೇಲೆ ಎರಡು ಕಡೆಯಿಂದ ದಾಳಿ ಮಾಡಿದಾಗ ಎನ್‌ಕೌಂಟರ್ ಪ್ರಾರಂಭವಾಯಿತು.



ದಾಳಿ ನಡೆದ ಪೊಲೀಸ್ ಠಾಣೆಯ ಪಕ್ಕದಲ್ಲಿ ನಿರಾಶ್ರಿತರ ಪರಿಹಾರ ಶಿಬಿರವೂ ಇದೆ. ದಾಳಿಕೋರರು ಶಿಬಿರವನ್ನು ಗುರಿಯಾಗಿಸಲು ಪ್ರಯತ್ನಿಸಿರಬಹುದು ಎಂದು ಮೂಲಗಳು ಹೇಳಿವೆ.ಜಿರಿಬಾಮ್‌ನ ಬೊರೊಬೆಕ್ರಾದಲ್ಲಿನ ಪೊಲೀಸ್ ಠಾಣೆಯು ಇತ್ತೀಚಿನ ತಿಂಗಳುಗಳಲ್ಲಿ ಹಲವಾರು ಬಾರಿ ಗುರಿಯಾಗಿದೆ ಎಂದು ಮೂಲಗಳು ತಿಳಿಸಿವೆ.

ಪುಟ 2

## ಸಿಎಂ ಪತ್ನಿ ಹೆಸರಿಗೆ ನಿವೇಶನ ಹಂಚಿಕೆ ಮಾಡಲಾದ

# ಲಿಸ್ಟ್ ವೈರಲ್

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) 50-50 ನಿವೇಶ ಹಂಚಿಕೆ ಹಗರಣ ರಾಜ್ಯ ರಾಜಕಾರಣದಲ್ಲಿ ಸಾಕಷ್ಟು ಸಂಚಲನ ಸೃಷ್ಟಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ವಾಗ್ದಾಳಿ ಮಾಡಲು ವಿಪಕ್ಷಗಳಿಗೆ ಅಸ್ತ್ರ ಸಿಕ್ಕಿದೆ. ಇದೀಗ ನಿವೇಶನ ಪಡೆದವರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರ ಹೆಸರೂ ಇರುವ ಪಟ್ಟಿ ಸಮಾಜಿಕ ಜಾಲಾಣದಲ್ಲಿ ವೈರಲ್ ಆಗಿದೆ.

ಪಟ್ಟಿಯಲ್ಲಿ ಬರೊಬ್ಬರಿ 928 ನಿವೇಶಗಳ ವಿವರ ಇದೆ. ವೈರಲ್ ಆದ ಪಟ್ಟಿಯಲ್ಲಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಪಡೆದ 14 ನಿವೇಶನಗಳ ವಿವರ ಇದೆ. ಹಾಗೇ ಸಿದ್ದರಾಮಯ್ಯ ಆಪ್ತ ಹಿನ್‌ಕಲ್ ಪಾಪಣ್ಣ ಸೇರಿದಂತೆ ಹಲವರು 50:50 ಅನುಪಾತದಲ್ಲಿ ಪಡೆದಿರುವ ಸೈಟ್‌ಗಳ ವಿವರ ಕೂಡ ಇದೆ.




ಪುಟ 2

## ಬೆಂಗಳೂರು ಪೊಲೀಸರಿಗೆ ಬೇಕಾಗಿದ್ದ ದರೋಡೆಕೋರ ಫಹೀಮ್ ಬಂಧನ

# ಮನೆ ಬುಲ್ಡೋಜರ್‌ನಿಂದ ನೆಲಸಮ

**ಬೆಂಗಳೂರು:** ವಿವಿಧ ಅಪರಾಧ ಪ್ರಕರಣಗಳಲ್ಲಿ ಬೆಂಗಳೂರು ಪೊಲೀಸರಿಗೆ ಬೇಕಾಗಿದ್ದ ನಟೋರಿಯಸ್ ಫಹೀಮ್ ಅಲಿಯಾಸ್ ಎಟಿಎಂನನ್ನು ಉತ್ತರ ಪರದೇಶದಲ್ಲಿ ಬಂಧಿಸಲಾಗಿದೆ. ಅಷ್ಟೇ ಅಲ್ಲದೆ, ಅಲ್ಲಿರುವ ಆತನ ಮನೆಯನ್ನು ಬುಲ್ಡೋಜರ್ ನಿಂದ ನೆಲಸಮ ಮಾಡಲಾಗಿದೆ. ಕಳ್ಳತನ, ದರೋಡೆ ಗ್ಯಾಂಗ್ ನ ಮಾಸ್ಟರ್ ಮೈಂಡ್ ಆಗಿದ್ದ ಫಹೀಮ್ ಗ್ಯಾಂಗ್ ನ ಇಬ್ಬರನ್ನು ಕಳೆದ ತಿಂಗಳು ಉತ್ತರ ಪ್ರದೇಶದಲ್ಲಿ ಬಂಧಿಸಲಾಗಿತ್ತು.

**ದೇಶದಾದ್ಯಂತ ಕಳ್ಳತನದಲ್ಲಿ ಶಾಮೀಲಾಗಿದ್ದ ಫಹೀಮ್:** ಫಹೀಮ್ ಗ್ಯಾಂಗ್ ಬೆಂಗಳೂರಿನಲ್ಲಿ ಅಷ್ಟೇ ಅಲ್ಲ, ಉತ್ತರ ಪ್ರದೇಶದ ವಿವಿಧ ನಗರಗಳೂ ಸೇರಿದಂತೆ ದೇಶದಾದ್ಯಂತ ಕಳ್ಳತನ, ದರೋಡೆ ಕೃತ್ಯಗಳಲ್ಲಿ ಶಾಮೀಲಾಗಿತ್ತು. ಈತನಿಗಾಗಿ ಬೆಂಗಳೂರು ಪೊಲೀಸರು ಮಾತ್ರವಲ್ಲದೆ, ವಿವಿಧ ರಾಜ್ಯಗಳ ಪೊಲೀಸರು ಹುಡುಕಾಟ ನಡೆಸುತ್ತಿದ್ದರು.

**ಪೆರೋಲ್ ಮೇಲೆ ಹೊರಬಂದು ಕೃತ್ಯ:** ಈ ಹಿಂದೆ ಅಪರಾಧ ಪ್ರರಕಣದಲ್ಲಿ ಜೈಲು ಸೇರಿದ್ದ ಫಹೀಮ್ ಪೆರೋಲ್ ಮೇಲೆ ಹೊರಬಂದಿದ್ದ. ಪೆರೋಲ್ ಮೇಲೆ ಹೊರಗಿದ್ದಾಗಲೇ ಮತ್ತಷ್ಟು ಅಪರಾಧ ಕೃತ್ಯಗಳಲ್ಲಿ ಶಾಮೀಲಾಗಿದ್ದ.

**ಸಹಕಾರ ನಗರದಲ್ಲಿ ವೈದ್ಯರ ಮನೆ ಕಳ್ಳತನ:** ಏಪ್ರಿಲ್ 24 ರಂದು ಫಹೀಮ್ ಗ್ಯಾಂಗ್ ಮುಸುಕುಧಾರಿಗಳಾಗಿ ಬಂದು ಸಹಕಾರನಗರದಲ್ಲಿ ಮನೆಗಳ್ಳತನ ಮಾಡಿತ್ತು. ವೈದ್ಯ ಡಾ. ಉಮಾಶಂಕರ್ ಮನೆಗೆ ನುಗ್ಗಿ 40 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ ಕಳ್ಳತನ ಮಾಡಿತ್ತು. ಕಳ್ಳತನದ ಬಗ್ಗೆ ಅರಿವಾಗಿ ಪ್ರಶ್ನಿಸಲು ಬಂದ ವೈದ್ಯರಿಗೆ ಗನ್ ತೋರಿಸಿ ಬೆದರಿಸಿ ಗ್ಯಾಂಗ್ ಪರಾರಿಯಾಗಿತ್ತು. ಈ ಪ್ರಕರಣದಲ್ಲಿ ಫಹೀಮ್ ಎ1 ಆರೋಪಿಯಾಗಿದ್ದಾನೆ. ಘಟನೆ ಸಂಬಂಧ ಕೊಡಿಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು. ಬಳಿಕ ಈತನ ಬಂಧನಕ್ಕೆ ಕೊಡಿಗೆಹಳ್ಳಿ ಪೊಲೀಸರು ಬಲೆ ಬೀಸಿದ್ದ. ಘಟನೆ ಸಂಬಂಧ ಮೂವರನ್ನು ಈಗಾಗಲೇ ಬಂಧಿಸಿದ್ದರು. ಆದರೆ, ಫಹೀಮ್ ಮಾತ್ರ ಬೆಂಗಳೂರು ಪೊಲೀಸರಿಗೆ ಸಿಗದೆ ತಲೆ ಮರೆಸಿಕೊಂಡಿದ್ದ.



ಪುಟ 2

## ಬಿಬಿಎಂಪಿ ಇ- ಖಾತಾ ಪಡೆಯಲು ಪಾಲಿಕೆ ಗುಡ್ ನ್ಯೂಸ್

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಇ-ಖಾತಾ ಪಡೆಯುವವರಿಗೆ ಪಾಲಿಕೆ ಕಚೇರಿಗಳಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅಲ್ಲದೇ ವೆಬ್ ಸೈಟ್ ಗಳ ಮೂಲಕ ಇ-ಖಾತಾ ಪಡೆಯುವುದಕ್ಕೂ ಅವಕಾಶ ನೀಡಲಾಗಿತ್ತು. ಆದರೆ ಕೆಲ ಸೈಬರ್ ಗಳಲ್ಲಿ ಮನಬಂದಂತೆ ಹಣ ವಸೂಲಿ ಮಾಡುತ್ತಿರುವ ದೂರುಗಳು ಕೇಳಿಬಂದ ಬೆನ್ನಲ್ಲೆ ಬಿಬಿಎಂಪಿ ಇದೀಗ ಹೊಸ ಯೋಜನೆ ಹಾಕಿಕೊಂಡಿದೆ. ಈಗಾಗಲೇ ಬಿಬಿಎಂಪಿ ಕಚೇರಿಗಳಲ್ಲಿ ಇ-ಖಾತಾಗೆ ಕೌಂಟರ್ ತೆರೆಯಲು ಸೂಚಿಸಿದ್ದ ಪಾಲಿಕೆ, ಇದೀಗ ಬೆಂಗಳೂರು ಒನ್ ನಾಗರೀಕ ಕೇಂದ್ರಗಳಲ್ಲೂ ಇ-ಖಾತಾ ಪಡೆಯಲು ಅವಕಾಶ ಕಲ್ಪಿಸಿಕೊಟ್ಟಿದೆ

ಇ-ಖಾತಾ ಬಗ್ಗೆ ಈಗಾಗಲೇ ಬೆಂಗಳೂರು ಒನ್ ಸಿಬ್ಬಂದಿಗೆ ತರಬೇತಿ ನೀಡಿರುವ ಪಾಲಿಕೆ, ಸದ್ಯ ಇ-ಖಾತಾ ಮಾಡಿಕೊಡಲು 45 ರೂಪಾಯಿ ದರ ನಿಗದಿ ಮಾಡಿದೆ. ಬೇಕಾಬಿಟ್ಟಿ ಹಣ ವಸೂಲಿ ಮಾಡುವುದಕ್ಕೆ ಕಡಿವಾಣ ಹಾಕಲು ಈ ಪ್ಲಾನ್ ಮಾಡಿರುವ ಬಿಬಿಎಂಪಿ, ಇದೀಗ ಜನರು ತಮ್ಮ ಹತ್ತಿರದ ಬೆಂಗಳೂರು ಒನ್ ಕೇಂದ್ರಗಳಲ್ಲಿ ದಾಖಲೆಗಳನ್ನು ಸಲ್ಲಿಸಿ ಶೀಘ್ರವಾಗಿ ಇ-ಖಾತಾ ಪಡೆಯಲು ಅವಕಾಶ ಕಲ್ಪಿಸಿಕೊಟ್ಟಿದೆ.




**ಇ-ಖಾತಾ ಪಡೆಯುವುದು ಹೇಗೆ?:** ನಾಗರೀಕರು ಇ-ಖಾತಾವನ್ನು ಹೇಗೆ ಪಡೆಯಬೇಕು ಎಂಬ ವಿಡಿಯೋ ಬಿಡುಗಡೆ ಮಾಡಿರುವ ಪಾಲಿಕೆ, ಈ ವಿಡಿಯೋ ನೋಡಿಕೊಂಡು ಸುಲಭವಾಗಿ ಅಪ್ ಲೋಡ್ ಮಾಡುವುದಕ್ಕೆ ನೆರವಾಗಲು ಹೊರಟಿದೆ.

ಪುಟ 2

## ಎಚ್‌ಎಂಟಿ ಅರಣ್ಯ ಭೂಮಿ ವಿವಾದ

### ನಿವೃತ್ತ ಐಎಎಸ್ ಅಧಿಕಾರಿ, ಹಾಲಿ ಐಎಫ್‌ಎಸ್ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್

**ಬೆಂಗಳೂರು:** ಎಚ್‌ಎಂಟಿ ಅರಣ್ಯ ಭೂಮಿ ವಿವಾದ ಪ್ರಕರಣ ಸಂಬಂಧ ನಿವೃತ್ತ ಐಎಎಸ್ ಅಧಿಕಾರಿ, ಹಾಲಿ ಐಎಫ್‌ಎಸ್ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ನೀಡಲಾಗಿದೆ. ಸಂದೀಪ್ ದವೆ, ವಿಜಯಕುಮಾರ್ ಗೋಗಿ, ಸ್ಮಿತಾ ಬಿಜ್ಜೂರ್, ಆರ್ ಗೋಕುಲ್‌ಗೆ ಕಾರಣ ಕೇಳಿ ಅರಣ್ಯ ಇಲಾಖೆ ನೋಟಿಸ್ ಜಾರಿ ಮಾಡಿದೆ.

ಈ ಅಧಿಕಾರಿಗಳು ಕರ್ತವ್ಯದಲ್ಲಿದ್ದ ಸಂದರ್ಭದಲ್ಲಿ, ಎಚ್ ಎಂಟಿ ವಶದಲ್ಲಿರುವ ಅರಣ್ಯ ಭೂಮಿ ಅರಣ್ಯದ ಸ್ವರೂಪ ಕಳೆದುಕೊಂಡಿದೆ ಎಂದು ಡಿನೋಟಿಫಿಕೇಷನ್ ಗೆ ಅನುಮತಿ ಕೋರಿ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು.



**ಏನಿದು ಪ್ರಕರಣ?:** ಐಎಎಸ್ ಅಧಿಕಾರಿಗಳು ಹಾಗೂ ಐಎಫ್ ಎಸ್ ಅಧಿಕಾರಿಗಳು ಎಚ್ ಎಂಟಿ ವಶದಲ್ಲಿರುವ ಪೀಣ್ಯ ಪ್ಲಾಂಟೇಷನ್ ಸರ್ವೆ ನಂ.1 ಮತ್ತು 2ರ ಜಮೀನು ಅರಣ್ಯದ ಸ್ವರೂಪ ಕಳೆದುಕೊಂಡಿದೆ ಎಂದು ಡಿನೋಟಿಫಿಕೇಷನ್‌ಗೆ ಕೋರಿದ್ದರು. ಅರಣ್ಯದ ಸ್ವರೂಪ ಕಳೆದುಕೊಂಡಿದೆ ಎಂಬ ಬಗ್ಗೆ ಕೇವಲ ಅಧಿಕಾರಿಗಳ ಮಟ್ಟದಲ್ಲೇ ನಿರ್ಧಾರ ಕೈಗೊಳ್ಳಲಾಗಿತ್ತು.

ಪುಟ 2

## ಸರ್ಕಾರಿ ಅಧಿಕಾರಿಗಳಿಗೆ ಲೋಕಾಯುಕ್ತ ಬಿಸಿ

**ಬೆಂಗಳೂರು:** ಲೋಕಾಯುಕ್ತ ಅಧಿಕಾರಿಗಳು ಬೆಳ್ಳಂಬೆಳಗ್ಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಏಕಕಾಲಕ್ಕೆ ದಾಳಿ ಮಾಡಿದ್ದಾರೆ. ಲೋಕಾಯುಕ್ತ ಅಧಿಕಾರಿಗಳು ಧಾರವಾಡದ ಮೂರು ಕಡೆ, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಎರಡು, ಗದಗ ಜಿಲ್ಲೆ ನರಗುಂದದಲ್ಲಿ ಒಂದು, ಬೀದರ್ , ದಾವಣಗೆರೆ ಮತ್ತು ಮೈಸೂರಿನ ಒಂದು ಕಡೆ ದಾಳಿ ಮಾಡಿ, ಪರೀಶಲನೆ ನಡೆಸಿದ್ದಾರೆ. ಸರ್ಕಾರಿ ಅಧಿಕಾರಿಗಳ ವಿರುದ್ಧ ಅಕ್ರಮ ಆಸ್ತಿ ಗಳಿಕೆ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ.

ಬೀದರ್ ಜಿಲ್ಲಾ ತರಬೇತಿ ಕೇಂದ್ರದ ಅಧಿಕಾರಿ ರವೀಂದ್ರ ರೊಟ್ಟೆ ನಿವಾಸ ಮತ್ತು ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದು, ದಾಖಲೆ ಪರಿಶೀಲಿಸುತ್ತಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಹನುಮಂತ ನೇತೃತ್ವದಲ್ಲಿ ದಾಳಿ ನಡೆದಿದೆ. ರವೀಂದ್ರ ರೊಟ್ಟೆ ಈ ಹಿಂದೆ ಬೀದರ್ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿರೆಸ್ತಾದಾರ ಹಾಗೂ ಬಿಬಿಎಂಪಿಯಲ್ಲಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು.




ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಬೋರಗಾಂವ ಗ್ರಾಮ ಲೆಕ್ಕಾಧಿಕಾರಿ ವಿಠ್ಠಲ್ ಡವಳೇಶ್ವರ ಮನೆ ಹಾಗೂ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸಿದ್ದಾರೆ.

ಪುಟ 2

# ಕಾಂಗ್ರೆಸ್‌ನಿಂದ ಅಘೋಷಿತ ಕಾನೂನು ಜಾರಿ ಆದಂತಿದೆ

**ಚಿತ್ರದುರ್ಗ:** ಕಾಂಗ್ರೆಸ್‌ನಿಂದ ಅಘೋಷಿತ ಕಾನೂನು ಜಾರಿ ಆದಂತಿದೆ. ಯಾರೆಷ್ಟು ಬೇಕಾದರೂ ಕದಿಯಬಹುದು, ಸಿಕ್ಕಿಬಿದ್ದಾಗ ವಾಪಸ್ ಕೊಟ್ಟರಾಯ್ತು. ದರೋಡೆ ಮಾಡಿದ್ದು ವಾಪಸ್ ಕೊಟ್ಟರೆ ಕ್ರಮ ಬೇಡವೇ ಎಂದು ಕಾಂಗ್ರೆಸ್ ವಿರುದ್ಧ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದ್ದಾರೆ.

ಈ ಕುರಿತು ಚಿತ್ರದುರ್ಗದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ದಿನಕ್ಕೊಂದು ಹಗರಣ ಬಯಲಾಗುತ್ತಿವೆ. ಸಿಎಂ ಸಿದ್ದರಾಮಯ್ಯ ಮಾತ್ರ ರಾಜೀನಾಮೆ ನೀಡುತ್ತಿಲ್ಲ. ಜಗ್ಗೋದಿಲ್ಲ, ಬಗ್ಗೋದಿಲ್ಲ ಅಂದವರು ಸೈಟ್ ಯಾಕೆ ವಾಪಸ್ ಕೊಟ್ಟರು? ಪ್ರಿಯಾಂಕ್ ಖರ್ಗೆ 5 ಎಕರೆ ಜಾಗ ಯಾಕೆ ವಾಪಸ್ ಕೊಟ್ಟರು? ಹಾಗಿದ್ದರೆ ನಿಮ್ಮ ಮೇಲೇಕೆ ಕ್ರಮ ಬೇಡ ಎಂದು ವಾಗ್ದಾಳಿ ನಡೆಸಿದರು. ಸಿಎಂ ಸಿದ್ಧರಾಮಯ್ಯ ಬಗ್ಗೆ ಮಾಜಿ ಸಚಿವ ಇಕ್ಬಾಲ್ ಅನ್ಸಾರಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಅನ್ಸಾರಿ ಹೇಳಿಕೆ ಸಿದ್ದರಾಮಯ್ಯ ಬಗ್ಗೆ ಸ್ಪಷ್ಟಪಡಿಸುತ್ತದೆ. ನಾನೇನು ಹೇಳಲ್ಲ, ರಾಜ್ಯದ ಜನರೇ ತೀರ್ಮಾನಿಸಲಿ. ಸಚಿವ ಜಮೀರ್ ವಿರುದ್ಧ ಕ್ರಮಕ್ಕೆ ರಾಜ್ಯಪಾಲರ ಆದೇಶ ಸರಿಯಿದೆ. ನ್ಯಾಯಾಂಗದ ಆದೇಶ ಬೀದೀಲಿ ಪ್ರಶ್ನಿಸೋದು ಸರಿಯಲ್ಲ. ಸುಳ್ಳು ನಮ್ಮ ಮನೆ ದೇವರಲ್ಲ, ಭ್ರಷ್ಟಾಚಾರ, ಸುಳ್ಳು, ಮೋಸ ಕಾಂಗ್ರೆಸ್ ಮನೆ ದೇವರು ಎಂದು ಹರಿಹಾಯ್ದರು.

# ಕಾಂಗ್ರೆಸ್ 60 ಪರ್ಸೆಂಟ್ ಲಂಚ ಹೊಡೆದು ಲೂಟಿ ಮಾಡುತ್ತಿದೆ

**ಬೆಂಗಳೂರು:** 40 ಪರ್ಸೆಂಟ್ ಲಂಚ ಆರೋಪ ಮಾಡಿದ್ದ ಕಾಂಗ್ರೆಸ್‌ಗೆ ವಿಪಕ್ಷ ನಾಯಕ ಆರ್.ಅಶೋಕ್ ತಿರುಗೇಟು ನೀಡಿದ್ದಾರೆ. ''ನಮ್ಮ ಸರ್ಕಾರದ ಮೇಲೆ 40 ಪರ್ಸೆಂಟ್ ಲಂಚ ಆರೋಪ ಮಾಡಿದ್ದ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಒಂದೂವರೆ ವರ್ಷದ ಒಳಗೆ 60 ಪರ್ಸೆಂಟ್ ಲಂಚ ಪಡೆದು ರಾಜ್ಯವನ್ನು ಲೂಟಿ ಮಾಡುತ್ತಿದೆ ಎಂದು ವಾಗ್ದಾಳಿ ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ



ಎಕ್ಸ್‌ನಲ್ಲಿ ಟ್ವಿಟ್ ಮಾಡಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ. ''40 ಪರ್ಸೆಂಟ್ ಸರ್ಕಾರ ಎಂದು ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧ ಸುಳ್ಳು, ಅಪಪ್ರಚಾರದ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ, 60 ಪರ್ಸೆಂಟ್ ಲಂಚ ಹೊಡೆದು ರಾಜ್ಯವನ್ನ ಲೂಟಿ ಮಾಡುತ್ತಿದೆ'' ಎಂದು ತಿರುಗೇಟು ನೀಡಿದ್ದಾರೆ. ಟ್ವಿಟರ್ ಪೋಸ್ಟ್ ''ನಗರಾಭಿವೃದ್ದಿ ಇಲಾಖೆಯ ಮುಖ್ಯ ಕಾರ್ಯದರ್ಶಿಗಳಿಗೆ ಖಾಸಗಿ ಕಂಪನಿಯೊಂದು ಏಪ್ರಿಲ್ 22 ರಂದು ಬರೆದಿರುವ ಪತ್ರದಲ್ಲಿ ಕಾಂಗ್ರೆಸ್ ಸರ್ಕಾರದ 60 ಪರ್ಸೆಂಟ್ ಲಂಚಾವತಾರದ ಮುಖವಾಡವನ್ನು ಬಯಲು ಮಾಡಿದೆ''. ''ಸಿಎಂ ಸಿದ್ದರಾಮಯ್ಯನವರೇ, ಕರ್ನಾಟಕ ರಾಜ್ಯ ಮದ್ಯ ಮಾರಾಟಗಾರ ಸಂಘ ಬರೆದಿರುವ ಪತ್ರದಲ್ಲಿ 700 ಕೋಟಿ ರೂಪಾಯಿ ಲಂಚದ ಬಗ್ಗೆ ಆರೋಪ ಮಾಡಿದ್ದಾರೆ, ಈಗ ಖಾಸಗಿ ಕಂಪನಿಯೊಂದು 60 ಪರ್ಸೆಂಟ್ ಕಮಿಷನ್ ಆರೋಪ ಮಾಡುತ್ತಿದೆ''. ''ದಿನ ಬೆಳಗಾದರೆ ಒಂದು ಹೊಸ ಹಗರಣದ ಕಥೆ ಕೇಳಿ ಕೇಳಿ ಕನ್ನಡಿಗರು ರೋಸಿ ಹೋಗಿದ್ದಾರೆ. ಕನ್ನಡಿಗರ ತಾಳ್ಮೆ ಪರೀಕ್ಷೆ ಮಾಡಬೇಡಿ. ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಇರುವ ಅಲ್ಪ ಸ್ವಲ್ಪ ಗೌರವವನ್ನದರೂ ಉಳಿಸಿಕೊಳ್ಳಿ'' ಎಂದು ಆಗ್ರಹಿಸಿದ್ದಾರೆ.

# ರಾಜ್ಯದಲ್ಲಿ ಮತ್ತೆ ಸುವರ್ಣಯುಗ ಆಡಳಿತಕ್ಕೆ ಬರಲಿದೆ

**ರಾಮನಗರ:** 2006ರಂತೆ ಮತ್ತೆ ಸುವರ್ಣಯುಗ ಆಡಳಿತಕ್ಕೆ ಬರಲಿದೆ, ಅದಕ್ಕಾಗಿ ನಿಖಿಲ್‌ನನ್ನು ಗೆಲ್ಲಿಸಿ ಎಂದು ಹೆಚ್‌ಡಿ ಕುಮಾರಸ್ವಾಮಿ ಹೇಳಿದರು.

ಈ ಬಗ್ಗೆ ರಾಮನಗರದಲ್ಲಿ ಮಾತನಾಡಿದ ಅವರು, 2006ರ ಆಡಳಿತ ಸುವರ್ಣಯುಗ ಆಗಿತ್ತು, ಆ ಸರ್ಕಾರದ ಆಡಳಿತವನ್ನು ಜನ ಈಗಲೂ ಸ್ಮರಿಸಿಕೊಳ್ಳುತ್ತಾರೆ. ರೈತರ ಸಾಲಮನ್ನಾ, ಸಾರಾಯಿ ನಿಷೇಧ, ಲಾಟರಿ ನಿಷೇಧ, ಸೈಕಲ್ ಭಾಗ್ಯ ಇನ್ನೂ ಅನೇಕ ಕಾರ್ಯಕ್ರಮವನ್ನು ತಂದೆವು. ನಾನು ಯಡಿಯೂರಪ್ಪಗೆ ಅಧಿಕಾರ ಕೊಡಬೇಕು ಇಂದಿದ್ದವನು. ಆದರೆ ಅದನ್ನು ತಪ್ಪಿಸುವ ಕೆಲ ಘಟನೆ ಆಯಿತು. ಯಡಿಯೂರಪ್ಪ ಆಗ ಸಿಎಂ ಆಗದ ತಪ್ಪು ನನ್ನ ಮೇಲೆ ಹಾಕಿಕೊಂಡು ಇಷ್ಟು ವರ್ಷ ನೋವು ಅನುಭವಿಸಿದ್ದೇನೆ. ಆಗ ನನ್ನ ಮನಸಲ್ಲಿ ಯಡಿಯೂರಪ್ಪಗೆ ಅಧಿಕಾರ ಕೊಡಬಾರದು ಎಂದು ಎಳ್ಳಷ್ಟೂ ಇರಲಿಲ್ಲ.ಅದೇ ರೀತಿಯ ಸುವರ್ಣ ಯುಗದ ಆಡಳಿತ ಮತ್ತೆ ಬರಲಿದೆ, ನಿಖಿಲ್‌ನ್ನು ಅದಕ್ಕಾಗಿ ಗೆಲ್ಲಿಸಿ ಕಳಿಸಿಕೊಡಿ ಎಂದು ಹೇಳಿದರು.

ಎರಡನೇ ಬಾರಿಗೆ ಬಿಜೆಪಿ ಜೆಡಿಎಸ್ ಹೊಂದಾಣಿಕೆ ಆಗಿದೆ. ಮುಂದೆ ನಾವಿಬ್ಬರೂ ಅಣ್ಣತಮ್ಮಂದಿರಂತೆ ಶಾಶ್ವತವಾಗಿ ಹೋಗುವ ಸಲುವಾಗಿ ಈ ಸಂಬಂಧ ಬೆಸೆದಿದ್ದೇವೆ. ನಮ್ಮ ವೈಯಕ್ತಿಕ ಹಿತಕ್ಕೆ ಅಲ್ಲ, ಜನರಿಗಾಗಿ ರಾಜ್ಯದ ಸಮಸ್ಯೆಗಳನ್ನು ಬಗೆಹರಿಸಲು ಒಂದಾಗಿದ್ದೇವೆ. ಕಾಂಗ್ರೆಸ್ ನಮ್ಮನ್ನ ಯಾವ ರೀತಿ ನಡೆದುಕೊಳ್ತೋ ಆಗ, ಯಡಿಯೂರಪ್ಪ 2006ರಲ್ಲಿ ಜತೆ ಸೇರಿ ಸರ್ಕಾರ ಮಾಡಿದ್ದೆವು. ಅವರು ಹಿರಿಯರಾಗಿದ್ದರು. 2006ರಲ್ಲಿ ಅವರೇ ಸಿಎಂ ಆಗಬಹುದಿತ್ತು, ಆದರೆ ನನಗೆ ಅವಕಾಶ ಮಾಡಿಕೊಟ್ಟರು. ನನ್ನನ್ನು ಜನ ಈಮಟ್ಟಕ್ಕೆ ಗುರುತಿಸಲು ರಾಮನಗರದ ಜನ, ಯಡಿಯೂರಪ್ಪ ಮತ್ತವರ ನಾಯಕರು ಕಾರಣ ಎಂದು ಸ್ಮರಿಸಿಕೊಂಡರು.

ದೇವೇಗೌಡರ ಮೇಲೆ ಮೋದಿಯವರೇ ಸುಳ್ಳುಗಾರ ಎಂದು ಆರೋಪ ಮಾಡಿದ್ದರು ಅಂತ ಸಿದ್ದರಾಮಯ್ಯ ಹೇಳುತ್ತಾರೆ. ಮೋದಿಯವರು ದೇವೇಗೌಡರ ಮೇಲೆ ಅಪಾರ ಅಭಿಮಾನ ಇಟ್ಟಿದ್ದಾರೆ. ಹೌದು ದೇವೇಗೌಡರ ಬಗ್ಗೆ ಮೋದಿಯವರು ಹಾಗೆ ಟೀಕೆ ಮಾಡಿದ್ದರು. ಆದರೆ ದೇವೇಗೌಡರ ಕೆಲಸ ಸಾಧನೆಗಳನ್ನು ನೋಡಿ ಅವರ ಜೊತೆ ಮೋದಿ ಕೈಜೋಡಿಸಿದ್ದಾರೆ. ಕೇಂದ್ರದ ಮಂತ್ರಿಯಾದ ನನ್ನ ಮೇಲೆಯೇ ಎಫ್‌ಐಆರ್ ಹಾಕಿಸುತ್ತಿದ್ದಾರೆ. ಒಬ್ಬ ಪೊಲೀಸ್ ಅಧಿಕಾರಿ ನಿಮ್ಮ ಕಚೇರಿ ಸರ್ಚ್ ಮಾಡಬೇಕು ಅಂತ ರಾಜ್ಯಪಾಲರ ಕಚೇರಿಗೆ ಪತ್ರ ಬರೆದಿದ್ದರು. ಇದನ್ನು ನಾನು ಪ್ರಸ್ತಾಪ ಮಾಡಿದ್ದಕ್ಕೆ ಎಫ್‌ಐಆರ್ ಹಾಕಿದ್ದಾರೆ ಎಂದು ಹೇಳಿದರು.



ಈ ಸರ್ಕಾರದ ಸಾಲ ಇನ್ನೂ ಜಾಸ್ತಿ ಆಗಲಿದೆ. ಗ್ಯಾರಂಟಿಗಳಿಗೆ 52 ಸಾವಿರ ಕೋಟಿ ಕೊಟ್ರಲ್ಲ, ಎಲ್ಲಿಂದ ಕೊಟ್ರಿ? ನೀವು ಈಗ ಸಾಲ ಮಾಡಿ ಹೋಗ್ತೀರಿ, ಅದು ಜನರ ಮೇಲೆ ಹೊರೆಯಾಗಿ ಬೀಳುತ್ತದೆ. ಇವರ ಅವಧಿಯಲ್ಲಿ ಅಭಿವೃದ್ಧಿ ಎಲ್ಲಿದೆ? ಜನ ಹೇಗೆ ಬದುಕಬೇಕು? ಜನರ, ರೈತರ ಕಷ್ಟ ಕೇಳುತ್ತಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದರು.

ನಿಖಿಲ್ ಅಭ್ಯರ್ಥಿಯಾಗಿ ನಿಲ್ಲಲ್ಲ ಅಂತ ಕಣ್ಣೀರು ಹಾಕಿದ. ಪಕ್ಷದ ಮರ್ಯಾದೆ ಅಂತ ಬಿ ಫಾರಂ ಕೊಟ್ಟು ನಾವೇ ನಿಲ್ಲಿಸಿದ್ದೇವೆ. ಇಂದಿನಿಂದ ನಾನು ನಿಖಿಲ್‌ನನ್ನ ಚನ್ನಪಟ್ಟಣದ ಜನರ ಮಡಿಲಿಗೆ ಹಾಕಿದ್ದೇನೆ. ನಿಖಿಲ್ ಹೊರಗಿನ ಅಭ್ಯರ್ಥಿ ಅಂತಾರೆ, ಆದರೆ ಅದೆಲ್ಲೋ ಉತ್ತರ ಭಾರತದಲ್ಲಿ ಹುಟ್ಟಿದ ರಾಹುಲ್, ಪ್ರಿಯಾಂಕ ಕೇರಳಕ್ಕೆ ಬರುತ್ತಾರೆ. ನಾವು ಈ ನೆಲದ ಮಕ್ಕಳು, ನಿಖಿಲ್ ಈಮಣ್ಣಿನ ಮಗ. ನಾವು ಇಲ್ಲಿ ನಿಲ್ಲಲು ಇವರ ಅಪ್ಪಣೆ ಬೇಕಾ? ಎಂದು ಪ್ರಶ್ನಿಸಿದರು.

ಬಿಜೆಪಿ ಜೆಡಿಎಸ್ ನಡುವೆ ಹಾಲು ಜೇನಿನ ಸಂಬಂಧ ಇದೆ. ಇವತ್ತು ನಡ್ಡಾ ಅವರು ನಿಖಿಲ್ ಬಗ್ಗೆ ಚನ್ನಪಟ್ಟಣದ ಜನಕ್ಕೆ ದೆಹಲಿಯಿಂದ ನಿಖಿಲ್ ಗೆಲ್ಲಿಸಿ ಅಂತ ನಡ್ಡಾ ಅವರು ಸಂದೇಶ ಕಳಿಸಿದ್ದಾರೆ. ನಿಖಿಲ್ ಭಾಷಣದಲ್ಲಿ ನಮ್ಮನ್ನೆಲ್ಲ ಓವರ್ ಟೇಕ್ ಮಾಡಿದ್ದಾನೆ. ದೇವರೇ ಅವನಿಗೆ ಅವಕಾಶ ಕೊಟ್ಟಿದ್ದಾನೆ. ಒಂದು ಅವಕಾಶ ನಿಖಿಲ್‌ಗೆ ಕೊಟ್ಟು ಗೆಲ್ಲಿಸಿ, ಚನ್ನಪಟ್ಟಣದ ಮನೆ ಮಗನಾಗಿ ಕೆಲಸ ಮಾಡ್ತಾನೆ. ಚನ್ನಪಟ್ಟಣದಲ್ಲಿ ಕಾಂಗ್ರೆಸ್ ನಿಂದ ಕೂಪನ್ ಹಂಚೋದು, ಕಾರ್ಡ್ ಹಂಚೋದು ಮಾಡ್ತಿದ್ದಾರೆ. ಚನ್ನಪಟ್ಟಣದ ಜನ ಇವರ ಆಮಿಷಕ್ಕೆ ಬಲಿಯಾಗಲ್ಲ ಅನ್ನುವ ವಿಶ್ವಾಸ ನನಗಿದೆ ಎಂದರು.

# ಅನ್ನಭಾಗ್ಯ ಫಲಾನುಭವಿಗಳಿಗೆ ಸರ್ಕಾರ ಶಾಕ್ ಕಳೆದೆರಡು ತಿಂಗಳಿಂದ ಸಿಕ್ಕಿಲ್ಲ ಅಕ್ಕಿ ದುಡ್ಡು



**ಬೆಂಗಳೂರು:** ಕಾಂಗ್ರೆಸ್‌ನ ಮಹತ್ವದ ಗ್ಯಾರಂಟಿ ಯೋಜನೆಯಾದ ಅನ್ನಭಾಗ್ಯಕ್ಕೆ ವಿಘ್ನ ಎದುರಾಗಿದೆ. ಸರ್ಕಾರ ಬಿಪಿಎಲ್ ಕಾರ್ಡ್‌ದಾರರಿಗೆ ಶಾಕ್ ನೀಡಿದೆ. ಜನರಿಗೆ ಕಳೆದ ಎರಡು ತಿಂಗಳ ಅಕ್ಕಿ ಹಣ ಸಿಕ್ಕಿಲ್ಲ. ಹೀಗಾಗಿ ಜನ ನ್ಯಾಯಬೆಲೆ ಅಂಗಡಿಯವರ ಜೊತೆ ಜಗಳ ಮಾಡುತ್ತಿದ್ದಾರೆ. ನಮಗೆ ದುಡ್ಡು ಕೊಡದಿದ್ರೂ ಪರವಾಗಿಲ್ಲ, ಆಹಾರ ಪದಾರ್ಥನಾದ್ರೂ ಕೊಡಿ ಎನ್ನುತ್ತಿದ್ದಾರೆ.

ಕಾಂಗ್ರೆಸ್ ಸರ್ಕಾರ ಜಾರಿ ಮಾಡಿದ ಐದು ಗ್ಯಾರಂಟಿಗಳಲ್ಲಿ ಅನ್ನಭಾಗ್ಯ ಯೋಜನೆ ಕೂಡಾ ಒಂದು. ಬಿಪಿಎಲ್ ಕುಟುಂಬಗಳಿಗೆ ಅನುಕೂಲವಾಗಲೆಂದು ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಈ ಹಿಂದೆ ಅನ್ನಭಾಗ್ಯ ವಿಚಾರದಲ್ಲಿ ಕರ್ನಾಟಕದ ಪಾಲಿನ ಉಚಿತ 5 ಕೆಜಿ ಅಕ್ಕಿ ನೀಡುವ ವಿಚಾರಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಡುವೆ ಜಟಾಪಟಿ ನಡೆಯುತ್ತಿತ್ತು. ಸದ್ಯ ಸರ್ಕಾರ ಬಿಪಿಎಲ್ ಕಾರ್ಡ್ದಾರ ಕುಟುಂಬಗಳ ಪ್ರತಿ ಸದಸ್ಯರಿಗೆ 5 ಕೆಜಿ ಅಕ್ಕಿ ಬದಲಾಗಿ ಖಾತೆಗೆ ಹಣ ವರ್ಗಾವಣೆ ಮಾಡುತ್ತಿದೆ. ಪ್ರತಿ ಕೆಜಿ ಅಕ್ಕಿಗೆ ತಲಾ 34 ರೂ.ನಂತೆ ಒಟ್ಟು 5 ಕೆಜಿ ಅಕ್ಕಿಗೆ 170 ರೂ. ನೀಡಲಾಗುತ್ತಿತ್ತು. ಆದರೆ ಕಳೆದ ಎರಡು ತಿಂಗಳಿಂದ ಅನ್ನಭಾಗ್ಯ ಫಲಾನುಭವಿಗಳಿಗೆ ಯಾವುದೇ ಹಣ ಪಾವತಿ ಆಗಿಲ್ಲ. ಈ ಬಗ್ಗೆ ಜನರಿಂದ ಹಾಗೂ ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘದಿಂದ ಆಕ್ರೋಶ ವ್ಯಕ್ತವಾಗಿದೆ.

ಕಳೆದ ಎರಡು ದಿನದ ಹಿಂದೆ ಅಗಸ್ಟ್ ತಿಂಗಳ ಡಿಬಿಟಿ ಅಥವಾ ಡೈರೆಕ್ಟ್ ಬೆನಿಫಿಟ್ ಟ್ರಾನ್ಸ್‌ಫರ್ ಹಣ ಬಂದಿದೆ. ಆದರೆ ಸೆಪ್ಟೆಂಬರ್ ಹಾಗೂ ಅಕ್ಟೋಬರ್ ಎರಡು ತಿಂಗಳ ಹಣವನ್ನು ಆಹಾರ ಹಾಗೂ ನಾಗರೀಕ ಸರಬರಾಜು ಇಲಾಖೆ ಕೊಟ್ಟಿಲ್ಲ. ಹೀಗಾಗಿ ಅಕ್ಕಿಯೂ ಇಲ್ಲದೇ ಹಣವೂ ಇಲ್ಲದೇ ಬಡವರ್ಗದ ಜನ ಪರದಾಡುತ್ತಿದ್ದಾರೆ. ಹೀಗಾಗಿ ಪಡಿತರ ವಿತರಕರ ಜೊತೆ ಪ್ರತಿನಿತ್ಯ ವಾಗ್ವಾದಕ್ಕೆ ಇಳಿಯುತ್ತಿದ್ದಾರೆ.

ಈ ಬಗ್ಗೆ ಮಾತನಾಡಿದ ಕೃಷ್ಣಪ್ಪ, ಜನರ ಸಮೀಕ್ಷೆಯಂತೆ 95% ಜನ ಹಣದ ಬದಲಾಗಿ, ಆಹಾರ ಪದಾರ್ಥಗಳಾಗಿ ಸಕ್ಕರೆ, ಬೇಳೆ, ಅಡುಗೆ ಎಣ್ಣೆ, ಉಪ್ಪು ಕೊಡಿ ಎಂದಿದ್ದಾರೆ. ಕೇಂದ್ರದಿಂದ ಸರ್ಕಾರ ಅಕ್ಕಿ ಖರೀದಿಸಲಿ ಎಂದು ಹೇಳಿದ್ದಾರೆ.

# ಕರುಳಬಳ್ಳಿಗೆ ವಿಷ ಉಣಿಸಿ ತಾನೂ ವಿಷ ಸೇವಿಸಿದ ತಾಯಿ, ಮಗಳು ಸಾವು, ತಾಯಿ ಚಿಂತಾಜನಕ

**ತುಮಕೂರು:** ಕರುಳಬಳ್ಳಿಗೆ ವಿಷ ಉಣಿಸಿದ ತಾಯಿ ತಾನೂ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ತ್ಯಾಗಟೂರು ಬಳಿಯ ಬೊಮ್ಮರಸನಹಳ್ಳಿಯಲ್ಲಿ ನಡೆದಿದೆ.

ಇಂದ್ರಮ್ಮ ಸ್ವಂತ ಮಗಳಿಗೆ ವಿಷ ಉಣಿಸಿ ತಾನೂ ವಿಷ ಸೇವಿಸಿದ ಪರಿಣಾಮ ಮಗಳು ದೀಕ್ಷಿತಾ (6) ಸಾವನ್ನಪ್ಪಿದ್ದು, ತಾಯಿ ಸ್ಥಿತಿ ಚಿಂತಾಜನಕವಾಗಿದೆ. ಮಧುಗಿರಿ ಮೂಲದ




ಇಂದ್ರಮ್ಮ ಬೊಮ್ಮರಸನಹಳ್ಳಿಯಲ್ಲಿ ವಾಸವಾಗಿದ್ದರು. ಶ್ರೀರಂಗಯ್ಯ ಎಂಬವರನ್ನು ಮದುವೆಯಾಗಿದ್ದ ಇಂದ್ರಮ್ಮ ದಾಂಪತ್ಯದಲ್ಲಿ ಬಿರುಕು ಮೂಡಿ ಗಂಡನನ್ನು ಬಿಟ್ಟು ಮಗಳೊಂದಿಗೆ ವಾಸವಾಗಿದ್ದಳು. ತನ್ನ ಹೆಣ್ಣು ಮಗುವನ್ನು ಕೊಂದು ತಾನು ವಿಷ ಕುಡಿದು ಇಂದ್ರಮ್ಮ ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಇಂದ್ರಮ್ಮಳ ಸ್ಥಿತಿ ಚಿಂತಾಜನಕವಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಗುಬ್ಬಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಮನೆ ಮನೆಗಳಿಂದ ಕಸ ಸಂಗ್ರಹಕ್ಕೆ ಶುಲ್ಕ ವಸೂಲಿ ರಾಜ್ಯ ಸರ್ಕಾರಕ್ಕೆ ಬಿಬಿಎಂಪಿಯಿಂದ ಪ್ರಸ್ತಾವನೆ

**ಬೆಂಗಳೂರು:** ಮನೆ ಮನೆಯಿಂದ ಕಸ ಸಂಗ್ರಹಿಸಲು ಶುಲ್ಕ ವಸೂಲಿಗೆ ರಾಜ್ಯ ಸರ್ಕಾರಕ್ಕೆ ಬಿಬಿಎಂಪಿ ಪ್ರಸ್ತಾವನೆ ಸಲ್ಲಿಸಿದೆ. 46 ಲಕ್ಷ ಮನೆಗಳಿಂದ 2025 ರಿಂದ ಶುಲ್ಕ ವಸೂಲಿ ಆರಂಭಿಸಲು ಚಿಂತನೆ ನಡೆಸಿದೆ.

ಬೆಂಗಳೂರು ಘನತ್ಯಾಜ್ಯ ನಿರ್ವಹಣೆಯಿಂದ ಪ್ರಸ್ತಾವನೆ ಸಲ್ಲಿಕೆಯಾಗಿದೆ. 2025 - 06ನೇ ಆರ್ಥಿಕ ವರ್ಷದಿಂದ ಈ ಮಾದರಿಯ ಶುಲ್ಕ ವಸೂಲಾತಿಗೆ ಬಿಬಿಎಂಪಿಯಿಂದ ಪ್ರಸ್ತಾವನೆ ಹೋಗಿದ್ದು, ಸರ್ಕಾರ ಒಪ್ಪಿಗೆ ನೀಡಿಲ್ಲ. 46 ಲಕ್ಷ ಮನೆಗಳಿಂದ ಪ್ರತಿ ತಿಂಗಳು 200 ರಿಂದ 400 ರೂಪಾಯಿ ಶುಲ್ಕ ನಿಗದಿ ಮಾಡುವ ಪ್ರಸ್ತಾವನೆ



ಇದಾಗಿದೆ. ಆಸ್ತಿ ತೆರಿಗೆ ಜೊತೆಗೆ ಕಸದ ಶುಲ್ಕವನ್ನ ಸಂಗ್ರಹ ಮಾಡೋದರ ಬಗ್ಗೆ ಬಿಬಿಎಂಪಿ ಚಿಂತನೆ ನಡೆಸಿದೆ. ಈಗಾಗಲೇ ತ್ಯಾಜ್ಯ ವಿಲೇವಾರಿಗೆ ಬಿಬಿಎಂಪಿ ಟೆಂಡರ್ ಕರೆದಿದೆ. ತ್ಯಾಜ್ಯ ವಿಲೇವಾರಿಯಲ್ಲಿ ಹೊಸ ವ್ಯವಸ್ಥೆ ಜಾರಿಗೆ ತರುವ ಸಂಬಂಧ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ನಿಗಮ ಟೆಂಡರ್ ಕರೆದಿದೆ.

ಮನೆ ಮನೆಯಿಂದ ಕಸ ಸಂಗ್ರಹ, ದ್ವಿತೀಯ ಹಂತದ ವರ್ಗಾವಣೆ ಕೇಂದ್ರಗಳಿಗೆ ಸಾಗಣೆ, ಈ ಕೇಂದ್ರಗಳಿಂದ ಸಂಸ್ಕರಣ ಘಟಕಗಳಿಗೆ ದ್ವಿತೀಯ ಹಂತದ ಸಾಗಣೆ ಒಳಗೊಂಡ ಪ್ಯಾಕೇಜ್ ಇದಾಗಿದೆ. ಪ್ರತಿ ಮನೆಯಿಂದ ಕಸ ಸಂಗ್ರಹದ ಶುಲ್ಕ ವಸೂಲಿ ಮಾಡುವುದರಿಂದ ಬ್ಲಾಕ್ ಸ್ಪಾಟ್‌ಗಳ ಸಂಖ್ಯೆ ಇಳಿಮುಖ ಆಗಲಿದೆ ಎನ್ನಲಾಗಿದೆ.

# ಭಯಾನಕ ವಿಚಾರ

ದೇಶದಿಂದ ಪಲಾಯನ ಮಾಡುವ ಮೊದಲು ಆತ ಮೊದಲು ಮಧ್ಯಪ್ರದೇಶದ ಉಜ್ಜಯಿನಿಗೆ ಮತ್ತು ನಂತರ ಜಮ್ಮುವಿನ ವೈಷ್ಣೋ ದೇವಿಗೆ ಹೋಗಲು ಯೋಜಿಸಿದ್ದನು ಎಂದು ಶಿವಕುಮಾರ್ ಹೇಳಿದ್ದಾರೆ . ಶಿವಕುಮಾರ್ ಗೌತಮ್ ಅವರ ಕುಟುಂಬ ಸದಸ್ಯರು ಮತ್ತು ಅವರ ಆಪ್ತ ಸಹಾಯಕರು ಸೇರಿದಂತೆ ಸುಮಾರು 45 ಜನರನ್ನು ಪೊಲೀಸರು ಪತ್ತೆಹಚ್ಚಿದ್ದಾರೆ ಮತ್ತು ಬಾಬಾ ಸಿದ್ದಿಕಿ ಹತ್ಯೆಯ ನಂತರ ಅವರ ಚಲನವಲನಗಳನ್ನು ಪತ್ತೆಹಚ್ಚಿದ್ದಾರೆ. ಉತ್ತರ ಪ್ರದೇಶ ಮತ್ತು ಮುಂಬೈ ಪೊಲೀಸ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ನಡೆಸಿ ಆತನನ್ನು ಬಂಧಿಸಿದ್ದಾರೆ.

# ಗುಂಡಿನ ಚಕಮಕಿ

ಪೊಲೀಸ್ ಠಾಣೆಯ ಮೇಲೆ ದಾಳಿ ಮಾಡಿದ ನಂತರ, ಶಂಕಿತ ಕುಕಿ ದಂಗೆಕೋರರು ಪೊಲೀಸ್ ಠಾಣೆಯಿಂದ ಒಂದು ಕಿಲೋಮೀಟರ್ ದೂರದಲ್ಲಿರುವ ಜಕುರಾಡೋರ್ ಕರೋಂಗ್‌ನಲ್ಲಿನ ಸಣ್ಣ ವಸಾಹತು ಕಡೆಗೆ ಚದುರಿದರು ಮನೆಗಳಿಗೆ ಮತ್ತು ಭದ್ರತಾ ಪಡೆಗಳೊಂದಿಗೆ ಗುಂಡಿನ ಚಕಮಕಿ ನಡೆಸಿದರು. ಅದರ ನಂತರ ಸಿಆರ್‌ಪಿಎಫ್ ಹೆಚ್ಚುವರಿ ಸೇನಾ ಪಡೆಗಳನ್ನು ಜಿರಿಬಾಮ್‌ಗೆ ಕಳುಹಿಸಿದೆ.

ಕಳೆದ ವಾರದಿಂದ ಜಿರಿಬಾಮ್‌ನಲ್ಲಿ ಉದ್ವಿಗ್ನತೆ ಉಂಟಾಗಿದೆ. ಕಳೆದ ವಾರ, ಬುಡಕಟ್ಟಿನ ಮಹಿಳೆಯೊಬ್ಬರು ಶಂಕಿತ ಮೈಥಿ ಬಂಡುಕೋರರಿಂದ ಹತರಾಗಿದ್ದಾರೆ.ಅದಾದ ಬಳಿಕ ಆಕೆಯ ಮನೆಗೂ ಬೆಂಕಿ ಹಚ್ಚಲಾಗಿತ್ತು. ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಆಕೆಯ ಪತಿ ಕೊಲೆಗೂ ಮುನ್ನ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದರು ಎಂದು ಆರೋಪಿಸಿದ್ದಾರೆ.

ಕಣಿವೆಯ ಪ್ರಬಲ ಮೈಥಿ ಸಮುದಾಯದ ಮಹಿಳೆಯೊಬ್ಬರು ಭತ್ತದ ಗದ್ದೆಯಲ್ಲಿ ಕೆಲಸ ಮಾಡುವಾಗ ಶಂಕಿತ ಕುಕಿ ಬಂಡುಕೋರರು ಗುಂಡು ಹಾರಿಸಿ ಹತ್ಯೆ ಮಾಡಿದ್ದರು. ಅಸ್ಸಾಂ ರೈಫಲ್ಸ್‌ನ ಎರಡು ಬೆಟಾಲಿಯನ್‌ಗಳನ್ನು ಮಣಿಪುರದಿಂದ ಜಮ್ಮು ಮತ್ತು ಕಾಶ್ಮೀರಕ್ಕೆ ವರ್ಗಾಯಿಸುವ ಕೇಂದ್ರದ ಕ್ರಮವನ್ನು ಕುಕಿ ಬುಡಕಟ್ಟು ಜನಾಂಗದವರು ವಿರೋಧಿಸಿದ್ದರು.

# ಬುಲ್ಡೋಜರ್‌ನಿಂದ ನೆಲಸಮ

ಸದ್ಯ ಉತ್ತರ ಪ್ರದೇಶದ ಮುರ್ದಾಬಾದ್ ಪೊಲೀಸರು ಫಹೀಮ್ ನನ್ನು ಬಂಧಿಸಿದ್ದಾರೆ. ಅಷ್ಟೇ ಅಲ್ಲದೆ, ಆತನ ಮನೆಯನ್ನೂ ನೆಲಸಮಗೊಳಿಸಿದ್ದಾರೆ.

ಈತನ ಬಂಧನದಿಂದ ದೇಶಾದ್ಯಂತ 65 ಪ್ರಕರಣಗಳ ತನಿಖೆ ಚುರುಕುಗೊಳ್ಳಲಿವೆ. ಸದ್ಯ ಫಹೀಮ್ ನನ್ನು ಬಾಡಿ ವಾರಂಟ್ ಮೇಲೆ ವಶಕ್ಕೆ ಪಡೆಯಲು ಕೊಡಿಗಹಳ್ಳಿ ಪೊಲೀಸರು ಮುಂದಾಗಿದ್ದಾರೆ.

# ಲಿಸ್ಟ್ ವೈರಲ್

**ಈ ಹಿಂದಿನ ಪಟ್ಟಿಯಲ್ಲಿ ಏನಿತ್ತು?** ಮೂಡಾ 241 ನಿವೇಶನ ಮಂಜೂರು ಮಾಡಿತ್ತು. 241 ನಿವೇಶನಗಳಲ್ಲಿ ಅಬ್ದುಲ್ ವಾಜಿದ್ ಒಬ್ಬರಿಗೇನೇ 26 ನಿವೇಶನ ಮಂಜೂರು ಮಾಡಲಾಗಿತ್ತು. ಯಾವತ್ತೋ ವಶಪಡಿಸಿಕೊಂಡ ಭೂಮಿಗಳಿಗೆ 2020 ರಿಂದ 2023ರ ಅವಧಿಯಲ್ಲಿ ಆಯುಕ್ತರ ತೀರ್ಮಾನದಂತೆ ಸೈಟ್ ಹಂಚಿಕೆ ಮಾಡಲಾಗಿತ್ತು ಎಂದು ಹಿಂದೆ ದೊರೆತ್ತಿದ್ದ ಪಟ್ಟಿಯಲ್ಲಿ ಮಾಹಿತಿ ಲಭ್ಯವಾಗಿತ್ತು.

**ಸಿದ್ದರಾಮಯ್ಯ, ಪತ್ನಿ ಪಾರ್ವತಿ ವಿರುದ್ಧ ಕೇಳಿ ಬಂದ ಆರೋಪ?:** ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಹೆಸರಿನಲ್ಲಿದ್ದ ಕೆಸರೆ ಗ್ರಾಮದ ಸರ್ವೆ ನಂಬರ್ 464ರಲ್ಲಿ 3.16 ಎಕರೆ ಜಮೀನನ್ನು ದೇವನೂರು ಬಡಾವಣೆ ನಿರ್ಮಾಣಕ್ಕೆ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಈ ಜಾಗವನ್ನು ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ದಾನ ಪತ್ರದ ಮೂಲಕ ಅವರ ಸಹೋದರ ಕೊಟ್ಟಿದ್ದರು. ಇದು ಒಟ್ಟು 1,48,104 ಚದರ ಅಡಿ ಜಾಗ ಇತ್ತು.

ಅದರ ಬದಲಿಗೆ ಮುಡಾ 2021ರಲ್ಲಿ ಪಾರ್ವತಿ ಅವರಿಗೆ ಮೈಸೂರಿನ ವಿಜಯನಗರ ಬಡಾವಣೆಯಲ್ಲಿ 38,284 ಚದರ ಅಡಿ ಜಾಗ ಅಂದರೆ 14 ನಿವೇಶನ ಕೊಟ್ಟಿದ್ದಾರೆ ಇದು ಈಗ

## ಮೊದಲನೇ ಪುಟದಿಂದ...

ಚರ್ಚೆಗೆ ಕಾರಣವಾಗಿದೆ. ವಿಜಯನಗರ ಬಡಾವಣೆಯಲ್ಲಿ 14 ನಿವೇಶನ ಪತ್ನಿ ಪಾರ್ವತಿ ಅವರಿಗೆ ಮಂಜೂರು ಆಗಲು, ಸಿದ್ದರಾಮಯ್ಯ ಅವರು ಪ್ರಭಾವ ಬೀರಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

# ಲೋಕಾಯುಕ್ತ ಬಿಸಿ

ವಿಠ್ಠಲ್ ಡವಳೇಶ್ವರ ಈ ಹಿಂದೆ ಅಕ್ರಮವಾಗಿ 1.10 ಕೋಟಿ ಹಣವನ್ನು ಚಿಕ್ಕೋಡಿಯಿಂದ ಬಾಗಲಕೋಟೆಗೆ ಸಾಗಿಸುವಾಗ ಸಿಕ್ಕಿಬಿದ್ದಿದ್ದರು. ಇದರ ಮುಂದುವರೆದ ಭಾಗವಾಗಿ ದಾಳಿ ನಡೆದಿದೆ ಎನ್ನಲಾಗಿದೆ.

ಅಕ್ರಮ ಆಸ್ತಿ ಗಳಿಕೆ ಆರೋಪ ಹಿನ್ನೆಲೆಯಲ್ಲಿ ಮೈಸೂರು ನಗರ ಪಾಲಿಕೆಯ ವಲಯ ಆಯುಕ್ತ ನಾಗೇಶ್ ಮನೆ ಮತ್ತು ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇನ್ನು, ಶ್ರೀರಂಗಪಟ್ಟಣದಲ್ಲಿರುವ ನಾಗೇಶ್ ನ ಮತ್ತೊಂದು ಮನೆ ಮೇಲೂ ಲೋಕಾಯುಕ್ತ ರೇಡ್ ಮಾಡಿದೆ. ನಾಗೇಶ್ ಹಿಂದೆ ಶ್ರೀರಂಗಪಟ್ಟಣ ತಹಶೀಲ್ದಾರ್ ಆಗಿದ್ದರು.

ಧಾರವಾಡದ ಗಾಂಧಿನಗರ ಬಡಾವಣೆಯಲ್ಲಿರುವ ಕೆಐಎಡಿಬಿ ಎಇಇ ಗೋವಿಂದಪ್ಪ ಭಜಂತ್ರಿ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಮನೆ ಎದುರಿನಲ್ಲಿ ನಿಲ್ಲಿಸಿದ್ದ ಎರಡು ಕಾರುಗಳಲ್ಲೂ ಪರಿಶೀಲನೆ ನಡೆಸಿದ್ದಾರೆ. ಗೋವಿಂದಪ್ಪ ಭಜಂತ್ರಿಗೆ ಸೇರಿದ ಸವದತ್ತಿ ತಾಲೂಕಿನ ಹೂಲಿ, ಉಗರಗೋಳ ಫಾರ್ಮ್ ಹೌಸ್ ಧಾರವಾಡದ ತೇಜಸ್ವಿನಗರ ಬಡಾವಣೆಯ ಅಳಿಯನ ಮನೆ, ಲಕ್ಕಮನಹಳ್ಳಿ ಬಡಾವಣೆ ಕೆಐಎಡಿಬಿ ಕಚೇರಿ ಮೇಲೂ ದಾಳಿ ಮಾಡಿದ್ದಾರೆ. ಹಾಗೇ ನರಗುಂದದಲ್ಲಿರುವ ಸಹೋದರನ ಮನೆ ಮೇಲೂ ಡಿವೈಎಸ್ ಪಿ ವೆಂಕನಗೌಡ ಪಾಟೀಲ್ ನೇತೃತ್ವದಲ್ಲಿ ದಾಳಿ ನಡೆದಿದೆ.

ದಾವಣಗೆರೆಯ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಸಹಾಯ ನಿರ್ದೇಶಕ ಕಮಲ್ ರಾಜ್ ಮನೆಯ ಮೇಲೆ ಲೋಕಾಯುಕ್ತ ದಾಳಿ ಮಾಡಿದೆ. ದಾವಣಗೆರೆ ನಗರದ ಡಿಸಿಎಂ ಪಕ್ಕದಲ್ಲಿ ಬರುವ ಶಕ್ತಿನಗರದ ಮೂರನೇ ಕ್ರಾಸ್ ನಲ್ಲಿ ಕಮಲ್ ರಾಜ್ ಮನೆ ಇದೆ. ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತ್ರತ್ವದಲ್ಲಿ ಇನ್ಸ್ ಪೆಕ್ಟರ್ ಗಳಾದ ಮಧುಸೂದನ್ ಹಾಗೂ ಪ್ರಭು ಸೇರಿದಂತೆ ಹತ್ತಕ್ಕೂ ಹೆಚ್ಚು ಸಿಬ್ಬಂದಿಗಳಿಂದ ದಾಳಿ ನಡೆದಿದೆ.

# ಶೋಕಾಸ್ ನೋಟಿಸ್

ಸುಪ್ರೀಂಕೋರ್ಟ್ ಗೆ ಮೇಲಿನ ಐಎಫ್‌ಎಸ್ ಅಧಿಕಾರಿಗಳು ಐಎ ಸಲ್ಲಿಸಿದ್ದರು. ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಅಂದಿನ ಅರಣ್ಯ ಸಚಿವರ ಅಥವಾ ಸಚಿವ ಸಂಪುಟದ ಪೂರ್ವಾನುಮತಿಯನ್ನೂ ಪಡೆದಿರಲಿಲ್ಲ.

ಈ ಹಿನ್ನೆಲೆಯಲ್ಲಿ, ನಿಯಮ ಉಲ್ಲಂಘಿಸಿ ಸಾವಿರಾರು ಕೋಟಿ ರೂ. ಬೆಲೆ ಬಾಳುವ ಅರಣ್ಯ ಭೂಮಿಯನ್ನು ಡಿ ನೋಟಿಫೈ ಮಾಡಲು ಐಎ ಸಲ್ಲಿಸಿದ ಅಧಿಕಾರಿಗಳೇ ಕಾರಣ ಎಂದು ಆರೋಪಿಸಲಾಗಿದೆ. ಹೀಗಾಗಿ ಕಾರಣ ಕೇಳಿ ನೋಟಿಸ್ ನೀಡುವಂತೆ ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಸೆಪ್ಟೆಂಬರ್ 24ರಂದು ಸೂಚನೆ ನೀಡಿದ್ದರು. ಅದರಂತೆ, ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾಗಿ ನಿವೃತ್ತರಾಗಿರುವ ಸಂದೀಪ್ ದವೆ, ನಿವೃತ್ತ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ಗೋಗಿ ಹಾಗೂ ಹಾಲಿ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾಗಿರುವ ಐಟಿಸಿ ವಿಭಾಗದ ಸ್ಮಿತಾ ಬಿಜ್ಜೂರ್, ತಾಂತ್ರಿಕ ಕೋಶದ ಆರ್. ಗೋಕುಲ್ ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ.

**ಅರಣ್ಯ ಭೂಮಿ ಬಗ್ಗೆ ನಿಯಮಗಳಲ್ಲೇನಿದೆ?** ಸುಪ್ರೀಂಕೋರ್ಟ್ ಹೇಳಿರುವಂತೆ 'Once a forest is always a forest unless it is de-notified'. . ಅಂದರೆ ಅನ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಆಗದ ಹೊರತು ಒಮ್ಮೆ ಅರಣ್ಯ ಎಂದು ನಮೂದಾದ ಭೂಮಿ ಎಂದೆಂದಿಗೂ ಅರಣ್ಯವೇ ಆಗಿರುತ್ತದೆ. ಹೀಗಾಗಿ ಅರಣ್ಯ ಸಂರಕ್ಷಣಾ ಕಾಯಿದೆ 1980ರಡಿ ಅರಣ್ಯ ಭೂಮಿಯನ್ನು ಅರಣ್ಯೇತರ ಬಳಕೆಗೆ ಪರಿಹಾರ ಭೂಮಿ ಒದಗಿಸುವುದರೊಂದಿಗೆ ಎನ್ ಪಿವಿ ಮೊತ್ತ ಪಾವತಿಸಿ ಕಡ್ಡಾಯವಾಗಿ ಅನುಮತಿ ಪಡೆಯಬೇಕಾಗುತ್ತದೆ. ಹೀಗೆ ಅನುಮತಿ ನೀಡಿದರೂ ಸಹ ಅರಣ್ಯ ಭೂಮಿಯನ್ನು ಗುತ್ತಿಗೆ ಮಾತ್ರ ನೀಡಿ, ಗುತ್ತಿಗೆ ಅವಧಿ ಮುಗಿದ ಬಳಿಕ ಅರಣ್ಯ ಇಲಾಖೆಗೆ ಮರಳಿ ಪಡೆಯಬೇಕಾಗುತ್ತದೆ ಎಂದು ನೋಟಿಸ್ ನಲ್ಲಿ ಪ್ರಸ್ತಾಪಿಸಲಾಗಿದೆ.

ಆದರೆ, ಎಚ್ ಎಂಟಿ ತನ್ನ ವಶದಲ್ಲಿರುವ ಅರಣ್ಯ ಭೂಮಿಯನ್ನು ವಿವಿಧ ಸರ್ಕಾರಿ, ಖಾಸಗಿ ಸಂಸ್ಥೆ, ವ್ಯಕ್ತಿಗಳಿಗೆ ಭಾಗಶಃ ಮಾರಾಟ ಮಾಡಿದೆ. ಇದು ಕೇಂದ್ರ ಹಾಗೂ ರಾಜ್ಯ ಸರ್ಕಾರ ರೂಪಿಸಿರುವ ಪರಿಸರ ಮತ್ತು ಅರಣ್ಯ ಸಂರಕ್ಷಣೆ ಹಾಗೂ ಕಂದಾಯ ಕಾಯಿದೆ, ನಿಯಮಾವಳಿಗಳ ಸ್ಪಷ್ಟ ಉಲ್ಲಂಘನೆ ಎಂದು ಸಚಿವ ಖಂಡ್ರೆ ಹೇಳಿದ್ದರು.

# ಪಾಲಿಕೆ ಗುಡ್ ನ್ಯೂಸ್

ಸದ್ಯ ಪಾಲಿಕೆಯ ಯೂಟ್ಯೂಬ್ ಚಾನೆಲ್ ನಲ್ಲಿ ಕನ್ನಡ ಹಾಗೂ ಇಂಗ್ಲೀಷ್ ನಲ್ಲಿ ವಿಡಿಯೋ ಹಂಚಿಕೊಳ್ಳಲಾಗಿದೆ. ಆ ಮೂಲಕ ಇ-ಖಾತಾ ಬಗ್ಗೆ ಜನರಿಗಿರುವ ಗೊಂದಲಗಳನ್ನು ನಿವಾರಿಸಲು ಪಾಲಿಕೆ ಮುಂದಾಗಿದೆ.

ಒಟ್ಟಿನಲ್ಲಿ ವಲಯವಾರು ಸಹಾಯವಾಣಿ, ಪಾಲಿಕೆ ಕಚೇರಿಗಳಲ್ಲಿ ನೆರವು ಕೇಂದ್ರಗಳು ಹೀಗೆ ಹಲವು ಪ್ಲಾನ್ ಗಳ ಮೂಲಕ ಇ-ಖಾತಾ ಪಡೆಯುವುದನ್ನು ಸುಲಭ ಮಾಡಲು ಹೊರಟಿದ್ದ ಪಾಲಿಕೆ, ಇದೀಗ ಬೆಂಗಳೂರು ಒನ್ ಕೇಂದ್ರದಲ್ಲೂ ಇ-ಖಾತಾ ಪಡೆಯಲು ಅವಕಾಶ ಕೊಟ್ಟಿರುವುದು ನಗರವಾಸಿಗಳಿಗೆ ಸಂತಸ ತಂದಿದೆ.

# ವಶಕ್ಕೆ

ಎನ್ ಐಎ ಅಧಿಕಾರಿಗಳು ಕಾರ್ಯಾಚಾರಣೆ ವೇಳೆ ಬ್ಯಾಂಕಿಂಗ್ ವಹಿವಾಟುಗಳು, ಮೊಬೈಲ್ ಫೋನ್, ಡಿಜಿಟಲ್ ಸಾಧನಗಳು ಮತ್ತು ಭಯೋತ್ಪಾದಕ ನಿಧಿ ಚಟುವಟಿಕೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಂಡರು.

2023ರ ನವೆಂಬರ್‌ನಲ್ಲಿ, ಮೊಹಮ್ಮದ್ ಎಂದು ಗುರುತಿಸಲಾದ ನಾಲ್ವರು ಬಾಂಗ್ಲಾದೇಶಿ ಪ್ರಜೆಗಳು ಸೇರಿದಂತೆ ಐವರು ಆರೋಪಿಗಳ ವಿರುದ್ಧ ಎನ್‌ಐಎ ಚಾರ್ಜ್‌ಶೀಟ್ ಸಲ್ಲಿಸಿತ್ತು. ಸೋಜಿಬ್ಮಿಯಾನ್, ಮುನ್ನಾ ಖಾಲಿದ್ ಅನ್ಸಾರಿ ಅಲಿಯಾಸ್ ಮುನ್ನಾ ಖಾನ್, ಅಜರುಲ್ ಇಸ್ಲಾಂ ಅಲಿಯಾಸ್ ಜಹಾಂಗೀರ್ ಅಥವಾ ಆಕಾಶ್ ಖಾನ್, ಅಬ್ದುಲ್ ಲತೀಫ್ ಅಲಿಯಾಸ್ ಮೊಮಿನುಲ್ ಅನ್ಸಾರಿ ಮತ್ತು ಐದನೇ ಆರೋಪಿ ಫರೀದ್ ಭಾರತೀಯ ಪ್ರಜೆಯಾನ್ನು ಬಂಧಿಸಲಾಗಿತ್ತು ಎಂದು ಎನ್‌ಐಎ ತಿಳಿಸಿದೆ.

ಐವರು ಆರೋಪಿಗಳು ತಮ್ಮ ಚಟುವಟಿಕೆಗಳನ್ನು ಗೌಪ್ಯವಾಗಿ ನಡೆಸಲು ನಕಲಿ ದಾಖಲೆಗಳನ್ನು ಸೃಷ್ಟಿಸಿದ್ದರು ಎಂಬುದು ಅವರ ಪೂರ್ವಾಪರದ ಬಗ್ಗೆ ಎನ್‌ಐಎ ತನಿಖೆ ನಡೆಸಿದಾಗ ತಿಳಿದು ಬಂದಿತ್ತು. ಭಾರತದಲ್ಲಿನ ಮುಸ್ಲಿಂ ಯುವಕರನ್ನು ಪ್ರೇರೇಪಿಸುವಲ್ಲಿ ಇವರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಅಲ್-ಖೈದಾದ ಹಿಂಸಾತ್ಮಕ ಸಿದ್ಧಾಂತವನ್ನು ಪ್ರಚಾರ ಮಾಡುತ್ತಿದ್ದರು. ಹಣ ಸಂಗ್ರಹಿಸಿ ಅದನ್ನು ಅಲ್-ಖೈದಾಕ್ಕೆ ಕಳುಹಿಸುತ್ತಿದ್ದರು ಎನ್ ಐಎ ಮಾಹಿತಿ ನೀಡಿದೆ.

# ನಿಧನ

ಪ್ರೊ ತಿಮ್ಮಪ್ಪ ಎರಡು ಅವಧಿಗೆ ಬೆಂಗಳೂರು ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್ ಆಗಿ ಮತ್ತು ಅದರ ಉಪಕುಲಪತಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಮನೋವಿಜ್ಞಾನದ ಪ್ರಾಧ್ಯಾಪಕರಾಗಿ, ಅವರು ಸಾವಿರಾರು ವಿದ್ಯಾರ್ಥಿಗಳಿಗೆ ಪಾಠ ಮಾಡಿದ್ದರು. ಹಲವಾರು ಡಾಕ್ಟರೇಟ್ ಮತ್ತು ಎಂಫಿಲ್ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದರು. ಹಲವು ವರ್ಷಗಳ ಕಾಲ ಮನೋವಿಜ್ಞಾನ ವಿಭಾಗದಲ್ಲಿ ಸೇವೆ ಸಲ್ಲಿಸಿದ್ದರು.

**ಪ್ರೊ ತಿಮ್ಮಪ್ಪ ಅವರು ತಮ್ಮ ವ್ಯಕ್ತಿತ್ವ :** ಪ್ರೇರಣಾದಾಯಿಯಾಗಿತ್ತು. ಪರಿಣಾಮಕಾರಿ ಸಂವಹನ ಮತ್ತು ಎಲ್ಲರೊಂದಿಗೆ ಸ್ನೇಹದಿಂದ ಇರುತ್ತಿದ್ದರು. ಪ್ರೊ ತಿಮ್ಮಪ್ಪ ಅವರ ಪುತ್ರಿ 2000ರಲ್ಲಿ ನಿಧನರಾದರು. ನಂತರ 2007ರಲ್ಲಿ ಪ್ರೊ ತಿಮ್ಮಪ್ಪ ಅವರು ಪತ್ನಿಯನ್ನು ಕಳೆದುಕೊಂಡರು. ನಿವೃತ್ತಿಯ ನಂತರ ಒಂಟಿಯಾಗಿ ವಾಸಿಸುತ್ತಿದ್ದರು.

# ನಗರಸಭೆಗಿಲ್ಲ ಆಸ್ಥೆ ಆವರಣದಲ್ಲಿ ಅನಧೀಕೃತ ಆಟೋ ಸ್ಟ್ಯಾಂಡ್: ಗಬ್ಬುನಾರುತ್ತಿದೆ ಆವರಣ ಇಂದಿರಾ ಕ್ಯಾಂಟೀನ್ ಅವ್ಯವಸ್ಥೆ

**ಕೋಲಾರ:** ನಗರದ ಖಾಸಗಿ ಬಸ್ ನಿಲ್ದಾಣದಲ್ಲಿರುವ ಇಂದಿರಾ ಕ್ಯಾಂಟಿನ್‌ನಲ್ಲಿ ಸಮರ್ಪಕ ನಿರ್ವಹಣೆ ಇಲ್ಲದೆ ಜನರ ಪಾಲಿಗೆ ಇದ್ದೂ ಇಲ್ಲದಂತಾಗಿದ್ದು ಸಮಸ್ಯೆಗಳ ಆಗರವಾಗಿದೆ.

ಸಾರ್ವಜನಿಕ ಶೌಚಾಲಯದ ಪಕ್ಕದಲ್ಲೇ ನಿರ್ಮಾಣವಾಗಿರುವ ಇಂದಿರಾ ಕ್ಯಾಂಟೀನ್‌ಗೆ ಜನತೆ ಮೂಗು ಮುಚ್ಚಿಕೊಂಡೇ ಬರಬೇಕಾದ ಅನಿವಾರ್ತತೆ ಇದ್ದು ಆವರಣದಲ್ಲಿ ಅನಧೀಕೃತವಾಗಿ ಆಟೋ ಮತ್ತು ದ್ವಿಚಕ್ರವಾಹನಗಳ ನಿಲುಗಡೆ ಆಗುವುದರಿಂದಾಗಿ ಪೆಟ್ರೋಲ್, ಡೀಸೆಲ್, ಗ್ಯಾಸ್ ವಾಸನೆಯಿಂದಾಗಿ ಊಟ-ತಿಂಡಿ ಸೇವನೆ ಕಷ್ಟಕರವಾಗಿದೆ. ಖಾಸಗಿ ಬಸ್ ನಿಲ್ದಾಣದಲ್ಲಿ ಪಾರ್ಕಿಂಗ್ ಸಮಸ್ಯೆ ಇರುವುರಿಂದಾಗಿ ಚಾಲಕರು ನೇರವಾಗಿ ವಾಹನಗಳನ್ನು ತಂದು ಇಂದಿರಾ ಕ್ಯಾಂಟಿನ್ ಆವರಣದಲ್ಲಿ ನಿಲ್ಲಿಸುವುದರಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಚಾಲಕರನ್ನು ಪ್ರಶ್ನೆ ಮಾಡಿದರೆ ನಾವೇನು ಪಾರ್ಕಿಂಗ್ ಪುಕ್ಕಟೆ ಮಾಡಲ್ಲ, ಗಾಡಿಗೆ 10 ರೂ ಕೊಡ್ತೀವಿ ಎಂದು ಗದರಿಸುತ್ತಾರೆ.

ಇಂದಿರಾ ಕ್ಯಾಂಟಿನ್ ಸಿಬ್ಬಂದಿ ಅನಧೀಕೃತವಾಗಿ ನಡೆಸುತ್ತಿರುವ ಪಾರ್ಕಿಂಗ್ ಧಂದೆಯಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಹತ್ತು ಹಲವಾರು ದೂರುಗಳು ನಗರಸಭೆ ಪೌರಾಯುಕ್ತರಿಗೆ ಸಲ್ಲಿಸಲಾಗಿದ್ದರೂ ಕ್ರಮ ಕೈಗೊಂಡಿಲ್ಲ. ನಗರಸಭೆಯಲ್ಲಿ ಪೌರಾಯುಕ್ತರ ಹುದ್ದೆ ಖಾಲಿ ಇರುವುದರಿಂದಾಗಿ ಇಂದಿರಾ ಕ್ಯಾಂಟಿನ್ ನಿರ್ವಹಣೆ ಇಲ್ಲದಂತಾಗಿದೆ. ಕ್ಯಾಂಟಿನ್‌ನಲ್ಲಿ ಒಂದು ತಿಂಡಿ ಮತ್ತು ಎರಡು ಹೊತ್ತು ಊಟ ವಿತರಣೆ ಆಗಬೇಕಾಗಿದ್ದು ಕಡ್ಡಾಯವಾದರೂ ಎರಡೇ ಬಾರಿ ವಿತರಣೆ ಆಗುತ್ತಿದ್ದು ಮತ್ತೊಂದು ಪುಕ್ಕಟೆ ಬಿಲ್ ಆಗುತ್ತಿದೆ ಎಂಬ ವ್ಯಾಪಕ ದೂರುಗಳಿವೆ. ಪಿಡಿ ಅವರೇ ಪ್ರಭಾರ ಪೌರಾಯುಕ್ತರಾಗಿರುವುದರಿಂದಾಗಿ ಸಮಸ್ಯೆ ಆಗಿದ್ದು ಹೀಗಾಗಿ ಇಂದಿರಾ ಕ್ಯಾಂಟಿನ್ ಸಿಬ್ಬಂದಿಯನ್ನು ಕೇಳುವವರೇ ಇಲ್ಲದಂತಾಗಿದೆ. ಕ್ಯಾಂಟಿನ್ ಸಿಬ್ಬಂದಿ ಹಿಂದಿ ಮೂಲದವರಾಗಿದ್ದು ಕನ್ನಡ ಬರುವುದಿಲ್ಲ. ಹೀಗಾಗಿ ಏನು ಕೇಳಿದರೂ ಚಲ್ ಚಲ್





ಎಂದು ಗದರುತ್ತಾರೆ ಎಂಬುದು ನಗರವಾಸಿಗಳ ಅಳಲಾಗಿದ್ದು ಇನ್ನಾದರೂ ಜಿಲ್ಲಾಧಿಕಾರಿಗಳು ಇತ್ತ ಗಮನಹರಿಸಬೇಕಾಗಿದೆ. ಇಷ್ಟಾದರೂ ಇಂದಿರಾ ಕ್ಯಾಂಟಿನ್ ಹೆಸರಿನಲ್ಲಿ ತಿಂಗಳಿಗೆ ಲಕ್ಷಾಂತರ ಬಿಲ್ ಮಾಡಲಾಗುತ್ತಿದ್ದು ಈ ಸಂಬಂಧ ತನಿಖೆ ನಡೆಸಬೇಕೆಂದು ಖಾದ್ರೀಪುರದ ಶ್ಯಾಮನಾಯಕ್ ಆಗ್ರಹಿಸಿದ್ದಾರೆ.

# ಸರ್ಕಾರಿ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ಕಾಯ್ದೆ ತಿದ್ದುಪಡಿಗೆ ಸಿಎಂ ಸಿದ್ದರಾಮಯ್ಯ ಸೂಚನೆ

**ಬೆಂಗಳೂರು:** ಮಹತ್ವದ ಬೆಳವಣಿಗೆಯೊಂದರಲ್ಲಿ, ಸರ್ಕಾರದ ಸಿವಿಲ್ ಕಾಮಗಾರಿಗಳ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ಕಲ್ಪಿಸುವ ಪ್ರಸ್ತಾವನೆ ಸಿಎಂ ಸಿದ್ದರಾಮಯ್ಯ ಸರ್ಕಾರದ ಮುಂದಿರುವುದು ತಿಳಿದುಬಂದಿದೆ. ಮುಸ್ಲಿಂ ಸಮುದಾಯಕ್ಕೆ ಸರ್ಕಾರದ ಗುತ್ತಿಗೆಯಲ್ಲಿ ಮೀಸಲಾತಿ ತರಲು ಸಲ್ಲಿಕೆಯಾಗಿರುವ ಪ್ರಸ್ತಾವನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮೋದನೆ ನೀಡಿದ್ದಾರೆ ಎನ್ನಲಾಗಿದ್ದು, ಕಾಯ್ದೆಯಲ್ಲಿ ಸಂಬಂಧಿತ ತಿದ್ದುಪಡಿ ಮಾಡುವಂತೆ ಹಣಕಾಸು ಇಲಾಖೆಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.



1 ಕೋಟಿ ರೂ. ವರೆಗಿನ ಕಟ್ಟಡ ನಿರ್ಮಾಣ ಕಾಮಗಾರಿಗಳ ಸಾರ್ವಜನಿಕ ಗುತ್ತಿಗೆಯಲ್ಲಿ ಮುಸ್ಲಿಂ ಸಮುದಾಯವರಿಗೆ ಶೇ 4 ಮೀಸಲಾತಿ ನೀಡುವ ಬಗ್ಗೆ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಪ್ರಸ್ತಾವನೆ ಸಲ್ಲಿಸಿತ್ತು. ಇದಕ್ಕೆ ಅನುಮೋದನೆ ನೀಡಿರುವ ಸಿಎಂ, ತಿದ್ದುಪಡಿಗೆ ಸೂಚನೆ ನೀಡಿದ್ದಾರೆ.

**ಬೆಳಗಾವಿ ಅಧಿವೇಶನದಲ್ಲಿ ತಿದ್ದುಪಡಿ ಕಾಯ್ದೆ ಮಂಡನೆ ಸಾಧ್ಯತೆ:** ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದ ವೇಳೆ ಕಾಯ್ದೆಗೆ ತಿದ್ದುಪಡಿ ತಂದು ಮಂಡನೆ ಮಾಡಲು ಸರ್ಕಾರ ಮುಂದಾಗಿದೆ. ಈಗಾಗಲೇ ಎಸ್‌ಸಿ ಎಸ್‌ಟಿ ಸಮುದಾಯಕ್ಕೆ ಗುತ್ತಿಗೆಯಲ್ಲಿ ಶೇ 24ರ ಮೀಸಲಾತಿ ನೀಡಿರುವ ಸರ್ಕಾರ, ಒಬಿಸಿ ಸಮುದಾಯಕ್ಕೆ ಶೇ 4 ಮೀಸಲಾತಿ ನೀಡಿದೆ. 2ಂ ಅಡಿ ಗುತ್ತಿಗೆಯಲ್ಲಿ ಶೇ 15 ಮೀಸಲಾತಿ ನೀಡಲಾಗಿದೆ. ಒಟ್ಟು ಸರ್ಕಾರದ ಕಾಮಗಾರಿಗಳಲ್ಲಿ ಶೇ 43ರಷ್ಟು ಮೀಸಲಾತಿ ನೀಡಲಾಗಿದೆ. ಈಗ ಮುಸ್ಲಿಂ ಸಮುದಾಯಕ್ಕೂ ಸರ್ಕಾರದ ಕಾಮಗಾರಿಗಳಲ್ಲಿ ಶೇ 4 ರಷ್ಟು ಮೀಸಲಾತಿ ನೀಡಲು ಮುಂದಾಗಿದೆ.

**ಸಿಎಂಗೆ ಮನವಿ ಮಾಡಿದ್ದ ಮುಸ್ಲಿಂ ಶಾಸಕ, ಸಚಿವರು:** ಪ್ರವರ್ಗ 2ಬಿ ಅಡಿ 1 ಕೋಟಿ ರೂ. ವರೆಗಿನ ಕಾಮಗಾರಿಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವಂತೆ ಆಗ್ರಹಿಸಿ ಮುಸ್ಲಿಂ ಸಚಿವರು ಮತ್ತು ಶಾಸಕರು ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದಿದ್ದರು. ಸಚಿವ ಜಮೀರ್ ಅಹ್ಮದ್ ಖಾನ್, ರಹೀಂ ಖಾನ್, ಸಿಎಂ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಪತ್ರ ಬರೆದಿದ್ದರು. ಈ ಪತ್ರಕ್ಕೆ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರಾದ ತನ್ವೀರ್ ಸೇಠ್, ಅಬ್ದುಲ್ ಜಬ್ಬಾರ್, ಎನ್ ಎ ಹ್ಯಾರಿಸ್, ರಿಜ್ವಾನ್ ಅರ್ಷದ್, ಆಸಿಫ್ ಸೇಠ್, ಖನೀಜಾ ಫಾತಿಮಾ, ಇಕ್ಬಾಲ್ ಹುಸೇನ್, ಬಲ್ಕಿಸ್ ಬಾನು ಸಹಿ ಮಾಡಿದ್ದರು. ಇದರಂತೆ, ಕಾಯ್ದೆಗೆ ತಿದ್ದುಪಡಿ ಮಾಡಿ ಕಡತ ಮಂಡಿಸಲು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಸಂಡೂರು, ಚನ್ನಪಟ್ಟಣ ಮತ್ತು ಶಿಗ್ಗಾಂವಿ ಉಪಚುನಾವಣೆಗೂ ಮುನ್ನ ಮುಸ್ಲಿಂ ಮತಗಳ ಕ್ರೋಢೀಕರಣದ ಮೇಲೆ ಕಣ್ಣಿಟ್ಟಿರುವ ರಾಜ್ಯ ಸರ್ಕಾರದ ಹೇಯ ನಡೆ ಇದು ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಟ್ವೀಟ್ ಮೂಲಕ ಟೀಕಿಸಿದ್ದಾರೆ.

ಟೆಂಡರ್ ಅನ್ನು ಕೆಟಿಟಿಪಿ ಕಾಯ್ದೆಯ ಆಧಾರದ ಮೇಲೆ ನೀಡಬೇಕೇ ವಿನಹ ಜಾತಿ ಪರಿಗಣನೆಯ ಮೇಲೆ ಅಲ್ಲ. ಮುಖ್ಯಮಂತ್ರಿಗಳು ಬೂಟಾಟಿಕೆಯನ್ನಲ್ಲ, ಪ್ರಜಾಪ್ರಭುತ್ವವನ್ನು ಮತ್ತಷ್ಟು ಗಟ್ಟಿಗೊಳಿಸಬೇಕು ಎಂದು ಯತ್ನಾಳ್ ಹೇಳಿದ್ದಾರೆ.

# ಕೋಲಾರದಲ್ಲಿ ಇಂದಿರಾ ಕ್ಯಾಂಟೀನ್ ಅವ್ಯವಸ್ಥೆ

**ಕೋಲಾರ:** ನಗರದ ಖಾಸಗಿ ಬಸ್ ನಿಲ್ದಾಣದಲ್ಲಿರುವ ಇಂದಿರಾ ಕ್ಯಾಂಟಿನ್ನಲ್ಲಿ ಸಮರ್ಪಕ ನಿರ್ವಹಣೆ ಇಲ್ಲದೆ ಜನರ ಪಾಲಿಗೆ ಇದ್ದೂ ಇಲ್ಲದಂತಾಗಿದ್ದು ಸಮಸ್ಯೆಗಳ ಆಗರವಾಗಿದೆ.

ಸಾರ್ವಜನಿಕ ಶೌಚಾಲಯದ ಪಕ್ಕದಲ್ಲೇ ನಿರ್ಮಾಣವಾಗಿರುವ ಇಂದಿರಾ ಕ್ಯಾಂಟೀನ್ಗೆ ಜನತೆ ಮೂಗು ಮುಚ್ಚಿಕೊಂಡೇ ಬರಬೇಕಾದ ಅನಿವಾರ್ತತೆ ಇದ್ದು ಆವರಣದಲ್ಲಿ ಅನಧಿಕೃತವಾಗಿ ಆಟೋ ಮತ್ತು ದ್ವಿಚಕ್ರವಾಹನಗಳ ನಿಲುಗಡೆ ಆಗುವುದರಿಂದಾಗಿ ಪೆಟ್ರೋಲ್, ಡೀಸೆಲ್, ಗ್ಯಾಸ್ ವಾಸನೆಯಿಂದಾಗಿ ಊಟ-ತಿಂಡಿ ಸೇವನೆ ಕಷ್ಟಕರವಾಗಿದೆ. ಖಾಸಗಿ ಬಸ್ ನಿಲ್ದಾಣದಲ್ಲಿ ಪಾರ್ಕಿಂಗ್ ಸಮಸ್ಯೆ ಇರುವುರಿಂದಾಗಿ ಚಾಲಕರು ನೇರವಾಗಿ ವಾಹನಗಳನ್ನು ತಂದು ಇಂದಿರಾ ಕ್ಯಾಂಟಿನ್ ಆವರಣದಲ್ಲಿ ನಿಲ್ಲಿಸುವುದರಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಚಾಲಕರನ್ನು ಪ್ರಶ್ನೆ ಮಾಡಿದರೆ ನಾವೇನು ಪಾರ್ಕಿಂಗ್ ಪುಕ್ಕಟೆ ಮಾಡಲ್ಲ, ಗಾಡಿಗೆ 10 ರೂ ಕೊಡ್ತೀವಿ ಎಂದು ಗದರಿಸುತ್ತಾರೆ.



ಇಂದಿರಾ ಕ್ಯಾಂಟಿನ್ ಸಿಬ್ಬಂದಿ ಅನಧಿಕೃತವಾಗಿ ನಡೆಸುತ್ತಿರುವ ಪಾರ್ಕಿಂಗ್ ಧಂದೆಯಿಂದಾಗಿ ಜನತೆಗೆ ತೊಂದರೆ ಆಗಿದ್ದು ಈ ಸಂಬಂಧ ಹತ್ತು ಹಲವಾರು ದೂರುಗಳು ನಗರಸಭೆ ಪೌರಾಯುಕ್ತರಿಗೆ ಸಲ್ಲಿಸಲಾಗಿದ್ದರೂ ಕ್ರಮ ಕೈಗೊಂಡಿಲ್ಲ. ನಗರಸಭೆಯಲ್ಲಿ ಪೌರಾಯುಕ್ತರ ಹುದ್ದೆ ಖಾಲಿ ಇರುವುದರಿಂದಾಗಿ ಇಂದಿರಾ ಕ್ಯಾಂಟಿನ್ ನಿರ್ವಹಣೆ ಇಲ್ಲದಂತಾಗಿದೆ. ಕ್ಯಾಂಟಿನ್ನಲ್ಲಿ ಒಂದು ತಿಂಡಿ ಮತ್ತು ಎರಡು ಹೊತ್ತು ಊಟ ವಿತರಣೆ ಆಗಬೇಕಾಗಿದ್ದು ಕಡ್ಡಾಯವಾದರೂ ಎರಡೇ ಬಾರಿ ವಿತರಣೆ ಆಗುತ್ತಿದ್ದು ಮತ್ತೊಂದು ಪುಕ್ಕಟೆ ಬಿಲ್ ಆಗುತ್ತಿದೆ ಎಂಬ ವ್ಯಾಪಕ ದೂರುಗಳಿವೆ.

ಪಿಡಿ ಅವರೇ ಪ್ರಭಾರ ಪೌರಾಯುಕ್ತರಾಗಿರುವುದರಿಂದಾಗಿ ಸಮಸ್ಯೆ ಆಗಿದ್ದು ಹೀಗಾಗಿ ಇಂದಿರಾ ಕ್ಯಾಂಟಿನ್ ಸಿಬ್ಬಂದಿಯನ್ನು ಕೇಳುವವರೇ ಇಲ್ಲದಂತಾಗಿದೆ. ಕ್ಯಾಂಟಿನ್ ಸಿಬ್ಬಂದಿ ಹಿಂದಿ ಮೂಲದವರಾಗಿದ್ದು ಕನ್ನಡ ಬರುವುದಿಲ್ಲ. ಹೀಗಾಗಿ ಏನು ಕೇಳಿದರೂ ಚಲ್ ಚಲ್ ಎಂದು ಗದರುತ್ತಾರೆ ಎಂಬುದು ನಗರವಾಸಿಗಳ ಅಳಲಾಗಿದ್ದು ಇನ್ನಾದರೂ ಜಿಲ್ಲಾಧಿಕಾರಿಗಳು ಇತ್ತ ಗಮನಹರಿಸಬೇಕಾಗಿದೆ. ಇಷ್ಟಾದರೂ ಇಂದಿರಾ ಕ್ಯಾಂಟಿನ್ ಹೆಸರಿನಲ್ಲಿ ತಿಂಗಳಿಗೆ ಲಕ್ಷಾಂತರ ಬಿಲ್ ಮಾಡಲಾಗುತ್ತಿದ್ದು ಈ ಸಂಬಂಧ ತನಿಖೆ ನಡೆಸಬೇಕೆಂದು ಖಾದ್ರೀಪುರದ ಶ್ಯಾಮನಾಯಕ್ ಆಗ್ರಹಿಸಿದ್ದಾರೆ.

## ಮೈಸೂರು ಆರಾಧ್ಯ ಯುವಸೇನೆ ವತಿಯಿಂದ ಪಂಚಾಚಾರ್ಯರಿಗೆ ಗೌರವ ಸಮರ್ಪಣೆ

**ಮೈಸೂರು:** ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಆರಾಧ್ಯ ಮಹಾಸಭಾದಲ್ಲಿ ಶ್ರೀ ಉಮಾಮಹೇಶ್ವರ ಹಾಗೂ ಪಂಚಾಚಾರ್ಯ ದೇವಾಲಯದ 3ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಇಂದು (ನ.11) ಗುರುವಂದನಾ ಕಾರ್ಯಕ್ರಮವನ್ನು ಪಂಚಾಚಾರ್ಯರಿಗೆ ಸಮರ್ಪಣೆ ಮಾಡಲಾಯಿತು. ಚಿತ್ರದಲ್ಲಿ ಪಂಚಾಚಾರ್ಯರುಗಳಾದ ಹೊನ್ನೇಗೌಡನಹಳ್ಳಿ ಗುರುಮಠದ ಶ್ರೀ ವೀರಣ್ಣಾರಾಧ್ಯ, ನಂಜನಗೂಡು ದೇವನೂರು ಗುರುಮಠದ ಶ್ರೀ ಮಲ್ಲಿಕಾರ್ಜುನ ಆರಾಧ್ಯರು, ಗುಂಡ್ಲುಪೇಟೆ ತಾಲ್ಲೂಕು ಹೆಗ್ಗಡಳ್ಳಿ ಗುರುಮಠದ ಶ್ರೀ ಚಂದ್ರಶೇಖರ ಆರಾಧ್ಯ, ಹೊಸೂರು ಗುರುಮಠದ ಮಲ್ಲಾರಾಧ್ಯ, ಮಲ್ಲಿಗೆರೆ ಗುರುಮಠದ ಅರುಣ್ ರಾಮಾರಾಧ್ಯರನ್ನು ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ಆರಾಧ್ಯ ಯುವಸೇನೆಯ ಸದಸ್ಯರಾದ ಸುನಿಲ್ ಆರ್.ಆರಾಧ್ಯ, ಜಯಶಂಕರ ಆರಾಧ್ಯ, ರಘು ಆರಾಧ್ಯ, ಪ್ರಸನ್ನ ಆರಾಧ್ಯ, ಮಲ್ಲಿಕಾರ್ಜುನ ಆರಾಧ್ಯ, ಮೋಹನ ಆರಾಧ್ಯ ಹಾಗೂ ಆರಾಧ್ಯ ಮಹಾಸಭಾದ ಕಾರ್ಯದರ್ಶಿಗಳಾದ ಮಹೇಶ್ ಆರಾಧ್ಯ, ನಿರ್ದೇಶಕರುಗಳಾದ ವರಲಕ್ಷ್ಮಿ ಕುಮಾರ್, ಹಿರಿಯರಾದ ಮಲ್ಲಾರಾಧ್ಯ, ಜಯಶಂಕರ ಆರಾಧ್ಯ, ಅನುಕುಮಾರ್, ಧನುಷ್, ದೀಕ್ಷಿತ್ ಹಾಗೂ ಯುವಸೇನೆ ಸದಸ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



## ಜ್ಞಾನೋದಯ ಪ.ಪೂ. ಕಾಲೇಜಿಗೆ ಸಾಂಸ್ಕೃತಿಕ, ಕ್ರೀಡಾ ಸ್ಪರ್ಧೆಗಳಲ್ಲಿ ಬಹುಮಾನ

**ಮೈಸೂರು:** ನಗರದ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪದವಿ ಪೂರ್ವ ಶಿಕ್ಷಣ ಇಲಾಖೆಯ ವತಿಯಿಂದ ಆಯೋಜಿಸಿದ ವಿವಿಧ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಹಲವು ಬಹುಮಾನಗಳನ್ನು ಪಡೆದಿರುತ್ತಾರೆ. ರಾಜ್ಯ ಮಟ್ಟದ ಕ್ರೀಡಾಕೂಟದ ಚೆಸ್ ಸ್ಪರ್ಧೆಯಲ್ಲಿ ಶರದಿ ಶಾಸ್ತ್ರಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಬಾಸ್ಕೆಟ್ ಬಾಲ್‌ನಲ್ಲಿ ಶ್ಲೋಕ್ ಸಿ.ಗೌಡ ದ್ವಿತೀಯ ಸ್ಥಾನ, ಕಾರ್ತಿಕ್ ಚೆಸ್‌ನಲ್ಲಿ ನಾಲ್ಕನೇ ಸ್ಥಾನ ಪಡೆದರು. ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿನಿ ಸ್ಫೂರ್ತಿ ಈಜು ಸ್ಪರ್ಧೆಯಲ್ಲಿ 50 ಮೀಟರ್ ಬ್ಯಾಕ್ ಸ್ಟ್ರೋಕ್, 100 ಮೀಟರ್ ಫ್ರೀ ಸ್ಟೈಲ್, ಬಟರ್‌ಫ್ಲೈನಲ್ಲಿ ಪ್ರಥಮ ಸ್ಥಾನ, ರಿವರ್ ಮಾನ್ಯ ಎಂ. 50 ಮೀಟರ್ ಫ್ರೀ ಸ್ಟೈಲ್‌ನಲ್ಲಿ ಪ್ರಥಮ ಸ್ಥಾನ, 100 ಮೀಟರ್ ಬ್ರೆಸ್ಟ್ ಸ್ಟ್ರೋಕ್ ಪ್ರಥಮ 100 ಮೀಟರ್ ಫ್ರೀ ಸ್ಟೈಲ್ ದ್ವಿತೀಯ, ಕರಾಟೆಯಲ್ಲಿ ಅಜಯ್ ಸಿಲಬಂ ಪ್ರಥಮ, ಧಾರ್ಮಿಕ ಗೌಡ ಟೆನ್ನಿಸ್‌ನಲ್ಲಿ ದ್ವಿತೀಯ, ಕಾರ್ತಿಕ್ ಶೆಟ್ಟಿ ಚೆಸ್‌ನಲ್ಲಿ ತೃತೀಯ, ಜೀವಿತ ಕರಾಟೆಯಲ್ಲಿ ತೃತೀಯ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ದೆಗಳಿಗೆ ಆಯ್ಕೆಯಾಗಿರುತ್ತಾರೆ. ಜಿಲ್ಲಾ ಮಟ್ಟದ ಸಾಂಸ್ಕೃತಿಕ ಮತ್ತು ಸಹಪಠ್ಯ ಸ್ಪರ್ಧೆಗಳಲ್ಲಿ ಚೈತ್ರಾ ವೈ.ಡಿ. ಕನ್ನಡ ಚರ್ಚಾ ಸ್ಪರ್ಧೆ ಪ್ರಥಮ, ಧೃತಿ ಎಂ. ಇಂಗ್ಲೀಷ್ ಚರ್ಚಾ ಸ್ಪರ್ಧೆ ಪ್ರಥಮ, ವೈಭವಿ ಕೆ. ಭಕ್ತಿಗೀತೆ ಪ್ರಥಮ, ಭಾವಗೀತೆ ದ್ವಿತೀಯ, ಕಿರಣ್‌ಕುಮಾರ್ ಎಸ್. ಮತ್ತು ಮಂಜುನಾಥ್ ಎಚ್.ಆರ್. ರಸಪ್ರಶ್ನೆ ಸ್ಪರ್ಧೆ ದ್ವಿತೀಯ, ಕಾವ್ಯಶ್ರೀ ಇಂಗ್ಲೀಷ್ ಚರ್ಚಾ ಸ್ಪರ್ಧೆ ತೃತೀಯ ಸ್ಥಾನ ಪಡೆದು ಮುಂದಿನ ವಿಭಾಗ ಮಟ್ಟದ ಸ್ಪರ್ಧೆಗಳಿಗೆ ಆಯ್ಕೆಯಾಗಿರುತ್ತಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜು ಆಡಳಿತ ಮಂಡಳಿ, ಪ್ರಾಂಶುಪಾಲರು, ಬೋಧಕ, ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿರುತ್ತಾರೆ.



### ಸರ್ಕಾರಿ ಶಾಲೆಗೆ ಮಕ್ಕಳನ್ನು ಕರೆತರಲು ವಿಫಲ

## ಖಾಸಗಿ ಶಾಲೆಗಳಿಗೆ ಮಣೆ ಎಷ್ಟು ಸೂಕ್ತ?

**ಮೈಸೂರು:** ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜವರೇಗೌಡ ಹಾಗೂ ದಕ್ಷಿಣ ವಲಯ ಶಿಕ್ಷಣಾಧಿಕಾರಿ ರಾಜು ಶಿಕ್ಷಣ ಇಲಾಖೆಯನ್ನು ಬುಡಮೇಲು ಮಾಡಲು ಹಾಗೂ ಸರ್ಕಾರಿ ಶಾಲೆಗಳನ್ನು ಉನ್ನತೀಕರಣ, ಗುಣಮಟ್ಟದ ಶಿಕ್ಷಣಕ್ಕೆ, ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕಾದ ಅಧಿಕಾರಿಗಳು ತಮ್ಮ ಸರ್ವಾಧಿಕಾರಿ ಧೋರಣೆಗಳಿಂದ ಖಾಸಗಿ ಶಾಲೆಗಳಿಗೆ ಮಣೆ ಹಾಕುತ್ತಾ ಬರುತ್ತಿದ್ದಾರೆ. ಸರ್ಕಾರಿ ಶಾಲೆಗೆ ಮಕ್ಕಳನ್ನು ಕರೆತರಲು ವಿಫಲರಾಗಿದ್ದಾರೆ.

ಇವರು ಮೈಸೂರಿನಲ್ಲಿ ಹೆಚ್ಚು ಖಾಸಗಿ ಶಾಲೆಗಳು ನಾಯಿಕೊಡೆಗಳಂತೆ ಬೆಳೆಯುತ್ತಿವೆ. ಮೇಲ್ಕಂಡ ಶಿಕ್ಷಣಾಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳ ಜತೆ ಶಾಮೀಲಾಗಿ ಕೆಲವು ಖಾಸಗಿ ಶಿಕ್ಷಣ ಸಂಸ್ಥೆಗಳು, ಕೆಲವು ತರಗತಿಗಳನ್ನು ಅನುಮತಿಯನ್ನೇ ಪಡೆಯದೇ ಶಿಕ್ಷಣ ಇಲಾಖೆಗಳ ಕಾಯ್ದೆಗಳನ್ನು, ಮಾರ್ಗಸೂಚಿಗಳನ್ನು ಗಾಳಿಗೆ ತೂರಿ ಶಾಲೆಗಳನ್ನು ನಡೆಸುತ್ತಿದ್ದರೂ ಹಾಗೂ ಶಿಕ್ಷಣ ಇಲಾಖೆಗಳ ಷರತ್ತುಗಳು, ಸುತ್ತೋಲೆಗಳನ್ನು ಉಲ್ಲಂಘನೆ ಮಾಡಿ ಮನಬಂದಂತೆ ಅಧಿಕ ಶುಲ್ಕ ವಸೂಲಿ ನಿಯಮಬಾಹಿರವಾಗಿ ಬಟ್ಟೆ, ಪುಸ್ತಕಗಳು, ವ್ಯಾನ್‌ಗಳ ಫೀಸ್ ಎಂದು ಇನ್ನಿತರ ಚಟುವಟಿಕೆಗಳೆಂದು ನೆಪವೊಡ್ಡಿ ಹಣ ಪೀಕುವ ಕಾಯಕ ಮಾಡಿಕೊಂಡಿರುವ ಖಾಸಗಿ ಶಾಲೆಗಳು ಅಲ್ಪಸ್ವಲ್ಪ ಜಾಗದಲ್ಲೇ ಗಾಳಿ, ಬೆಳಕುಗಳು ಇಲ್ಲದೆ ಮೇಲಂತ್ತು ಮೇಲಂಸ್ತು ಕಟ್ಟಿಕೊಂಡು ಕೋಣೆಯಂತಿರುವ ವಿದ್ಯಾರ್ಥಿಗಳ ಕ್ರೀಡಾ



ಚಟುವಟಿಕೆಗೂ ಜಾಗವಿಲ್ಲದೆ ಇಕ್ಕಟ್ಟಿನ ಸ್ಥಳದಲ್ಲಿ ಖಾಸಗಿ ಶಾಲೆಗಳು ಆರ್ಭಟಿಸುತ್ತಿವೆ. ಸ್ಪಷ್ಟವಾಗಿ ಸರ್ಕಾರ ಶಿಕ್ಷಣ ಕಾಯ್ದೆಗಳನ್ನು ಉಲ್ಲಂಘನೆ ಮಾಡುತ್ತಿರುವ, ಅನುಮತಿಯನ್ನೂ ಪಡೆಯದೆ ತರಗತಿ, ಶಾಲೆಗಳನ್ನು ತೆರೆದಿರುವ ಖಾಸಗಿ ಶಾಲೆಗಳ ಮೇಲೆ ಸಾರ್ವಜನಿಕರು, ಹೋರಾಟಗಾರರು ದೂರು ನೀಡಿದರೂ ದೂರು ದೂರಾಗಿಯೇ ಉಳಿಯುತ್ತಿದೆ. ತಲೆಗೊಬ್ಬ ವಿದ್ಯಾರ್ಥಿ ಶಾಲೆಗೆ ದಾಖಲಿಸಲು ಲಕ್ಷಾಂತರ ರೂ. ವಸೂಲಿ ಮಾಡುವುದು, ಅಡ್ಮಿಷನ್‌ಗೆ ಶೇಕಡವಾರು ಇರಬೇಕು ಎಂಬ ಶೋಷಣೆಗಳು ದಿನನಿತ್ಯ ವ್ಯಾಪಕವಾಗಿ ನಡೆಯುತ್ತಿದೆ.

ಸಾರ್ವಜನಿಕರು, ಹೋರಾಟಗಾರರಿಂದ ದೂರು ಬಂದರೂ ಸೌಜನ್ಯಕ್ಕಾದರೂ ಶಾಲೆಗಳಿಗೆ ಭೇಟಿ ನೀಡದೇ, ತನಿಖೆ ಮಾಡದೆ ಉಪನಿರ್ದೇಶಕರಾಗಲಿ, ಶಿಕ್ಷಣಾಧಿಕಾರಿಗಳಾಗಲೀ ನುಣುಚಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ. ಖಾಸಗಿ ಶಾಲೆಗಳಿಂದ ಶಹಬ್ಬಾಸ್ ಗಿರಿ ಪಡೆದು ಖಾಸಗಿ ಶಾಲೆಗಳ ಬಗ್ಗೆ ಯಾವುದೇ ಒಂದು ಚಕಾರವೆತ್ತದೆ, ಮೌನ ವಹಿಸುತ್ತಾ, ಶಿಕ್ಷಣ ಕಾಯ್ದೆಗಳು ಉಲ್ಲಂಘನೆಯಾಗುತ್ತಿದ್ದರೂ ಕ್ಯಾರೆ ಎನ್ನದೆ ಖಾಸಗಿ ಶಾಲೆಗಳಿಗೆ ಒತ್ತು ನೀಡುತ್ತಾ ಬರುತ್ತಿದ್ದಾರೆ. ಸಾರ್ವಜನಿಕ ತೆರಿಗೆ ಹಣದಿಂದ ಸರ್ಕಾರದ ಸಂಬಳ ಪಡೆಯುವ ಸರ್ಕಾರಿ ಅಧಿಕಾರಿಗಳು ಸರ್ಕಾರಿ ಶಾಲೆಗಳ ಉಳಿವಿಗಾಗಿ ಶ್ರಮಿಸಬೇಕಾದ ಅಧಿಕಾರಿಗಳು ಖಾಸಗಿ ಶಾಲೆಗಳ ಆಡಳಿತ ಮಂಡಳಿಯವರ ಜೊತೆ ಶಾಮೀಲಾಗಿ ಸರ್ಕಾರಿ ಶಾಲೆಗಳ ಬದಲು ಖಾಸಗಿ ಶಾಲೆಗೆ ಸೇರಿಸುವಂತೆ ಪೋಷಕರಿಗೆ ಸಲಹೆ ನೀಡುವ ರೀತಿ ವರ್ತನೆ ಮಾಡುತ್ತಾ ಬರುತ್ತಿದ್ದಾರೆ.

ಒಂದು ಮಗುವಿಗೆ ಸುಮಾರು ಲಕ್ಷಾಂತರ ರೂ. ಪೀಕುವ ಖಾಸಗಿ ಶಾಲೆಗಳಿಗೆ ಸರ್ಕಾರದ ತೆರಿಗೆ ಇಲ್ಲವೇ? ಇದಕ್ಕೂ ವಿನಾಯ್ತಿ ನೀಡುತ್ತಾರಾ? ಎನ್ನುವುದು ಸಾರ್ವಜನಿಕರ ಪ್ರಶ್ನೆಯಾಗಿದೆ. ಖಾಸಗಿ ಶಾಲೆಗಳು ಮಕ್ಕಳಿಂದ ತುಂಬಿ ತುಳುಕುತ್ತಿವೆ. ಆದರೆ ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಬೆರಳಣಿಕೆ ಮಂದಿ ಇರುತ್ತಾರೆ. ಇದಕ್ಕೆಲ್ಲಾ ಕಾರಣ ಯಾರು?

ಇಂಥ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡುವ ಮೂಲಕ ಖಾಸಗಿ ಶಾಲೆಗಳ ಮೇಲೆ ದೂರು ಕೊಟ್ಟಿರುವುದನ್ನು ಸಮಗ್ರ ತನಿಖೆಯನ್ನು ಮಾಡಿ ಲೋಪ ಕಂಡುಬಂದಲ್ಲಿ ಕೂಡಲೇ ವಹಿಸುವ ಕೆಲಸ ಮಾಡಬೇಕೆಂದು ಕರ್ನಾಟಕ ರಾಜ್ಯ ರೈತಸಂಘದ ಮುಖಂಡರಾದ ಕಿರಂಗೂರು ಪಾಪು ಮೋಹನ್‌ಕುಮಾರ್ ಕಳಕಳಿಯಿಂದ ಸರ್ಕಾರ ಹಾಗೂ ಶಿಕ್ಷಣ ಸಚಿವರಿಗೆ ಪತ್ರಿಕಾ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

## ಜಾನಪದ ನೃತ್ಯ ಸ್ಪರ್ಧೆ

**ತಿಪಟೂರು:** ಇನ್ನರ್‌ವೀಲ್ ಕ್ಲಬ್ ವತಿಯಿಂದ ಮಕ್ಕಳ ದಿನಾಚರಣೆ ಅಂಗವಾಗಿ ಜಾನಪದ ನೃತ್ಯ ಸ್ಪರ್ಧೆಯನ್ನು ನಗರದ ಶ್ರೀ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ನ.14ರ ಗುರುವಾರ ಬೆಳಗ್ಗೆ 10.30ಕ್ಕೆ ಆಯೋಜಿಸಲಾಗಿದೆ ಎಂದು ಇನ್ನರ್‌ವೀಲ್ ಕ್ಲಬ್ ಅಧ್ಯಕ್ಷೆ ಟಿ.ಎಸ್. ಸುಮಿತ್ರಾ ತಿಳಿಸಿದರು. ನಗರದ ಕೌಸ್ತುಭ ಹೋಟೆಲ್‌ನಲ್ಲಿ ಸೋಮವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಉದ್ಘಾಟನೆಯನ್ನು ಶಾಸಕ ಕೆ. ಷಡಕ್ಷರಿ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾದ ಮಾಜಿ ಸಚಿವ ಬಿ.ಸಿ. ನಾಗೇಶ್, ಕುಮಾರ್ ಆಸ್ಪತ್ರೆಯ ಡಾ. ಶ್ರೀಧರ್, ಸಮಾಜ ಸೇವಕರಾದ ಕೆ.ಟಿ. ಶಾಂತಕುಮಾರ್, ಲೋಕೇಶ್ವರ, ನಗರಸಭೆ ಅಧ್ಯಕ್ಷೆ ಯಮುನಾ, ಬಿಇಓ ಚಂದ್ರಯ್ಯ, ಕದಳಿ ವೇದಿಕೆ ಅಧ್ಯಕ್ಷ ಸ್ವರ್ಣಗೌರಿ ಮತ್ತಿತರರು ಭಾಗವಹಿಸಲಿದ್ದಾರೆ. 17ಕ್ಕೂ ಹೆಚ್ಚು ಶಾಲೆಗಳ ಮಕ್ಕಳು ಸ್ಪರ್ಧೆಯಲ್ಲಿ ಭಾಗವಹಿಸಲಿದ್ದು ಯಕ್ಷಗಾನ, ಕಂಸಾಳೆ, ಜನಪದ ಹಾಡು, ಸೋಬಾನೆ ಪದ, ವೀರಗಾಸೆ ಹೀಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ತಾಲೂಕಿನ ಪ್ರೌಢಶಾಲಾ ಮಕ್ಕಳಿಗೆ ಈ ಸ್ಪರ್ಧೆ ಆಯೋಜಿಸಲಾಗಿದ್ದು, ಈಗಾಗಲೆ ಪೂರ್ವ ತಯಾರಿ ನಡೆಸಿದ್ದು ಶಾಲೆಗಳಿಗೆ ಭೇಟಿ ನೀಡಿ ಮಾಹಿತಿ ನೀಡಲಾಗಿದೆ. ನೃತ್ಯಕ್ಕೆ 8-10 ಮಕ್ಕಳು ಭಾಗವಹಿಸಲು ಅವಕಾಶವಿದ್ದು, ಭಾಗವಹಿಸುವ ಮಕ್ಕಳ ಜವಾಬ್ದಾರಿ ಆಯಾ ಶಾಲೆಯ ಶಿಕ್ಷಕರದ್ದೇ ಆಗಿರುತ್ತದೆ. ಪ್ರಥಮ ಬಹುಮಾನ 5001 ರೂ, ದ್ವಿತೀಯ 3001ರೂ, ತೃತೀಯ 2001ರೂ, ಸಮಾಧಾನಕರ ಬಹುಮಾನ 1001ರೂ ನೀಡಿ ಟ್ರೋಫಿ ನೀಡಲಾಗುವುದು. ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಭಾಗವಹಿಸುವ ಮೂಲಕ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಕ್ಲಬ್ ಮಾಜಿ ಅಧ್ಯಕ್ಷೆ ಭಾಗ್ಯಮೂರ್ತಿ, ಕ್ಲಬ್‌ನ ಸಂಕಲನಾಕಾರರಾದ ರೇಖಾಅನೂಪ್, ಉಪಾಧ್ಯಕ್ಷೆ ಜಯಮ್ಮ, ಕಾರ್ಯದರ್ಶಿ ಸುಜಾತ, ಐಎಸ್‌ಓ ಕಾತ್ಯಾಯಿನಿ, ನಿರ್ದೇಶಕಿ ರಮಾ, ಪ್ರಭಾವಿಶ್ವನಾಥ್ ಇದ್ದರು.



## ಅಂಬೇಡ್ಕರ್ ಆಶಯ ಈಡೇರಿಸೋಣ

**ಚಾಮರಾಜನಗರ:** ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವ ಸಂವಿಧಾನ ಬರೆದಿದ್ದು, ಇದರಿಂದ ಸಮಾಜದಕಟ್ಟಕಡೆಯ ವ್ಯಕ್ತಿ ಉನ್ನತಸ್ಥಾನಮಾನಗಳನ್ನು ಪಡೆಯಲು ಸಾಧ್ಯವಾಗಿದೆ ಎಂದು ಚಾಮರಾಜನಗರ ಹಾಲು ಒಕ್ಕೂಟದ ಅಧ್ಯಕ್ಷ ವೈ.ಸಿ.ನಾಗೇಂದ್ರ ಅಭಿಪ್ರಾಯಪಟ್ಟರು.

ಅವರುತಾಲೂಕಿನಕುದೇರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜನಹಿತಾಶಕ್ತಿ ಹೋರಾಟ ವೇದಿಕೆ, ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸೋಮವಾರ ನಡೆದ' ಸಂವಿಧಾನ ಅರಿವುಕಾರ್ಯಕ್ರಮ ಅಂಬೇಡ್ಕರ್‌ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ಅಂಬೇಡ್ಕರ್ ಭಾರತದ ಅಭಿವೃದ್ದಿಗೆ ಪೂರಕವಾದ ಸುಭದ್ರ ಸಂವಿಧಾನರಚನೆಮಾಡಿ, ದೇಶಕ್ಕೆಅರ್ಪಣೆ ಮಾಡಿದ್ದಾರೆ.ಶಾಲಾಕಾಲೇಜಿನ ವಿದ್ಯಾರ್ಥಿಗಳು ವಿದ್ಯಾರ್ಥಿ ದೆಸೆಯಲ್ಲೇ ಅಂಬೇಡ್ಕರ್ ರಚಿಸಿರುವ ಸಂವಿಧಾನವನ್ನು ಅಧ್ಯಯನ ಮಾಡಬೇಕು, ತಾವುಇಂದುಉನ್ನತಮಟ್ಟದ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದೇವೆ ಎಂದರೆ ಅದಕ್ಕೆ ಸಂವಿಧಾನಕಾರಣಎಂದರು.

ಸಾಹಿತಿಕೃಷ್ಣಕುಮಾರ್ ಮಾತನಾಡಿ, ಅಂಬೇಡ್ಕರ್ ಅವರು ಪ್ರಪಂಚದ 60 ದೇಶಗಳಿಗೆ ಭೇಟಿಅಲ್ಲಿಯ ಸಂವಿಧಾನಓದಿಕೊಂಡಿ, ವಿವಿಧ ಭಾಷೆ, ಧರ್ಮ, ಜಾತಿಮತಗಳಿರುವ ಭಾರತದೇಶದ ಮುಂದಿನ ಹಲವಾರು ವರ್ಷಗಳ ಗುರಿ ಇಟ್ಟುಕೊಂಡು, ಸಂವಿಧಾನರಚನೆ ಮಾಡಿದ್ದಾರೆ ಎಂದರು.

ಕುದೇರು ಪೊಲೀಸ್ ಠಾಣೆಉಪನಿರೀಕ್ಷಕಿಎಸ್. ಕುಮುದಾ ಮಾತನಾಡಿ, ಭಾರತದ ಅಭಿವೃದ್ದಿಗೆ ಪೂರಕವಾದ ಅಮೂಲ್ಯವಾದ ಸಂವಿಧಾನವನ್ನು ಬರೆದು 1949 ನ.26 ರಂದುಅಂಬೇಡ್ಕರ್‌ದೇಶಕ್ಕೆ ಸಮರ್ಪಣೆ ಮಾಡಿದರು. 1950 ಜ.26 ರಂದು ಅದನ್ನು ಅಧಿಕೃತವಾಗಿ ಜಾರಿಗೆ ತರಲಾಯಿತು.ಮಾನವೀಯ ಮೌಲ್ಯಗಳ ಆಗರವಾಗಿರುವ ಸಂವಿಧಾನದ ಮೂಲ ಆಶಯಗಳನ್ನು ನಾವು ಪಾಲನೆ ಮಾಡುವಅಗತ್ಯವಿದೆಎಂದರು.

ಜನಹಿತಾಶಕ್ತಿ ಹೋರಾಟವೇದಿಕೆ ಜಿಲ್ಲಾಧ್ಯಕ್ಷ ರಾಮಸಮುದ್ರ ಸುರೇಶ್ ಮಾತನಾಡಿ, ಶಾಲಾಕಾಲೇಜು ವಿದ್ಯಾರ್ಥಿಗಳಿಗೆ ಭಾರತದ ಸಂವಿಧಾನದ ಮಹತ್ವದ ಬಗ್ಗೆ ಅರಿವು ಮೂಡಿಸುವುದೇಕಾರ್ಯಕ್ರಮದಉದ್ದೇಶವಾಗಿದೆ. ಎಂದರು. ಸಿಕ್ರಮ್‌ಸಂಸ್ಥೆಯ ಜಿಲ್ಲಾಧ್ಯಕ್ಷ ಕೆ,ಸಿರೇವಣ್ಣಪ್ರಾಂಶುಪಾಲ ಥಿಯೋಡರ್ ಲೂಥಸ್, ಚಾಮರಾಜನಗರ ಸಿದ್ದಾರ್ಥ ಪದವಿಪೂರ್ವಕಾಲೇಜು ಪ್ರಾಂಶುಪಾಲ ಸಿ.ರಂಗಸ್ವಾಮಿ, ಉಮ್ಮತ್ತೂರು ಸೋಮಣ್ಣ ಹಾಜರಿದ್ದರು.



### ಕನ್ನಡ ಕವನ ಸಂಕಲನ

## ಒಬ್ಬಂಟೀಕರಣ ಲೋಕಾರ್ಪಣೆ

**ಹೈದರಾಬಾದ್:** ಕನ್ನಡ ಮತ್ತುತೆಲುಗಿನ ಬಾಂಧವ್ಯತುಂಬಾ ಹಳೆಯದು ಎಂದು ಹೇಳುತ್ತ ಅದನ್ನು ಶ್ರೀರಮೇಶಬಾಬು ಮುಂದುವರೆಸಿದ್ದಾರೆ ಎಂದು ಹೇಳಿದರು. ಅನುವಾದ ಪ್ರಕ್ರಿಯೆಯನ್ನು ಪ್ರಾರಂಭಿಸಿದ ಭೀಮಕವಿಯನ್ನುಅವರು ನೆನೆದರು. ಈ ಎರಡು ಭಾಷೆಗಳ ನಡುವೆಯೇ ಜಾಸ್ತಿ ನೇರ ಅನುವಾದಗಳು ಆಗುತ್ತಾ ಇವೆ ಎಂದು ಹೇಳಿದರು. ಇದಕ್ಕೆಇತರ ರಾಜ್ಯಗಳಿಗಿಂತ ಜಾಸ್ತಿ ಗಡಿಪ್ರದೇಶವನ್ನು ಹಂಚಿಕೊಂಡಿರುವಂತ ಭೌಗೋಳಿಕ ವಿಷಯಗಳು ಸಹ ನೆರವಾಗಿವೆಎಂದು ಪ್ರೊ. ವಿ.ಬಿ. ತಾರಕೇಶ್ವರ್ ಅವರುಕೃತಿಯ ಬಗ್ಗೆ ಮಾತನಾಡುತ್ತ ನುಡಿದರು. ಎರಡೂ ಭಾಷೆಗಳ ಸೇವೆಯಲ್ಲಿತುಂಬಾ ಬರಹಗಾರರು ತೊಡಗಿಸಿಕೊಂಡಿದ್ದಾರೆ ಎಂದರು. ಕೃತಿಯ ಬಗ್ಗೆ ಮಾತನಾಡುತ್ತಎರಡೂ ಭಾಷೆಗಳಲ್ಲಿ ಸಿಗುವ ಒಂದೇತರದ ಪದಗಳ ಬಳಕೆಯಲ್ಲಿ ''ಫಾಲ್ಸ್ ಫ್ರೆಂಡ್ಸ್'' ಎಂಬ ಪ್ರಯೋಗದ ಬಗ್ಗೆ ಸಭಿಕರಿಗೆ ತಿಳಿಸಿದರು. ನಂತರಕೃತಿಯಲ್ಲಿಯ ಕವನಗಳ ಬಗ್ಗೆ ಮಾತನಾಡುತ್ತ ಮನುಷ್ಯತುಂಬಾ ಸ್ವಯಂಕೇಂದ್ರಿತನಾಗುತ್ತಿದ್ದಾನೆಎನ್ನುತ್ತ ಈ ತರದ ವರ್ತನೆಯಿಂದ ವ್ಯಕ್ತಿ ಸಮಾಜದಿಂದದೂರವಾಗುತ್ತಿದ್ದಾನೆಎಂದು ಕಳವಳ ವ್ಯಕ್ತಪಡಿಸಿದರು. ಸಂಕಲನದ ಮೊದಲನೆಯ ಕವನ ಇದನ್ನುಎತ್ತಿತೋರಿಸುತ್ತದೆಎನ್ನುತ್ತ ಆ



ಕವನವನ್ನುಓದಿದರು.

ತಾವು ಈ ರೀತಿ ಹೊರನಾಡಿನಲ್ಲಿಕನ್ನಡ ಬೆಳೆಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿರುವಕನ್ನಡಿಗರ ನಡುವೆ ಈ ಕೃತಿ ಲೋಕಾರ್ಪಣವಾಗುತ್ತಿರುವ ಸಂದರ್ಭದಲ್ಲಿ ಸಾಕ್ಷಿಯಾಗಿರಲುತಾನು ಹೆಮ್ಮೆ ಪಡುತ್ತೇನೆಂದು ಹೇಳಿದರು. ಕೃತಿಯನ್ನು ಬಿಡುಗಡೆ ಮಾಡಿದ ಶ್ರೀ ತಾರಕೇಶ್ವರ್‌ಅವರ ಮಾತುಗಳು ತುಂಬಾ ಹಿಡಿಸಿವೆ ಎಂದು ಮುಖ್ಯಅತಿಥಿ ಕಸಾಪ ಕಾರ್ಯದರ್ಶಿ ಡಾ. ಪದ್ಮಿನಿ ನಾಗರಾಜ ನುಡಿದರು. ಕಾರ್ಯಕ್ರಮ ಸಂಜೆ 6 ಗಂಟೆಗೆ ದೀಪ ಬೆಳಗುವಿಕೆಯೊಂದಿಗೆ ಪ್ರಾರಂಭವಾಯಿತು. ಕು. ಬೊಜ್ಜಿ ಆಶ್ರಿತ ಮತ್ತು ಸಂಗಡಿಗರಿಂದ ನಾಡಗೀತೆ ಹಾಡಲಾಯಿತು. ಮೂಲ ಲೇಖಕರು ಮುಖ್ಯಮಂತ್ರಿಗಳ ಜೊತೆಗೆ ಯಾವುದೋತುರ್ತು ಸಭೆಗೆ ಹಾಜರಾಗಬೇಕಿದ್ದರಿಂದ ಸ್ವಲ್ಪ ಮುಂಚಿತವಾಗಿಕೃತಿ ಬಿಡುಗಡೆ ಮಾಡಲಾಯಿತು. ಪ್ರೊ. ವಿ.ಬಿ. ತಾರಕೇಶ್ವರ್ ಅವರುತಮ್ಮಅಮೃತ ಹಸ್ತದಿಂದಕೃತಿಯನ್ನು ಲೋಕಾರ್ಪಣೆ ಮಾಡಿದರು. ನಂತರ ಮೂಲ ಕವಿಗಳಾದ ಡಾ. ಮಾಮಿಡಿ ಹರಿಕೃಷ್ಣಅವರುತಮ್ಮ ಮೂಲ ಕವಿತಾ ಸಂಕಲನವನ್ನುತಾವು ಪದವಿಪೂರ್ವ ಕಾಲೇಜಿನಲ್ಲಿಓದುವ ಸಮಯ- ಅಂದರೆ 1993-94ರಲ್ಲಿ ರಚಿಸಿದ್ದು ಎಂದು ತಿಳಿಸುತ್ತಾ ಒಂದು ಕವಿತೆಯನ್ನುತೆಲುಗಿನಲ್ಲಿ ಓದಿ ಎಲ್ಲರಿಗೂ ಶುಭಾಶಯ ತಿಳಿಸಿ ತಮ್ಮಕರ್ತವ್ಯದಕರೆಯಕಡೆಗೆ ಹೊರಟರು.

## ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಸಮೀಕ್ಷೆ

**ಮೈಸೂರು:** ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ನಡೆಸುತ್ತಿದ್ದು, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ಅನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವುದು ಅಥವಾ ಶೌಚಾಲಯದ ಮಲ ಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ ನವೆಂಬರ್ 4 ರಿಂದ 14 ರವರೆಗೆ ಹೂಟಗಳ್ಳಿ ನಗರಸಭಾ ಕಛೇರಿಯಲ್ಲಿ NAMASTE ಪೋರ್ಟ್‌ಲ್ ನ MS Survey App ನಲ್ಲಿ ಕಾಲೋಚಿತಗೊಳಿಸಲಾಗುತ್ತಿದ್ದು, ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳು ಖುದ್ದಾಗಿ ನಗರಸಭಾ ಕಛೇರಿಗೆ ಭೇಟಿ ನೀಡಿ ಸೂಕ್ತ ದಾಖಲೆಗಳೊಂದಿಗೆ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಹೂಟಗಳ್ಳಿ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

### ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯ

## ಸಂತೃಪ್ತಿಗಿಂತ ಮಿಗಿಲಾದ ಸಂಪತ್ತಿಲ್ಲ

**ಭದ್ರಾವತಿ:** ಮನುಷ್ಯನ ಮನಸ್ಸು ಸಿರಿವಂತವಾದರೆ ಸಂಪತ್ತು ಇಲ್ಲದಿದ್ದರೂ ನಾವು ಸಿರಿವಂತರೆ. ಮನಸ್ಸೇ ಬಡವಾಗಿದ್ದರೆ ನಮ್ಮಲ್ಲಿ ಸಂಪತ್ತು ಇದ್ದರೂ ನಾವು ಬಡವರೇ. ಸಂತೃಪ್ತಿಗಿಂತ ಶ್ರೇಷ್ಠವಾದ ಸಂಪತ್ತಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ನಗರದ ಸಹ್ಯಾದ್ರಿ ಬಡಾವಣೆಯಲ್ಲಿ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಶೆ ಕಳೆದುಕೊಂಡು ಬದುಕಬಹುದು. ಆದರೆ ಆಸಕ್ತಿ ಕಳೆದುಕೊಂಡು ಬದುಕಬಾರದು. ಆಡುವ ಮಾತುಗಳಿಗೆ ಕೊಲ್ಲುವ ಮತ್ತು ಕಾಪಾಡುವ ಸಾಮರ್ಥ್ಯ ಎರಡೂ ಇದೆ. ಮಾತುಗಳಲ್ಲಿ ಕರುಣೆ ಹಾಗೂ ನೈಜತೆಯಿದ್ದರೆ ಬದುಕು ಬಲಗೊಳ್ಳುತ್ತದೆ. ಹಣವನ್ನು ಇವತ್ತಲ್ಲ ನಾಳೆಯಾದರೂ ಸಂಪಾದಿಸಬಹುದು. ಆದರೆ ಜೊತೆಗಿರುವ ವ್ಯಕ್ತಿಯನ್ನು ಕಳೆದುಕೊಳ್ಳಬಾರದು. ಸಮಯ ಸ್ನೇಹ ಆರೋಗ್ಯ ಇವುಗಳಿಗೆ ಬೆಲೆ ಕಟ್ಟಲಾಗದು. ಜೀವನದ ಕೆಟ್ಟ ಘಟನೆಗಳನ್ನು ಮರೆತು ಬಿಡಬೇಕು. ಆದರೆ ಅದರಿಂದ ಕಲಿತ ಪಾಠಗಳನ್ನು ಯಾವಾಗಲೂ ಮರೆಯಬಾರದು. ಸಾಸಿವೆಯಷ್ಟು ಸುಖಕ್ಕೆ ಸಾಗರದಷ್ಟು ಕಷ್ಟ ಬಿಟ್ಟಿದ್ದಲ್ಲ. ಸುಖ ದು:ಖಗಳಲ್ಲಿ ಸಮನಾಗಿ ಬಾಳುವುದೇ ಮನುಷ್ಯನ ಗುರಿಯಾಗಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಮೌಲ್ಯಗಳನ್ನು ಬೋಧಿಸಿ ಉದ್ಧರಿಸಿದ್ದಾರೆ. ದೇವರು ಮತ್ತು ಶ್ರೀ ಗುರುವನ್ನು ಯಾವತ್ತಿಗೂ ಮರೆಯಬಾರದೆಂದರು. ಈ ಪವಿತ್ರ ಸಮಾರಂಭದಲ್ಲಿ ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು, ಮಳಲಿಮಠದ



ಡಾ॥ನಾಗಭೂಷಣ ಶಿವಾಚಾರ್ಯರು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು. ಇದೇ ಸಂದರ್ಭದಲ್ಲಿ ಲಿಂ.ಬಿ.ಎಚ್.ಮಹದೇವಪ್ಪನವರ 10ನೇ ವರ್ಷದ ಪುಣ್ಯಾರಾಧನೆ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಜರುಗಿದವು. ಕೂಡ್ಲಿಗೆರೆ ಹಾಲೇಶ್, ಬಿ.ಕೆ.ಜಗನ್ನಾಥ ಹಾಗೂ ವೀರಗಾಸೆ ತಂಡದವರು ಪಾಲ್ಗೊಂಡಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲ ಸಾಧಕರಿಂದ ವೇದಘೋಷ, ಚನ್ನಗಿರಿಯ ಡಾ. ಕೇದಾರ ಶಿವಶಾಂತವೀರ ಶಿವಾಚಾರ್ಯರಿಂದ ಪ್ರಾರ್ಥನೆ ಜರುಗಿತು. ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು ನಿರೂಪಿಸಿದರು. ಮನು ಸರ್ವರನ್ನು ಸ್ವಾಗತಿಸಿದರು. ಸ್ವಾಮಿ ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿದರು. ಶಿವಮೊಗ್ಗದ ಶಾಂತಾ ಆನಂದ ಇವರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು.

## ಸಹಕಾರ ಮೂರ್ತಿಯಾಗಿ ಕಾಣುವ ತಾಯಿ



**ಮಂಡ್ಯ:** 'ಮಕ್ಕಳ ಹೇಳಿಗೆಯಲ್ಲಿಹೆಚ್ಚುತಾಯಂದಿರ ಪಾತ್ರ ಅಪಾರವಾದುದು ನಿಸ್ವಾರ್ಥ ಪ್ರೀತಿ ತ್ಯಾಗ ಮತ್ತು ತಾಳ್ಮೆಯಿಂದ ಮಕ್ಕಳ ಬೆಳವಣಿಗೆಗೆ ಸಹಕಾರ ಮೂರ್ತಿಯಾಗಿ ಕಾಣುತ್ತಾರೆ' ಎಂದು ಶ್ರೀ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ವೈ.ಯರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘ ನೂತನ ಬೆಳ್ಳಿ ಸಭಾ ಭವನ ಉದ್ಘಾಟನೆ, ಜಯಚಾಮರಾಜೇಂದ್ರ ಒಡೆಯರ್, ಬಾಲಗಂಗಾಧರನಾಥ ಮಹಾಸ್ವಾಮೀಜಿ, ಸರ್‌ಎಂ.ವಿಶ್ವೇಶ್ವರಯ್ಯ ಅವರ ಪುತ್ಥಳಿ ಅನಾವರಣ ಹಾಗೂ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮಾಜ ಹೇಳಿಗೆಗೆ ಶ್ರಮಿಸಿದ ನಾಯಕರ ಪ್ರತಿಮೆಯನ್ನು ಗ್ರಾಮದಲ್ಲಿ ಸ್ಥಾಪಿಸಿ ಯುವ ಜನಾಂಗಕ್ಕೆ ಆದರ್ಶ ಮೈಗೂಡಿಸಿಕೊಳ್ಳಬೇಕು. ತಾಯಂದಿರು ಮನಸು ಮಾಡಿದರೆ ತಪ್ಪು ದಾರಿಯಲ್ಲಿ ಹೋಗುವ ಮಕ್ಕಳನ್ನು ಸರಿದಾರಿಗೆ ತರುವ ನಿಟ್ಟಿನಲ್ಲಿ ಬಾಲ್ಯದಲ್ಲಿಯೇ ಮಕ್ಕಳನ್ನು ತಿದ್ದುವ ಕೆಲಸವಾಗಬೇಕು ಎಂದು ಸಲಹೆ ನೀಡಿದರು.

ಬಿಜೆಪಿ ಮುಖಂಡ ಸಚ್ಚಿದಾನಂದ ಇಂಡುವಾಳು ಮಾತನಾಡಿ, ಚುಂಚನಗಿರಿ ಮಠವನ್ನು ಚಿನ್ನದ ಗಿರಿ ಮಾಡಿದಂತಹ ಬಾಲಗಂಗಾಧರನಾಥ ಸ್ವಾಮೀಜಿ ಅವರು ಮಂಡ್ಯ ಜಿಲ್ಲೆಯನ್ನು ಅಂದಿನ ಕಾಲದಲ್ಲಿಯೇ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡುವಂತೆ ಮಾಡಿದ್ದಾರೆ, ವಿದ್ಯಾ ಸಂಸ್ಥೆಗಳನ್ನು ತೆರೆದು ವಿದ್ಯಾರ್ಥಿಗಳಿಗೆ ನೆರವಾಗಿದ್ದಾರೆ. ಗಿಡಗಳನ್ನು ನೆಡುವ ಮೂಲಕ ವೃಕ್ಷಾರಣ್ಯಗಳನ್ನು ಬೆಳೆಸಿರುವುದು ಕೀರ್ತಿ ತಂದಂತಾಗಿದೆ ಎಂದು ಸ್ಮರಿಸಿದರು.

ನಿಕಟಪೂರ್ವ ಶಾಸಕ ರವೀಂದ್ರ ಶ್ರೀಕಂಠಯ್ಯ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಬಡ ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡುವ ಮೂಲಕ ಶ್ರೀಮಠವು ಹೆಸರುವಾಸಿಯಾಗಿದೆ. ಜ್ಞಾನದ ವಿಷಯಕ್ಕೆ ಹೆಚ್ಚು ಒತ್ತು ನೀಡಿರುವ ಶ್ರೀಮಠವು ಎಲ್ಲ ವರ್ಗದ ವಿದ್ಯಾರ್ಥಿಗಳಿಗೂ ನೆರವಾಗಿರುವುದು ಮೆಚ್ಚುವ ಕೆಲಸ ಎಂದು ಶ್ಲಾಘಿಸಿದರು. ಜಲ ಸಂಪನ್ಮೂಲ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಸತೀಶ್, ಕಾರ್ಯಕ್ರಮ ಸಂಯೋಜಕ ಶಿವಕುಮಾರ್ ಯರಹಳ್ಳಿ, ಮುಖಂಡರಾದ ಪುಟ್ಟಸ್ವಾಮಿ, ದೇವೇಗೌಡ ಭಾಗವಹಿಸಿದ್ದರು.

ಸಂಜೆ ಮುಗಿಲು
ಮಂಗಳವಾರ
12.11.2024

## ಕರಾಟೆಕಿಂಗ್ ಶಂಕರ್ ನಾಗ್ ಹುಟ್ಟುಹಬ್ಬ ಆಚರಣೆ

**ಮಾಲೂರು:** ಕನ್ನಡ ಚಿತ್ರರಂಗದ ಪ್ರತಿಭಾನ್ವಿತ ನಟ ದಿವಂಗತ ಶಂಕರ್‌ನಾಗ್ ಅವರು ನಟ ಮಾತ್ರವಲ್ಲದೆ ಚಿತ್ರಕಥೆಗಾರ, ನಿರ್ದೇಶಕ, ನಿರ್ಮಾಪಕರಾಗಿಯೂ ಚಿತ್ರರಂಗಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಇಂತಹ ಮಹಾನ್ ನಟರಾದ ಶಂಕರ್ ನಾಗ್ ರವರ ಹುಟ್ಟುಹಬ್ಬದ ಪ್ರಯುಕ್ತ ಮಾಲೂರು ತಾಲ್ಲೂಕಿನ ತೊರ್ನಹಳ್ಳಿಯ ಶ್ರೀ ಸಪಲಾಂಭ ದೇವಾಲಯದ ಬಳಿಯಿರುವ ಆಟೋ ನಿಲ್ದಾಣಕ್ಕೆ ಶಂಕರ್ ನಾಗ್ ಆಟೋ ನಿಲ್ದಾಣ ಎಂದು ಹೆಸರಿಡಲಾಯಿತು. ಈ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಆಟೋ ಘಟಕದ ಎಲ್ಲಾ ಚಾಲಕರು ಅವರಿಗೆ ಗೌರವ ಸಲ್ಲಿಸಿದರು. ಇಂದಿಗೂ ಸಹ ಶಂಕರ್ ನಾಗ್ ರವರನ್ನು ನೆನೆಯಲು ಅಂದಿನ ಕಾಲಕ್ಕೆ, ಆಟೋ ಚಾಲಕರಿಗೆ ಹಾಗೂ ಮಾಲೀಕರಿಗೆ ಅವರು ನೀಡಿರುವಂತಹ ಗೌರವ ಎಂದು ಈ ಸಮಯದಲ್ಲಿ ಅವರನ್ನು ಸ್ಮರಿಸಲಾಯಿತು. ಈ ಸಂದರ್ಭದಲ್ಲಿ ಎಲ್ಲರಿಗೂ ಸಿಹಿಯನ್ನು ಹಂಚಲಾಯಿತು.ಅದಿವಾಕರ್, ಅಜಯ್, ವೆಂಕಟೇಶ್, ಅಂಬರೀಶ್, ಅನ್ವರ್, ಸಲ್ಲಪ್ಪ, ನಜೀರ್, ಸತೀಶ, ವೆಂಕಟರಮಣಪ್ಪ, ಹನುಮಂತ ಕುಮಾರ್, ಎಸ್ ಡಿ ಎಮ್ ಸಿ ಅಧ್ಯಕ್ಷರಾದ ರಾಮಾಂಜಿ ಹಾಗೂ ಇತರರು ಹಾಜರಿದ್ದರು.



## ತಾಂಡವೇಶ್ವರಸ್ವಾಮಿಗೆ ವಿಶೇಷ ಹೂವಿನ ಅಲಂಕಾರ

**ಮಂಡ್ಯ:** ತಾಲೂಕು ಹೊಳಲು ಗ್ರಾಮದ ಶ್ರೀ ತಾಂಡವೇಶ್ವರ ದೇವಸ್ಥಾನದಲ್ಲಿ ಎರಡನೇ ಕಾರ್ತಿಕ ಸೋಮವಾರ ಪ್ರಯುಕ್ತ ಶ್ರೀ ತಾಂಡವೇಶ್ವರಸ್ವಾಮಿಗೆ ವಿಶೇಷವಾಗಿ ಹೂವಿನ ಅಲಂಕಾರ ಮಾಡಿ. ಬೆಳಗ್ಗೆಯಿಂದ ಕ್ಷೀರಾಭಿಷೇಕ, ರುದ್ರಾಭಿಷೇಕ, ಕುಂಕುಮಾರ್ಚನೆ ಹಾಗೂ ದೇವಸ್ಥಾನದ ಒಳಗಡೆ ಶ್ರೀಪಾರ್ವತಿ ದೇವಿ, ನಾಗರಕಲ್ಲು, ಶ್ರೀ ಲಕ್ಷ್ಮಿವೆಂಕಟೇಶ್ವರ ದೇವರುಗಳಿಗೆ ವಿಶೇಷ ಪೂಜೆಯನ್ನ ನೆರವೇರಿಸಲಾಯಿತು. ನಂತರ ಮಾತನಾಡಿದ ದೇವಸ್ಥಾನದ ಅರ್ಚಕರಾದ ವಿಶ್ವನಾಥ್ ದೀಕ್ಷಿತ್ ರವರು ಕರ್ನಾಟಕದಲ್ಲಿ ಶ್ರೀ ತಾಂಡವಶ್ವರ ಸ್ವಾಮಿಯ ದೇವಸ್ಥಾನ ಹೊಳಲು ಗ್ರಾಮದಲ್ಲಿ ಇರುವುದು ವಿಶೇಷವಾಗಿದೆ. ರಾಜ್ಯದ ಬೇರೆಯ ಜಿಲ್ಲೆಗಳಿಂದ ಹಾಗೂ ದೂರದ ಊರಿಂದ ಬಂದು ಪೂಜೆ ನೆರವೇರಿಸಿಕೊಂಡು ಹೋಗುತ್ತಾರೆ. ಆದ್ದರಿಂದ ಈ ದಿನ ಎಲ್ಲರೂ ಪೂಜೆಯನ್ನು ಮಾಡಿದರೆ ಅವರ ಕುಟುಂಬಕ್ಕೆ ಹಾಗೂ ಎಲ್ಲರಿಗೂ ಒಳ್ಳೆಯದಾಗುತ್ತದೆ ಎಂಬ ನಂಬಿಕೆ ಇದೆ ಎಂದು ಹೇಳಿದರು. ನಂತರ ರಾಜ್ಯ ಒಕ್ಕಲಿಗರ ಸಂಘದ ಮಾಜಿ ಉಪಾಧ್ಯಕ್ಷರಾದ ಎಚ್. ಎಲ್ .ಶಿವಣ್ಣ ಹಾಗೂ ಕುಟುಂಬದ ವತಿಯಿಂದ ಅನ್ನದಾಸೋಹ ಕಾರ್ಯಕ್ರಮ ನಡೆಯಿತು. ನಂತರ ಮಾತನಾಡಿ ಶಿವಣ್ಣನವರು ಕಾರ್ತಿಕ ಸೋಮವಾರದ ಪ್ರಯುಕ್ತ ನಮ್ಮ ಕುಟುಂಬದ ವತಿಯಿಂದ ಅನ್ನದಾಸೋಹ ಕಾರ್ಯಕ್ರಮ ನೆರವೇರಿಸಿದ್ದೇವೆ. ಆದ್ದರಿಂದ ಭಕ್ತಾದಿಗಳು ಪ್ರಸಾದವನ್ನು ಸ್ವೀಕರಿಸಿ ದೇವರ ಕೃಪೆಗೆ ಪಾತ್ರರಾಗಬೇಕು ತಮ್ಮ ಈ ಅಳಿಲು ಸೇವೆಯಿಂದ ದೇವರು ಎಲ್ಲರಿಗೂ ಒಳ್ಳೆಯದು ಮಾಡಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಹೆಚ್. ಬಿ. ರಾಮು, ಹರಿಪ್ರಸಾದ್, ತಾಂಡವೇಶ್, ಶ್ರೀಧರ್, ಜಟ್ಟಿ ಕುಮಾರ್, ಪುಟ್ಟಸ್ವಾಮಿ, ಶ್ರೀ ತಾಂಡವಶ್ವರ ದೇವಾಲಯದ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಎಚ್ .ಎಸ್ .ಮೋಹನ್ ಕುಮಾರ್, ಉಪಾಧ್ಯಕ್ಷರಾದ ಹೆಚ್. ಬಿ.ದೊಡ್ಡೇಗೌಡ, ಕಾರ್ಯದರ್ಶಿ ಎಸ್. ಕೃಷ್ಣ, ಹಾಗೂ ಸದಸ್ಯರುಗಳಾದ ಚಿಕ್ಕೇಗೌಡ , ಶಿವಣ್ಣ , ಶಿವಲಿಂಗಯ್ಯ, ಅನುಸೂಯ, ದೇವಸ್ಥಾನದ ಅರ್ಚಕರಾದ ಪ್ರದೀಪ್ ದೀಕ್ಷಿತ್, ಮನು ದೀಕ್ಷಿತ್ , ಹಾಗೂ ಅಕ್ಕ ಪಕ್ಕದ ಗ್ರಾಮಸ್ಥರು ಉಪಸ್ಥಿತರಿದ್ದರು.





## ನ.17ರಂದು ಧಾತ್ರಿ ಹವನ

**ಮೈಸೂರು:** ನಗರದ ಹುಣಸೂರುರಸ್ತೆ ವಿಜಯನಗರ 3ನೇ ಹಂತದಲ್ಲಿರುವ ಮುಲಕನಾಡು ಸಭಾದಲ್ಲಿ (ಐಶ್ವರ್ಯ ಪೆಟ್ರೋಲ್ ಬಂಕ್ ಸಮೀಪ) ನ.17 ಭಾನುವಾರದಂದುಸುಹಾಸಿನಿಯರ ಪೂಜೆ ಬೆಳಿಗ್ಗೆ 8.30ಕ್ಕೆ, ಶ್ರೀ ದಾತ್ರಿ ಹವನ ಬೆಳಿಗ್ಗೆ 9 ಗಂಟೆಗೆ, ಸಹಸ್ರಾಮಾರ್ಚನೆ 10.30ಕ್ಕೆ ಏರ್ಪಡಿಸಲಾಗಿದೆ.ಭಕ್ತಮಹಾಶಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ತಿಕದಾಮೋದರನ ಪೂಜೆಗೆ ಪಾತ್ರರಾಗಬೇಕೆಂದುಕೋರಲಾಗಿದೆ.ಮಾಹಿತಿಗಾಗಿ ಮೊಬೈಲ್ 9845341511, 9916138371 ಸಂಪರ್ಕಿಸಬಹುದು.

# ಮಹಿಳಾ-ಮಕ್ಕಳ ಇಲಾಖೆಯ ವಿವಿಧ ಯೋಜನೆಗಳ ತ್ರೈಮಾಸಿಕ ಸಭೆ



**ಕೋಲಾರ:** ಸರ್ಕಾರಿ ದತ್ತು ಸಂಸ್ಥೆಯು 0-6 ವರ್ಷದೊಳಗಿನ ಕುಟುಂಬದ ಪ್ರೀತಿ ವಂಚಿತ, ಅನಾಥ, ಪರಿತ್ಯಕ್ತ ಹಾಗೂ ನಿರ್ಗತಿಕ ಮಕ್ಕಳ ಪುನರ್ವಸತಿಗೆ ನೆರವಾಗುವ ಒಂದು ಸೂಕ್ತ ಸಂಸ್ಥೆಯಾಗಿದೆಯೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮಿಷನ್ ವಾತ್ಸಲ್ಯ ಯೋಜನೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ವತಿಯಿಂದ ಹಮ್ಮಿಕೊಂಡಿದ್ದ, ಇಲಾಖೆಯ ವಿವಿಧ ಯೋಜನೆಗಳ ಎರಡನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಇಂತಹ ಮಕ್ಕಳಿಗೆ ಶಾಶ್ವತ ಕುಟುಂಬದ ವ್ಯವಸ್ಥೆಯನ್ನು ಕಾನೂನು ಬದ್ಧವಾಗಿ ಕಲ್ಪಿಸಲು ದತ್ತು ಸಂಸ್ಥೆಯು ನೆರವಾಗುತ್ತದೆ. ವೀಕ್ಷಣಾಲಯ ಕಾನೂನಿನೊಂದಿಗೆ ಸಂಘರ್ಷಕ್ಕೊಳಪಟ್ಟ 18 ವರ್ಷದೊಳಗಿನ ಮಕ್ಕಳ ವಿರುದ್ಧ ದಾಖಲಾಗಿರುವ ಪ್ರಕರಣದ ವಿಚಾರಣೆ ಬಾಕಿ ಇರುವ ಅವಧಿಯಲ್ಲಿ ತಾತ್ಕಾಲಿಕವಾಗಿ ಅಭಿರಕ್ಷಣೆ ಒದಗಿಸುವ ಸಂಸ್ಥೆಯಾಗಿದೆ ಎಂದರು.

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳ ಪ್ರಕರಣ ವಿಚಾರಣೆ ವೇಳೆಯಲ್ಲಿ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳ ಪಾಲನೆ ಮತ್ತು ರಕ್ಷಣೆಗಾಗಿ ಹಾಗೂ ದೀರ್ಘಾವಧಿ ಪುನರ್ವಸತಿಗಾಗಿ ಬಾಲಕರ ಮತ್ತು ಬಾಲಕಿಯರಿಗಾಗಿ ಪ್ರತ್ಯೇಕ ಬಾಲ ಮಂದಿರಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಒಟ್ಟು 42 ಮಕ್ಕಳು ದಾಖಲಾಗಿರುತ್ತಾರೆ ಎಂದರು.

ಮುಖ್ಯಮಂತ್ರಿ ಬಾಲಸೇವಾ ಯೋಜನೆಯಡಿ ಕೋವಿಡ್-19 ರಿಂದ ಇಬ್ಬರು ಪೋಷಕರನ್ನು ಕಳೆದುಕೊಂಡ 8 ಮಕ್ಕಳಿಗೆ ಮಾಸಿಕ ರೂ.3,500/ಗಳ ಆರ್ಥಿಕ ಧನ ಸಹಾಯವನ್ನು ಆರ್ .ಟಿ.ಜಿ.ಎಸ್ ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆಯನ್ನು ಮಾಡಲಾಗುತ್ತಿದೆ. ಪಿ.ಎಂ ಕೇರ್ ಫಾರ್ ಚಿಲ್ಡ್ರನ್ ಯೋಜನೆಯಡಿ ಮಕ್ಕಳ ಮಾಹಿತಿಯನ್ನು ಪಿ.ಎಂ. ಕೇರ್ ಪೋರ್ಟಲ್‌ನಲ್ಲಿ ಅಳವಡಿಸಲಾಗಿದ್ದು, ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದರು.

ರಾಷ್ಟ್ರ ವ್ಯಾಪ್ತಿಯಲ್ಲಿ ಚಾಲ್ತಿಯಲ್ಲಿರುವ ಮಕ್ಕಳ ಸಹಾಯವಾಣಿ ಯಾವುದೇ ರೀತಿಯಲ್ಲಿ ಸಂಕಷ್ಟದಲ್ಲಿ ಸಿಲುಕಿರುವ ರಕ್ಷಣೆ ಮತ್ತು ಪೋಷಣೆ ಅವಶ್ಯಕತೆ ಇರುವ ಮಕ್ಕಳಿಗೆ ತುರ್ತು ಸೇವೆಯನ್ನು ಒದಗಿಸಲು ಮಕ್ಕಳ ಸಹಾಯವಾಣಿ-1098 ನ್ನು ಇ.ಆರ್.ಎಸ್.ಎಸ್-112 ನೊಂದಿಗೆ ವಿಲೀನಗೊಳಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧೀನದಲ್ಲಿ ಅನುಸ್ಥಾನಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

6 ವರ್ಷ ವಯಸ್ಸಿನ ಮೇಲ್ಪಟ್ಟ ಬಾಲಕ-ಬಾಲಕಿಯರನ್ನು ಸ್ಥಳೀಯ ಮೂರಾರ್ಜಿ ದೇಸಾಯಿ ಶಾಲೆಗಳಲ್ಲಿ ದಾಖಲು ಮಾಡಲು ಕ್ರಮಕೈಗೊಳ್ಳಿ ಎಂದು ಸೂಚಿಸಿದ ಅವರು ಈಗಾಗಲೇ 1108 ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಇದ್ದು, ಉಳಿದ ಅಂಗನವಾಡಿ ಕೇಂದ್ರಗಳಿಗೆ ನಿವೇಷನ ಒದಗಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಬಾಲಸೇವಾ ಯೋಜನೆ, ಉಪಕಾರ ಯೋಜನೆ, ಪ್ರಾಯೋಜಕತ್ವ ಯೋಜನೆ, ಪೋಕ್ಸೋ ಕಾಯ್ದೆಯಡಿ ಪರಿಹಾರ ಯೋಜನೆ, ಬಾಲನ್ಯಾಯ ಯೋಜನೆ, ಬಾಲ್ಯವಿವಾಹ ತಡೆ ಯೋಜನೆ, ಭಿಕ್ಷಟನಾ ನಿರ್ಮೂಲನಾ ಯೋಜನೆ, ಬಾಲ ಕಾರ್ಮಿಕರ ಕಾಯ್ದೆ, ಮಕ್ಕಳ ಸಹಾಯವಾಣಿ ಪ್ರಕರಣಗಳು, ಕುಟುಂಬ ದೌರ್ಜನ್ಯ ತಡೆ ಯೋಜನೆ, ಬಾಲಕಿಯರ ವಸತಿ ನಿಲಯಗಳ ನಿರ್ವಹಣೆ, ಸಖಿ ವನ್ ಸ್ಟಾಪ್ ಯೋಜನೆ, ಸ್ವಾದರಗೃಹ ಯೋಜನೆ, ಪೋಷಣ್ ಅಭಿಯಾನ, ಮಿಷನ್ ಶಕ್ತಿ ಯೋಜನೆ, ಮಾತೃವಂದನ ಮತ್ತು ಗೃಹಲಕ್ಷ್ಮಿ ಯೋಜನೆಗಳು ಸೇರಿದಂತೆ ಹಲವಾರು ಯೋಜನೆಗಳ ಕುರಿತು ಪ್ರಗತಿ ಪರಶೀಲನೆ ನಡೆಸಲಾಯಿತು.

ಸಭೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್.ಹೊಸಮನಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಕೆಜಿಎಫ್ ಡಿಎಸ್‌ಪಿ ಪಾಂಡುರಂಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನಾರಾಯಣಸ್ವಾಮಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

### ಲೇಖಕ ಅಂಶಿ ಪ್ರಸನ್ನಕುಮಾರ್ ಸಲಹೆ

# ಕ್ರೀಡೆ ಜತೆ ಓದಿನತ್ತಲೂ ಗಮನಕೊಡಿ

**ಮೈಸೂರು:** ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಯ ಜೊತೆಗೆ ಓದಿನತ್ತಲೂ ಗಮನಕೊಡಬೇಕೆಂದು ಕನ್ನಡಪ್ರಭ ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕರು ಮತ್ತು ಲೇಖಕರಾದ ಅಂಶಿ ಪ್ರಸನ್ನಕುಮಾರ್ ತಿಳಿಸಿದರು.

ಮೈಸೂರಿನ ಲಲಿತಾದ್ರಿಪುರದಲ್ಲಿರುವ ಸಿಲಿಕಾನ್ ಸಿಟಿ ಇಂಟರ್ ನ್ಯಾಷನಲ್ ಸ್ಕೂಲ್ ನಲ್ಲಿ 4 ವರ್ಷದಿಂದ 15 ವರ್ಷದ ಒಳಗಿನ ಮಕ್ಕಳಿಗಾಗಿ ಆಯೋಜಿಸಿದ್ದ ಸಿಲಿಕಾಥನ್ 2024 ಕ್ರೀಡಾಕೂಟವನ್ನೂ ಉದ್ಘಾಟಿಸಿ ಮಾತನಾಡಿದ ಅವರೂ ಇಂದೂ ಭಾರತ ದೇಶದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸಿ ಪದಕ ವಿಜೇತರಿಗೆ ಸರ್ಕಾರಿ ಉದ್ಯೋಗಗಳು ಹೇರಳವಾಗಿ ಸಿಗುತ್ತೀವೆ.. ರೈಲ್ವೆ ಮುಂತಾದ ಇಲಾಖೆಗಳಲ್ಲಿ ಹಲವಾರು ಕ್ರೀಡಾಪಟುಗಳು ಕಾರ್ಯನಿರ್ವಹಿಸುತ್ತೀದ್ದಾರೆ. ವಿದ್ಯಾಬ್ಯಾಸದಲ್ಲೂ ಮತ್ತು ಸರ್ಕಾರಿ ಉದ್ಯೋಗಗಳಲ್ಲೂ ಕ್ರೀಡಾ ವಿಭಾಗಕ್ಕೆ ಮೀಸಲಿನ ವ್ಯವಸ್ಥೆಯಿದೆ.. ಕ್ರೀಡಾಗಳಲ್ಲಿ ಭಾಗವಹಿಸುವದರಿಂದ ದೈಹಿಕ ಆರೋಗ್ಯದ ಜೊತೆ ಮಾನಸಿಕ ಆರೋಗ್ಯವೂ ವೃದ್ದಿಯಾಗುತ್ತದೆ. ಹಾಗಾಗಿ ಎಲ್ಲಾ ಪೋಷಕರು ತಮ್ಮ ಮಕ್ಕಳನ್ನೂ ಕ್ರೀಡಾ ಚಟುವಟಿಕೆಗಳ ಜೊತೆ ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ಭಾಗವಹಿಸುವಂತೆ ಪ್ರೊತ್ಸಾಹಿಸಬೇಕೆಂದರು.

ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯರಾದ ಡಾ.ಈ.ಸಿ.ನಿಂಗರಾಜ್ ಗೌಡ ಮಾತನಾಡಿ ಗ್ರೀಕ್, ಈಜಿಪ್ಟ್, ಭಾರತವೂ ಸೇರಿದಂತೆ ಕ್ರೀಡಾ ಚಟುವಟಿಕೆಗಳಿಗೆ ನಾಲ್ಕು ಸಾವಿರ ವರ್ಷಗಳ ಇತಿಹಾಸವಿದೆ. ಭಾರತದಲ್ಲಿ ದೇಸಿ ಆಟಗಳಾದ ಕಬಡ್ಡಿ, ಖೋ ಖೋ, ಹಾಕಿ ಮುಂತಾದ ಕ್ರೀಡೆಗಳು ಪ್ರಸಿದ್ದಿ ಪಡೆದಿವೆ. ಕ್ರೀಡೆಗಳು ಜೀವನದಲ್ಲಿ ಶಿಸ್ತು ತರತ್ತವೆ. ಇದು ಖಂಡಿತವಾಗಿಯೂ ಸಮರ್ಪಣೆ ಮತ್ತು ತಾಳ್ಮೆಯ ಮೌಲ್ಯಗಳನ್ನು ಕಲಿಸುತ್ತದೆ. ಸೋಲುಗಳನ್ನು ಹೇಗೆ ನಿಭಾಯಿಸಬೇಕು ಎಂಬುದನ್ನು ಕ್ರೀಡೆಗಳು ಜನರಿಗೆ ಕಲಿಸುತ್ತವೆ. ಎಲ್ಲಕ್ಕಿಂತ ಹೆಚ್ಚಾಗಿ, ಕ್ರೀಡೆಯು ವ್ಯಕ್ತಿಗಳ ಆಲೋಚನಾ ಸಾಮರ್ಥ್ಯವನ್ನು ಸುಧಾರಿಸುತ್ತವೆ. ಕ್ರೀಡೆಗಳು ಖಂಡಿತವಾಗಿಯೂ ಮನಸ್ಸನ್ನು ಚುರುಕುಗೊಳಿಸುತ್ತವೆ. ಕ್ರೀಡೆಗಳನ್ನು



ಆಡುವ ಮಕ್ಕಳು ಬಹುಶಃ ಪರೀಕ್ಷೆಯಲ್ಲಿ ಆಡದವರಿಗಿಂತ ಉತ್ತಮವಾಗಿ ಅಂಕಗಳನ್ನು ತೆಗೆದು ಕೊಳ್ಳುತ್ತೀದ್ದಾರೆ.

ಕ್ರೀಡೆಯು ಪ್ರತಿಯೊಬ್ಬರ ಜೀವನದಲ್ಲಿ ವಿಶೇಷ ಪಾತ್ರವನ್ನುವಹಿಸುತ್ತದೆ. ಏಕೆಂದರೆ ಕ್ರೀಡೆಗಳು ಯಾವಗಲೂ ಒಬ್ಬ ವ್ಯಕ್ತಿಯನ್ನು ಆರೋಗ್ಯಕರವಾಗಿ, ಸಮೃದ್ಧವಾಗಿ ಮತ್ತು ಕ್ರಿಯಾಶೀಲವಾಗಿರುವಂತೆ ಮಾಡುತ್ತದೆ. ಆರೋಗ್ಯವಂತ ದೇಹದಿಂದ ಮಾತ್ರ ಮನಸ್ಸು ಆರೋಗ್ಯವಾಗಿರಲು ಸಾಧ್ಯ. ನಾವು ಎಲ್ಲಾ ಸಮಯದಲ್ಲೂ ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನೂ ಕಾಪಾಡಿಕೊಂಡಾಗ ಮಾತ್ರ ನಾವು ಜೀವನದಲ್ಲಿ ಉತ್ತಮ ಸಾಧನೆಗಳನ್ನೂ ಸಾಧಿಸಬಹುದು. ಕ್ರೀಡೆಗಳು ಮನರಂಜನೆ ಮತ್ತು ದೈಹಿಕ ಚಟುವಟಿಕೆಯ ಅತ್ಯಂತ ಉಪಯುಕ್ತ ಸಾಧನವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಕನಿಷ್ಠ ಒಂದು ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸಲೇಬೇಕು. ಆದ್ದರಿಂದ ಜೀವನದಲ್ಲಿ ಕ್ರೀಡೆಗಳು ಮತ್ತು ಈ ರೀತಿಯ ಕ್ರೀಡಾಕೂಟಗಳು ಅತ್ಯವಶ್ಯಕ ಎಂದು ತಿಳಿಸಿದರು.

ಕ್ರೀಡಾಕೂಟದ ಅಧ್ಯಕ್ಷತೆಯನ್ನುವಹಿಸಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿ ಎಲ್. ರವಿ ರವರು ಸಿಲಿಕಾನ್ ಸಿಟಿ ಇಂಟರ್ ನಾಶ್ಯನಲ್ ಸ್ಕೂಲ್ ಸಂಸ್ಥೆಯು ಕಳೆದ 19 ವರ್ಷಗಳಿಂದ ಬೆಂಗಳೂರಿನಲ್ಲಿ ಯಶಸ್ವಿಯಾಗಿ ನಡೆಯುತ್ತೀದ್ದು 2500 ವಿದ್ಯಾರ್ಥಿಗಳು ವಿದ್ಯಾಬ್ಯಾಸ ಮಾಡುತ್ತೀದ್ದಾರೆ.. ನಮ್ಮ ಶಾಲೆಯಲ್ಲಿ ಓದುತ್ತೀರುವ ವಿದ್ಯಾರ್ಥಿಗಳು ಈಜು ಸ್ಪರ್ಧೆ, ಟೆನ್ನಿಸ್, ಟೇಬಲ್ ಟೆನ್ನಿಸ್, ವಾಲಿಬಾಲ್, ಥ್ರೊಬಾಲ್, ಚೆಸ್, ಕರಾಟೆ ಸ್ಪರ್ಧೆಗಳಲ್ಲಿ ರಾಷ್ಟೀಯ ಮಟ್ಟದಲ್ಲಿ ಭಾಗವಹಿಸಿ ಪದಕಗಳನ್ನೂ ಗೆದ್ದಿದ್ದಾರೆ. ಅವರೆಲ್ಲರಿಗೂ ನಮ್ಮ ಸಂಸ್ಥೆಯಲ್ಲಿ ಉಚಿತ ಶಿಕ್ಷಣವನ್ನೂ ನೀಡುತ್ತೀದ್ದೇವೆ. ಅದೇ ರೀತಿ ಮೈಸೂರಿನ ಈ ಸಂಸ್ಥೆಯಲ್ಲೂ ಶಿಕ್ಷಣದ ಜೊತೆಗೆ ಸಂಗೀತ, ಯೋಗ, ಸಾಂಸ್ಕೃತಿಕ ಚಟುವಟಿಕೆಗಳು, ಕ್ರೀಡಾ ಚಟುವಟಿಕೆಗಳಿಗೆ ಪ್ರಾಮುಖ್ಯತೆ ನೀಡುತ್ತೀದ್ದೇವೆ. ಸುಸಜ್ಜಿತ ಕಟ್ಟಡದ ಜೊತೆಗೆ 8 ಎಕರೆ ಹಸಿರು ಕ್ಯಾಂಪಸ್ ಅನ್ನೂ ಹೊಂದಿದ್ದು , ರಾಷ್ಟ್ರೀಯ ಶಿಕ್ಷಣ ನೀತಿಯಡಿಯಲ್ಲಿ ಉತ್ಕೃಷ್ಟವಾದ ಗುಣಮಟ್ಟದ ಶಿಕ್ಷಣವನ್ನೂ ಹಲವಾರು ಶಿಕ್ಷಣತಜ್ಞರ ನೆರವಿನಿಂದ ನೀಡುತ್ತೀದ್ದೇವೆ. ಮೈಸೂರಿನ ವಿದ್ಯಾರ್ಥಿಗಳ ಪೋಷಕರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಶಾಲೆಯ ಪ್ರಾಂಶುಪಾಲರಾದ ಡಾ.ದೀಪ್ತಿ ಚರ್ತುವೇದಿ, ಕೆ.ಎನ್.ಸಂತೋಷ್, ರೋಟರಿಯನ್ ಎಂ.ಮೋಹನ್, ಅಧ್ಯಾಪಕಿಯರು, ಕ್ರೀಡಾ ಸ್ಪರ್ಧೆಗಳ ತೀರ್ಪುಗಾರರು, ಮೈಸೂರಿನ ಎಲ್ಲಾ ಶಾಲೆಯ 350 ಕ್ಕೂ ಹೆಚ್ಚು ವಿದ್ಯಾರ್ಥಿಗಳು 12 ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದರು.

## ಕನ್ನಡ ಸಾಹಿತ್ಯ, ಭಾಷೆಯನ್ನು ಉಳಿಸಿ ಬೆಳೆಸುವಂತಹ ಕಾಯಕ ಮಾಡಿ

**ತಿಪಟೂರು :** ಭಾವನಾತ್ಮಕವಾಗಿ ಕನ್ನಡ ಭಾಷೆ ನಮ್ಮ ಭಾಷೆ, ತಾಯಿ ಭಾಷೆ ಎಂಬುದು ಎಲ್ಲಿಯವರೆವಿಗೂ ಜನರ ಮನಸ್ಸಿನಲ್ಲಿ ಬರುವುದಿಲ್ಲವೋ ಅಲ್ಲಿಯವರೆವಿಗೂ ಎಷ್ಟು ಕನ್ನಡ ರಾಜ್ಯೋತ್ಸವ ಆಚರಿಸಿದರೂ ಪ್ರಯೋಜನವಿಲ್ಲ ಎಂದು ಬೆಂಗಳೂರಿನ ಪ್ರಸಿದ್ಧ ಬರಹಗಾರ ಹಾಗೂ ಭಾಷಣಕಾರ ಡಾ.ನಾ.ಸೋಮೇಶ್ವರ್ ತಿಳಿಸಿದರು.

ನಗರದ ಸತ್ಯಗಣಪತಿ ಆಸ್ಥಾನ ಮಂಟಪದಲ್ಲಿ ಶನಿವಾರ ಬಯಲುಸೀಮೆ ಸಾಮಾಜಿಕ, ಸಾಂಸ್ಕೃತಿಕ ಸಂಘದ 23ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ಭಾವಗೀತ ಗಾಯನ, ಸಾಹಿತ್ಯ ಕಲ್ಪತರು ಪ್ರಶಸ್ತಿ'' ಪ್ರಧಾನ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ನಾಡಿನಲ್ಲಿ ಜನಿಸಿದಂತಹ ಪ್ರತಿಯೊಬ್ಬರು ಕನ್ನಡ ಸಾಹಿತ್ಯ, ಭಾಷೆಯನ್ನು ಉಳಿಸಿ ಬೆಳೆಸುವಂತಹ ಕಾಯಕವನ್ನು ಮಾಡಬೇಕಿದೆ. ದಿನಕಳೆದಂತೆ ಇತರ ಭಾಷೆಗಳ ಮೇಲಿನ ವ್ಯಾಮೋಹ ಹೆಚ್ಚಾದಂತೆಲ್ಲಾ ಕನ್ನಡದ ಬಳಕೆ ಕಡಿಮೆಯಾಗುತ್ತಿರುವುವು ದುಃಖದ ಸಂಗತಿ. ಎರಡು ಸಾವಿರ ವರ್ಷಕ್ಕೂ ಹಳೆಯ ಕನ್ನಡ ಭಾಷೆ ಬಗ್ಗೆ ಪ್ರತಿಯೊಬ್ಬ ಕನ್ನಡಿಗನ ಹೆಮ್ಮೆಯ ಸಂಕೇತವಾಗಿದೆ. ಅದ್ದರಿಂದ ಕನ್ನಡಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದರು. ಸಂಯುಕ್ತ ಕರ್ನಾಟಕ ದಿನಪತ್ರಿಯ ಸಹ ಸಂಪಾದಕ ಕೆ.ವಿ.ಪರಮೇಶ್ ಮಾತನಾಡಿ ಯಾವುದೇ ಒಂದು ಸಂಘಟನೆ ಸ್ಥಾಪನೆಯಾಗಿ ಸತತ 23 ವರ್ಷಗಳಿಂದ ಸಮಾಜಮುಖಿ ಕಾರ್ಯನಿರ್ವಹಣೆ ಮಾಡುತ್ತಿದೆ ಎಂದರೇ ಸಾಮಾನ್ಯದ ಸಂಗತಿಯಲ್ಲ. ಸಂಘಟನೆಗಳ ಪ್ರಾರಂಭವಾದಷ್ಟು ವೇಗವಾಗಿ ಹಣ್ಮರೆಯಾಗುವುದನ್ನು ನಾವು ನೋಡಿದ್ದೇವೆ. ಇಂದಿನ ಪೋಷಕರು ತಮ್ಮ ಮಕ್ಕಳು ವೈದ್ಯರು, ಇಂಜಿನಿಯರ್‌ಗಳಾಗಿ ಹೊರಹೊಮ್ಮಲಿ ಎಂಬ ಆಸೆ ಪಡುತ್ತಿದ್ದಾರೆ. ಆದರೆ ವಿದ್ಯಾರ್ಥಿ ದಿಸೆಯಲ್ಲಿ ಅವರಿಗೆ ಇಷ್ಟವಿರುವ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಪೋಷಕರು ಅವಕಾಶ ನೀಡುವಂತಹ ಮನಸ್ಥಿತಿಯನ್ನು ಮೈಗೂಡಿಸಿಕೊಳ್ಳಬೇಕು. ಇದರಿಂದಾಗಿ ವಿವಿಧ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ಅನಾವರಣ ಮಾಡಲು ಅನುಕೂಲವಾಗುತ್ತದೆ ಎಂದರು.

ಮಾಜಿ ಸಚಿವ ಬಿ.ಸಿ.ನಾಗೇಶ್ ಮಾತನಾಡಿ ಕನ್ನಡ ಪರ ಸಂಘಟನೆಗಳು ನಾಡು, ಭಾಷೆ, ಸಂಸ್ಕೃತಿಯ ಬಗ್ಗೆ ಅಭಿಮಾನ ಮೂಡಿಸುವಂತಹ ಕಾರ್ಯವನ್ನು ಮಾಡುತ್ತಿರುವುದು ಶ್ಲಾಘನೀಯ ಎಂದರು. ತಹಶೀಲ್ದಾರ್ ಪವನ್ ಕುಮಾರ್, ತಾ.ಪಂ.ಕಾರ್ಯನಿರ್ವಹಣಾಧಿಕಾರಿ ಎಚ್. ಎಂ.ಸುದರ್ಶನ್, ಹಿರಿಯ ಪರ್ತಕರ್ತ ಶಿವರಾಜ್, ಕೇಂದ್ರ ಸಾಹಿತ್ಯ ಪುರಸ್ಕೃತ ಮಕ್ಕಳ ಸಾಹಿತಿ ನಾಗರಾಜಶೆಟ್ಟಿ, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮನಮೋಹನ್, ಸಂಘದ ಅಧ್ಯಕ್ಷ ಎಚ್.ಸಿ.ನಾಗರಾಜು, ಪ್ರಧಾನ ಕಾರ್ಯದರ್ಶಿ ಎನ್.ಬಾನು ಪ್ರಶಾಂತ್, ಆರೋಗ್ಯ ವೈದ್ಯಾಧಿಕಾರಿ ರವಿಕುಮಾರ್ ಇದ್ದರು.



## ಬಸ್ ಸೌಕರ್ಯಕ್ಕಾಗಿ ವಿದ್ಯಾರ್ಥಿಗಳ ಪ್ರತಿಭಟನೆ



**ಚಾಮರಾಜನಗರ :** ಗ್ರಾಮಾಂತರ ಪ್ರದೇಶಕ್ಕೆ ಸಮಯಕ್ಕೆ ಸರಿಯಾಗಿ ಕೆ.ಎಸ್ ಆರ್ ಟಿ ಸಿ ಬಸ್ ಸಂಚಾರ ಮಾಡದೇ ಇರುವ ಹಿನ್ನಲೆಯಲ್ಲಿ ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ಮತ್ತು ಕೆಲಸಕ್ಕೆ ತರಳುವ ನೌಕರರಿಗೆ ಮತ್ತು ಗ್ರಾಮಸ್ಥರಿಗೆ ತೊಂದರೆಯಾಗುತ್ತಿದೆ ಎಂದು ಕೆ.ಎಸ್.ಆರ್.ಟಿ. ಸಿ ಬಸ್ ತಡೆದು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ ಘಟನೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಕಂದೇಗಾಲದಲ್ಲಿ ನಡೆದಿದೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಕಂದೇಗಾಲದಲ್ಲಿ ವಿದ್ಯಾರ್ಥಿಗಳೊಂದಿಗೆ ರೈತರು ಮತ್ತು ಸಾರ್ವಜನಿಕರು ಕೆ.ಎಸ್.ಆರ್.ಟಿ.ಸಿ ಬಸ್ ತಡೆದು ರಸ್ತೆ ತಡೆ ನಡೆಸಿದರು. ಸ್ಥಳಕ್ಕೆ ಬಂದ ಕೆ.ಎಸ್.ಆರ್. ಟಿ.ಸಿ ಸಿಬ್ಬಂದಿಗಳನ್ನು ರೈತರು ಮತ್ತು ವಿದ್ಯಾರ್ಥಿಗಳು ತರಾಟೆಗೆ ತೆಗೆದುಕೊಂಡರು. ಸಮಯಕ್ಕೆ ಸರಿಯಾಗಿ ಬಸ್ ಸಂಚಾರ ಮಾಡದೇ ಇದ್ದರೆ ನಿರಂತರವಾಗಿ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

## ಉಪಚುನಾವಣೆಗೆ ಕಾಂಗ್ರೆಸ್‌ನ ಲಕ್ಷ್ಮೀ ರಾಜಣ್ಣ ನಾಮಪತ್ರ

**ಚಾಮರಾಜನಗರ :** ಜಿಲ್ಲೆಯ ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಸಾಮಾನ್ಯ ಮಹಿಳೆಗೆ ಮೀಸಲಾಗಿರುವ 12ನೇ ವಾರ್ಡ್ನ ಉಪಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಲಕ್ಷ್ಮೀ ರಾಜಣ್ಣ ನಾಮಪತ್ರ ಸಲ್ಲಿಸಿದರು.

ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಗ್ರಾಮ ದೇವತೆ ಶ್ರೀ ಬೆಟ್ಟಳ್ಳಿ ಮಾರಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪಟ್ಟಣ ಪಂಚಾಯಿತಿ ಸದಸ್ಯರು, ಕಾಂಗ್ರೆಸ್ ಪಕ್ಷದ ಕಾರ್ಯಕತ9ರು, ಮುಖಂಡರ ಸಮ್ಮುಖದಲ್ಲಿ ಮೆರವಣಿಗೆ ಹೊರಟು ಪಟ್ಟಣ ಪಂಚಾಯಿತಿ ಕಚೇರಿ ಯಲ್ಲಿ ನಾಮಪತ್ರ ಸಲ್ಲಿಸಿದರು.

ಪಟ್ಟಣ ಪಂಚಾಯಿತಿ 12ನೇ ವಾರ್ಡಿನ ಸದಸ್ಯರಾಗಿದ್ದ ಚಂದ್ರಮ್ಮ ರವರು ನಿಧನರಾಗಿದ್ದ ಹಿನ್ನೆಲೆ ಇವರಿಂದ ತೆರವಾದ ಸ್ಥಾನಕ್ಕೆ ಉಪಚುನಾವಣೆ ನಡೆಯುತ್ತಿದ್ದು ವಾರ್ಡಿನಲ್ಲಿ 685 ಮತದಾರರಿದ್ದು ಕಾಂಗ್ರೆಸ್ ಪಕ್ಷದಿಂದ ಲಕ್ಷ್ಮೀ ರಾಜಣ್ಣ ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಸಿದ ನಂತರ ಲಕ್ಷ್ಮೀ ರಾಜಣ್ಣ ಮಾತನಾಡಿ, ನಾನು ಬಡ ಕುಟುಂಬದ ಸಾಮಾನ್ಯ



ಮಹಿಳೆಯಾಗಿದ್ದು ನಮ್ಮ ವಾರ್ಡಿನ ಸಮಸ್ಯೆಗಳು ಏನು ಎಂಬುದು ನನಗೆ ತಿಳಿದಿದೆ. ವಾರ್ಡಿನ ಮತದಾರರು ನನಗೆ ಒಂದು ಅವಕಾಶ ಕಲ್ಪಿಸಿ ಕೊಟ್ಟರೆ 12ನೇ ವಾರ್ಡನ್ನು ಮಾದರಿ ವಾರ್ಡ್ ಆಗಿ ಮಾಡಲು ಶ್ರಮಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯರಾದ ಗಿರೀಶ್, ಹರೀಶ್, ಸಂಪತ್, ಸುದೇಶ್, ಬಸವರಾಜು, ನವೀನ್, ಮಾಜಿ ಉಪಾಧ್ಯಕ್ಷ ಮಾದೇಶ್, ಮುಖಂಡರಾದ ರವಿ, ರಮೇಶ್, ಸುರೇಶ್, ರಾಜು, ಮುನಾವರ್ ಪಾಷ, ರಹಮತುಲ್ಲಾ ಜಯರಾಜ್ ಇತರರು ಇದ್ದರು.

# ಟಿಪ್ಪು ಸುಲ್ತಾನ್, ಮೌಲಾನಾ ಅಬ್ದುಲ್ ಕಲಾಂ ಆಜಾದ್ ಜಯಂತಿ



**ಚಾಮರಾಜನಗರ:** ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಟಿಪ್ಪು ಸುಲ್ತಾನ್, ಮೌಲಾನಾ ಅಬ್ದುಲ್ ಕಲಾಂ ಆಜಾದ್ ಜಯಂತಿಯನ್ನು ಆಚರಣೆ ಮಾಡಲಾಯಿತು.

ಚಾಮರಾಜನಗರದ ಕುವೆಂಪು ಬಡಾವಣೆಯಲ್ಲಿರುವ ಜಿಲ್ಲಾ ಕಾಂಗ್ ಋಎಸ್ ಸಮಿತಿಯ ಕಛೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಶಾಸಕ ಸಿ.ಪುಟ್ಟರಂಗಶೆಟ್ಟಿ ಪುಷ್ಪಾರ್ಚನೆ ಮಾಡಿ ಮಾತನಾಡಿ, ಟಿಪ್ಪು ಸುಲ್ತಾನ್ ಅವರು ಅಪ್ಪಟ ದೇಶಪ್ರೇಮಿ ಯಾಗಿದ್ದರು. ಅವರು ತನ್ನ ಆಡಳಿತದ ಅವಧಿ ಯಲ್ಲಿ ಹೊಸ ನಾಣ್ಯ ವ್ಯವಸ್ಥೆ, ಹೊಸ ಭೂಕಂದಾಯ ವ್ಯವಸ್ಥೆ ಯನ್ನು ಒಳಗೊಂಡಂತೆ ಆಡಳಿತಾತ್ಮಕ ಆವಿಷ್ಕಾರಗಳನ್ನು ಪರಿಚಯಿಸಿದರು. ಅಲ್ಲದೆ ಮೈಸೂರು ರೇಷ್ಮೆ ಉದ್ಯಮದ ಬೆಳವಣಿಗೆಯನ್ನು ಪ್ರಾರಂಬಿಸಿದ್ದರು ಎಂದರು. ಟಿಪ್ಪು ಸುಲ್ತಾನ್ ಅವರು ಮೈಸೂರು ಸಾಮ್ರಾಜ್ಯದ ಭಾರತೀಯ ಆಡಳಿತಗಾರರಾಗಿದ್ದರು. ದಕ್ಷಿಣ ಭಾರತದಲ್ಲಿ ಅವರು ರಾಕೆಟ್ ಫಿರಂಗಿಗಳ ಪ್ರವರ್ತಕರಾಗಿದ್ದರು ಎಂದರು.ಮೌಲಾನ ಅಬ್ದುಲ್ ಕಲಾಂ ಆಜಾದ್ ಅವರು ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರರಾಗಿದ್ದು, ಮೊಟ್ಟಮೊದಲ ಬಾರಿಗೆ ಭಾರತ ಸರ್ಕಾರದ ಶಿಕ್ಷಣ ಮಂತ್ರಿಯಾಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇಬ್ಬರು ಮಹನೀಯರನ್ನು ಸ್ಮರಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಮಾಜಿ ಅಧ್ಯಕ್ಷ ಸೈಯದ್ ರಫೀ, ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಅಪ್ಸಲ್ ಷರೀಫ್, ಉಪಾಧ್ಯಕ್ಷ ಇನಾಯತ್ ಪಾಷ, ಪ್ರಧಾನ ಕಾರ್ಯದರ್ಶಿ ಆಸೀಫ್ ಉಲ್ಲಾ, ಜಿಲ್ಲಾ

ಕಾಂಗ್ರೆಸ್, ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವು, ಜಿಲ್ಲಾ ವಕ್ತಾರ ಕೆರೆಹಳ್ಳಿ ನವೀನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅರಕಲವಾಡಿ ಗುರುಸ್ವಾಮಿ ಇತರರಿದ್ದರು.

# ಒಕ್ಕಲಿಗರು ಉದ್ಯಮಕ್ಕೂ ಆದ್ಯತೆ ನೀಡಿ

**ಕೋಲಾರ:** ಜಿಲ್ಲೆಯ ಒಕ್ಕಲಿಗರು ಅರಿವಿನ ಮತ್ತು ಆರ್ಥಿಕ ಪರಿಸ್ಥಿತಿಯ ಕೊರತೆಯಿಂದಾಗಿ ಉದ್ಯಮ ಕ್ಷೇತ್ರದಿಂದ ಹಿಂದಿದ್ದಾರೆ ಕೇವಲ ಕೃಷಿಗೆ ಸೀಮಿತವಾಗದೆ ಉದ್ಯಮ ಕ್ಷೇತ್ರವನ್ನೂ ಆಯ್ಕೆ ಮಾಡಿಕೊಂಡು ಬೇರೆಯವರಿಗೂ ಉದ್ಯೋಗ ನೀಡುವಂತಾಗಬೇಕು ಎಂದು ಚಿಕ್ಕಬಳ್ಳಾಪುರ ಶಾಖಾಮಠದ ಶ್ರೀ ಮಂಗಳಾನಂದನಾಥ ಸ್ವಾಮೀಜಿ ತಿಳಿಸಿದರು.

ನಗರದ ಹೊರವಲಯದ ಒಲಿವಿಯಾ ರೆಸಾರ್ಟ್‌ನಲ್ಲಿ ಭಾನುವಾರ ಉದ್ಯಮಿ ಒಕ್ಕಲಿಗ ಫಸ್ಟ್ ಸರ್ಕಲ್ ಸೊಸೈಟಿಯ ಜಿಲ್ಲಾ ಘಟಕದ ಉದ್ಘಾಟನಾ ಸಮಾರಂಭದಲ್ಲಿ ಭಾಗಹಿಸಿ ಮಾತನಾಡಿದ ಅವರು ಕೋಲಾರ ಜಿಲ್ಲೆಯ ಜನ ಶ್ರಮಜೀವಿಗಳು ಕೇವಲ ರೈತ ಉದ್ಯಮಿಗಳಾದರೆ ಸಾಲದು ಬದಲಾವಣೆಗೆ ತಕ್ಕಂತೆ ನಾವು ಬದಲಾಗಿ ಸ್ಪರ್ಧೆ ಎದುರಿಸಲು ಸನ್ನದ್ದರಾಗಬೇಕು. ವಿವಿಧ ಕ್ಷೇತ್ರಗಳಲ್ಲಿ ಉದ್ಯಮ ಮಾಡಿ ಬೇರೆ ಜನರಿಗೆ ಉದ್ಯೋಗ ನೀಡುವ ಉದ್ಯಮಿಗಳಾಗಿ ಮುಂದಿನ ಪೀಳಿಗೆಗೆ ಸಹಕಾರಿಯಾಗುವಂತೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯ ಜಲಸಾರಿಗೆ ಮಂಡಳಿಯ ಸಿಇಒ ಜಯರಾಮ್ ರಾಯಪುರ, ಗಂಗರ ಅರಸರ ಕಾಲದಿಂದಲೂ ಒಕ್ಕಲಿಗರು ಒಕ್ಕಲುತನದ ಜೊತೆಗೆ ಸಾಮ್ರಾಜ್ಯವನ್ನು ಕಟ್ಟಿ ಆಳಿದ್ದಾರೆ ನಾವುಗಳು ಬೇಸಾಯದ ಜೊತೆಗೆ ಉದ್ಯಮ ಕ್ಷೇತ್ರಕ್ಕೂ ವಿಸ್ತರಿಸಿಕೊಡಬೇಕು. ಆ ಮೂಲಕ ನಾಡಿಗೆ ಅನ್ನ ನೀಡುವ ಒಕ್ಕಲಿಗ ಉದ್ಯೋಗ ನೀಡುವ ಉದ್ಯಮಿಯಾಗಬೇಕು ಎಂದು ಸಲಹೆ ಮಾಡಿದರು.

ಕರ್ನಾಟಕ ರಾಜ್ಯದಲ್ಲಿ ಒಕ್ಕಲಿಗರು ರಾಜಕೀಯದಲ್ಲಿ ಬಲಿಷ್ಠವಾಗಿದ್ದಾರೆ ಆದರೆ ಉದ್ಯಮ ಕ್ಷೇತ್ರದಲ್ಲಿ ಹಿಂದೆ ಇದ್ದಾರೆ ಸಮುದಾಯವು ಕಡಿಮೆ ಇರುವ ದಕ್ಷಿಣ ಕನ್ನಡ ಜಿಲ್ಲೆಗೆ





ಹೋಲಿಕೆ ಮಾಡಿದರೆ ಇಲ್ಲಿ ಕೇವಲ 1% ಅಷ್ಟೇ ಉದ್ಯಮದಲ್ಲಿ ಇದ್ದಾರೆ ಇದರಲ್ಲಿ ರಾಜಕಾರಣಿಗಳ ಹೊಣೆಗಾರಿಕೆ ಹೆಚ್ಚಾಗಬೇಕು ಸಮುದಾಯದಲ್ಲಿ ಪರಸ್ಪರ ಒಗ್ಗಟ್ಟಿನಿಂದ ಅರಿವು ಮಾರ್ಗದರ್ಶನ ಮತ್ತು ಸಹಕಾರದೊಂದಿಗೆ ಕೈಜೋಡಿಸಿ ಜೊತೆಯಲ್ಲಿ ಕರೆದುಕೊಂಡು ಹೋಗಬೇಕು ಎಂದರು. ಈ ಸಂದರ್ಭದಲ್ಲಿ ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್ ಮಾತನಾಡಿ ಜಿಲ್ಲೆಯ ಜನ ಕೃಷಿಯ ಜೊತೆಗೆ ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆಯನ್ನು ಮಾಡಿದ್ದಾರೆ ಆದರೆ ಉದ್ಯಮದಲ್ಲಿ ಅರಿವಿನ ಕೊರತೆಯಿಂದ ಕೈಗಾರಿಕೆಗಳು ಮಾಡಿ ಕೈ ಸುಟ್ಟುಕೊಂಡಿದ್ದಾರೆ ಯುವಕರಿಗೆ ಮಾರ್ಗದರ್ಶನ ನೀಡಿದರೆ ಭವಿಷ್ಯದ ಉದ್ಯಮಗಳಾಗಲಿದ್ದು ಬೇರೆಯವರಿಗೂ ಉದ್ಯೋಗ ನೀಡುವಂತಾಗುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಫಸ್ಟ್ ಸರ್ಕಲ್ ಸೊಸೈಟಿ ಜಿಲ್ಲಾ ಗೌರವ ಅಧ್ಯಕ್ಷ ಸಿಎಂಆರ್ ಶ್ರೀನಾಥ್ ಮಾತನಾಡಿ ಮನುಷ್ಯನ ಜೀವನಕ್ಕೆ ಉದ್ಯೋಗ ಮುಖ್ಯವಾಗಿದೆ ಒಕ್ಕಲಿಗರ ಉಪ ಜಾತಿಗಳಿಂದ ಸಮುದಾಯಕ್ಕೆ ಮಾರಕವಾಗಿದೆ ನಮ್ಮಲ್ಲಿಯೇ ಒಗ್ಗಟ್ಟಿ ಇಲ್ಲ ಉಪಜಾತಿಗಳ ಮನಸ್ಥಿತಿಯಿಂದ ಹೊರಬಂದು ನಾವು ಎಲ್ಲರೂ ಒಂದೇ ಎಂಬ ರೀತಿಯಲ್ಲಿ ಉದ್ಯಮ ಮಾಡಿ ಬೇರೆಯವರನ್ನು ಬೆಳೆಸುವ ಗುಣ ಬರಬೇಕು ಎಂದರು.

ಕಾರ್ಯಕ್ರಮದಲ್ಲಿ ಎಂಎಲ್ಸಿ ಇಂಚರ ಗೋವಿಂದರಾಜು, ಜಿಪಂ ಮಾಜಿ ಅಧ್ಯಕ್ಷೆ ಚೌಡೇಶ್ವರಿ ರಾಮು, ಜಿಲ್ಲಾ ಒಕ್ಕಲಿಗ ಸಂಘದ ಅಧ್ಯಕ್ಷ ಕೆ.ವಿ ಶಂಕರಪ್ಪ, ಐಎಎಸ್ ಅಧಿಕಾರಿ ಕೆ.ಆರ್ .ನಂದಿನಿ, ದೆಹಲಿ ಕನ್ನಡ ಸಂಘದ ಅಧ್ಯಕ್ಷ ನಾಗರಾಜ್, ನೀರಾವರಿ ಹೋರಾಟಗಾರ ಆಂಜನೇಯರೆಡ್ಡಿ, ಉದ್ಯಮಿ ಡೆಕ್ಕನ್ ರಾಮಕೃಷ್ಣಪ್ಪ, ವೈದ್ಯ ಕೃಷ್ಣಪ್ಪ ಮುಂತಾದವರು ಇದ್ದರು.



## ಒನಕೆ ಓಬವ್ವ ಜಯಂತಿ

**ದೇವನಹಳ್ಳಿ ಪಟ್ಟಣದ ಇಂದಿರಾ ಕ್ಯಾಂಟಿನ್ ಬಳಿ ಒನಕೆ ಓಬವ್ವ ಜಯಂತಿಯನ್ನು ತಾಲ್ಲೂಕು ಛಲವಾದಿ ಮಹಾಸಭಾ ದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ತಹಶಿಲ್ದಾರ್ ಬಾಲಕೃಷ್ಣ, ಸಮುದಾಯದ ಮುಖಂಡರಾದ ಚೌಡಪ್ಪನಹಳ್ಳಿ ಲೋಕೇಶ್, ಕಾಳಪ್ಪನವರ ವೆಂಕಟೇಶ್, ಸುರೇಶ್, ಕಾರಹಳ್ಳಿ ಶ್ರೀನಿವಾಸ್, ಬೂದಿಗೆರೆ ಸುಬ್ಬು, ನಾಗರಾಜು, ಆವತಿ ವೆಂಕಟೇಶ್, ಚನ್ನಹಳ್ಳಿ ನಾರಾಯಸ್ವಾಮಿ, ಅಣ್ಣೇಶ್ವರ ಮುನಿರಾಜು, ಮುನಿರಾಜು, ದಾಸರಹಳ್ಳಿ ಜನಕಮಣಿ, ಪ್ರಸನ್ನ, ದೇವನಹಳ್ಳಿ ರಾಜಣ್ಣ, ಕೊಯಿರಾ ಮುನೀಂದ್ರ, ಶ್ರೀನಿವಾಸ್ ಗಾಂಧಿ, ಕಾರಹಳ್ಳಿ ಚಂದ್ರು, ಅಣೆಘಟ್ಟ ತಿಮ್ಮರಾಯಪ್ಪ, ರಮೇಶ್ ದಾಸ್, ಸೂರ್ಯ ಕಲಾ ಇದ್ದರು.**

# ರಾಜ್ಯದ ಜನಪದ ಕಲಾ ಸಂಸ್ಕೃತಿ ಅತ್ಯಂತ

**ವಿಜಯಪುರ:** ಭಾರತ ದೇಶದಲ್ಲೇ ನಮ್ಮ ಕರ್ನಾಟಕ ರಾಜ್ಯದ ಜನಪದ ಕಲಾ ಸಂಸ್ಕೃತಿ ಅತ್ಯಂತ ಶ್ರೀಮಂತವಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕವಿ ಮ.. ಸುರೇಶ್ ಬಾಬು ತಿಳಿಸಿದರು.

ಇವರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ-ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಘಟಕ, ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಸ್ಪಂದನ ಯುವಜನ ಸೇವಾ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಯುವಜನರಿಗೆ ಜನಪದ ಕಲೆಗಳ ಬಗ್ಗೆ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ ಜಾನಪದ ಗೀತೆಗಳನ್ನು ರಚಿಸಿದವರು ಯಾರೆಂದು ಹೇಳುವುದಕ್ಕೆ ಸಾಧ್ಯವಿಲ್ಲ. ಇದು ಮೂಲತ:ವಾಗಿ ಪರಂಪರಾನುಗತದಿಂದ ಬಂದ ಕಲೆಯಾಗಿದ್ದು ಹಳ್ಳಿಯ ಸಾಮಾನ್ಯ ಜನರ ನಡುವೆ ಹುಟ್ಟಿದ ಒಂದು ಸಿರಿನುಡಿಯಾಗಿದೆ ಅದರಿಂದ ಈ ಜಾನಪದ ಗೀತೆಗಳ ಸಾಲುಗಳನ್ನು ಯಾರು ಯಾವಾಗ ಎಲ್ಲಿ ಬರೆದದೆಂದು ಗೊತ್ತಿಲ್ಲ ಇವು ನೂರಾರು ವರ್ಷಗಳಿಂದ ಸಾವಿರಾರು ಜನಗಳ ಬಾಯಿಂದ ಬಾಯಿಗೆ ಹರಿದು ಬಂದ ನುಡಿಗಳಾಗಿದೆ ಎಂದು ತಿಳಿಸಿದರು.



ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಚಂದ್ರಶೇಖರ್ ಮಾತನಾಡಿ ಮಾನವನು ತಾನು ಮಾಡುವ ಕೆಲಸಗಳಲ್ಲಿ ತನ್ಮೈತೆಯನ್ನು ತುಂಬಲು ಮಾಡಿದ ಪ್ರಯತ್ನಗಳ ಸರಮಾಲೆಯೇ ಈ ಜಾನಪದ ಬದುಕಿನ ಸಾಕ್ಷಿ ಸಂಗತಿಗಳಾಗಿದೆ ಮತ್ತು ಜನಪದ ಹಾಗೂ ಜಾನಪದ ಎಂಬ ಈ ಎರಡು ಶಬ್ದಗಳು ಒಂದೇ ಸಾಮಾಜಿಕ ವ್ಯವಸ್ಥೆಯನ್ನು ಸೂಚಿಸುತ್ತದೆ ಆದ್ದರಿಂದ ಮನುಷ್ಯನ ಬದುಕಿನೊಂದಿಗೆ ಜನಪದ ಕಲೆ ಅವಿನಾಭಾವ ಸಂಬಂಧವನ್ನು ಹೊಂದಿದ ಜ್ಞಾನವೇ ಈ ಜಾನಪದವಾಗಿದ್ದು ಯಾವುದೇ ಅಧಿಕಾರ ಸಂಪ್ರದಾಯದ ಪೋಷಣೆ ಇಲ್ಲದೆ ತನ್ನಿಂದ ತಾನೇ ಹರಿದು ಬಂದು ಈ ಮಣ್ಣಿನ ಸಂಸ್ಕೃತಿಯ ವಿವಿಧ ಕಲಾ ಪ್ರಕಾರಗಳಾಗಿ ಜನಪದ ಎನಿಸಿಕೊಂಡಿದೆ ಎಂದು ತಿಳಿಸಿದರು.

ಈ ಜಾನಪದ ಕಲೆಗಳ ತರಬೇತಿ ಶಿಬಿರದಲ್ಲಿ 15 ವರ್ಷದಿಂದ 29 ವರ್ಷದೊಳಗಿನ ಐವತ್ತು ಮಂದಿ ಯುವಕ ಯುವತಿಯರು ಜನಪದ ಗೀತೆ, ಲಾವಣಿ, ತತ್ವಪದಗಳು, ಕೋಲಾಟ, ಕಂಸಾಳೆ, ದೊಡ್ಡಾಟ, ಬಯಲಾಟ, ರಂಗ ಗೀತೆಗಳು, ಪೂಜಾ ಕುಣಿತ, ಕರಡಿ ಕುಣಿತ ಮತ್ತು ವೀರಗಾಸೆ ಮೊದಲಾದ ತರಬೇತಿ ತರಬೇತಿಗಳನ್ನು ಪಡೆಯಲಿದ್ದಾರೆ ಎಂದು ಪಟ್ಟಣದ ಸ್ಪಂದನ ಯುವಜನ ಸೇವಾ ಸಂಘದ ಕಾರ್ಯದರ್ಶಿ ವಿ. ಪ್ರಶಾಂತ ತಿಳಿಸಿದರು.

ಕಾರ್ಯಕ್ರಮದ ಉಪಸ್ಥಿತಿಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಟಿ.ಗೋಪಾಲಯ್ಯ, ಸಹ ಎನ್.ಎಸ್.ಎಸ್ ಅಧಿಕಾರಿ ಕೆ.ಎಮ್. ಭಾರತಿ, ಬೆಂಗಳೂರಿನ ಕರ್ನಾಟಕ ರಾಜ್ಯ ಮಡಿವಾಳರ ಸಂಘದ ನಿರ್ದೇಶಕ ಬಿ.ಕೆ.ಮಧು, ಜನಪದ ಕಲಾವಿದ ಶಿಕ್ಷಕ ಎಸ್.ಎ. ನಾಗೇಶ್, ಕಗ್ಗಲಹಳ್ಳಿಯ ಕೀಬೋರ್ಡ್ ಯುವ ವಾದಕ ಎನ್. ಅರುಣ್ ಕುಮಾರ್ ಹಾಗೂ ಯುವ ಕಲಾವಿದರಾದ ಎಸ್.ಹೇಮಂತ್ ಗೌಡ ಸಿ.ಎಮ್. ವಿಶಾಂತ್ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧ ತಾಲ್ಲೂಕಿನ ಯುವ ಕಲಾವಿದರು ಹಾಜರಿದ್ದರು.

# ದುಡಿಯುವ ತಾಯಂದಿರ ಮಕ್ಕಳನ್ನು ಸಾಕುವ ಜವಾಬ್ದಾರಿ ಯಾರದ್ದು?

**ಚಿತ್ರದುರ್ಗ:** ದುಡಿಯುವ ತಂದೆ ತಾಯಿಗಳ ಮಕ್ಕಳನ್ನು ಸಾಕುವವರು ಯಾರು?, ಯಾರ ಮೇಲೆ ಹೆಚ್ಚುವರಿ ಬೀಳುತ್ತದೆ, ಯಾರು ಆ ಜವಾಬ್ದಾರಿಯನ್ನು ಹೊತ್ತುಕೊಳ್ಳುವುದು ಎಂಬ ಪ್ರಶ್ನೆ ಹೆಚ್ಚು ಜನರಲ್ಲಿ ಈಗ ಕಾಡುತ್ತಿದೆ. ನಗರೀಕರಣದಿಂದ ಮಕ್ಕಳ ಸಾಕುವ ತಾಯಂದಿರಿಗೆ ಹೆಚ್ಚಿನ ಅವಕಾಶ ಮತ್ತು ಸಮಯ ಸಿಗದೇ, ತಾವು ದುಡಿಯುತ್ತಿರುವ ಸ್ಥಳದಿಂದ ದೂರದಲ್ಲಿ ವಾಸಿಸುತ್ತಿರುವಂತಹ ಪೋಷಕರಿಗೆ, ಹೋಗಿ ಬರಲು ಕಷ್ಟಕರವಾದಂತ ವ್ಯವಸ್ಥೆ ಇರುವಲ್ಲಿ ಪೋಷಕರು ಚಿಂತಿತರಾಗಿದ್ದಾರೆ.



ನಗರೀಕರಣ ಮತ್ತು ಸಣ್ಣ ಕುಟುಂಬಗಳಿಂದ ಮಕ್ಕಳನ್ನು ನೋಡಿಕೊಳ್ಳುವವರಿಲ್ಲದೇ, ಅಜ್ಜ ಅಜ್ಜಿಯರೇ ಮೊಮ್ಮಕ್ಕಳನ್ನು ಸಾಕಿ, ಸಲಹಿ ದೊಡ್ಡವರನ್ನು ಮಾಡಬೇಕಾಗಿದೆ. ತಾಯಂದಿರು ಕೆಲಸಕ್ಕೆ ಮನೆ ಬಿಟ್ಟು ತೆರಳುತ್ತಿರುವುದರಿಂದ, ಮನೆಗಳಲ್ಲಿ ಮಕ್ಕಳನ್ನು ನೋಡಿಕೊಳ್ಳುವ ಸದಸ್ಯರಿಲ್ಲದೆ, ಅವರನ್ನ ಯಾವುದಾದರು ಅಂಗನವಾಡಿಗೋ, ಪ್ಲೇ ಹೋಮ್ ಗೊ ಅಥವಾ ಅಜ್ಜ ಅಜ್ಜಿಯರ ಕೈಗೆ ಕೊಟ್ಟು, ತಂದೆ ತಾಯಿಗಳಿಬ್ಬರೂ ಹೊರಗಡೆ ದುಡಿಯಲು ಹೋಗುವಂತಾಗಿದೆ. ಮಕ್ಕಳನ್ನು ಸಾಕಿದ್ದವರಿಗೆ ಮೊಮ್ಮಕ್ಕಳನ್ನು ಸಾಕುವ ಜವಾಬ್ದಾರಿ ಅಜ್ಜ ಅಜ್ಜಿಯರ ಮೇಲೆ ಬೀಳುತ್ತಿದೆ. ಸ್ವಂತ ಮಕ್ಕಳನ್ನ ನೋಡಲಾರದಷ್ಟು ತಾಯಂದಿರಿಗೆ ಸಮಯವಿಲ್ಲದಂತಾಗಿದೆ. ಇದು ಮಗುವಿನ ಬೆಳವಣಿಗೆ ಮೇಲೆ ಏನು ಪರಿಣಾಮ ಬೀಳುತ್ತದೆ ಎಂಬುದರ ಬಗ್ಗೆ ಹೆಚ್ಚಿನ ಸಂಶೋಧನೆಗಳಾಗಿ, ಮತ್ತೆ ಜನರು ಒಟ್ಟುಕುಟುಂಬದ ಕಡೆ ಮನಸ್ಸು ಮಾಡುವ ಸಂದರ್ಭಗಳು ಬರಬಹುದೇನೋ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿಯವರು ಪೋಷಕರನ್ನ ವಿನಂತಿಸಿಕೊಂಡಿದ್ದಾರೆ.

ಮಗುವನ್ನ ಸೊಂಟದ ಮೇಲೆ ಕೂರಿಸಿಕೊಂಡು ತಿರುಗಾಡಲು, ಆಟ ಆಡಿಸಲು ಆಗದ ವಯಸ್ಸಿನಲ್ಲಿ, ಮಕ್ಕಳನ್ನು ಸಾಕುವ ಜವಾಬ್ದಾರಿಯನ್ನ ಹಿರಿಯರ ಮೇಲೆ ಬಿಡುತ್ತಿರುವುದರಿಂದ, ಅವರಿಗೆ ಮಕ್ಕಳನ್ನು ಕೂರಿಸಿಕೊಂಡು ಹೋಗುವ ಒಂದು ಗಾಡಿಯ ಅವಶ್ಯಕತೆ ಇದೆ. ಅವರ ಔಷಧ ಮತ್ತು ದಿನಸಿ ಸಾಮಾನಗಳನ್ನು ಕೊಂಡುಕೊಳ್ಳುವಂತಹ ಕ್ಯಾಬಿನ್ ಗಳನ್ನು ರಚಿಸಿ ಕೊಡಬೇಕಾಗಿದೆ. ತಳ್ಳುವ ಗಾಡಿ ತಳ್ಳಲು ಶಕ್ತಿ ಬಹಳ ಬೇಕಾಗುವುದರಿಂದ, ಅದಕ್ಕೆ ಬ್ಯಾಟರಿಗಳನ್ನ ಅಳವಡಿಸಿ, ಸುಲಭವಾಗಿ ಆ ಗಾಡಿಗಳನ್ನು ತಳ್ಳಿಕೊಂಡು, ಮಕ್ಕಳನ್ನು ಸಂಭಾಳಿಸುವ ಏರ್ಪಾಡು ಮಾಡಬೇಕಾಗಿದೆ ಎಂದರು.

ಬೆಂಗಳೂರಿನಂತ ದೊಡ್ಡ ದೊಡ್ಡ ನಗರದಲ್ಲಿರುವ ಅಪಾರ್ಟ್ಮೆಂಟ್ ಗಳಲ್ಲಿ, ತಂದೆ ತಾಯಿಗಳು ಇಲ್ಲದಿದ್ದರೂ ಸಹ ಕೆಳಮಹಡಿಯಲ್ಲಿ ಆಟವಾಡುವ ದೃಶ್ಯ ನೋಡಿದರೆ, ಅವರನ್ನು ನೋಡಿಕೊಳ್ಳುವವರಿಲ್ಲದೆ, ತಮಗಿಷ್ಟ ಬಂದಂಗೆ ಸೈಕಲ್ ಹೊಡೆಯುವುದು, ಕುಣಿದಾಡುವುದು, ನೆಗರುವುದು, ಬೀಳುವುದು ಮಾಡುತ್ತಿರುತ್ತಾರೆ. ಅಂತಹ ಸಂದರ್ಭದಲ್ಲಿ ಯಾರಾದರೂ ಒಬ್ಬರು ಹಿರಿಯರು ಅಲ್ಲಿ ನಿಂತು, ಮಕ್ಕಳನ್ನು ರಕ್ಷಿಸಬೇಕು ಎಂದು ವಿನಂತಿಸಿಕೊಂಡಿದ್ದಾರೆ.

# ದುರ್ಬಲ ವರ್ಗಗಳಿಗೆ ಕಾನೂನು ನೆರವು

## ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ನ್ಯಾ.ರೇಣುಕ ಹೇಳಿಕೆ

**ರಾಮನಗರ:** ಸಮಾಜದದುರ್ಬಲ ವರ್ಗಗಳಿಗೆ ಉಚಿತವಾಗಿ ಕಾನೂನು ಸೇವೆಗಳ ನೆರವು ನೀಡುವುದು ಕಾನೂನು ಸೇವೆಗಳ ಪ್ರಾಧಿಕಾರದ ಪ್ರಮುಖ ಉದ್ದೇಶವಾಗಿದೆ ಎಂದು ಪ್ರಧಾನಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ನ್ಯಾ. ಬಿ.ವಿ. ರೇಣುಕ ತಿಳಿಸಿದರು.

ಅವರುನ.9ರ ಶನಿವಾರ ನಗರದಎಂ.ಎಚ್ ಕಾನೂನು ಕಾಲೇಜಿನಲ್ಲಿ ನವದೆಹಲಿ ಯರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರಿನ ಕರ್ನಾಟಕರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ರಾಮನಗರಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ, ಜಿಲ್ಲಾ ವಕೀಲರ ಸಂಘ ಹಾಗೂ ಎಂ.ಎಚ್ ಕಾನೂನು ಕಾಲೇಜಿನ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆಯನ್ನುಉದ್ಘಾಟಿಸಿ ಮಾತನಾಡಿದರು.

ಕಾನೂನು ಸೇವೆಗಳ ಪ್ರಾಧಿಕಾರ ಕಾಯ್ದೆ-1987, ಸಮಾನಅವಕಾಶದಆಧಾರದ ಮೇಲೆ ನ್ಯಾಯವನ್ನು ಒದಗಿಸಿ, ಆರ್ಥಿಕಅಥವಾ ಅಂಗ ವೈಫಲ್ಯಗಳ ಕಾರಣದಿಂದಯಾವುದೇ ವ್ಯಕ್ತಿಯು ನ್ಯಾಯ ಪಡೆಯುವ ಪ್ರಕ್ರಿಯೆಯಿಂದ ಹೊರಗೆ ಉಳಿಯುವುದಿಲ್ಲ ಎನ್ನುವುದನ್ನುಖಚಿತಪಡಿಸುತ್ತದೆ.ಪ್ರಕರಣಗಳನ್ನು ಸೌಹಾರ್ದಯುತವಾಗಿ ಬಗೆಹರಿಸಲು ಅನುಕೂಲವಾಗುವಂತೆ ಲೋಕ ಅದಾಲತ್‌ಗಳನ್ನು ಸ್ಥಾಪಿಸಿ ಅವುಗಳ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಹಾಗೂ ಸಮಾಜದಇತರೆದುರ್ಬಲ ವರ್ಗಗಳಿಗೆ ಉಚಿತ ಕಾನೂನು ನೆರವು ನೀಡಲು ಪ್ರಾಧಿಕಾರವನ್ನು ಸ್ಥಾಪಿಸಲಾಗಿದೆ.ಜನರಲ್ಲಿಅವರ ಹಕ್ಕುಗಳ ಬಗ್ಗೆ ಹೆಚ್ಚಿನಅರಿವು ಮೂಡಿಸಲುರಾಷ್ಟ್ರಮಟ್ಟದಲ್ಲಿರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ ಹಾಗೂ ರಾಜ್ಯಮಟ್ಟದಲ್ಲಿರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಸುಪ್ರೀಂಕೋರ್ಟ್ ಮಟ್ಟದಲ್ಲಿ ಸುಪ್ರೀಂಕೋರ್ಟ್ ಕಾನೂನು ಸೇವೆಗಳ ಸಮಿತಿ ಮತ್ತು ಹೈಕೋರ್ಟ್ ಮಟ್ಟದಲ್ಲಿ ಹೈಕೋರ್ಟ್ ಕಾನೂನು ಸೇವೆಗಳ ಸಮಿತಿ,ಜಿಲ್ಲಾ ಮಟ್ಟದಲ್ಲಿಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ,ತಾಲೂಕು ಮಟ್ಟದಲ್ಲಿತಾಲೂಕು ಕಾನೂನು ಸೇವಾ ಸಮಿತಿಗಳನ್ನು ರಚಿಸಿ ಅವುಗಳ ಮೂಲಕ ಕಾನೂನು ನೆರವುನೀಡಲಾಗುತ್ತಿದೆಎಂದು ಹೇಳಿದರು. ಕಾನೂನು ಸೇವಾ ಪ್ರಾಧಿಕಾರಗಳ




ಮುಖಾಂತರಯಾವ ವ್ಯಕ್ತಿಗೆ ಕಾನೂನಿನ ನೆರವುಅಗತ್ಯಎಂಬುದನ್ನು ಗುರುತಿಸಿ ಆ ವ್ಯಕ್ತಿಗೆ ಕಾನೂನಿನ ನೆರವು ನೀಡುವುದು ಹಾಗೂ ಜನತಾನ್ಯಾಯಾಲಯದಿಂದ ಲೋಕ ಅದಾಲತ್ ಗಳನ್ನು ಏರ್ಪಡಿಸಿ ಅವುಗಳಿಂದ ನ್ಯಾಯಾಲಯಗಳಲ್ಲಿ ಇತರೆ ಕಚೇರಿಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಉಳಿದಿರುವ ಪ್ರಕರಣಗಳನ್ನು,ಉಭಯ ಪಕ್ಷಗಳ ನಡುವೆರಾಜಿ ಸಂಧಾನ ಏರ್ಪಡಿಸಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುವುದುಎಂದು ಹೇಳಿದರು.

ಪ್ರತಿಯೊಬ್ಬ ನಾಗರಿಕರಿಗೂ ಕಾನೂನಿನ ನೆರವು ಕೆಲವು ಸಂದರ್ಭಗಳಲ್ಲಿ ಅಗತ್ಯವಿರುತ್ತದೆ,ಅಂತಹ ಸಮಯದಲ್ಲಿ ಕಾನೂನು ಸಲಹೆ ಪಡೆಯಲು ಇಚ್ಚಿಸಿದಾಗ ಆತನ ಪರವಾಗಿಕಾನೂನು ಸೇವಾ ಪ್ರಾಧಿಕಾರದಿಂದಉಚಿತವಾಗಿ ವಕೀಲರನ್ನು ನೇಮಿಸಿ ಸೇವೆಒದಗಿಸಲಾಗುವುದು.ಇಂತಹ ಕಾನೂನು ಸೇವೆಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಮಹಿಳೆಯರು, ಮಕ್ಕಳು,ಕಾರ್ಖಾನೆಕಾರ್ಮಿಕರು, ನೈಸರ್ಗಿಕ ವಿಕೋಪಗಳಿಗೆ ಒಳಗಾದವರು,ಜೀತ ಪದ್ಧತಿಗೆ ಒಳಗಾದವರು, ಮತಿಯಕಾರಣದಿಂದ ದೌರ್ಜನ್ಯಕ್ಕೆ ಒಳಗಾದವರು, ಮಾನಸಿಕ ಅಥವಾಯಾವುದೇ ನ್ಯೂನ್ಯತೆ ಹೊಂದಿರುವವರು, ಮನೋರೋಗ ಆಸ್ಪತ್ರೆಗಳ ಅಭಿರಕ್ಷೆಯಲ್ಲಿರುವವರಿಗೆ ಉಚಿತ ಕಾನೂನು ನೆರವನ್ನು ನೀಡಲಾಗುವುದು. ಇವರನ್ನು ಹೊರತುಪಡಿಸಿ ವಾರ್ಷಿಕ ಆದಾಯಕಡಿಮೆ ಹೊಂದಿರುವವರು ಈ ಸೇವೆಯನ್ನು ಪಡೆಯಬ ಹುದು.ಭೂಸ್ವಾಧಿನ, ವಿಮೆ ಪ್ರಕರಣಗಳು, ವೈವಾಹಿಕ ಜೀವನ ಅಂಶ ಪ್ರಕರಣಗಳು, ಬ್ಯಾಂಕಿಗೆ ಸಂಬಂಧಿಸಿದ ಪ್ರಕರಣಗಳು,ಇನ್ನಿತರ ಪ್ರಕರಣಗಳಿಗೆ ಸಂಬಂಧಿಸಿದಂತೆಕಾನೂನು ನೆರವನ್ನು ನೀಡಲಾಗುವುದು.ಜನತಾ ನ್ಯಾಯಾಲಯ ನೀಡುವತೀರ್ಪುಅಂತಿಮವಾಗಿದ್ದು, ಅದರ ವಿರುದ್ಧ ಮೇಲ್ಮನವಿಗೆ ಹೋಗುವ ಅವಕಾಶವಿರುವುದಿಲ್ಲ ಎಂದು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಮಾತನಾಡಿ,ದುರ್ಬಲ ವರ್ಗದವರಿಗೆ ಕಾನೂನಿನ ಸೇವೆಯನ್ನುಒದಗಿಸುವುದು, ಆ ಮೂಲಕ ಸಮಾಜದಲ್ಲಿ ನ್ಯಾಯ ಪಡೆಯುವ ಹಕ್ಕನ್ನು ನ್ಯಾಯಯುತವಾಗಿಎಲ್ಲರಿಗೂ ಕಲ್ಪಿಸಿಕೊಡುವುದು ಈ ದಿನಾಚರಣೆಯಉದ್ದೇಶವಾಗಿದೆಎಂದರು. ಕಾನೂನು ಪ್ರಾಧಿಕಾರವುಸಾರ್ವಜನಿಕರಿಗೆಉಚಿತಕಾನೂನಿನ ನೆರವು ಪಡೆಯಲು ಸಹಾಯವಾಣಿ-15100ಯನ್ನುತೆರೆದಿದ್ದು, ಯಾರಿಗಾದರೂ ಕಾನೂನಿನ ಸಲಹೆ ಅಗತ್ಯವಿದ್ದರೆ ಕರೆಮಾಡಿ ಕಾನೂನಿನ ಸಲಹೆ ಪಡೆಯಬಹುದು. ಕಾನೂನು ಪ್ರಾಧಿಕಾರವುಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದಜಾರಿಯಾದ ಕಾನೂನಿಗೆ ಸಂಬಂಧಪಟ್ಟ ಯೋಜನೆಗಳು ಹಾಗೂ ಬಡತನ ನಿರ್ಮೂಲನಕ್ಕೆ ಸಂಬಂಧಪಟ್ಟ ಯೋಜನೆಗಳನ್ನು ಜನರಿಗೆ ತಿಳಿಸಿ ಅದರ ಬಗ್ಗೆ ಅರಿವು ಮೂಡಿಸುತ್ತದೆಎಂದು ಹೇಳಿದರು. ಎಂ.ಎಚ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದಎಚ್. ಚಂದ್ರಶೇಖರ್ ,ಪ್ರಾಂಶುಪಾಲಗಂಗರಾಜ ಕೆ.ಎಂ., ಜಿಲ್ಲಾ ವಕೀಲರ ಸಂಘದಉಪಾಧ್ಯಕ್ಷರಾದ ವಿ.ಚಂದ್ರಶೇಖರ್, ಕಾರ್ಯದರ್ಶಿ ತಿಮ್ಮೇಗೌಡಎಸ್, ಖಜಾಂಚಿ ಮಂಜೇಶ್‌ಗೌಡ ಆರ್.ಸಿ ಉಪಸ್ಥಿತರಿದ್ದರು.

# ವೀರ ಒನಕೆ ಓಬವ್ವ ಮಹಿಳೆಯರಿಗೆ ಸ್ಪೂರ್ತಿದಾಯಕ

**ಕೋಲಾರ:** ಎಲ್ಲಾ ಮಹಿಳೆಯರೂ ವೀರರಾಣಿ ಒನಕೆ ಓಬವ್ವರನ್ನು ಸ್ಪೂರ್ತಿದಾಯಕವಾಗಿ ತೆಗೆದುಕೊಳ್ಳಿ ಎಂದು ಕೋಲಾರ ತಹಶೀಲ್ದಾರ್ ನಯನ ಹೇಳಿದರು.

ನಗರದ ಶ್ರೀ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತ ಆಶ್ರಯದಲ್ಲಿ ವೀರರಾಣಿ ವನಕೆ ಓಬವ್ವ ಜಯಂತಿಯನ್ನು ಉದ್ಘಾಟಿಸಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಅವರು ಮಾತನಾಡಿದರು.

ಒನಕೆ ಓಬವ್ವ ಜಯಂತಿಗೆ ಶಾಲಾ ಕಾಲೇಜಿನ ವಿದ್ಯಾರ್ಥಿಗಳನ್ನು ಕರೆತರುವ ಉದ್ದೇಶವೇನೆಂದರೆ ಇಂತಹ ಮಹಾನೀಯರನ್ನು ಸ್ಪೂರ್ತಿದಾಯಕವಾಗಿ ತೆಗೆದುಕೊಂಡು ಅವರ ಕುರಿತಾಗಿ ತಿಳಿದುಕೊಳ್ಳಬೇಕು. ಆ ಮೂಲಕ ಜೀವನದಲ್ಲಿ ಅನೇಕ ಸಮಸ್ಯೆಗಳು ಬರುತ್ತವೆ ಅವುಗಳನ್ನು ಸಮರ್ಥವಾಗಿ ಎದುರಿಸಲು ಸಹಕಾರಿಯಾಗುತ್ತದೆ. ವಿದ್ಯಾರ್ಥಿಗಳು ಉತ್ತಮವಾದ ವಿದ್ಯಾಭ್ಯಾಸ ಪಡೆದುಕೊಂಡು ಸಮಾಜದಲ್ಲಿ ಉನ್ನತ ಹುದ್ದೆಗಳನ್ನು ಪಡೆಯಬೇಕು. ತಮ್ಮ ಹೆತ್ತವರಿಗೆ ಗೌರವ ತಂದು ಕೊಡಬೇಕು. ತಮ್ಮ ಜೀವನವನ್ನು ರೂಪಿಸಿಕೊಳ್ಳುವ ಮೂಲಕ ತಮ್ಮ ವೀರತ್ವವನ್ನು ತೋರಿಸಬೇಕು ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷರಾದ ಲಕ್ಷ್ಮೀದೇವಿ, ನಗರಸಭೆ ಉಪಾಧ್ಯಕ್ಷರಾದ ಸಂಗೀತ, ಮತ್ತು ಸಮುದಾಯದ ಮುಖಂಡರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಎನ್. ವಿಜಯಲಕ್ಷ್ಮಿ ಶಾಲಾ ಕಾಲೇಜಿನ ಮತ್ತಿತರರು ಸೇರಿದಂತೆ ಉಪಸ್ಥಿತರಿದ್ದರು.

# ರಾಜ್ಯ ಮುಕ್ತ ವಿವಿ ವಿವಿಧ ಕೋರ್ಸ್‌ಗಳ ಪ್ರವೇಶಾತಿ

**ತುಮಕೂರು:** ಕರಾಮುವಿಯ ತುಮಕೂರು ಪ್ರಾದೇಶಿಕ ಕೇಂದ್ರದಲ್ಲಿ 2024-25ನೇ (ಜುಲೈ ಆವೃತ್ತಿ) ಶೈಕ್ಷಣಿಕ ಸಾಲಿನ ಪ್ರವೇಶಾತಿ ಅಂತಿಮ ಹಂತದಲ್ಲಿದ್ದು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 10+2 (ಪದವಿ ಪೂರ್ವ) ಮತ್ತು 10+2+3 (ಸ್ನಾತಕ ಪದವಿ) ವಿದ್ಯಾರ್ಹತೆ ಹೊಂದಿರುವ ಎಲ್ಲಾ ವಯೋಮಾನದ ವಿದ್ಯಾರ್ಥಿಗಳು ಯುಜಿಸಿ ಅನುಮೋದಿತ ಸ್ನಾತಕ(ಯು.ಜಿ)/ಸ್ನಾತಕೋತ್ತರ(ಪಿ.ಜಿ) ಕೋರ್ಸ್ ಗಳಿಗೆ ಪ್ರವೇಶಾತಿ ಪಡೆಯಬಹುದಾಗಿದ್ದು, ಯುಜಿಸಿ ಅನುಮೋದಿತ ಸ್ನಾತಕ/ಸ್ನಾತಕೋತ್ತರ ಕೋರ್ಸ್ ಗಳಾದ ಬಿ.ಎ/ಬಿ.ಕಾಂ/ಬಿ.ಬಿ.ಎ/ಬಿ.ಸಿ.ಎ/ಬಿ.ಎಲ್.ಐ.ಎಸ್ಸಿ ಹಾಗೂ ಬಿ.ಎಸ್ಸಿ., ಎಂ.ಎ/ಎಂ.ಸಿ.ಜೆ., ಎಂ.ಕಾಂ., ಎಂ.ಎಲ್.ಐ.ಎಸ್ಸಿ., ಎಂ.ಎಸ್ಸಿ., ಎಂ.ಬಿ.ಎ., ಪಿ.ಜಿ. ಸರ್ಟಿಫಿಕೇಟ್., ಡಿಪ್ಲೋಮಾ., ಸರ್ಟಿಫಿಕೇಟ್ ಪ್ರೋಗ್ರಾಮ್ ಗಳಿಗೆ ಪ್ರವೇಶಾತಿ ಮಾಡಿಕೊಳ್ಳಲಾಗುತ್ತಿದೆ. ಮೇಲ್ಕಂಡ ಪದವಿಗಳಿಗೆ ಆನ್ ಲೈನ್ ನಲ್ಲಿ ಅರ್ಜಿ ಭರ್ತಿಮಾಡಿ ನಂತರ ತುಮಕೂರಿನ ಕರಾಮುವಿ ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಆನ್ ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿ ಪಡೆಯಬಹುದು. ಪ್ರಥಮ ವರ್ಷದ ಪ್ರವೇಶಾತಿಗೆ 2024ರ ನವೆಂಬರ್ 15 ಕೊನೆಯ ದಿನಾಂಕವಾಗಿದೆ.

**ಪ್ರಥಮ ವರ್ಷದ ಪ್ರವೇಶಾತಿ ಶುಲ್ಕ ವಿವರ:-** ಬಿ.ಎ-ರೂ.8,400/-., ಬಿ.ಕಾಂ.-ರೂ.8,900/-.,ಬಿ.ಬಿ.ಎ/ಬಿ.ಎಲ್.ಐ.ಎಸ್ಸಿ-12,400/-., ಬಿ.ಸಿ.ಎ/ಬಿ.ಎಸ್ಸಿ-ರೂ.23,900/-., ಬಿ.ಎಸ್.ಡಬ್ಲ್ಯೂ-ರೂ.12,900/-., ಎಂ.ಎ-ರೂ.10,600/-., ಎಂ.ಸಿ.ಜೆ-ರೂ.16,200/-., ಎಂ.ಕಾಂ-ರೂ.12,400/-., ಎಂ.ಬಿ.ಎ--ರೂ.29,900/-., ಎಂ.ಎಸ್ಸಿ/ಎಂ.ಸಿ.ಎ-ರೂ.29,700/-., ಎಂ.ಎಸ್.ಡಬ್ಲ್ಯೂ-ರೂ.21,300/-., ಎಂ.ಎಲ್.ಐ.ಎಸ್ಸಿ-ರೂ.18,150/-ಗಳಾಗಿರುತ್ತದೆ. ಕರಾಮುವಿ ತುಮಕೂರು ಪ್ರಾದೇಶಿಕ ಕೇಂದ್ರ, ಟೂಡಾ ಲೇಔಟ್, ರಾಜೀವ್ಗಾಂಧಿ ನಗರ, ಗಂಗಸಂದ್ರ ಮುಖ್ಯರಸ್ತೆ, ಮೆಳೆಕೋಟೆ, ತುಮಕೂರು-572105 ದೂರವಾಣಿ ಸಂಖ್ಯೆ- 0816-2955580, 9844506629, 9886112434, 7349474339 ಅನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕರಾದ ಡಾ. ಲೋಕೇಶ ಆರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೌರಕಾರ್ಮಿಕರ ಹುದ್ದೆಗೆ ಅರ್ಜಿ

**ಕೋಲಾರ:** ಕೋಲಾರ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿಗಳಲ್ಲಿ ಖಾಲಿಯಿರುವ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಕೋಲಾರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಡಿಸೆಂಬರ್ 10 ರೊಳಗೆ ದಾಖಲಾತಿಗಳೊಂದಿಗೆ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಠ ವಯೋಮಿತಿ 55 ವರ್ಷ. ವಿದ್ಯಾರ್ಹತೆ ಅನ್ವಯಿಸುವುದಿಲ್ಲ. ಕನ್ನಡ ಮಾತನಾಡಲು ಗೊತ್ತಿರಬೇಕು. ಕೋಲಾರ ಜಿಲ್ಲೆಯ ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪೌರಕಾರ್ಮಿಕ ಹುದ್ದೆಯಲ್ಲಿ ಆಗಸ್ಟ್ 07, 2017ರ ಪೂರ್ವದಲ್ಲಿ ನೇಮಕಾತಿ ಹೊಂದಿ ಪ್ರಸ್ತುತ ನೇರಪಾವತಿಯಡಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಈ ನಿಯಮಗಳು ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ ಮತ್ತು ಆಯಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯ್ತಿಗಳಲ್ಲಿ ಮಾಹಿತಿಯನ್ನು ಪಡೆಯಬಹುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ಸಮೀಕ್ಷ ಕುರಿತು ಆಕ್ಷೇಪಣೆ

**ಕೋಲಾರ:** ಜಿಲ್ಲೆಯಲ್ಲಿ 2024-25 ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಕಾರ್ಯ ಪೂರ್ಣಗೊಂಡಿದ್ದು, ತಾಕುಗಳ ಬೆಳೆ ಸಮೀಕ್ಷೆ ಮಾಹಿತಿಯನ್ನು ರೈತರ ನೋಂದಾಯಿತ ದೂರವಾಣಿ ಸಂಖ್ಯೆಗೆ ಸಂದೇಶ ರವಾನಿಸಲಾಗಿರುತ್ತದೆ ಅಥವಾ ರೈತರು ಬೆಳೆ ದರ್ಶಕ್ ಮೊಬೈಲ್ ಆಫ್ ಮೂಲಕ ತಮ್ಮ ತಾಕುಗಳ ಬೆಳೆ ವಿವರಗಳನ್ನು ಪರಿಶೀಲಿಸಬಹುದು. ಬೆಳೆ ಸಮೀಕ್ಷೆಯಡಿ ಸಂಗ್ರಹಿಸಲಾದ ಬೆಳೆ ವಿವರಗಳನ್ನು ಬೆಳೆ ಪರಿಹಾರ, ಬೆಳೆ ವಿಮೆ, ಬೆಳೆ ಸಾಲ ಬೆಂಬಲ ಬೆಲೆ ಯೋಜನೆ ಮತ್ತು ಸರ್ಕಾರದ ಮತ್ತಿತ್ತರ ಯೋಜನೆಗಳ ಸೌಲಭ್ಯವನ್ನು ಪಡೆಯಲು ಬಳಸಲಾಗುತ್ತದೆ. ಆದ್ದರಿಂದ 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಸಂಗ್ರಹಿಸಲಾದ ಬೆಳೆ ವಿವರ ವ್ಯತ್ಯಾಸಕ್ಕೆ ಸಂಬಂಧಿಸಿದಂತೆ Crop Survey ಅಂತರ್ಜಾಲದ ಮುಖಾಂತರ ಅಥವಾ ಬೆಳೆ ದರ್ಶಕ್ ಮೊಬೈಲ್ ಆಫ್ ಮೂಲಕ ತಮ್ಮ ಆಕ್ಷೇಪಣೆಗಳನ್ನು ನವೆಂಬರ್ 20 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ಸಂಖ್ಯೆ :18004253553 ಅಥವಾ ಕಂದಾಯ, ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಮಕ್ಕಳ ಮಾರಾಟ ಅಪರಾಧ

**ಕೋಲಾರ:** ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ 2015 ಸೆಕ್ಷನ್ 80 ಮತ್ತು 81ರ ಅನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ ರೂ.1 ಲಕ್ಷವರೆಗೆ ದಂಡ ವಿಧಿಸಬಹುದು. ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮೀಲಾದರೆ ಶಿಕ್ಷೆಯ ಅವಧಿ 3 ವರ್ಷಗಳ ವರೆಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆಯಾಗುತ್ತದೆ. ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಯು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೆ.ಜಿ.ಎಫ್ ಅಂಡರ್‌ಸನ್‌ಪೇಟೆ ಅಂಚೆ, ಮಸ್ಕಂ ಸರ್ಕಾರಿ ಬಾಲಕರ ಬಾಲಮಂದಿರವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಕೋಲಾರ:** ಕೋಲಾರ ತಾಲ್ಲೂಕು ಮದನಹಳ್ಳಿ ಗ್ರಾಮದ ಸರ್ವೆ ನಂ.32 ಜಮೀನಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಆವರಣದಲ್ಲಿ ಬೆಳೆದಿರುವ ಮರಗಳನ್ನು ಬುಡ ಸಮೇತ ತೆಗೆಯಲು ಹರಾಜು ಮೂಲಕ ವಿಲೇ ಮಾಡಲು ನವೆಂಬರ್ 28 ರಂದು ಮಧ್ಯಾಹ್ನ 12.00 ಗಂಟೆಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಆವರಣದಲ್ಲಿ ಹರಾಜನ್ನು ನಡೆಸಲು ಉದ್ದೇಶಿಸಲಾಗಿದೆ. ಹರಾಜಿನಲ್ಲಿ ಭಾಗವಹಿಸುವವರು ರೂ.10000ಗಳನ್ನು ಮುಂಗಡವಾಗಿ ಠೇವಣಿಯ ಹಣವನ್ನು ನವೆಂಬರ್ 18 ರಿಂದ 26 ರೊಳಗೆ ಕಛೇರಿ ಸಮಯದಲ್ಲಿ ಹಣವನ್ನು ಪಾವತಿಸಿ ಹರಾಜಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರೋಜಾ ರಾವ್ ನಿಧನ

**ಮೈಸೂರು:** ನಗರದ ವಿವೇಕಾನಂದ ವೃತ್ತದ ನಿವಾಸಿ ಶ್ರೀಮತಿ ಸರೋಜಾ ರಾವ್ (82) ಸೋಮವಾರ ನಿಧನರಾಧರು. ಅವರು ಪುತ್ರ ಬಿಜೆಪಿಯ ಹಿರಿಯ ಸಕ್ರಿಯ ಕಾರ್ಯಕರ್ತ



ಪ್ರಸಾದ್ (ಸೀಮಾ ಪಚ್ಚು- ಮೈಸೂರು ಮಹಾನಗರಪಾಲಿಕೆಯ ಮಾಜಿ ಸದಸ್ಯರು), ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.ಮಧ್ಯಾಹ್ನ ಅವರ ಅಂತ್ಯಕ್ರಿಯೆ ನಗರದ ಚಾಮುಂಡಿ ಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು.

## ಶಶಿಧರ್ ನಾಮಪತ್ರ ಸಲ್ಲಿಕೆ

**ಚಾಮಾಜನಗರ:** ಜಿಲ್ಲೆಯ ಯಳಂದೂರು ಪಟ್ಟಣ ಪಂಚಾಯಿತಿಯ 5ನೇ ವಾರ್ಡ್ ನ ಉಪ ಚುನಾವಣೆ ಹಿನ್ನಲೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶಶಿಧರ್ ನಾಮಪತ್ರ ಸಲ್ಲಿಸಿದರು. ಚಾಮರಾಜನಗರ ಜಿಲ್ಲೆಯ ಯಳಂದೂರು ಪಟ್ಟಣದ ನಾಡಮೇಗಲ ಮಾರಮ್ಮನ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ ಬಳಿಕ ಪಪಂ ಸದಸ್ಯರು, ಮುಖಂಡರು, ಕಾರ್ಯಕರ್ತರೊಂದಿಗೆ ಮೆರವಣಿಗೆಯಲ್ಲಿ ಪಟ್ಟಣಪಂಚಾಯಿತಿ ಕಚೇರಿಗೆ ತೆರಳಿ ಚುನಾವಣಾಧಿಕಾರಿಗೆ ನಾಮಪತ್ರ ಸಲ್ಲಿಸಿದರು. ಯಳಂದೂರು ಪಟ್ಟಣ ಪಂಚಾಯಿತಿಯ 5ನೇ ವಾರ್ಡ್‌ನಲ್ಲಿ ಈ ಹಿಂದೆ ಸದಸ್ಯರಾಗಿದ್ದ ಮಲ್ಲಯ್ಯ ಅವರ ನಿಧನದಿಂದಾಗಿ ತೆರವಾಗಿದ್ದ ಸ್ಥಾನಕ್ಕೆ ಉಪಚುನಾವಣೆ ನಡೆಯಲಿದೆ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ಪಪಂ ಅಧ್ಯಕ್ಷೆ ಲಕ್ಷ್ಮೀ ಮಲ್ಲು, ಸದಸ್ಯ ಮಹೇಶ್, ನಾಯಕ ಜನಾಂಗದ ಯಜಮಾನರಾದ ಮೂರ್ತಿ ಸೇಖುಇದಂತೆ ಇತರರಿದ್ದರು.

# ಗಾಂಧೀಜಿ ವಿಚಾರಗಳನ್ನ ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಗೆ ಬೋಧಿಸಿ

**ಚಿತ್ರದುರ್ಗ:** ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಗೆ ಯಾವುದಾದರೂ ಸಂದರ್ಭದಲ್ಲಿ ಅವಕಾಶ ಸಿಕ್ಕಾಗಲೆಲ್ಲಾ ಅವರಿಗೆ ಗಾಂಧೀಜಿಯವರ ಚಿಂತನೆಗಳನ್ನ ಮೂಡಿಸಿ, ಸೇವಾಮನೋಭಾವನೆಯನ್ನು ಹೆಚ್ಚಿಸಿದರೆ, ಆ ವಿದ್ಯಾರ್ಥಿಗಳು ಮುಂದೆ ಜೀವನದಲ್ಲಿ ಗಾಂಧೀಜಿಯವರ ಚಿಂತನೆಗಳನ್ನು ಅಳವಡಿಸಿಕೊಂಡು, ಜನಸೇವೆ ಮಾಡಲು ಅನುಕೂಲಕರವಾಗುತ್ತದೆ, ಹಾಗಾಗಿ ಎನ್ ಎಸ್ ಎಸ್ ಸಿ ನ ಕೆಲವೊಂದಿಷ್ಟು ಕ್ಷಣಗಳಾದರು ನಾವು ಗಾಂಧೀಜಿಯವರ ಚರಕವನ್ನು ಪರಿಚಯಿಸಿ, ಚರಕದ ಮುಖಾಂತರ ಗ್ರಾಮೀಣ ಅಭಿವೃದ್ಧಿಯನ್ನ ಮಕ್ಕಳಿಗೆ ಬೋಧಿಸಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ.ಹೆಚ್ ಕೆ ಎಸ್ ಸ್ವಾಮಯಯವರು ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾಲಯದಿಂದ ಆಗಮಿಸಿದ್ದ ದಕ್ಷಿಣ ಭಾರತದ ಗಣರಾಜ್ಯೋತ್ಸವ ಪಥಸಂಚನದ ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಗೆ, ಚಿತ್ರದುರ್ಗದ ಕೋಟೆಯ ಮುಂಭಾಗದಲ್ಲಿ ಚರಕವನ್ನ ಪ್ರದರ್ಶಿಸುತ್ತಾ ಮಾತನಾಡಿದರು.

ಚಿತ್ರದುರ್ಗದ ಇತಿಹಾಸವನ್ನ ಎನ್‌ಎಸ್ ಎಸ್ ವಿದ್ಯಾರ್ಥಿಗಳಿಗೆ ಬೋಧಿಸುವುದರ ಜೊತೆ ಜೊತೆಗೆ, ಗ್ರಾಮೀಣ ಅಭಿವೃದ್ಧಿಗಳು



ಸಹ ಚಿತ್ರದುರ್ಗದಲ್ಲಿ ಹೇಗೆ ಅಭಿವೃದ್ಧಿ ಹೊಂದಿದ್ದವು ಮತ್ತು ಕೆಲವು ಗಾಂಧಿವಾದಿಗಳು ಚಿತ್ರದುರ್ಗದಲ್ಲಿ ಹೇಗೆ ಗಾಂಧೀಜಿಯವರ ಸತ್ಯಾಗ್ರಹವನ್ನು ಮುನ್ನಡೆಸಿಕೊಂಡು ಸ್ವತಂತ್ರ ಸಂಗ್ರಾಮದಲ್ಲಿ ಭಾಗವಹಿಸಿದ್ದರು ಎಂಬ ವಿಚಾರಗಳನ್ನು ತಿಳಿಸಬೇಕಾಗಿದೆ. ಇದರಿಂದ ಸ್ವದೇಶಿ ತತ್ವಗಳ ಬಗ್ಗೆ ಪರಿಚಯ ಮಾಡಿಕೊಟ್ಟಂತಾಗುತ್ತದೆ ಎಂದರು.

ಬಹಳಷ್ಟು ವಿದ್ಯಾರ್ಥಿಗಳಿಗೆ ಚರಕ ಹೇಗೆ ಕೆಲಸ ಮಾಡುತ್ತದೆ, ಅದರಿಂದ ದಾರ ತೆಗೆಯುವುದು ಹೇಗೆ ಎಂಬುದು ಬಗ್ಗೆ ಅರಿವಿಲ್ಲ, ಹಾಗೂ ಗಾಂಧೀಜಿಯವರ ಬಗ್ಗೆನೂ ಸಹ ಪೂರ್ಣ ತಿಳುವಳಿಕೆ ಇಲ್ಲದೆ ತಪ್ಪು ಅಭಿಪ್ರಾಯಗಳನ್ನ ವ್ಯಕ್ತಪಡಿಸಿರುತ್ತಾರೆ. ಅಂತಹ ವಿದ್ಯಾರ್ಥಿಗಳಿಗೆ ಗಾಂಧೀಜಿಯವರ ಚಿಂತನೆಗಳನ್ನ ಸರಿಯಾಗಿ ತಿಳಿಯಪಡಿಸಿದರೆ, ಮುಂದೆ ಅವರು ಗ್ರಾಮೀಣ ಅಭಿವೃದ್ಧಿಯನ್ನು ಎನ್‌ಎಸ್‌ಎಸ್ ಮುಖಾಂತರ ಮಾಡಲು ಅನುಕೂಲಕರವಾಗುತ್ತದೆ ಎಂದರು.

ಗಾಂಧೀಜಿಯವರ ಅಹಿಂಸೆ ಮತ್ತು ಸತ್ಯಗಳನ್ನ ಬಹಳಷ್ಟು ವಿದ್ಯಾರ್ಥಿಗಳಿಗೆ ಇನ್ನೂ ಅರ್ಥ ಮಾಡಿಕೊಳ್ಳಲು ಸಾಧ್ಯವಾಗಿಲ್ಲ, ಹಿಂಸೆಗೆ ಹಿಂಸೆ ಉತ್ತರ ಎಂಬ ಭಾವನೆಯನ್ನು ವ್ಯಕ್ತಪಡಿಸಿರುತ್ತಾರೆ, ಯುವ ಜನಾಂಗಕ್ಕೆ ಹಿಂಸೆಯಿಂದ ಆಹಿಂಸೆ ಎಡೆಗೆ ಎಳೆದು ತರಲು ಗಾಂಧೀಜಿಯವರ ಸಿದ್ಧಾಂತಗಳು ಅನುಕೂಲಕರವಾಗಿದೆ ಎಂದರು.

ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಗೆ ಖಾದಿ ಬಟ್ಟೆಯ ಪರಿಚಯವನ್ನು ಸರಿ ಪ್ರಮಾಣದಲ್ಲಿ ಮಾಡಿಕೊಟ್ಟರೆ, ಮುಂದೆ ಅವರು ತಮ್ಮ ಸೇವಾ ಅವಧಿಯಲ್ಲಾದರೂ ಖಾದಿಯನ್ನ ತೊಟ್ಟು, ಗ್ರಾಮೀಣ ಅಭಿವೃದ್ಧಿ ಬಗ್ಗೆ ಯೋಚನೆ ಮಾಡುತ್ತಾರೆ, ಅವರಿಗೆ ಈಗ ಖಾದಿ ಬಟ್ಟೆಗೂ ಮತ್ತು ಮಿಲ್ ಬಟ್ಟೆಗೆ ವ್ಯತ್ಯಾಸಅರಿವಿಗೆಬರುತ್ತಿಲ್ಲ, ಹಾಗಾಗಿ ಎನ್‌ಎಸ್‌ಎಸ್ ನ ಕಾರ್ಯಕ್ರಮಗಳಲ್ಲಿ ಖಾದಿ, ಚರಕ, ಗಾಂಧೀಜಿಯವರ ಚಿಂತನೆಗಳನ್ನು ಪರಿಚಯಿಸುವಂತಹ ಕಾರ್ಯಕ್ರಮಗಳನ್ನು ಹೆಚ್ಚು ಆಯೋಜಿಸಬೇಕು ಎಂದು ಪತ್ರಿಕ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್ ಪ್ರಾರಂಭೋತ್ಸವ

**ತುಮಕೂರು:** ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ಶಿಕ್ಷಣ ದಿನದಿಂದ ದಿನಕ್ಕೆ ಬದಲಾವಣೆ ಹೊಂದುತ್ತಿದ್ದು, ಈ ಬದಲಾವಣೆಗೆ ಆಧುನಿಕ ಯಂತ್ರೋಪಕರಣಗಳು ಕಾರಣವಾಗಿದೆ. ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ್ನು ಕಾರ್ಡಿಯೋಲಾಜಿ ಮತ್ತು ನ್ಯೂರೋಲಾಜಿಗೆ ಸಂಬಂಧಪಟ್ಟ ಈ ಕಿನ್ಲಿಕ್ ಪ್ರಾರಂಭಿಸಲಾಗಿದೆ. ಕಾಯಿಲೆಗಳು ಗುರುತಿಸುವ ಹಾಗೂ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಅತ್ಯಾಧುನಿಕ ಉಪಕರಣಗಳನ್ನು ಒಳಗೊಂಡ ವಿನೂತನ ವಿಷ್ಣುಸೂಪರ್ ಸ್ಪೆಷಾಲಿಟಿ ಸೆಂಟರ್ ಪ್ರಾರಂಭಿಸಿ ಶುಭ ಹಾರೈಸುತ್ತಾ, ಡಾ.ಸುರೇಶ್.ಎಸ್. ಮತ್ತು ಡಾ.ಶ್ರೀಧರ್.ಎಸ್.ರವರು ಸಹ ಜನರ ಪ್ರೀತಿ ಪಾತ್ರರಾಗಿದ್ದಾರೆ. ತುಮಕೂರು ಜಿಲ್ಲೆಯ, ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ಈ ವೈದ್ಯರು ವರದಾನವಾಗಲಿದ್ದಾರೆ ಎಂದು ಶ್ರೀದೇವಿ ಶಿಕ್ಷಣ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್‌ರವರು ತಿಳಿಸಿದರು.

ನಗರದ ಜೆ.ಸಿ.ರಸ್ತೆಯ ವಿನೂತನವಾಗಿರುವ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ ಕಾರ್ಡಿಯೋಲಾಜಿ ಮತ್ತು ನ್ಯೂರೋಲಾಜಿ ಕಿನ್ಲಿಕ್ ಪ್ರಾರಂಭೋತ್ಸವವನ್ನು ನ.8 ರಂದು ಶುಕ್ರವಾರ ಸಂಜೆ 7 ಗಂಟೆಗೆ ಪ್ರಾರಂಭೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ ಹೃದಯ ರೋಗ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಎಸ್.ಸುರೇಶ್‌ರವರು ಮಾತನಾಡುತ್ತಾ ವೈದ್ಯಕೀಯ ಶಿಕ್ಷಣ ದಿನದಿಂದ ದಿನಕ್ಕೆ



ಬದಲಾವಣೆ ಹೊಂದುತ್ತಿದ್ದು ಈ ಬದಲಾವಣೆಗೆ ಆಧುನಿಕ ಯಂತ್ರೋಪಕರಣಗಳು ಕಾರಣವಾಗಿದೆ. ಹೃದಯಕ್ಕೆ ಸಂಬಂಧಪಟ್ಟ ಕಾಯಿಲೆಗಳು ಗುರುತಿಸುವ ಹಾಗೂ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಅತ್ಯಾಧುನಿಕ ಉಪಕರಣಗಳನ್ನು ಒಳಗೊಂಡ ನೂತನ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ್ನು ಪ್ರಾರಂಭಿಸಿ ಹೃದ್ರೋಗಿಗಳಿಗೆ ಚಿಕಿತ್ಸೆ ದೊರೆಯುವ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಈ ಅತ್ಯಾಧುನಿಕ ಚಿಕಿತ್ಸೆಯು ತುಮಕೂರು ಜಿಲ್ಲೆಯ, ವಿಶೇಷವಾಗಿ ಗ್ರಾಮೀಣ ಭಾಗದ ಜನರಿಗೆ ವರದಾನವಾಗಿದೆ. ಹೃದಯ ರೋಗಕ್ಕೆ ಸಂಬಂಧಪಟ್ಟ ವಿಶೇಷ ಕಾಳಜಿ ವಹಿಸಿ ಅತ್ಯಾಧುನಿಕ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ್ನು ಹೃದಯ ರೋಗ ನೂತನವಾಗಿ ಸ್ಥಾಪಿಸಿರುವುದು ತುಮಕೂರು ಜನತೆಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ ನರರೋಗ ತಜ್ಞರಾದ ಡಾ.ಎಸ್.ಶ್ರೀಧರ್ ರವರು ಮಾತನಾಡುತ್ತಾ ಗ್ರಾಮೀಣ ಜನರಿಗೆ ಉತ್ತಮ ಸೇವೆ ಒದಗಿಸುವ ನಿಟ್ಟಿನಲ್ಲಿ ಎಲ್ಲಾ ನರರೋಗಕ್ಕೆ ಸಂಬಂಧಪಟ್ಟಂತೆ ಸೌಲಭ್ಯಗಳನ್ನು ಬಡ ಮತ್ತು ಮಧ್ಯಮ ವರ್ಗದವರಿಗೆ ಜನರ ಆರೋಗ್ಯ ಸೇವೆಗೆ ಸದಾ ಸಿದ್ದಗೊಳಿಸಲಾಗಿದೆ. ಮೂರ್ಛೆ, ಪಾರ್ಶ್ವವಾಯು ಇತರೆ ಸಮಸ್ಯೆಗಳಿಗೆಗೂ ಚಿಕಿತ್ಸೆ ನೀಡಲಾಗುವುದು. ಚಿಕಿತ್ಸೆ ನೀಡಲು ಆಧುನಿಕ ತಂತ್ರಜ್ಞಾನದ ಉಪಕರಣದ ಬಳಕೆಯಿಂದ ಅತ್ಯಾಧುನಿಕ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ್ನು ತೆರೆಯಲಾಗಿದೆ.'ಬೆನ್ನುನೋವು' 'ತೋಳು- ಕಾಲುಗಳಲ್ಲಿ ನಿಶ್ಯಕ್ತಿಯ ಭಾವನೆ' 'ಕೈಕಾಲುಗಳಲ್ಲಿ ದೌರ್ಬಲ್ಯ' 'ಪಾರ್ಶ್ವವಾಯು' 'ಕುತ್ತಿಗೆ ನೋವು ಅಥವಾ ಬಿಗಿತ' ಬೆಳಗಿನ ಸಮಯದಲ್ಲಿ ತೀವ್ರವಾದ ತಲೆ ನೋವು 'ದಿನದ ಬಹುಮುಟ್ಟಿನ ಸಮಯ ಖಿನ್ನತೆ' ಪಾರ್ಕಿನ್‌ಸನ್' 'ಬೆನ್ನುಮೂಳೆ ಮುರಿತ' 'ತಲೆಗೆ ಪೆಟ್ಟು' 'ಮಿದುಳಿನ ಗೆಡ್ಡೆ' 'ಬೆನ್ನುಹುರಿ' ಅಂದರೆ ಡಿಸ್ಕ್‌ನ ಸಮಸ್ಯೆ ಮೊದಲಾದ ನ್ಯೂರೋ ಕಾಯಿಲೆಗಳಿಗೆ ಈ ಕೇಂದ್ರದಲ್ಲಿ ಉತ್ತಮ ಚಿಕಿತ್ಸೆಗೆ ಲಭ್ಯವಿದೆ ಎಂದು ವಿವರಿಸಿದರು.

ತುಮಕೂರಿನ ವಿವಿಧ ಆಸ್ಪತ್ರೆಯ ವೈದ್ಯರು ಹಾಗೂ ವಿಷ್ಣು ಸೂಪರ್ ಸ್ಪೆಷಾಲಿಟಿ ಸೆಂಟರ್‌ನ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## ವಿಜಿಲೆನ್ಸ್ ಜಾಗೃತಿ ಸಪ್ತಾಹ

ಕೇಂದ್ರೀಯ ವಿಜಿಲೆನ್ಸ್ ಕಮಿಷನ್ ನಿರ್ದೇಶನಗಳಿಗೆ ಅನುಗುಣವಾಗಿ ಮತ್ತು ಈ ವರ್ಷದ ವಿಷಯ ವಸ್ತು ''ರಾಷ್ಟ್ರದ ಸಮೃದ್ಧಿಗಾಗಿ ಸಮಗ್ರತೆಯ ಸಂಸ್ಕೃತಿ'', ರಾಷ್ಟ್ರದ ಪ್ರಮುಖ ಸಾರ್ವಜನಿಕ ವಲಯದ ಬ್ಯಾಂಕ್ ಆದ ''ಪಂಜಾಬ್ ನ್ಯಾಷನಲ್ ಬ್ಯಾಂಕ್ 2024 ರ ವಿಜಿಲೆನ್ಸ್ ಜಾಗೃತಿ'' ಸಪ್ತಾಹವನ್ನು ಆಚರಿಸಿತು. ನವದೆಹಲಿಯ ದ್ವಾರಕಾದಲ್ಲಿರುವ ಬ್ಯಾಂಕಿನ ಕಾರ್ಪೊರೇಟ್ ಕಛೇರಿಯಲ್ಲಿ ನಡೆದ ಉದ್ಘಾಟನಾ ಸಮಾರಂಭದಲ್ಲಿ ಕಓಃ ಅಧ್ಯಕ್ಷರಾದ ಶ್ರೀ ಕೆ.ಜಿ.ಅನಂತಕೃಷ್ಣನ್, PNB MD ಮತ್ತು CEO ಅತುಲ್ ಕುಮಾರ್ ಗೋಯೆಲ್, ಕಓಃ ಕಾರ್ಯನಿರ್ವಾಹಕ ನಿರ್ದೇಶಕರು (ಇಡಿ ಗಳು) – ಎಂ. ಪರಮಶಿವಂ ಮತ್ತು ಬಿಭು ಪಿ. ಮಹಾಪಾತ್ರ, ಮಂಡಳಿಯ ಇತರ ನಿರ್ದೇಶಕರು ಮತ್ತು PNB ಮುಖ್ಯ ವಿಜಿಲೆನ್ಸ್ ಅಧಿಕಾರಿ ರಾಘವೇಂದ್ರ ಕುಮಾರ್ ಅವರು, ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭ್ ಭಾಯಿ ಪಟೇಲ್ ಅವರಿಗೆ ಗೌರವ ಸಲ್ಲಿಸಿದರು. ಅವರ ಪರಂಪರೆಯನ್ನು ಏಕತೆ ಮತ್ತು ಸಮಗ್ರತೆಯ ಚಾಂಪಿಯನ್ ಎಂದು ಗೌರವಿಸಿದರು. PNB MD ಮತ್ತು CEO ಅತುಲ್ ಕುಮಾರ್ ಗೋಯೆಲ್ ಅವರು ಕಾರ್ಪೊರೇಟ್ ಕಛೇರಿಯಲ್ಲಿ ನಿಯೋಜಿಸಲಾದ ಸಿಬ್ಬಂದಿ ಸದಸ್ಯರಿಗೆ ಸಮಗ್ರತೆಯ ಪ್ರತಿಜ್ಞೆಯನ್ನು ಸ್ವೀಕಾರ ಮಾಡಿಸಿದರು, ನೈತಿಕ ವ್ಯವಹಾರ ಅಭ್ಯಾಸಗಳು ಮತ್ತು ಸಮಗ್ರತೆಗೆ ಬ್ಯಾಂಕಿನ ಬದ್ಧತೆಯನ್ನು ಒತ್ತಿ ಹೇಳಿದರು. ವಿಜಿಲೆನ್ಸ್ ಜಾಗೃತಿ ಸಪ್ತಾಹದಲ್ಲಿ, PNB ಸೈಕ್ಲೋಥಾನ್ (ಸೈಕಲ್ ರ್ಯಾಲಿ) ಮತ್ತು ವಾಕಥಾನ್ ಸೇರಿದಂತೆ ಹಲವಾರು ಔಟ್ರೀಚ್ ಮತ್ತು ಜಾಗೃತಿ ಚಟುವಟಿಕೆಗಳನ್ನು ಆಯೋಜಿಸಿತು, ಭ್ರಷ್ಟಾಚಾರದ ಪಿಡುಗಿನ ಬಗ್ಗೆ ಜಾಗೃತಿ ಮೂಡಿಸಲು ನವದೆಹಲಿಯ ಬ್ಯಾಂಕಿನ ಕಾರ್ಪೊರೇಟ್ ಕಛೇರಿಯಿಂದ PNB CVO ರಾಘವೇಂದ್ರ ಕುಮಾರ್ ಅವರು ಈ ಎರಡೂ ಚಟುವಟಿಕೆಗಳಿಗೆ ಹಸಿರು ನಿಶಾನೆ ತೋರಿದರು. ನಂತರ ಅವರು ತಮ್ಮ ಸಂದೇಶದಲ್ಲಿ, ಜಾಗರೂಕತೆಯ ವಿಷಯ ಮತ್ತು ಮಹತ್ವವನ್ನು ಒತ್ತಿ ಹೇಳುತ್ತಾ, ''ಆಯೋಗವು ನಿಗದಿಪಡಿಸಿದ ಮಾರ್ಗಸೂಚಿಗಳು ರಾಷ್ಟ್ರದ ನಿರಂತರ ಅಭಿವೃದ್ಧಿಗೆ ಅಡಿಪಾಯವಾಗಿ ಕಾರ್ಯನಿರ್ವಹಿಸುತ್ತವೆ. ಈ ವರ್ಷ, ಆಯೋಗವು ಐದು ಪ್ರಮುಖ ಕ್ಷೇತ್ರಗಳನ್ನು ಕೇಂದ್ರೀಕರಿಸಿ ಮೂರು ತಿಂಗಳ ಅಭಿಯಾನವನ್ನು ಪ್ರಾರಂಭಿಸಿದೆ: ಸಾಮರ್ಥ್ಯ ವರ್ಧನೆ ಕಾರ್ಯಕ್ರಮಗಳು, ವ್ಯವಸ್ಥಿತ ಸುಧಾರಣಾ ಕ್ರಮಗಳ ಗುರುತಿಸುವಿಕೆ ಮತ್ತು ಅನುಷ್ಠಾನ, ಸುತ್ತೋಲೆಗಳು, ಮಾರ್ಗಸೂಚಿಗಳು ಮತ್ತು ಕೈಪಿಡಿಗಳ ನವೀಕರಣ, 30 ಜೂನ್ 2024 ಕ್ಕಿಂತ ಮೊದಲು ಸ್ವೀಕರಿಸಿದ ದೂರುಗಳನ್ನು ಸಮಯೋಚಿತವಾಗಿ ವಿಲೇವಾರಿ ಮಾಡಲಾಗುವುದು ಎಂದರು.

## ಕುಂಬಳಕಾಯಿ ಪಾಯಸ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಸಿಹಿ ಕುಂಬಳಕಾಯಿ–2 ಕಪ್, ಬೆಲ್ಲ–1 ಕಪ್, ತೆಂಗಿನಕಾಯಿ ತುರಿ–1 ಕಪ್, ತುಪ್ಪ–2 ಟೇಬಲ್ ಸ್ಪೂನ್, ಗೋಡಂಬಿ,–ಸ್ವಲ್ಪ, ದ್ರಾಕ್ಷಿ–ಸ್ವಲ್ಪ, ಹಾಲು–1 ಕಪ್, ಏಲಕ್ಕಿ–1.

### ಮಾಡುವ ವಿಧಾನ

ಮೊದಲಿಗೆ ಕುಂಬಳಕಾಯಿ ಸಿಪ್ಪೆ ತೆಗೆದು ಚಿಕ್ಕ ಚಿಕ್ಕ ಹೋಳುಗಳನ್ನಾಗಿ ಮಾಡಿಕೊಳ್ಳಿ. ನಂತರ ಒಂದು ದಪ್ಪ ತಳದ ಪಾತ್ರೆಗೆ ತುಪ್ಪ ಹಾಕಿ ದ್ರಾಕ್ಷಿ, ಗೋಡಂಬಿ ಹುರಿದುಕೊಳ್ಳಿ. ನಂತರ ಕುಂಬಳಕಾಯಿ ಹೋಳುಗಳನ್ನು ಬಾಣಲೆಯಲ್ಲಿ ಹುರಿದುಕೊಂಡು ಒಂದು ಪ್ಲೇಟ್ ಮುಚ್ಚಿ ಬೇಯಲು ಬಿಡಿ. ನಂತರ ಒಂದು ಮಿಕ್ಸಿ ಜಾರಿಗೆ ತೆಂಗಿನಕಾಯಿ ತುರಿ, ಏಲಕ್ಕಿ ಹಾಕಿ ರುಬ್ಬಿಕೊಳ್ಳಿ. ನಂತರ ಸ್ವಲ್ಪ ನೀರು ಸೇರಿಸಿ ರುಬ್ಬಿಕೊಳ್ಳಿ. ಕುಂಬಳಕಾಯಿ ಬೆಂದ ನಂತರ ತೆಂಗಿನಕಾಯಿ ಹಾಲು ಸೇರಿಸಿ ಬೆಲ್ಲ ಹಾಕಿ ಕುದಿಸಿ. ಬೇಕಿದ್ದರೆ ನೀರು ಸೇರಿಸಿಕೊಳ್ಳಿ. ನಂತರ ಇದು ಸ್ವಲ್ಪ ತಣಿದ ನಂತರ 1 ಕಪ್ ಹಾಲು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿಕೊಂಡು ಸವಿಯಿರಿ.

## ಪುಷ್ಪ 2 ಟ್ರೈಲರ್ ರಿಲೀಸ್‌ಗೆ ಕೌಂಟ್‌ಡೌನ್ ಶುರು!




ಟಾಲಿವುಡ್‌ನಲ್ಲಿ ಪುಷ್ಪಾ–2 ಚಿತ್ರ ಹವಾ ಜೋರಾಗಿಯೇ ಬೀಸುತ್ತಿದೆ. ಇದರ ಜೊತೆ ಜೊತೆಗೆ ಸಿನಿಮಾದ ಕೆಲಸ ಕೂಡ ನಡೆಯುತ್ತಿದೆ. ರಾತ್ರಿ ಸಿಕಂದರ್ ಬೆಳ್ಳಗ್ಗೆ ಪುಷ್ಪಾ ಸಿನಿಮಾ ಶೂಟಿಂಗ್ ಅಂತ ನಟಿ ರಶ್ಮಿಕಾ ಮಂದಣ್ಣ ಡಬಲ್ ಶಿಫ್ಟ್ ವರ್ಕ್ ಮಾಡುತ್ತಿದ್ದಾರೆ.

ಈ ನಡುವೆ ಇದೀಗ ಇದೇ ಪುಷ್ಪಾ–2 ಚಿತ್ರ ಹೊಸ ಸುದ್ದಿ ಹೊರ ಬಂದಿದೆ. ಇದೇ ನವೆಂಬರ್ 17 ಚಿತ್ರದ ಟ್ರೈಲರ್ ರಿಲೀಸ್ ಆಗುತ್ತಿದೆ. ಈ ವಿಷಯದ ಅಧಿಕೃತ ಮಾಹಿತಿಯನ್ನ ಸ್ವತಃ ಅಲ್ಲು ಅರ್ಜುನ್ ಹಂಚಿಕೊಂಡಿದ್ದಾರೆ. ತಮ್ಮ ಪಾತ್ರದ ವಿಶೇಷ ಪೋಸ್ಟರ್ ಜೊತೆಗೆ ಟ್ರೈಲರ್ ರಿಲೀಸ್ ವಿವರ ಶೇರ್ ಮಾಡಿಕೊಂಡಿದ್ದಾರೆ. ಈ ಟ್ರೈಲರ್ ರಿಲೀಸ್ನ ಇನ್ನಷ್ಟು ವಿವರ ಇಲ್ಲಿದೆ .

ಪುಷ್ಪಾ–2 ಚಿತ್ರದ ಟ್ರೈಲರ್ ರಿಲೀಸ್ ಆಗುತ್ತಿದೆ. ಬಹುತೇಕ ಎಲ್ಲ ಕೆಲಸ ಮುಗಿಸಿರೋ ಸಿನಿಮಾ ತಂಡ, ಇದೀಗ ಟ್ರೈಲರ್ ರಿಲೀಸ್ ಹಂತಕ್ಕೆ ಬಂದಿದೆ. ಇದೇ ನವೆಂಬರ್–17 ರಂದು ಚಿತ್ರದ ಟ್ರೈಲರ್ ರಿಲೀಸ್ ಸಿದ್ಧತೆ ಕೂಡ ಮಾಡಿಕೊಳ್ಳುತ್ತಿದೆ. ಈಗಾಗಲೇ ಟ್ರೈಲರ್ ರಿಲೀಸ್ ಟೈಮ್ ಕೂಡ ಫಿಕ್ಸ್ ಆಗಿದೆ.

ಪುಷ್ಪಾ–2 ಸಿನಿಮಾದ ಟ್ರೈಲರ್ ಅಲ್ಲಿ ಏನೆಲ್ಲ ವಿಷಯ ರಿವೀಲ್ ಆಗ್ತದೋ ಏನೋ? ಆದರೆ, ಈಗಲೇ ಕುತೂಹಲ ಜಾಸ್ತಿ ಆಗುತ್ತಿದೆ. ಈ ಮೊದಲೇ ಬಂದಿರೋ ಟೀಸರ್ ಬೇರೆ ರೀತಿಯ ಕ್ಯೂರಿಯೋಸಿಟಿ ಕ್ರಿಯೇಟ್ ಮಾಡಿದೆ. ಹಾಡುಗಳಲ್ಲೂ ಹೊಸ ಫೀಲ್ ಇದ್ದೇ ಇದೆ ಬಿಡಿ.

ಪುಷ್ಪಾ–2 ಚಿತ್ರದ ಟ್ರೈಲರ್ ರಿಲೀಸ್ ಆಗುತ್ತಿದೆ. ಪಾಟ್ನಾದಲ್ಲಿಯೇ ಈ ಒಂದು ಟ್ರೈಲರ್ ಬಿಡುಗಡೆ ಆಗುತ್ತಿದೆ. ಸಂಜೆ 6.03 ಗಂಟೆ ಹೊತ್ತಿಗೆ ಟ್ರೈಲರ್ ರಿಲೀಸ್ ಪ್ಲಾನ್ ಆಗಿದೆ. ಈ ಮೂಲಕ ಅಲ್ಲು ಅರ್ಜುನ್ ತಮ್ಮ ಅಭಿಮಾನಿಗಳಿಗೆ ಇಡೀ ಪುಷ್ಪಾ–2 ಚಿತ್ರದ ಒಂದು ಝಲಕ್ ಕೂಡ ಕೊಡಲಿದ್ದಾರೆ.

ಪುಷ್ಪಾ–2 ಸಿನಿಮಾದಲ್ಲಿ ರಶ್ಮಿಕಾ ಮಂದಣ್ಣ ಇದ್ದಾರೆ. ಶ್ರೀಲೀಲಾ ಇಲ್ಲಿ ಸ್ಪೆಷಲ್ ಸಾಂಗ್ ಮಾಡುತ್ತಿದ್ದಾರೆ. ದೇವಿ ಶ್ರೀ ಪ್ರಸಾದ್ ಸಂಗೀತ ಮೋಡಿ ಇದ್ದೇ ಇದೆ ಬಿಡಿ. ಈಗಾಗಲೇ ರಿಲೀಸ್ ಆದ ಕಪಲ್ ಸಾಂಗ್ ವೈರಲ್ ಆಗಿದೆ. ಸಂಗೀತ ಹೊಸ ಅಲೆಯನ್ನು ಎಬ್ಬಿಸಿದೆ ನೋಡಿ.

ಡಿಸೆಂಬರ್–5 ರಂದು ಪುಷ್ಪಾ–2 ಸಿನಿಮಾ ರಿಲೀಸ್ ಆಗುತ್ತಿದೆ. ಎಲ್ಲೆಡೆ ಎಲ್ಲ ಭಾಷೆಯಲ್ಲೂ ಈ ಚಿತ್ರ ಬರ್ತಿದೆ. ಈಗಾಗಲೇ ಮೊದಲ ಭಾಗದಲ್ಲಿ ಅಲ್ಲು ಅರ್ಜುನ್ ಎಲ್ಲರ ದಿಲ್ ಕದ್ದು ಬಿಟ್ಟಿದ್ದಾರೆ. ಸ್ಟೈಲ್ನಿಂದ ಹಿಡಿದು, ಹೇಳಿರೋ ಡೈಲಾಗ್ಗಳೆಲ್ಲ ಇನ್ನೂ ಕ್ರೇಜ್ ಉಳಿಸಿಕೊಂಡಿವೆ.

## ಜೀರ್ಣಕ್ರಿಯೆಗೆ ಉತ್ತಮ ಔಷಧಿ ವೀಳ್ಯದೆಲೆ



### ಹೆಲ್ತ್ ಟಿಪ್ಸ್

ವೀಳ್ಯದೆಲೆಗೆ ಭಾರತೀಯ ಸಂಸ್ಕೃತಿಯಲ್ಲಿ ಮಹತ್ವದ ಸ್ಥಾನವಿದೆ. ಯಾವುದೇ ಶುಭ ಸಮಾರಂಭಗಳಿರಲಿ, ಹಬ್ಬ ಹರಿದಿನಗಳಿರಲಿ, ಮನೆಗೆ ಬಂದವರಿಗೆ ಉಡುಗೊರೆ ಕೊಡಲು ವೀಳ್ಯದ ಎಲೆ ಬೇಕೇ ಬೇಕು.

ಜೊತೆಗೆ ಮದುವೆ, ಹಬ್ಬಗಳಲ್ಲಿ ಭೂರಿ ಭೋಜನದ ನಂತರ ಎಲೆ ಅಡಿಕೆ ಇಲ್ಲ ಅಂದ್ರೆ, ಹೇಗೆ ಹೇಳಿ.

ಊಟದ ನಂತರ ತಾಂಬೂಲ ಹಾಕಿಕೊಂಡ್ರೇನೆ ಊಟ ಪರಿಪೂರ್ಣವಾಗುವುದು. ಶುಭದ ಸಂಕೇತವಾಗಿರುವ ಈ ವೀಳ್ಯದ ಎಲೆ ಮನುಷ್ಯನ ದೇಹದ ಜೀರ್ಣಕ್ರಿಯೆಗೆ ಉತ್ತಮ ಔಷಧಿಯಾಗಿದೆ.

ಇನ್ನು ವೀಳ್ಯದ ಎಲೆ ಬಾಡಿ ಹೋಗಿದೆ ಅಂತಾ ಎಷ್ಟೋ ಮಂದಿ ಬಿಸಾಡುತ್ತಾರೆ. ಆದ್ರೆ, ಇನ್ಮುಂದೆ ಹಾಗೆ ಮಾಡಬೇಡಿ. ಹೌದು, ಒಣಗಿ ಹೋದ ಎಲೆಯನ್ನು ಬಾಣಲೆಯಲ್ಲಿ ಸ್ವಲ್ಪ ತುಪ್ಪ ಹಾಕಿ ಗರಿಗರಿಯಾಗಿ ಹುರಿದು ನಂತರ ಅದಕ್ಕೆ ಸ್ವಲ್ಪ ಅಡಿಕೆ ತುಂಡುಗಳು, ಎರಡು ಏಲಕ್ಕಿ, ಒಂದೆರಡು ಲವಂಗ, ಚಿಟಿಕೆ ಸುಣ್ಣ , 1 ಚಮಚ ಸಕ್ಕರೆ ಹಾಕಿ ನುಣ್ಣಗೆ ಮಿಕ್ಸಿ ಮಾಡಿ.

ಹೀಗೆ ಪುಡಿ ಮಾಡಿಟ್ಟುಕೊಂಡ ಅಡಿಕೆ–ಎಲೆ ಪುಡಿಯನ್ನು ಪ್ರತಿದಿನ ಊಟದ ನಂತರ ತಿಂದ್ರೆ, ಜೀರ್ಣಕ್ರಿಯೆ ಉತ್ತಮವಾಗುತ್ತೆ. ಜೊತೆಗೆ ಆರೋಗ್ಯಕ್ಕೂ ಒಳ್ಳೆಯದು.

## ಮನೆಯಲ್ಲೇ ಮಾಡಿ ಮ್ಯಾನಿಕ್ಯೂರ್

### ಬ್ಯೂಟಿ ಟಿಪ್ಸ್

ಉಗುರುಗಳನ್ನು ಕತ್ತರಿಸಿ ಅದನ್ನು ಶುಚಿಯಾಗಿ, ಆಕರ್ಷಕವಾಗಿ ಇಡುವುದು ಒಂದು ಕಲೆ. ಇಲ್ಲಿ ನಾವು ಬಿಳಿ ಬಣ್ಣದ ಉಗುರಿನ ಸೌಂದರ್ಯ ಪಡೆಯುವುದು ಹೇಗೆ ಅಂತ ವಿವರಿಸಿದ್ದೇವೆ ನೋಡಿ.ಎರಡು ಪಾತ್ರೆಯಲ್ಲಿ ಉಗುರು ಬೆಚ್ಚಗಿನ ನೀರು ಹಾಗೂ ಅದಕ್ಕೆ 1 ಚಮಚ ಉಪ್ಪು ಹಾಕಿ ಆ ನೀರಿನಲ್ಲಿ ಕೈಯನ್ನು ಇಳಿಬಿಟ್ಟು 10 ನಿಮಿಷ ರಿಲ್ಯಾಕ್ಸ್ ಆಗಿ.ಕಾಲನ್ನು ಬಕೆಟ್ ನೀರಿನಲ್ಲಿ ಇಳಿಬಿಟ್ಟು ಕೂರಿ. ನಂತರ ನಿಂಬೆ ಹಣ್ಣಿನಿಂದ ಉಗುರುಗಳನ್ನು ತಿಕ್ಕಿ, ನಂತರ ಮತ್ತೆ ಉಗುರು ಬೆಚ್ಚಗಿನ ನೀರಿನಲ್ಲಿ ಕೈ ಮತ್ತು ಕಾಲುಗಳನ್ನು ತೊಳೆಯಿರಿ. ನಂತರ ಟವಲ್ ನಿಂದ ಉಗುರುಗಳನ್ನು ಒರೆಸಿ, ನಂತರ ಉಗುರಿಗೆ ಶೇಪ್ ಕೊಡಿ. ಅದಾದ ನಂತರ ಉಗುರನ್ನು ಆಲೀವ್ ಎಣ್ಣೆ ಅಥವಾ ಬಾದಾಮಿ ಎಣ್ಣೆ, ಹರಳೆಣ್ಣೆಯಿಂದ ಮಸಾಜ್ ಮಾಡಿ. ಇಷ್ಟು ಮಾಡಿದರೆ ಉಗುರುಗಳು ಶೈನಿಯಾಗಿರುತ್ತದೆ. ಉಗುರಿಗೆ ಉತ್ತಮ ಗುಣ ಮಟ್ಟದ ನೇಲ್ ಪಾಲಿಷ್ ಹಚ್ಚಿ. ಅಲ್ಲದೆ ನೇಲ್ ಪಾಲಿಷ್ ಹಚ್ಚುವ ಮುನ್ನ ಪ್ರೀಮಿಯರ್ ಅಥವಾ ಬೇಸ್ ಕೋಟ್ ಹಚ್ಚಿ. ಆಗಾಗ ನೇಲ್ ಪಾಲಿಷ್ ಗೆ ಬ್ರೇಕ್ ಕೊಟ್ಟು ನೈಸರ್ಗಿಕವಾಗಿ ಇರಿ.



## ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರದಲ್ಲಿ ಗ್ರೇಸ್ ಹಾಪರ್ ಸೆಲೆಬ್ರೇಷನ್ ಇಂಡಿಯಾ




ಅನಿತಾಬಿ ಆರ್ಗ್ ಇಂಡಿಯಾ ಸಂಸ್ಥೆಯು ದೇಶದಲ್ಲಿ ಮಹಿಳೆಯರ ಸಬಲೀಕರಣ ನಾನ್ ಬೈನರಿ ತಂತ್ರಜ್ಞಾನಗಳಲ್ಲಿ ತರಬೇತಿ ನೀಡಲು ಮುಂಚೂಣಿಯ ಕಾರ್ಯಕ್ರಮ ಗ್ರೇಸ್ ಹಾಪರ್ ಸೆಲೆಬ್ರೇಷನ್ ಇಂಡಿಯಾ(ಉಊಂಆ) 2024 ಆಯೋಜಿಸಿದೆ. ಇದು ನವೆಂಬರ್ 20–22ರಂದು ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರ (ಬಿಐಇಸಿ)ಯಲ್ಲಿ ನಡೆಯಲಿದೆ. ಈ ವರ್ಷದ ವಿಷಯ 'ಮಿ+ವಿ, ಕಲೆಕ್ಟಿವ್ ಪವರ್ (ನಾನು ಮತ್ತು ನಾವು, ಒಗ್ಗಟ್ಟಿನ ಶಕ್ತಿ)'' ಎಂದಿದ್ದು ಅದು ತಂತ್ರಜ್ಞಾನ ಕ್ಷೇತ್ರದ ವೃತ್ತಿಪರರಿಗೆ ಸ್ಫೂರ್ತಿ ನೀಡಲು, ಜಾಲ ನಿರ್ಮಿಸಿಕೊಳ್ಳಲು ಮತ್ತು ಎಲ್ಲರನ್ನೂ ಒಳಗೊಳ್ಳುವ ಆವಿಷ್ಕಾರದ ಭವಿಷ್ಯದತ್ತ ಮುನ್ನಡೆಯಲು ಒಗ್ಗೂಡಿಸುತ್ತದೆ. ಪರಿಣಾಮದ ಪರಂಪರೆ ಹೊಂದಿರುವ ಜಿ.ಎಚ್.ಸಿ.ಐ. ಹಿಂದಿನ ಆವೃತ್ತಿಯಲ್ಲಿ ಭಾರತದಾದ್ಯಂತ 205 ನಗರಗಳಿಂದ 6,529 ಮಂದಿ ಭಾಗವಹಿಸಿದ್ದು ಹಿಮಾಚಲ ಪ್ರದೇಶದ ಹಮಿರ್ ಪುರದವರೆಗೂ ತಲುಪಿದೆ ಮತ್ತು ಆಫ್ಘನಿಸ್ತಾನ, ಆಸ್ಟ್ರೇಲಿಯಾ, ಬಾಂಗ್ಲಾದೇಶ, ಬೊಲಿವಿಯಾ, ಸಿಂಗಪೂರ್,ಯು.ಕೆ. ಮತ್ತು ಯು.ಎಸ್.ಎ. ಒಳಗೊಂಡು 9 ದೇಶಗಳಿಂದ ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದವರು ವೃತ್ತಿಯಲ್ಲಿ ಪ್ರಾರಂಭಿಕ ಹಂತದ ವೃತ್ತಿಪರರು, ಮಧ್ಯಮ ಹಂತದ ವೃತ್ತಿಪರರು,, ವಿದ್ಯಾರ್ಥಿಗಳು, ಎಕ್ಸಿಕ್ಯೂಟಿವ್ ಗಳು ಮತ್ತು ಹಿರಿಯ ಟೆಕ್ನಾಲಜಿಸ್ಟ್ ಗಳಿದ್ದು ಅದು ವಿಸ್ತಾರ ವೃತ್ತಿಯ ಹಂತಗಳು ಮತ್ತು ಅನುಭವಗಳನ್ನು ಬಿಂಬಿಸುತ್ತದೆ.

ಜಿ.ಎಚ್.ಸಿ.ಐ.ನ ಜಾಗತಿಕ ವ್ಯಾಪ್ತಿಯು ವಿಶ್ವದಾದ್ಯಂತ 1.48 ಬಿಲಿಯನ್ ಮೀರಿ ತಲುಪಿದ್ದು 144 ದೇಶಗಳಲ್ಲಿ 106,000ಕ್ಕೂ ಹೆಚ್ಚು ಜನರನ್ನು ತನ್ನ ಪರಿವರ್ತನೀಯ ಕಾರ್ಯಕ್ರಮದ ಮೂಲಕ ತಲುಪಿದೆ. ಈ ವರ್ಷ ಜಿ.ಎಚ್.ಸಿ.ಐ. 24 ತನ್ನ ವೇಗವನ್ನು ಮುಂದುವರಿಸಿದ್ದು ವೈಯಕ್ತಿಕ ಹಾಗೂ ವರ್ಚುಯಲ್ ರೀತಿಯಲ್ಲಿ ಭಾಗವಹಿಸುವವರಿಗೆ ಹೈಬ್ರಿಡ್ ಅನುಭವ ಸೃಷ್ಟಿಸಲಿದ್ದು ತಂತ್ರಜ್ಞಾನದಲ್ಲಿ ವೈವಿಧ್ಯತೆ, ಸಮಾನತೆ, ಒಳಗೊಳ್ಳುವಿಕೆ ಮತ್ತು ಸೇರ್ಪಡೆಗೆ ವಿನ್ಯಾಸಗೊಳಿಸಲಾದ ಅಸಾಧಾರಣ ಕಲಿಕೆ, ಜಾಲ ನಿರ್ಮಾಣ ಮತ್ತು ಮತ್ತು ಪ್ರಗತಿಯ ಅವಕಾಶಗಳನ್ನು ಒದಗಿಸುತ್ತದೆ. ಜಿ.ಎಚ್.ಸಿ.ಐ. 24 ಪ್ರಸ್ತುತದ ಉದ್ಯಮದ ಪ್ರವೃತ್ತಿಗಳಿಗೆ ರೂಪಿಸಲಾದ ವಿಶಿಷ್ಟ ಕಲಿಕಾ ಟ್ರ್ಯಾಕ್ ಗಳನ್ನು ಒದಗಿಸಲಿದ್ದು ಅದು ಭಾಗವಹಿಸುವವರಿಗೆ ಕ್ರಿಯಾತ್ಮಕ ಕೌಶಲ್ಯಗಳನ್ನು ನೀಡುತ್ತದೆ. ಇವುಗಳಲ್ಲಿ ಎಐ ಮತ್ತು ಎಂಎಲ್ ಟ್ರ್ಯಾಕ್, ಕ್ಲೌಡ್,ಐಒಟಿ ಮತ್ತು ಸೈಬರ್ ಸೆಕ್ಯುರಿಟಿ ಟ್ರ್ಯಾಕ್, ಎಕ್ಸಿಕ್ಯೂಟಿವ್ ಟ್ರ್ಯಾಕ್, ಮೀಡಿಯಾ ಟ್ರ್ಯಾಕ್, ಟೆಕ್ ಸ್ಕೂಲ್ ಫಾರ್ ಸೋಷಿಯಲ್ ಗುಡ್ ಟ್ರ್ಯಾಕ್ ಮತ್ತು ಸ್ಕಾಲರ್ ಶಿಪ್ ಮತ್ತು ಪೋಸ್ಟರ್ ಟ್ರ್ಯಾಕ್ ಒಳಗೊಂಡಿವೆ. ವಿಶ್ವದಾದ್ಯಂತ ಟೆಕ್ನಾಲಜಿಸ್ಟ್ ಗಳು ಜಿ.ಎಚ್.ಸಿ.ಐ ಹ್ಯಾಕಥಾನ್ ಮೂಲಕ ಸಹಯೋಗ ಹೊಂದುವ ಮೂಲಕ ಸಕಾರಾತ್ಮಕ ಬದಲಾವಣೆಗೆ ಎಐ ಅನ್ನು ಸಾಧನವಾಗಿ ಹೊಂದಬಹುದು. ಹೆಚ್ಚುವರಿಯಾಗಿ ಇನ್ನೊವೇಷನ್ ಶೋಕೇಸ್ ಮಹಿಳೆಯರಿಂದ ಹೊಸ ಪರಿಹಾರಗಳು ಮತ್ತು ತಂತ್ರಜ್ಞಾನದಲ್ಲಿ ನಾನ್–ಬೈನರಿ ಧ್ವನಿಗಳನ್ನು ಎತ್ತಿ ತೋರಿಸಲಿದ್ದು ಅದು ಸೃಜನಶೀಲತೆ ಮತ್ತು ಪರಿಣಾಮವನ್ನು ಹೆಚ್ಚಿಸುತ್ತದೆ.

ವೆಲ್ ನೆಸ್ ಝೋನ್ ಗಳು ಮಾನಸಿಕ ಮತ್ತು ದೈಹಿಕ ಸ್ವಾಸ್ಥ್ಯಕ್ಕೆ ಆದ್ಯತೆ ನೀಡುತ್ತಿದ್ದು ಜಿ.ಎಚ್.ಸಿ.ಐ.24 ವೃತ್ತಿಪರ ಪ್ರಗತಿಯೊಂದಿಗೆ ಒಳಗೊಳ್ಳುವಿಕೆಗೆ ಒತ್ತು ನೀಡುತ್ತದೆ. ಭಾರತದಾದ್ಯಂತ ಈ ಕಾರ್ಯಕ್ರಮದ ಮಲ್ಟಿ–ಸಿಟಿ ಹಾಪರ್ ರೋಡ್ ಶೋಗಳು ಬೆಂಗಳೂರಿನ ಆಚೆಗೂ ಜಿ.ಎಚ್.ಸಿ.ಐ. ಪರಿಣಾಮವನ್ನು ಹೆಚ್ಚಿಸುತ್ತಿದ್ದು ಸ್ಥಳೀಯ ಭಾಗವಹಿಸುವಿಕೆ ಉತ್ತೇಜಿಸುತ್ತವೆ.

ಅನಿತಾಬಿ.ಆರ್ಗ್ ಅಧ್ಯಕ್ಷೆ ಮತ್ತು ಸಿಇಒ ಬ್ರೆಂಡಾ ಡಾರ್ಡೆನ್ ವಿಲ್ಕರ್ಸನ್, ''ಜಿ.ಎಚ್.ಸಿ.ಐ. ಸಂಭ್ರಮಾಚರಣೆಗಿಂತ ಹೆಚ್ಚಿನದಾಗಿದೆ; ಇದು ಒಗ್ಗಟ್ಟಿನ ಪ್ರಗತಿ ಮತ್ತು ಸದೃಢತೆಯ ಶಕ್ತಿಯುತ ಚಳವಳಿಯಾಗಿದೆ. ನಾವು ಪ್ರತಿ ಮಹಿಳೆಯ ಸಾಮರ್ಥ್ಯದಲ್ಲಿ ನಂಬಿಕೆ ಇರಿಸಿದ್ದೇವೆ ಮತ್ತು ತಂತ್ರಜ್ಞಾನದಲ್ಲಿ ನಾನ್–ಬೈನರಿ ವ್ಯಕ್ತಿಯು ಎಲ್ಲರನ್ನೂ ಒಳಗೊಳ್ಳುವ ಆವಿಷ್ಕಾರವನ್ನು ರೂಪಿಸುತ್ತಾರೆ ಮತ್ತು ಜಿ.ಎಚ್.ಸಿ.ಐ. 24 ಆ ಸಾಮರ್ಥ್ಯವನ್ನು ಅನಾವರಣಗೊಳಿಸಲು ವೇದಿಕೆ ಒದಗಿಸುತ್ತದೆ'' ಎಂದರು.

ಅನಿತಾಬಿ.ಆರ್ಗ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕಿ ಶ್ರೇಯಾ ಕೃಷ್ಣನ್, ''ಜಿ.ಎಚ್.ಸಿ.ಐ.24 ಮಿ+ವಿಯ ಸ್ಫೂರ್ತಿ,ಒಗ್ಗಟ್ಟಿನ ಶಕ್ತಿಯನ್ನು ಮೈಗೂಡಿಸಿಕೊಂಡಿದ್ದು ದೇಶಾದ್ಯಂತ ಎಲ್ಲರ ಧ್ವನಿಗಳನ್ನು ಅರ್ಥಪೂರ್ಣ ಬದಲಾವಣೆಗೆ ಒಟ್ಟಿಗೆ ತರುತ್ತಿದೆ. ಈ ಸಹಯೋಗವು ತಂತ್ರಜ್ಞಾನದಲ್ಲಿ ವೈವಿಧ್ಯತೆ, ಒಳಗೊಳ್ಳುವಿಕೆ ಮತ್ತು ಸಮಾನತೆಗೆ ನಮ್ಮ ಬದ್ಧತೆಯನ್ನು ಬಿಂಬಿಸುತ್ತದೆ'' ಎಂದರು.

ಗೂಗಲ್ (ಪ್ಲಾಟಿನಂ ಪಾರ್ಟ್ನರ್), ವೆಲ್ಸ್ ಫಾರ್ಗೊ (ಡೈಮಂಡ್ ಪಾರ್ಟ್ನರ್) ಮತ್ತು ಉಬರ್ ಮತ್ತು ಅಮೆರಿಕನ್ ಎಕ್ಸ್ ಪ್ರೆಸ್ (ಗೋಲ್ಡ್ ಪಾರ್ಟ್ನರ್ಸ್) ನೊಂದಿಗೆ ಜಿ.ಎಚ್.ಸಿ.ಐ 24 ವ್ಯಕ್ತಿಗಳು, ಸಂಸ್ಥೆಗಳು ಮತ್ತು ಶೈಕ್ಷಣಿಕ ಸಂಸಸ್ಥೆಗಳ ವಿಶಿಷ್ಟ ಸಂಯೋಜನೆಯನ್ನು ಪ್ರತಿನಿಧಿಸುತ್ತದೆ. ಇದು ಜಾಲ ನಿರ್ಮಾಣ, ಕಲಿಕೆ ಮತ್ತು ಮಾರ್ಗದರ್ಶನದ ಅವಕಾಶಗಳನ್ನು ಒದಗಿಸಿ ಸಹಪಾಠಿಗಳು, ಮಾರ್ಗದರ್ಶಕರು, ಹೂಡಿಕೆದಾರರು ಮತ್ತು ಸಂಭವನೀಯ ಉದ್ಯೋಗದಾತರೊಂದಿಗೆ ಸಂಪರ್ಕಿಸುತ್ತದೆ.

ಸಂಸ್ಥೆಗಳಿಗೆ ಜಿ.ಎಚ್.ಸಿ.ಐ ನೇಮಕ ಮತ್ತು ಕೌಶಲ್ಯವೃದ್ಧಿಯ ಸಂಪನ್ಮೂಲಗಳು ಮತ್ತು ತಂತ್ರಜ್ಞಾನದಲ್ಲಿ ವಿಸ್ತಾರ ಪ್ರತಿಭೆಯನ್ನು ಉಳಿಸಿಕೊಳ್ಳುವ ಕಾರ್ಯತಂತ್ರಗಳನ್ನು ಒದಗಿಸುತ್ತದೆ. ಶಿಕ್ಷಣ ಸಂಸ್ಥೆಗಳಿಗೆ ಉದ್ಯಮದ ಮಾನದಂಡಗಳಿಗೆ ವಿದ್ಯಾರ್ಥಿಗಳನ್ನು ಸಿದ್ಧಪಡಿಸುವಂತೆ ಕೌಶಲ್ಯಗಳ ಅಂತರ ತುಂಬುವಂತೆ ಕಾರ್ಯಕ್ರಮಗಳನ್ನು ಸಿದ್ಧಪಡಿಸಿ ಅನುಕೂಲ ಒದಗಿಸುತ್ತದೆ.

## ರಾಶಿ ಭವಿಷ್ಯ

ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಸ್ತ್ರೀಯರಿಗೆ ಖರ್ಚು ಜಾಸ್ತಿ, ವ್ಯಾಪಾರ ವ್ಯವಹಾರಗಳಲ್ಲಿ ಲಾಭ, ನಿಮ್ಮ ಪ್ರಯತ್ನಗಳಿಗೆ ಉತ್ತಮ ಫಲ.

**ವೃಷಭ:** ಕೌಟುಂಬಿಕ ಅನ್ಯೂನತೆ, ನೆಮ್ಮದಿಯ ವಾತಾವರಣ, ಗೌರವ ಪ್ರಾಪ್ತಿ, ಆರ್ಥಿಕ ಪರಿಸ್ಥಿತಿ ಏರುಪೇರು.

**ಮಿಥುನ:** ಶುಭಕಾರ್ಯಗಳಲ್ಲಿ ಭಾಗಿ, ಆದಾಯ ಉತ್ತಮವಾಗುತ್ತೆ, ಸ್ತ್ರೀ ಲಾಭ, ಪ್ರತಿಭೆಗೆ ತಕ್ಕ ಫಲ, ವಾಹನದಿಂದ ತೊಂದರೆ.

**ಕಟಕ:** ಸಣ್ಣ ಪುಟ್ಟ ವಿಷಯಗಳಿಂದ ಕಲಹ, ಕೆಲಸ ಕಾರ್ಯಗಳಲ್ಲಿ ವಿಳಂಬ, ನಂಬಿಕೆ ದ್ರೋಹ, ಸ್ಥಳ ಬದಲಾವಣೆ.

**ಸಿಂಹ:** ಅಧಿಕಾರಿಗಳಿಂದ ಪ್ರಶಂಸೆ, ಗುರು ಹಿರಿಯರಲ್ಲಿ ಭಕ್ತಿ, ಮನಶಾಂತಿ, ವಿರೋಧಿಗಳಿಂದ ದೂರವಿರಿ.

**ಕನ್ಯಾ:** ಆಸ್ತಿಯ ವಿಚಾರದಲ್ಲಿ ಕಲಹ, ಅನಗತ್ಯ ತಿರುಗಾಟ, ಆಲಸ್ಯ ಮನೋಭಾವ, ತಾಯಿಯಿಂದ ನೆರವು, ಅಧಿಕ ಖರ್ಚು.

**ತುಲಾ:** ಹಣಕಾಸಿನ ತೊಂದರೆ, ಖರ್ಚಿನ ಬಗ್ಗೆ ನಿಯಂತ್ರಣ ಅಗತ್ಯ, ಗೆಳೆಯರ ಸಹಕಾರ, ಅಕಾಲ ಭೋಜನ.

**ವೃಶ್ಚಿಕ:** ಹಣಕಾಸಿನ ತೊಂದರೆ, ಖರ್ಚಿನ ಬಗ್ಗೆ ನಿಯಂತ್ರಣ ಅಗತ್ಯ, ಮಕ್ಕಳ ಅಗತ್ಯಕ್ಕೆ ಖರ್ಚು ಹೆಚ್ಚುವುದು.

**ಧನಸ್ಸು:** ಕೌಟುಂಬಿಕ ಜೀವನ ತೃಪ್ತಿ, ಆರ್ಥಿಕ ಲಾಭ, ಪ್ರಭಾವಿ ವ್ಯಕ್ತಿಗಳ ಪರಿಚಯ, ಅನ್ಯರಲ್ಲಿ ಪ್ರೀತಿ.

**ಮಕರ:** ಸ್ಥಿರಾಸ್ತಿ ವಿಷಯದಲ್ಲಿ ಎಚ್ಚರ ಅಗತ್ಯ, ವಿರೋಧಿಗಳ ಮೇಲೆ ಒಂದು ಕಣ್ಣಿರಲಿ, ಆರೋಗ್ಯದ ಬಗ್ಗೆ ಎಚ್ಚರ.

**ಕುಂಭ:** ಕೆಲಸದಲ್ಲಿ ಒತ್ತಡ ಜಾಸ್ತಿ, ಆದಾಯ ಉತ್ತಮ, ಹಿರಿಯರ ಸಲಹೆ ಲಾಭಕರ.

**ಮೀನ:** ವಾದ ವಿವಾದಗಳಲ್ಲಿ ಎಚ್ಚರ, ಸ್ತ್ರೀಯರ ಆರೋಗ್ಯ ಏರುಪೇರು, ಉದ್ಯೋಗದಲ್ಲಿ ಪ್ರಗತಿ, ಶತ್ರು ಭಾದೆ.

## ವಿಶ್ವ ನ್ಯುಮೋನಿಯಾ ದಿನ




ವಿಶ್ವ ನ್ಯುಮೋನಿಯಾ ದಿನವು ನವೆಂಬರ್ 12 ರಂದು ಮತ್ತು ಪ್ರತಿ ವರ್ಷದಂತೆ, ಈ ರೋಗದ ವಿರುದ್ಧದ ಹೋರಾಟದಲ್ಲಿ ಒಟ್ಟಾಗಿ ನಿಲ್ಲುವ ಮತ್ತು ಕ್ರಮಕ್ಕೆ ಒತ್ತಾಯಿಸುವ ಅಗತ್ಯವನ್ನು ಅರ್ಥಮಾಡಿಕೊಳ್ಳಲು ಜನರಲ್ಲಿ ಜಾಗೃತಿ ಮೂಡಿಸಲು ಸಮರ್ಪಿಸಲಾಗಿದೆ. ನ್ಯುಮೋನಿಯಾ ಮಕ್ಕಳು ಮತ್ತು ವಯಸ್ಕರಲ್ಲಿ ವಿಶ್ವದ ಅತಿದೊಡ್ಡ ಸಾಂಕ್ರಾಮಿಕ ಕೊಲೆಗಾರ. ಸರಾಸರಿಯಾಗಿ, ಇದು ಏಡ್ಸ್, ದಡಾರ ಮತ್ತು ಮಲೇರಿಯಾದಿಂದ ಉಂಟಾಗುವ ಸಂಯೋಜಿತ ಮರಣ ಪ್ರಮಾಣಕ್ಕಿಂತ ಹೆಚ್ಚು ಮಕ್ಕಳನ್ನು ಕೊಲ್ಲುತ್ತದೆ. ಶ್ವಾಸಕೋಶದಲ್ಲಿ ಆಮ್ಲಜನಕದ ಕೊರತೆಯು ನಮ್ಮ ದೇಹಕ್ಕೆ ಆಮ್ಲಜನಕ ಎಷ್ಟು ಮುಖ್ಯ ಎಂದು ನಮಗೆ ಅರಿವಾಗುತ್ತದೆ – ಮತ್ತು ಶ್ವಾಸಕೋಶದ ಆರೋಗ್ಯವನ್ನು ವಿಶ್ವಾದ್ಯಂತ ಆದ್ಯತೆಯನ್ನಾಗಿ ಮಾಡುತ್ತದೆ. ಈ ವಿಶ್ವ ನ್ಯುಮೋನಿಯಾ ದಿನ, ಆಮ್ಲಜನಕವು ನಮಗೆ ಎಷ್ಟು ನಿರ್ಣಾಯಕವಾಗಿದೆ ಮತ್ತು ನ್ಯುಮೋನಿಯಾ ವಿರುದ್ಧದ ನಮ್ಮ ಹೋರಾಟದಲ್ಲಿ ಏನು ಮಾಡಬಹುದು ಎಂಬುದನ್ನು ಅರ್ಥಮಾಡಿಕೊಳ್ಳಲು ನಾವು ಒಟ್ಟಾಗಿ ಬರಲು ಎದುರು ನೋಡುತ್ತಿದ್ದೇವೆ. ಉಸಿರಾಟದ ಕಾಯಿಲೆಗಳು ಇದೀಗ ಸಾಕಷ್ಟು ಪ್ರಮುಖವಾಗಿರುವುದರಿಂದ, ಇದು ವಿಶ್ವ ನ್ಯುಮೋನಿಯಾ ದಿನವನ್ನು ಇನ್ನಷ್ಟು ಪ್ರಸ್ತುತವಾಗಿಸುತ್ತದೆ. ಚೈಲ್ಡ್ ನ್ಯುಮೋನಿಯಾ ವಿರುದ್ಧ ಜಾಗತಿಕ ಒಕ್ಕೂಟವು 2009 ರಲ್ಲಿ ಮೊದಲ ವಿಶ್ವ ನ್ಯುಮೋನಿಯಾ ದಿನವನ್ನು ಆಚರಿಸಿತು. ನ್ಯುಮೋನಿಯಾದ ತೀವ್ರತೆಯ ಸತ್ಯಗಳನ್ನು ಸಾರ್ವಜನಿಕ ಜ್ಞಾನಕ್ಕೆ ತರುವುದು ಮತ್ತು ನ್ಯುಮೋನಿಯಾದ ನಿರ್ಲಕ್ಷ್ಯದ ಸ್ಥಿತಿಗೆ ಜಾಗತಿಕ ಗಮನವನ್ನು ತರಲು ಕೈಜೋಡಿಸುವುದು ಅವರ ಉದ್ದೇಶವಾಗಿತ್ತು. ಎಲ್ಲರಿಗೂ ಆರೋಗ್ಯಕರ ಶ್ವಾಸಕೋಶಗಳು ಎಂಬ ಸಾಮಾನ್ಯ ಧ್ಯೇಯವಾಕ್ಯದೊಂದಿಗೆ ಈ ದಿನವನ್ನು ಆಚರಿಸಲಾಯಿತು, ಮತ್ತು ಇದನ್ನು 2009 ರಲ್ಲಿ ಮೊದಲ ವಿಶ್ವ ನ್ಯುಮೋನಿಯಾ ದಿನದಿಂದ ನಿರ್ವಹಿಸಲಾಗುತ್ತಿದೆ. ಚಾಲನೆಯಲ್ಲಿರುವ ಅಭಿಯಾನದ ಸುತ್ತಲಿನ ಧ್ಯೇಯವಾಕ್ಯಕ್ಕೆ ಸೇರ್ಪಡೆಗಳು ರೋಗದ ವಿರುದ್ಧ ಸಾಕಷ್ಟು ರಕ್ಷಣೆ ನೀಡಲು ಮತ್ತು ಚಿಕಿತ್ಸಾ ಕೇಂದ್ರಗಳನ್ನು ಮಾಡಲು ಒಳಗೊಂಡಿವೆ. ರೋಗದಿಂದ ಬಳಲುತ್ತಿರುವ ಜನರಿಗೆ ಪ್ರವೇಶಿಸಬಹುದು. ಮೊದಲ ವಿಶ್ವ ನ್ಯುಮೋನಿಯಾ ದಿನವನ್ನು ಆಚರಿಸಿದ ವರ್ಷ, ಇದು ಪ್ರತಿ ವರ್ಷ ಸರಿಸುಮಾರು 1.2 ಮಿಲಿಯನ್ ಮಕ್ಕಳನ್ನು ಕೊಲ್ಲುತ್ತಿತ್ತು. ಅಂತರರಾಷ್ಟ್ರೀಯ ಮತ್ತು ಜಾಗತಿಕ ಮಟ್ಟದಲ್ಲಿ ಈ ದಿನವನ್ನು ಆಚರಿಸಿದ ನಾಲ್ಕು ವರ್ಷಗಳಲ್ಲಿ, 2013 ರಲ್ಲಿ, ಘಊಔ ಮತ್ತು ಗಓಖಅಇಈ ನ್ಯುಮೋನಿಯಾ ಮತ್ತು ಅತಿಸಾರ ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕಾಗಿ ಸಮಗ್ರ ಜಾಗತಿಕ ಕ್ರಿಯಾ ಯೋಜನೆಯನ್ನು ಪ್ರಾರಂಭಿಸಿತು. ಮುಂದಿನ ನಾಲ್ಕು ವರ್ಷಗಳಲ್ಲಿ ನ್ಯುಮೋನಿಯಾ ಮತ್ತು ಅತಿಸಾರದ ಮೇಲೆ ಹೆಚ್ಚು ನಿಯಂತ್ರಣವನ್ನು ಸ್ಥಾಪಿಸುವ ಪ್ರಯತ್ನಗಳಲ್ಲಿ, ನ್ಯುಮೋನಿಯಾ ಮತ್ತು ಅತಿಸಾರ (ಜಿಎಪಿಪಿಡಿ) ಗಾಗಿ ಜಾಗತಿಕ ಕ್ರಿಯಾ ಯೋಜನೆಯನ್ನು ಸಾಧಿಸಲು ಸರ್ಕಾರಗಳನ್ನು ಬೆಂಬಲಿಸುವ ಮೊದಲ ಸಾರ್ವಜನಿಕ–ಖಾಸಗಿ ಸಹಭಾಗಿತ್ವವನ್ನು ಎವೆರಿ ಬ್ರೀತ್ ಕೌಂಟ್ಸ್ ಎಂಬ ಹೆಸರಿನಲ್ಲಿ ಮಾಡಲಾಯಿತು.

ಸಂಜೆ ಮುಗಿಲು
ಮಂಗಳವಾರ
12.11.2024





# ದೆಹಲಿ, ಮುಂಬೈನಲ್ಲಿ ಈರುಳ್ಳಿ ದರ ಕೆ.ಜಿ. 80 ರೂ.ಗೆ ಏರಿಕೆ 5 ವರ್ಷಗಳಲ್ಲೇ ಗರಿಷ್ಠ

**ನವದೆಹಲಿ:** ಕಳೆದ ಕೆಲವು ದಿನಗಳಿಂದ ದೆಹಲಿ, ಮುಂಬೈ ಸೇರಿ ಪ್ರಮುಖ ನಗರಗಳಲ್ಲಿ ಈರುಳ್ಳಿ ಬೆಲೆ ಗಣನೀಯವಾಗಿ ಗಗನಕ್ಕೇರುತ್ತಿದ್ದು, ಗ್ರಾಹಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. 40 ರಿಂದ 50 ರೂ.ನಷ್ಟಿದ್ದ ಈರುಳ್ಳಿ ಬೆಲೆ ಸಗಟು ಮಾರುಕಟ್ಟೆಯಲ್ಲಿ 70 ರಿಂದ 80 ರೂ.ಗಳಿಗೆ ಏರಿಕೆಯಾಗಿದೆ.

ಈರುಳ್ಳಿ ಬೆಲೆ ಏರಿಕೆ ಕಂಡಿರುವುದು ರೈತರ ಮೊಗದಲ್ಲಿ ಸಂಸತ ತಂದರೆ, ಮತ್ತೊಂದೆಡೆ ಜನರಿಗೆ ಕಣ್ಣೀರು ತರಿಸುವಂತಾಗಿದೆ. ದೆಹಲಿ ಮತ್ತು ಮುಂಬೈನಂತಹ ಮೆಟ್ರೋ ನಗರಗಳಲ್ಲಿ, ಪ್ರತಿ ಕೆಜಿ ಈರುಳ್ಳಿ ಬೆಲೆ ನವೆಂಬರ್‌ನಲ್ಲಿ 80 ರೂ.ಗಳಿಗೆ ತಲುಪಿದ್ದು, ಇದು ಕಳೆದ 5 ವರ್ಷಗಳಲ್ಲೇ ಗರಿಷ್ಠ ಮಟ್ಟ ತಲುಪಿದಂತಾಗಿದೆ. ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಮಾರಾಟಗಾರರೊಬ್ಬರು, ಈರುಳ್ಳಿ ಬೆಲೆ ಪ್ರತಿ ಕೆಜಿಗೆ 60 ರಿಂದ 70, 80 ರೂ.ಗಳಿಗೆ ಏರಿಕೆಯಾಗಿದೆ. ನಾವು ಮಾರಾಟ ಮಾಡಲು ಮಂಡಿಯಿಂದ ಪಡೆಯುತ್ತಿವೆ. ಅಲ್ಲಿ ಪಡೆಯುವ ಬೆಲೆ ಹಾಗೂ ಮಾರಾಟ ಮಾಡುವ ಬೆಲೆಗಳಿಗೆ ವ್ಯತ್ಯಾಸ ಇರುತ್ತದೆ. ಸಾಮಾನ್ಯವಾಗಿ ಬೆಲೆ ಏರಿಕೆಯಾದಂತೆ ಕೊಳ್ಳುವವರ ಸಂಖ್ಯೆ ಇಳಿಕೆಯಾಗುತ್ತಿತ್ತು. ಆದ್ರೆ ಈರುಳ್ಳಿ ಅಗತ್ಯ ವಸ್ತುಗಳಲ್ಲಿ ಒಂದಾಗಿರುವುದರಿಂದ ಜನರು ಖರೀದಿಸಲೇಬೇಕಾದ ಅನಿವಾರ್ಯತೆ ಬಂದೊದಗಿದೆ ಎಂದು ತಿಳಿಸಿದ್ದಾರೆ. ಇನ್ನೂ ಗ್ರಾಹಕರೊಬ್ಬರು ಬೆಲೆ ಏರಿಕೆ ಬಗ್ಗೆ ಮಾತನಾಡಿ, ತಮ್ಮ ಸಂಕಟ ಹಂಚಿಕೊಂಡಿದ್ದಾರೆ. ಈರುಳ್ಳಿಯ ಬೆಲೆಯು ಸೀಸನ್‌ಗೆ ಅನುಗುಣವಾಗಿ ಕಡಿಮೆಯಾಗಬೇಕಿದ್ದರೂ ಏರಿಕೆಯಾಗಿದೆ. ಆದ್ರೆ ಇಂದು ಮಾರುಕಟ್ಟೆಯಲ್ಲಿ ಈರುಳ್ಳಿ ಬೆಲೆ ಕೆಜಿಗೆ 80 ರೂ. ಆಗಿದೆ. ಇದು ಮನೆಯ ಆರ್ಥಿಕ ನಿರ್ವಹಣೆಯ ಮೇಲೆ ಪರಿಣಾಮ ಬೀರುತ್ತದೆ. ಸರ್ಕಾರ ಅಗತ್ಯ ವಸ್ತುಗಳ ಬೆಲೆ ಇಳಿಕೆ ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

# ಏರ್ ಇಂಡಿಯಾದೊಂದಿಗೆ ವಿಸ್ತಾರ ವಿಲೀನ ದೋಹಾದಿಂದ ಮುಂಬೈಗೆ ಮೊದಲ ವಿಮಾನ ಹಾರಾಟ

**ನವದೆಹಲಿ:** ಏರ್ ಇಂಡಿಯಾ ಹಾಗೂ ವಿಸ್ತಾರ ವಿಮಾನಯಾನ ಸಂಸ್ಥೆಗಳ ವಿಲೀನದ ಬಳಿಕ ಮೊದಲ ವಿಮಾನ ಹಾರಾಟಗೊಂಡಿದೆ. ಎ12286 ಕೋಡ್‌ನೊಂದಿಗೆ ಕಾರ್ಯನಿರ್ವಹಿಸುವ ವಿಮಾನವು ಸೋಮವಾರ ಸ್ಥಳೀಯ ಕಾಲಮಾನ ರಾತ್ರಿ 10:07ಕ್ಕೆ ಕತಾರ್‌ನ ದೋಹಾದಿಂದ ಮುಂಬೈಗೆ ಹೊರಟಿದ್ದು, ಮಂಗಳವಾರ ಬೆಳಿಗ್ಗೆ ಮುಂಬೈಗೆ ತಲುಪಲಿದೆ. ಟಾಟಾ ಗ್ರೂಪ್‌ನ ಭಾಗವಾಗಿರುವ ಎರಡು ಸಂಸ್ಥೆಗಳು ವಿಲೀನಗೊಂಡಿದ್ದು, ವಿಲೀನವಾದ ಬಳಿಕ ಮೊದಲ ಅಂತರರಾಷ್ಟ್ರೀಯ ವಿಮಾನ ಹಾರಾಟಗೊಂಡಿದೆ. ಇನ್ನೂ ಭಾರತದಲ್ಲಿ ಮಂಗಳವಾರ ನಸುಕಿನ ಜಾವ 01:30 ಗಂಟೆಗೆ ಮುಂಬೈನಿಂದ ದೆಹಲಿಗೆ ಮೊದಲ ವಿಮಾನ ಹಾರಾಟಗೊಂಡಿದೆ. ವಿಲೀನದ ನಂತರ ಏರ್ ಇಂಡಿಯಾ ನಿರ್ವಹಿಸುತ್ತಿರುವ ವಿಸ್ತಾರ ವಿಮಾನಗಳಿಗಾಗಿ 'ಎ12ಎಕ್ಸ್‌ಎಕ್ಸ್' ಕೋಡ್‌ನ್ನು ಬಳಸಲಾಗುತ್ತಿದೆ. ಇದು ಪ್ರಯಾಣಿಕರಿಗೆ ಬುಕ್ಕಿಂಗ್ ಸಮಯದಲ್ಲಿ ವಿಸ್ತಾರ ವಿಮಾನವನ್ನು ಗುರುತಿಸಲು ಸಹಾಯ ಮಾಡುತ್ತದೆ. ಟಾಟಾ ಗ್ರೂಪ್‌ನ ಭಾಗವಾಗಿರುವ ಎರಡೂ ವಿಮಾಯಾನ ಸಂಸ್ಥೆಗಳ ವಿಲೀನವು ದೇಶದ ನಾಗರಿಕ ವಿಮಾನಯಾನ ಕ್ಷೇತ್ರದಲ್ಲಿ ಪ್ರಮುಖ ಬಲವರ್ಧನೆಯನ್ನು ಸೂಚಿಸುತ್ತದೆ. ವಿಸ್ತಾರ ಇದು ಟಾಟಾಸ್ ಮತ್ತು ಸಿಂಗಾಪುರ್ ಏರಲೈನ್ಸ್ ನಡುವಿನ ಜಂಟಿ ಉದ್ಯಮವಾಗಿದ್ದು, ವಿಸ್ತಾರ ವಿಲೀನಗೊಂಡ ಬಳಿಕ ಸಿಂಗಾಪುರ್ ಏರಲೈನ್ಸ್ ಏರ್ ಇಂಡಿಯಾದ 25.1 ಶೇಕಡಾ ಪಾಲನ್ನು ಪಡೆಯುತ್ತದೆ.




# ರಾಹುಲ್ ಗಾಂಧಿಗೆ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಆಯೋಗಕ್ಕೆ ಬಿಜೆಪಿ ದೂರು

**ಮುಂಬೈ:** ಮಹಾರಾಷ್ಟ್ರ ಚುನಾವಣಾ ಪ್ರಚಾರ ಸಭೆಗಳಲ್ಲಿ ಸಂವಿಧಾನದ ಕುರಿತು ಸುಳ್ಳು ಹರಡುತ್ತಿದ್ದಾರೆ, ರಾಜ್ಯಗಳ ನಡುವೆ ಭಿನ್ನಾಭಿಪ್ರಾಯ ಸೃಷ್ಟಿಸುವಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿ ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಬಿಜೆಪಿಯು ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ಬಿಜೆಪಿ ನಿಯೋಗವು ಸೋಮವಾರ (ನ.11) ಮುಖ್ಯ ಚುನಾವಣಾಧಿಕಾರಿಗಳನ್ನ ಭೇಟಿಯಾಗಿ ಮಾದರಿ ನೀತಿ ಸಂಹಿತೆಯ ಉಲ್ಲಂಘನೆ ಮಾಡಲಾಗಿದ್ದು, ರಾಹುಲ್ ಗಾಂಧಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ. ಜೊತೆಗೆ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಳಿಸುವಂತೆ ಆಗ್ರಹಿಸಿದೆ. ಈ ಕುರಿತು ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ಸಚಿವ ಅರ್ಜುನ್ ರಾಮ್ ಮೇಘವಾಲ್, ಬಿಜೆಪಿ ನಿಯೋಗವು ಇಂದು ಮುಖ್ಯ ಚುನಾವಣಾ ಆಯುಕ್ತರನ್ನ ಭೇಟಿ ಮಾಡಿ, ರಾಹುಲ್ ಗಾಂಧಿ ವಿರುದ್ಧ ದೂರು ಸಲ್ಲಿಸಿದ್ದೇವೆ. ಮಹಾರಾಷ್ಟ್ರ ಚುನಾವಣಾ ಪ್ರಚಾರ ಸಭೆಗಳಲ್ಲಿ ರಾಹುಲ್ ಗಾಂಧಿ ಸುಳ್ಳುಗಳನ್ನೇ ಹರಡುತ್ತಿದ್ದಾರೆ ಎಂಬುದನ್ನು ಆಯೋಗಕ್ಕೆ ಮನವರಿಕೆ ಮಾಡಿಕೊಟ್ಟಿದ್ದೇವೆ ಎಂದಿದ್ದಾರೆ. ಬಿಜೆಪಿ ಸಂವಿಧಾನವನ್ನು ನಾಶ ಮಾಡಲು ಹೊರಟಿದೆ ಎಂದು ಮತ್ತೆ ರಾಹುಲ್ ಸುಳ್ಳು ಹಬ್ಬಿಸುತ್ತಿದ್ದಾರೆ. ಇಂತಹ ಹೇಳಿಕೆಗಳನ್ನು ನಿಲ್ಲಿಸುವಂತೆ ಸೂಚನೆ ನೀಡಬೇಕು, ಜೊತೆಗೆ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 353ರ ಅಡಿಯಲ್ಲಿ ರಾಹುಲ್ ವಿರುದ್ಧ ಎಫ್‌ಐಆರ್ ದಾಖಲಿಸಬೇಕೆಂದು ಮನವಿ ಮಾಡಿದ್ದೇವೆ ಎಂದಿದ್ದಾರೆ.ನವೆಂಬರ್ 6 ರಂದು ಮುಂಬೈನಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ರಾಹುಲ್ ಗಾಂಧಿ ಮಹಾರಾಷ್ಟ್ರದ ವೆಚ್ಚದಲ್ಲಿ ಇತರ ರಾಜ್ಯಗಳಲ್ಲಿ ಆಪಲ್ ಐಫೋನ್‌ಗಳು ಮತ್ತು ಬೋಯಿಂಗ್ ವಿಮಾನಗಳನ್ನು ತಯಾರಿಸುತ್ತಿದ್ದಾರೆ ಎಂದು ಹೇಳಿಕೆ ನೀಡಿದ್ದರ ಸಂಬಂಧ ಸಹ ಬಿಜೆಪಿ ದೂರು ನೀಡಿತ್ತು. ಅದೇ ಸಭೆಯಲ್ಲಿ ರಾಹುಲ್ ಬಿಜೆಪಿ, ರಾಷ್ಟ್ರೀಯ ಸ್ವಯಂಸೇವಕ ಸಂಘ ಜೊತೆಗೆ ಸೇರಿ ಸಂವಿಧಾನ ನಾಶಮಾಡಲು ಬಯಸಿದೆ? ಎಂದು ಆರೋಪಿಸಿದ್ದರು. ಈ ಸಂಬಂಧ ಇಂದು ಬಿಜೆಪಿ ನಿಯೋಗ ದೂರು ನೀಡಿದೆ. 288 ಸದಸ್ಯ ಬಲದ ಮಹಾರಾಷ್ಟ್ರ ವಿಧಾನಸಭೆಗೆ ನವೆಂಬರ್ 20 ರಂದು ಚುನಾವಣೆ ನಡೆಯಲಿದೆ.



# ರಾಷ್ಟ್ರೀಯ ಶತ್ರುಗಳ ವಿರುದ್ಧ ಹೋರಾಟ ಅಗತ್ಯ

**ನವದೆಹಲಿ:** ಪಟ್ಟಭದ್ರ ಹಿತಾಸಕ್ತಿಗಳಿಗಳು ಸಮಾಜವನ್ನು ವಿಭಜಿಸಲು ಪ್ರಯತ್ನಿಸುತ್ತಿದ್ದಾರೆ, 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ತನ್ನ ರಾಷ್ಟ್ರೀಯ ಶತ್ರುಗಳ ವಿರುದ್ಧ ಒಗ್ಗಟ್ಟಾಗಿ ಹೋರಾಡಬೇಕಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.ಶ್ರೀಸ್ವಾಮಿನಾರಾಯಣ ದೇವಸ್ಥಾನದ 200ನೇ ವಾರ್ಷಿಕೋತ್ಸವದ ಹಿನ್ನಲೆ ಗುಜರಾತ್‌ನ ವಡ್ತಾಲ್‌ನಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಸಮಾಜವನ್ನು ಜಾತಿ, ಧರ್ಮ, ಭಾಷೆ, ಮೇಲೂ, ಕೀಳು, ಗಂಡು-ಹೆಣ್ಣು, ಗ್ರಾಮ, ನಗರಗಳ ಆಧಾರದಲ್ಲಿ ವಿಭಜಿಸುವ ಷಡ್ಯಂತ್ರ ನಡೆಯುತ್ತಿದೆ. ರಾಷ್ಟ್ರ ವೈರಿಗಳ ಈ ಪ್ರಯತ್ನದ ಗಂಭೀರತೆಯನ್ನು ಅರ್ಥ ಮಾಡಿಕೊಳ್ಳುವ ಅಗತ್ಯವಿದೆ ನಾವೆಲ್ಲರೂ ಒಟ್ಟಾಗಿ ಇಂತಹ ಕೃತ್ಯವನ್ನು ಸೋಲಿಸಬೇಕಾಗಿದೆ ಎಂದು ಮೋದಿ ಎಚ್ಚರಿಸಿದರು.



ಜಾತಿ ಜನಗಣತಿಗೆ ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳ ಬೇಡಿಕೆಯ ನಡುವೆಯೇ ಪ್ರಧಾನಿ ಎಚ್ಚರಿಕೆ ನೀಡಿದ್ದಾರೆ. ಇತ್ತೀಚೆಗಷ್ಟೇ ಪ್ರಧಾನಿಯವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿಯನ್ನು ತೀವ್ರಗೊಳಿಸಿದ್ದು, ಜಾತಿ ಮತ್ತು ಧರ್ಮದ ಆಧಾರದ ಮೇಲೆ ಅದು ಬಿರುಕು ಮೂಡಿಸುತ್ತಿದೆ ಎಂದು ಆರೋಪಿಸಿದ್ದಾರೆ. ಮಹಾರಾಷ್ಟ್ರ ಚುನಾವಣೆಯ ಪ್ರಚಾರದ ವೇಳೆ ಪ್ರಧಾನಿ ಮೋದಿ ಅವರು, ಏಕ್ ಹೈ, ತೋ ಸೇಫ್ ಹೈ ಎಂದು ಘೋಷಣೆ ನೀಡಿದ್ದರು.

ಕಾಂಗ್ರೆಸ್ ಆಡಳಿತದಲ್ಲಿ ಒಬಿಸಿಗಳು ಒಗ್ಗಟ್ಟಾಗಿರಲಿಲ್ಲ. ಕಾಂಗ್ರೆಸ್ ಅಧಿಕಾರದಿಂದ ಹೊರಗಿರುವಾಗ ಮಾತ್ರ ಒಬಿಸಿಗಳಿಗೆ ಮೀಸಲಾತಿ ಸಿಕ್ಕಿತು. ಒಬಿಸಿಗಳು ಒಗ್ಗೂಡಿದ ತಕ್ಷಣ, ಅಂತಿಮ ಪರಿಣಾಮವೆಂದರೆ ದೇಶದಲ್ಲಿ ಕಾಂಗ್ರೆಸ್ ತನ್ನ ಸರಳ ಬಹುಮತವನ್ನು ಕಳೆದುಕೊಂಡಿತು ಎಂದು ಪ್ರಧಾನಿ ಮೋದಿ ಹೇಳಿದರು.

# ಭದ್ರತಾ ಪಡೆ, ಉಗ್ರರ ನಡುವೆ ಗುಂಡಿನ ಚಕಮಕಿ 100ಕ್ಕೆ ಕರೆ ಮಾಡಿ ಬಚಾವ್ ಆದ ಚಾರಣಿಗರು

**ಶ್ರೀನಗರ:** ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ಎನ್‌ಕೌಂಟರ್‌ನ ವೇಳೆ ಇಬ್ಬರು ಚಾರಣಿಗರು ಸಿಕ್ಕಿಕೊಂಡ ಘಟನೆ ಜಮ್ಮು ಮತ್ತು ಜಬರ್ವಾನ್‌ನಲ್ಲಿ ನಡೆದಿದೆ. ಚಾರಣಿಗರು ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆ 100ಕ್ಕೆ ಕರೆ ಮಾಡಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಚಾರಣಿಗರನ್ನು ಅಧಿಕಾರಿಗಳು ರಕ್ಷಣೆ ಮಾಡಿದ್ದಾರೆ.

ಭಯೋತ್ಪಾದಕರ ಇರುವಿಕೆಯ ಗುಪ್ತಚರ ಮಾಹಿತಿ ಆಧಾರದ ಮೇಲೆ ಪೊಲೀಸರು ಮತ್ತು ಭದ್ರತಾ ಪಡೆಗಳು ಜಬರ್ವಾನ್ ಅರಣ್ಯ ಪ್ರದೇಶದಲ್ಲಿ ಭಾನುವಾರ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದವು. ಈ ವೇಳೆ ಚಾರಣಿಗರು ಆ ಪ್ರದೇಶದಲ್ಲಿ ಸಿಲುಕಿಕೊಂಡಿದ್ದಾರೆ. ಬಳಿಕ ಅವರು ಬಂಡೆಗಳ ನಡುವೆ ಅಡಗಿಕೊಂಡು ಪೊಲೀಸರಿಗೆ ಕರೆ ಮಾಡಿದ್ದಾರೆ. ಈ ವೇಳೆ ಭದ್ರತಾ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಅವರನ್ನು ರಕ್ಷಿಸಲಾಗಿದೆ.

ಈ ಘಟನೆಯ ಬಳಿಕ ಪ್ರತಿಕ್ರಿಯಿಸಿರುವ ಕಾಶ್ಮೀರ ಪೊಲೀಸ್ ಮುಖ್ಯಸ್ಥ ವಿಧಿ ಕುಮಾರ ಬಿರ್ಡಿಯವರು, ಚಾರಣಿಗರು ಹತ್ತಿರದ ಪೊಲೀಸ್ ಠಾಣೆಗೆ ತಿಳಿಸಬೇಕು. ವಿಶೇಷವಾಗಿ ಭದ್ರತಾ ಕಾರ್ಯಾಚರಣೆಗಳು ಇರುವ ಪ್ರದೇಶಗಳಲ್ಲಿ ಈ ಅನಿರೀಕ್ಷಿತ ಘಟನೆಗಳು ಸಂಭವಿಸಿದಲ್ಲಿ ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ನಾವು ತ್ವರಿತವಾಗಿ ಕಾರ್ಯನಿರ್ವಹಿಸಲು ಇದು ಸಹಕಾರಿಯಾಗಲಿದೆ ಎಂದಿದ್ದಾರೆ.



ಸ್ಥಳೀಯರು, ಪ್ರವಾಸಿಗರು ಮತ್ತು ವಿಶೇಷವಾಗಿ ಚಾರಣಿಗರು ಸಂಕಷ್ಟದಲ್ಲಿದ್ದಾಗ 100ಕ್ಕೆ ಅಥವಾ ನೇರವಾಗಿ ಪೊಲೀಸ್ ಠಾಣೆಗೆ ತಲುಪುವುದು ಸೇರಿದಂತೆ ಸಹಾಯವಾಣಿ ಸೇವೆಗಳನ್ನು ಬಳಸಲು ನಾವು ಪ್ರೋತ್ಸಾಹಿಸುತ್ತೇವೆ. ಈ ಮೂಲಕ ಪೊಲೀಸರ ತ್ವರಿತ ಸಹಾಯವನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದ್ದಾರೆ.

ಸಂಕಷ್ಟದಲ್ಲಿ ಸಿಲುಕಿದ ವೇಳೆ ಚಾರಣಿಗನೊಬ್ಬ ಪೊಲೀಸ್ ಕಂಟ್ರೋಲ್ ರೂಮ್‌ಗೆ ಸಂಪರ್ಕಿಸಿದ್ದಾನೆ. ಈ ವೇಳೆ ಕರ್ತವ್ಯದಲ್ಲಿರುವ ಅಧಿಕಾರಿಗಳಿಗೆ ಮಾಹಿತಿಯನ್ನು ರವಾನಿಸುವಲ್ಲಿ ಪಿಸಿಆರ್‌ನ ತ್ವರಿತ ಸಮನ್ವಯ ಸಂಭವನೀಯ ದುರಂತವನ್ನು ತಡೆಯುವಲ್ಲಿ ಪ್ರಮುಖ ಪಾತ್ರವಹಿಸಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಪಾಕಿಸ್ತಾನಕ್ಕೆ ವಾಯುಮಾಲಿನ್ಯ ಕಂಟಕ: ಜನರ ಓಡಾಟಕ್ಕೆ ನಿಷೇಧ, ಅಂಗಡಿ-ಮಾರ್ಕೆಟ್ ತೆರೆಯಲು ಮಿತಿ

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ದಿನೇ ದಿನೇ ವಾಯುಮಾಲಿನ್ಯ ಹೆಚ್ಚಾಗುತ್ತಿದೆ. ವಾಯುಮಾಲಿನ್ಯದಿಂದ ಜನರು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಹೀಗಾಗಿ, ಸರ್ಕಾರ ಜನರ ಓಡಾಟಕ್ಕೆ ಬ್ರೇಕ್ ಹಾಕಿದೆ. ಪಾಕಿಸ್ತಾನದ ಪಂಜಾಬ್ ಪ್ರಾಂತ್ಯವು ಹೆಚ್ಚಿನ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಿದೆ. ತೀವ್ರವಾದ ವಾಯುಮಾಲಿನ್ಯದಿಂದ ಉಂಟಾಗುವ ಕಾಯಿಲೆಗಳನ್ನು ನಿಗ್ರಹಿಸಲು ಸೋಮವಾರದಿಂದ ಕೆಲವು ಪ್ರದೇಶಗಳಲ್ಲಿ ಅಂಗಡಿಗಳು, ಮಾರುಕಟ್ಟೆಗಳು ಮತ್ತು ಮಾಲ್‌ಗಳನ್ನು ಮುಚ್ಚಲು ಆದೇಶಿಸಿದೆ. ಜನರು ಹೊರಗಡೆ ಹೆಚ್ಚು ಓಡಾಡದಂತೆ ಕ್ರಮ ವಹಿಸಲಾಗಿದೆ. ಸ್ವಿಸ್ ಗ್ರೂಪ್ ಖಕಿಂಡಿ ನ ಲೈವ್ ರೇಟಿಂಗ್‌ಗಳ ಪ್ರಕಾರ, ವಾಯು ಗುಣಮಟ್ಟದಲ್ಲಿ ವಿಶ್ವದ ಅತ್ಯಂತ ಕಲುಷಿತ ನಗರವಾದ ಲಾಹೋರ್ ಸೇರಿದಂತೆ ವಿವಿಧ ಸ್ಥಳಗಳಲ್ಲಿ ನ.17 ರ ವರೆಗೆ ಶಿಕ್ಷಣ ಸಂಸ್ಥೆಗಳು ಮತ್ತು ಉದ್ಯಾನಗಳು ಮತ್ತು ಪ್ರಾಣಿಸಂಗ್ರಹಾಲಯಗಳಂತಹ ಸಾರ್ವಜನಿಕ ಸ್ಥಳಗಳನ್ನು ಮುಚ್ಚಲಾಗಿದೆ. ಲಾಹೋರ್, ಮುಲ್ತಾನ್, ಫೈಸಲಾಬಾದ್ ಮತ್ತು ಗುಜ್ರಾನ್‌ವಾಲಾ ಜಿಲ್ಲೆಗಳಲ್ಲಿ ಉಸಿರಾಟದ ಕಾಯಿಲೆಗಳು, ಕಣ್ಣು ಮತ್ತು ಗಂಟಲಿನ ಕಿರಿಕಿರಿ ಮತ್ತು ಗುಲಾಬಿ ಕಣ್ಣಿನ ಕಾಯಿಲೆಯ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವುದು ಆತಂಕ ಮೂಡಿಸಿದೆ. ಹೊಸ ನಿರ್ಬಂಧಗಳು ನ.17 ರವರೆಗೆ ಜಾರಿಯಲ್ಲಿರುತ್ತವೆ. ಬ್ಯಾಕ್ಟೀರಿಯಾ ಅಥವಾ ವೈರಲ್ ಸೋಂಕು, ಹೊಗೆ, ಧೂಳು ಅಥವಾ ರಾಸಾಯನಿಕ ಮಾನ್ಯತೆಯಿಂದಾಗಿ ಕಾಂಜಂಕ್ಟಿವಿಟಿಸ್ / ಗುಲಾಬಿ ಕಣ್ಣಿನ ಕಾಯಿಲೆಯ ಹರಡುವಿಕೆಯು ಸಾರ್ವಜನಿಕ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುತ್ತಿದೆ ಎಂದು ಪಂಜಾಬ್ ಸರ್ಕಾರ ಹೇಳಿದೆ. ಕ್ರೀಡಾ ಕಾರ್ಯಕ್ರಮಗಳು, ಪ್ರದರ್ಶನಗಳು, ಉತ್ಸವಗಳು ಮತ್ತು ರೆಸ್ಟೋರೆಂಟ್‌ಗಳಲ್ಲಿ ಊಟ ಸೇರಿದಂತೆ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಅನಿವಾರ್ಯ ಧಾರ್ಮಿಕ ಕಾರ್ಯಗಳಿಗೆ ಮಾತ್ರ ವಿನಾಯಿತಿ ನೀಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಭಾರತದ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ನ್ಯಾ.ಸಂಜೀವ್ ಖನ್ನಾ ಪ್ರಮಾಣ ವಚನ ಸ್ವೀಕಾರ

**ನವದೆಹಲಿ:** ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಭಾರತದ 51 ನೇ ಮುಖ್ಯ ನ್ಯಾಯಮೂರ್ತಿಯಾಗಿ ರಾಷ್ಟ್ರಪತಿ ಭವನದಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನ್ಯಾ.ಖನ್ನಾ ಅವರಿಗೆ ಪ್ರಮಾಣ ವಚನ ಬೋಧಿಸಿದರು.



ನ್ಯಾ.ಖನ್ನಾ ಅವರ ಹೆಸರನ್ನು ನ್ಯಾ.ಡಿವೈ ಚಂದ್ರಚೂಡ್ ಅವರು ಶಿಫಾರಸು ಮಾಡಿದ್ದರು. ಇವರು ಮುಂದಿನ ವರ್ಷ ಮೇ 13 ರವರೆಗೆ ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ನ್ಯಾ.ಚಂದ್ರಚೂಡ್ ಅವರು ನ.10 ರಂದು ಹುದ್ದೆಯಿಂದ ನಿವೃತ್ತರಾದರು.

ಪ್ರಮಾಣವಚನ ಸ್ವೀಕಾರದ ವೇಳೆ ಪ್ರಧಾನಿ ನರೇಂದ್ರ ಮೋದಿ, ಉಪರಾಷ್ಟ್ರಪತಿ ಜಗದೀಪ್ ಧಂಖರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಮಾಜಿ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಉಪಸ್ಥಿತರಿದ್ದರು.

ಮೇ 14, 1960 ರಲ್ಲಿ ಜನಿಸಿದ್ದ ನ್ಯಾ.ಸಂಜೀವ್ ಖನ್ನಾ ಅವರು, ದೆಹಲಿ ವಿಶ್ವವಿದ್ಯಾಲಯದಲ್ಲಿ ಕಾನೂನು ಅಧ್ಯಯನ ಮಾಡಿದ್ದರು. ಕೆಲವು ಕಾಲ ವಕೀಲರಾಗಿ, ದೆಹಲಿ ಹೈಕೋರ್ಟ್‌ನ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿದ್ದರು. ಅಲ್ಲದೇ ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ (ಓಂಐಖಂ) ಕಾರ್ಯನಿರ್ವಾಹಕ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು.

ಜನವರಿ 2019 ರಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು. ಈ ಅವಧಿಯಲ್ಲಿ, ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಅವರ ಜಾಮೀನು ಅರ್ಜಿಗಳ ವಿಚಾರಣೆ ಸೇರಿದಂತೆ ಹಲವಾರು ರಾಜಕೀಯವಾಗಿ ಸೂಕ್ಷ್ಮ ಪ್ರಕರಣಗಳ ಪೀಠಗಳ ನೇತೃತ್ವ ವಹಿಸಿದ್ದರು.

ಸಂವಿಧಾನ ಪೀಠದ ಭಾಗವಾಗಿ, ನ್ಯಾ.ಖನ್ನಾ ಅವರು ಆರ್ಟಿಕಲ್ 370ರ ರದ್ದು ಮತ್ತು ಚುನಾವಣಾ ಬಾಂಡ್, ಎಲೆಕ್ಟ್ರಾನಿಕ್ ಮತಯಂತ್ರಗಳು ಮತ್ತು ಮತದಾರರ ದೃಢೀಕೃತ ಪೇಪರ್ ಆಡಿಟ್ ಸಂಬಂಧಿಸಿದ ಪ್ರಕರಣಗಳ ವಿಚಾರಣೆ ನಡೆಸಿದ್ದಾರೆ.

# ಇಸ್ರೇಲ್ ಮೇಲೆ 150 ರಾಕೆಟ್‌ಗಳ ಸುರಿಮಳೆ ಹಿಜ್ಬುಲ್ಲಾ ಭೀಕರ ದಾಳಿಗೆ ಹಲವೆಡೆ ಹಾನಿ!

**ಬೈರೂತ್:** ಕಳೆದ ಕೆಲವು ದಿನಗಳಿಂದ ತಣ್ಣಗಾಗಿದ್ದ ಇಸ್ರೇಲ್-ಹಿಜ್ಬುಲ್ಲಾ ನಡುವೆ ಮತ್ತೆ ಯುದ್ಧದ ಕಿಡಿ ಹೊತ್ತಿಕೊಂಡಿದೆ. ಸೋಮವಾರ ಹಿಜ್ಬುಲ್ಲಾ ಭಯೋತ್ಪಾದಕ ಗುಂಪು ಇಸ್ರೇಲ್ ಮೇಲೆ ಭೀಕರ ವಾಯು ದಾಳಿ ನಡೆಸಿದೆ. ಇಸ್ರೇಲ್‌ನ ಹೈಫಾ ನಗರವನ್ನ ಗುರಿಯಾಗಿಸಿಕೊಂಡು 150 ರಾಕೆಟ್‌ಗಳಿಂದ ದಾಳಿ ನಡೆಸಿದೆ. ಹಿಜ್ಬುಲ್ಲಾ ಕ್ಷಿಪಣಿ ದಾಳಿಗೆ ಇಸ್ರೇಲ್‌ನಲ್ಲಿ ಅನೇಕ ನಾಗರಿಕರು ಗಾಯಗೊಂಡಿದ್ದಾರೆ. ಒಂದು ಮಗು ಸೇರಿ ನಾಲ್ವರು ಗಂಭೀರ ಗಾಯಗೊಂಡಿದ್ದಾರೆ. ಹಲವು ವಾಹನಗಳು, ಕಟ್ಟಡಗಳು ಹಾನಿಯಾಗಿವೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಅಲ್ಲದೇ ಇದು ಇಸ್ರೇಲ್ ಮೇಲೆ ನಡೆದ ಅತಿದೊಡ್ಡ ರಾಕೆಟ್ ದಾಳಿಗಳಲ್ಲಿ ಒಂದೆಂದು ಹೇಳಲಾಗಿದೆ.

ಇಸ್ರೇಲ್‌ನ ರಕ್ಷಣಾ ವ್ಯವಸ್ಥೆ ಐರನ್ ಡೋಮ್ ನಿಂದ ಹೆಜ್ಬೊಲ್ಲಾ ರಾಕೆಟ್‌ಗಳ ದಾಳಿಯನ್ನು ಯಶಸ್ವಿಯಾಗಿ ತಡೆಯಲಾಗಿದ್ದು, ಹೆಚ್ಚಿನ ಹಾನಿ ಆಗುವುದನ್ನು ತಪ್ಪಿಸಲಾಗಿದೆ. ಆದ್ರೆ ಹೈಫಾ ನಗರದಲ್ಲಿನ ಜನನಿಬಿಡ ಪ್ರದೇಶಗಳಲ್ಲಿ ಹಾನಿಯುಂಟುಮಾಡಿವೆ.ಇರಾನ್ ನಡೆಸಿದ ಕ್ಷಿಪಣಿ ದಾಳಿಗೆ ಇಸ್ರೇಲ್ ಪ್ರತೀಕಾರವಾಗಿ ಕಳೆದ ಅಕ್ಟೋಬರ್ 25ರಂದು 100ಕ್ಕೂ ಹೆಚ್ಚು ಯುದ್ಧ ವಿಮಾನಗಳ ಮೂಲಕ ಇರಾನ್‌ನ 20ಕ್ಕೂ ಹೆಚ್ಚು ಮಿಲಿಟರಿ ಸ್ಥಳಗಳಲ್ಲಿ ಇಸ್ರೇಲ್ ಏರ್‌ಸ್ಟ್ರೈಕ್ ನಡೆಸಿತ್ತು. ಆ ಬಳಿಕ



ಪಾಶ್ಚಿಮಾತ್ಯ ದೇಶಗಳ ನಡುವೆ ಹೇಳಿಕೊಳ್ಳುವಂತಹ ದೊಡ್ಡಮಟ್ಟದಲ್ಲಿ ದಾಳಿಗಳು ನಡೆದಿರಲಿಲ್ಲ. ಇದೀಗ ಪೇಜರ್ ಸ್ಫೋಟದ ಹಿಂದೆ ಇಸ್ರೇಲ್ ಇರುವುದಾಗಿ ಪ್ರಧಾನಿ ಒಪ್ಪಿಕೊಂಡ ಮರುದಿನ ದಾಳಿ ನಡೆಸಿದೆ. ಕಳೆದ ಒಂದು ದಿನದ ಹಿಂದೆಯಷ್ಟೇ ನಡೆದ ಪೇಜರ್ ಮತ್ತು ವಾಕಿಟಾಕಿ ಸ್ಫೋಟದ ಹಿಂದೆ ಟೆಲ್ ಅವೀವ್ (ಇಸ್ರೇಲ್ ರಾಜಧಾನಿ) ಇದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದರು. ಇದರ ಬೆನ್ನಲ್ಲೇ ಹಿಜ್ಬುಲ್ಲಾ ಭಯೋತ್ಪಾದಕ ಗುಂಪು ದಾಳಿ ನಡೆಸಿದೆ. ಕಳೆದ ಸೆಪ್ಟೆಂಬರ್ ನಲ್ಲಿ ಲೆಬನಾನ್‌ನಾದ್ಯಂತ ಸುಮಾರು ಸಾವಿರಾರು ಪೇಜರ್‌ಗಳು ಸ್ಫೋಟಗೊಂಡಿದ್ದವು, ಇದರ ಮರುದಿನ ವಾಕಿಟಾಕಿಗಳೂ ಸ್ಫೋಟಗೊಂಡಿದ್ದವು. ಈ ಘಟನೆಯನ್ನು ಸುಮಾರು 39 ಮಂದಿ ಮೃತಪಟ್ಟು 3,000ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದರು.

# ಸುಪ್ರೀಂ ಕೋರ್ಟ್‌ನಲ್ಲೂ ಪ್ರಜ್ವಲ್ ರೇವಣ್ಣಗೆ ಸಿಗಲಿಲ್ಲ ಜಾಮೀನು!

**ನವದೆಹಲಿ:** ಲೈಂಗಿಕ ದೌರ್ಜನ್ಯ ಆರೋಪದ ಮೇಲೆ ಜೈಲು ಸೇರಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಸುಪ್ರೀಂ ಕೋರ್ಟ್ ಜಾಮೀನು ನೀಡಲು ನಿರಾಕರಿಸಿದೆ. ಕಳೆದ ಅಕ್ಟೋಬರ್ 21ರಂದು ಪ್ರಜ್ವಲ್ ರೇವಣ್ಣ ಪರ ವಕೀಲರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಈ ಮೇಲ್ಮನವಿ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಅರ್ಜಿಯನ್ನು ವಜಾಗೊಳಿಸಿದೆ. ಪ್ರಜ್ವಲ್, ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜಾಮೀನು ಕೋರಿದ್ದರೆ, ಸಿಐಡಿ ಸೈಬರ್ ಸೆಲ್‌ನಲ್ಲಿ ದಾಖಲಾಗಿದ್ದ 2 ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದರು. ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮೂರು ಅರ್ಜಿಗಳನ್ನು ವಜಾಗೊಳಿಸಿತ್ತು. ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧ ಕಳೆದ ಏಪ್ರಿಲ್ 28ರಂದು ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ದಾಖಲಿಸಿದ್ದರು. ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ದೂರು ದಾಖಲಾಗಿತ್ತು. ಎಫ್‌ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ. 354 ಂ, 354 ಆ, 509 ಅಡಿ ಪ್ರಕರಣ ದಾಖಲಾಗಿತ್ತು. 2015 ರಲ್ಲಿ ಹೆಚ್.ಡಿ.ರೇವಣ್ಣ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ನೀಡಿದ್ದರು. ತಂದೆ ಮತ್ತು ಮಗನ ವಿರುದ್ಧ ಸಂತ್ರಸ್ತೆ ಗಂಭೀರ ಆರೋಪಗಳನ್ನು ಮಾಡಿದ್ದರು.

# ಪಟಾಕಿ ಸಿಡಿಸುವುದು ಮೂಲಭೂತ ಹಕ್ಕು ಎನ್ನುವವರು ಕೋರ್ಟ್‌ಗೆ ಬರಲಿ ಶಾಶ್ವತ ಪಟಾಕಿ ನಿಷೇಧದ ಬಗ್ಗೆ ಪ್ರಸ್ತಾಪಿಸಿದ ಸುಪ್ರೀಂ

**ನವದೆಹಲಿ:** ಯಾವುದೇ ಧರ್ಮವು ವಾಯುಮಾಲಿನ್ಯವನ್ನು ಉಂಟುಮಾಡುವ ಚಟುವಟಿಕೆಯನ್ನು ಪ್ರೋತ್ಸಾಹಿಸುವುದಿಲ್ಲ. ದೀಪಾವಳಿ ಹೆಸರಿನಲ್ಲಿ ಈ ಪ್ರಮಾಣದಲ್ಲಿ ಪಟಾಕಿಗಳನ್ನು ಸುಟ್ಟರೆ, ಅದು ನಾಗರಿಕರ ಆರೋಗ್ಯದ ಮೂಲಭೂತ ಹಕ್ಕಿನ ಮೇಲೂ ಪರಿಣಾಮ ಬೀರುತ್ತದೆ ಎಂದು ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.



ದೆಹಲಿಯಲ್ಲಿನ ಮಾಲಿನ್ಯದ ಪ್ರಕರಣದ ವಿಚಾರಣೆ ನಡೆಸಿದ ನ್ಯಾ.ಅಭಯ್ ಎಸ್ ಓಕಾ ಮತ್ತು ಆಗಸ್ಟಿನ್ ಜಾರ್ಜ್ ಮಸಿಹ್ ಅವರ ಪೀಠ, ಹಬ್ಬದ ಸಮಯದಲ್ಲಿ ಪಟಾಕಿ ನಿಷೇಧವನ್ನು ಜಾರಿಗೊಳಿಸಲು ವಿಫಲವಾಗಿರುವ ದೆಹಲಿ ಸರ್ಕಾರ ಮತ್ತು ಪೊಲೀಸರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿತು. ಸೀಮಿತ ತಿಂಗಳಿಗೆ ಮಾತ್ರ ಪಟಾಕಿ ನಿಷೇಧ ಯಾಕೆ? ವರ್ಷವಿಡಿ ಮಾಡಲು ಸಾಧ್ಯವಿಲ್ಲವೇ ಎಂದು ಪ್ರಶ್ನಿಸಿತು. ಅಕ್ಟೋಬರ್ 14 ರಂದು ಜಾರಿಗೊಳಿಸಿದ ದೆಹಲಿ ಸರ್ಕಾರದ ಆದೇಶವನ್ನು ನ್ಯಾಯಾಲಯವು ಪರಿಶೀಲಿಸಿತು. ಇದು ಪಟಾಕಿಗಳ ತಯಾರಿಕೆ ಮತ್ತು ಮಾರಾಟವನ್ನು ನಿಷೇಧಿಸಿತು, ಆದರೆ ಚುನಾವಣೆಗಳು ಮತ್ತು ಮದುವೆಗಳಂತಹ ಕಾರ್ಯಕ್ರಮಗಳಿಗೆ ವಿನಾಯಿತಿಗಳನ್ನು ನೀಡಿದೆ. ನಿಮ್ಮ ಆದೇಶದಲ್ಲಿ ಚುನಾವಣೆ, ಮದುವೆ ಇತ್ಯಾದಿಗಳಿಗೆ ಪಟಾಕಿಗಳನ್ನು ಸುಡಬಹುದು ಎಂದು ಹೇಳಿದೆಯೇ? ನಿಮ್ಮ ಪ್ರಕಾರ ಮಾಲಿನ್ಯಕ್ಕೆ ಪಾಲುದಾರರು ಯಾರು? ಎಂದು ಕೋರ್ಟ್ ಕೇಳಿತು. ಕೇಂದ್ರ ಸರ್ಕಾರದ ಪರ ವಾದ ಮಂಡಿಸಿದ ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯ ಭಾಟಿ, ಪ್ರಸ್ತುತ ಆದೇಶವು ಹಬ್ಬ ಹರಿದಿನಗಳಲ್ಲಿ ಮತ್ತು ದೆಹಲಿಯಲ್ಲಿ ವಾಯು ಮಾಲಿನ್ಯವನ್ನು ಉಲ್ಬಣಗೊಳಿಸುವ ತಿಂಗಳುಗಳಲ್ಲಿ ಮಾತ್ರ ವಾಯುಮಾಲಿನ್ಯದ ನಿಯಂತ್ರಣದ ಮೇಲೆ ಕೇಂದ್ರೀಕರಿಸಿದೆ ಎಂದು ವಿವರಿಸಿದರು. ಪೀಠವು ಇದನ್ನು ಒಪ್ಪಿಕೊಳ್ಳಲಿಲ್ಲ. ಶಾಶ್ವತ ನಿಷೇಧವನ್ನು ಪರಿಗಣಿಸಬೇಕು ಎಂದು ಸೂಚಿಸಿತು. ನಿಷೇಧ ಆದೇಶದ ಬಗ್ಗೆ ಸಂಬಂಧಪಟ್ಟ ಎಲ್ಲಾ ಮಧ್ಯಸ್ಥಗಾರರಿಗೆ ತಕ್ಷಣವೇ ತಿಳಿಸುವಂತೆ ಮತ್ತು ಪಟಾಕಿಗಳ ಮಾರಾಟ ಮತ್ತು ತಯಾರಿಕೆ ನಿಷೇಧವನ್ನು ಖಚಿತಪಡಿಸಿಕೊಳ್ಳುವಂತೆ ಸುಪ್ರೀಂಕೋರ್ಟ್ ದೆಹಲಿ ಪೊಲೀಸ್ ಆಯುಕ್ತರಿಗೆ ನಿರ್ದೇಶನ ನೀಡಿತು. ನವೆಂಬರ್ 25ರ ಮೊದಲು ನಗರದಲ್ಲಿ ಪಟಾಕಿಗಳ ಮೇಲೆ 'ಶಾಶ್ವತ ನಿಷೇಧ'ವನ್ನು ಪರಿಗಣಿಸುವಂತೆ ದೆಹಲಿ ಸರ್ಕಾರಕ್ಕೆ ಸೂಚಿಸಿದೆ. ಪಟಾಕಿ ನಿಷೇಧ ನಿರ್ದಿಷ್ಟ ಅವಧಿಗೆ ಸೀಮಿತವಾಗಿರದೆ ಒಂದು ವರ್ಷದ ಅವಧಿಯ ನಿಷೇಧದ ಅಗತ್ಯವಿದೆ ಎಂದು ನ್ಯಾಯಾಲಯ ಒತ್ತಿಹೇಳಿತು. ಯಾರಾದರೂ ಪಟಾಕಿ ಸಿಡಿಸುವುದು ಮೂಲಭೂತ ಹಕ್ಕು ಎಂದು ಪ್ರತಿಪಾದಿಸಲು ಬಯಸಿದರೆ, ಅವರು ನ್ಯಾಯಾಲಯಕ್ಕೆ ಬರಲಿ. ದೀಪಾವಳಿ ಮಾತ್ರವಲ್ಲದೆ ವರ್ಷಪೂರ್ತಿ ಪಟಾಕಿಗಳನ್ನು ನಿಷೇಧಿಸಬೇಕು ಎಂದು ನ್ಯಾಯಾಲಯ ಟೀಕಿಸಿದೆ. ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸಿದ ನಂತರ ದೆಹಲಿಯು ವಿಶ್ವದ ಅತ್ಯಂತ ಕಲುಷಿತ ನಗರ ಎಂಬ ಕುಖ್ಯಾತಿಗೆ ಪಾತ್ರವಾಗಿದೆ.

# 2 ಕೋಟಿ ರೂ. ವಿಮೆಗಾಗಿ ತನ್ನ ಕೊಲೆಯ ವ್ಯೂಹ ರಚಿಸಿದ ಉದ್ಯಮಿ

**ಚಂಡೀಗಢ:** ಎರಡು ಕೋಟಿ ರೂ. ವಿಮೆಯ ಹಣಕ್ಕಾಗಿ ತನ್ನ ಕೊಲೆಯ ಸುಳ್ಳು ವ್ಯೂಹ ರಚಿಸಿದ್ದ ಉದ್ಯಮಿಯನ್ನ ಪೊಲೀಸರು ಬಂಧಿಸಿದ್ದಾರೆ. ಸುಳ್ಳು ಕೊಲೆಯ ಕಥೆ ಕಟ್ಟಿದ್ದ ಉದ್ಯಮಿ ಎರಡು ಕೋಟಿ ರೂಪಾಯಿ ಲಪಾಟಿಯಿಸುವ ಪ್ಲಾನ್ ಮಾಡಿ ಜೈಲುಪಾಲಾಗಿದ್ದಾನೆ.

ರಾಮ್ ಮೆಹ್ರಾ ಜೈಲು ಸೇರಿರುವ ಉದ್ಯಮಿ. ಬರ್ವಾಲ್ ದಲ್ಲಿ ಗ್ಲಾಸ್ ಡಿಸ್ಪೋಸಲ್ ವ್ಯವಹಾರ ಮಾಡಿಕೊಂಡಿದ್ದ ರಾಮ್ ನಷ್ಟದಲ್ಲಿದ್ದನು. ಮಂಗಳವಾರ ಬೈಕಿನಲ್ಲಿ ಬಂದ ದುಷ್ಕರ್ಮಿಗಳು ಹಲ್ಲೆ ನಡೆಸಿ ತನ್ನ ಬಳಿಯಲ್ಲಿದ್ದ 11 ಲಕ್ಷ ನಗದು ದೋಚಿ, ಕಾರಿನಲ್ಲಿ ಶವವೊಂದನ್ನು ಇರಿಸಿ ಹಚ್ಚಿ ಪರಾರಿಯಾಗಿದ್ದಾರೆ ಎಂದು ಕಥೆ ಕಟ್ಟಿದ್ದ. ಮೇಲ್ನೋಟಕ್ಕೆ ತನ್ನ ಸಾವು ಆಗಿದೆ ಅನ್ನೋ ರೀತಿ ಘಟನೆಯನ್ನ ಸೃಷ್ಟಿಸಿದ್ದ ರಾಮ್ ಕಣ್ಮರೆಯಾಗಿದ್ದನು. ಛತ್ತೀಸಗಢ್ ನಲ್ಲಿದ್ದ ರಾಮ್ ಮೆಹ್ರಾನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಅಕ್ಟೋಬರ್ 7ರಂದು ಕುಟುಂಬಸ್ಥರಿಗೆ ಕರೆ ಮಾಡಿದ್ದ ರಾಮ್ ಮೆಹ್ರಾ, ನನ್ನ ಕಾರನ್ನು ಕೆಲವರು ಬೈಕಿನಲ್ಲಿ ಹಿಂಬಾಲಿಸುತ್ತಿದ್ದಾರೆ. ನನ್ನ ಬಳಿ 11 ಲಕ್ಷ ಹಣವಿದ್ದು, ಜೀವಕ್ಕೆ ಅಪಾಯವಿದೆ ಅಂತ ಹೇಳಿದ್ದನು. ಕುಟುಂಬಸ್ಥರು ಘಟನಾ ಸ್ಥಳಕ್ಕೆ ತೆರಳುವಷ್ಟರಲ್ಲಿ ಕಾರು ಬೆಂಕಿಗಾಹುತಿ ಆಗಿತ್ತು, ಒಳಗೆ ಸುಟ್ಟು ಕರಕಲಾದ ಶವ ದೊರಕಿತ್ತು. ಹಣ ದೋಚಿರುವ ದುಷ್ಕರ್ಮಿಗಳು ಕೊಲೆಗೈದು ಶವವನ್ನ ಸುಟ್ಟು ಹಾಕಿದ್ದಾರೆ ಎಂದು ತಿಳಿದಿದ್ದರು.



ಹಿಸ್ಸಾರ್ ಠಾಣೆಯ ಪೊಲೀಸರಿಗೆ ಪ್ರಕರಣದಲ್ಲಿ ಅನುಮಾನಗಳು ಕಾಡಿದ್ದವು. ಅನುಮಾನ ಬೆನ್ನತ್ತಿದ್ದಾಗ ರಾಮ್ ಮೆಹ್ರಾ ಆರ್ಥಿಕ ಸಂಕಷ್ಟದಲ್ಲಿರುವ ವಿಚಾರ ತಿಳಿದಿದೆ. 2 ಕೋಟಿ ರೂ. ವಿಮೆಯ ವಿಷಯ ಸಹ ತಿಳಿದಿದೆ. ಒಂದು ವೇಳೆ ರಾಮ್ ನಿಧನವಾದ್ರೆ ಆ ಹಣ ಆತನ ಕುಟುಂಬಸ್ಥರಿಗೆ ಸೇರಲಿದೆ ಎಂಬ ಅಂಶಗಳ ಮೇಲೆ ಪೊಲೀಸರು ತನಿಖೆ ಆರಂಭಿಸಿದ್ದರು. ಛತ್ತೀಸ್ ಗಢದಲ್ಲಿದ್ದ ಆರೋಪಿಯನ್ನ ಹಿಸ್ಸಾರ್ ಗೆ ಕರೆತಂದು ವಿಚಾರಣೆಗೆ ಒಳಪಡಿಸಲಾಗಿದೆ. ಕಾರಿನಲ್ಲಿ ಶವ ಯಾರದ್ದು ಎಂಬುದರ ಬಗ್ಗೆ ಪೊಲೀಸರು ಮಾಹಿತಿ ಕಲೆ ಹಾಕುತ್ತಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮದುವೆಯಾಗಲಿರುವ ಹುಡುಗನ ಬಗ್ಗೆ ಸೋನು ಓಪನ್ ಟಾಕ್



'ಬಿಗ್ ಬಾಸ್ ಕನ್ನಡ ಒಟಿಟಿ 1'ರ ಖ್ಯಾತಿಯ ಸೋನು ಶ್ರೀನಿವಾಸ್ ಗೌಡ ಅವರು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಮದುವೆಯಾಗುತ್ತಿರುವ ಹುಡುಗನ ಕುರಿತು ಸೋನು ಮಾಹಿತಿ ಹಂಚಿಕೊಂಡಿದ್ದಾರೆ. ನಾನು ಮದುವೆಯಾಗುತ್ತಿರುವ ವಿಚಾರ ನಿಜ, ಮುಂದಿನ ವರ್ಷ ಮದುವೆ ಪ್ಲ್ಯಾನ್ ಮಾಡಿದ್ದೇವೆ ಎಂದು ಸೋನು ಮುಕ್ತವಾಗಿ ಮಾತನಾಡಿದ್ದಾರೆ.

ಇತ್ತೀಚೆಗೆ ಸೋನು ಅವರ ಯೂಟ್ಯೂಬ್‌ನಲ್ಲಿ ಮದುವೆ ಬಗ್ಗೆ ಮಾತನಾಡಿದರು. ಸದ್ಯದಲ್ಲೇ ನನ್ನ ಮದುವೆ ಬಗ್ಗೆ ಅನೌನ್ಸ್ ಮಾಡುತ್ತೀನಿ. ಎಲ್ಲರ ಮದುವೆ ನೋಡಿ ನೋಡಿ ನನಗೂ ಮದುವೆ ಆಗಬೇಕು ಅಂತ ಅನಿಸುತ್ತಿದೆ ಎಂದಿದ್ದರು. ಆದರೆ ಹುಡುಗ ಯಾರು ಅಂತ ಅವರು ರಿವೀಲ್ ಮಾಡಿರಲಿಲ್ಲ. ಇದೀಗ ಖುದ್ದು ಅವರೇ ತಿಳಿಸಿದ್ದಾರೆ.

**ಸದ್ಯದಲ್ಲೇ ನನ್ನ ನಿಶ್ಚಿತಾರ್ಥ**

ಕುಟುಂಬಸ್ಥರು ನಿಶ್ಚಯಿಸಿದ ಅರೇಂಜ್ ಮ್ಯಾರೇಜ್ ಇದಾಗಿದೆ. ಹುಡುಗನ ಕಡೆಯವರು ನಮ್ಮ ಕುಟುಂಬಸ್ಥರನ್ನು ಅಪ್ರೋಚ್ ಮಾಡಿದರು. ಒಳ್ಳೆಯ ಹುಡುಗ, ಒಳ್ಳೆಯ ಸಂಬಂಧ ಇದಾಗಿದ್ದು, ನನ್ನ ತಾಯಿ ಸಮ್ಮತಿ ಸೂಚಿಸಿದರು. ಹಾಗಾಗಿ ನಾನು ಕೂಡ ಈ ಮದುವೆಗೆ ಒಪ್ಪಿಕೊಂಡೆ. ಒಳ್ಳೆಯ ಸಂಬಂಧ ಅಂದರೆ ನಾನ್ಯಾಕೆ ಒಪ್ಪಿಕೊಳ್ಳಬಾರದು ಎನಿಸಿತು. ಕುಟುಂಬಸ್ಥರು ನಿರ್ಧರಿಸಿದ್ದಾರೆ ಎಂದರೆ ಅದು ಸರಿಯಾದ ನಿರ್ಣಯ ಆಗಿರುತ್ತದೆ ಎಂಬ ನಂಬಿಕೆಯಿದೆ ಎಂದು ಸೋನು ಮದುವೆ ಕುರಿತು ಮಾತನಾಡಿದ್ದಾರೆ.

ಇನ್ನೂ ಸೋನು ಮದುವೆಯಾಗುತ್ತಿರುವ ವರ ಮೂಲತಃ ಬೆಂಗಳೂರಿನವರು. ಇದೀಗ ಅವರು ವಿದೇಶದಲ್ಲಿ ಕೆಲಸ ಮಾಡುತ್ತಿದ್ದಾರೆ. ಸದ್ಯದಲ್ಲೇ ನಮ್ಮಿಬ್ಬರ ಎಂಗೇಜ್‌ಮೆಂಟ್ ನಡೆಯಲಿದೆ. ಮುಂದಿನ ವರ್ಷ ನಮ್ಮ ಮದುವೆ ಎಂದು ಹೇಳಿದ್ದಾರೆ. ಆದರೆ ವರನ ಹೆಸರನ್ನು ಅವರು ರಿವೀಲ್ ಮಾಡಿಲ್ಲ. ಸದ್ಯದಲ್ಲೇ ಅಧಿಕೃತವಾಗಿ ತಿಳಿಸೋದಾಗಿ ಮಾತನಾಡಿದ್ದಾರೆ. ಇನ್ನೂ ಮದುವೆಯ ಬಗ್ಗೆ ಗುಡ್ ನ್ಯೂಸ್ ಕೊಟ್ಟಿರೋದರ ನಡುವೆ ಮನೆಯ ಗೃಹಪ್ರವೇಶದ ತಯಾರಿಯ ಬ್ಯುಸಿಯಲ್ಲಿದ್ದಾರೆ. ಇದೇ ನವೆಂಬರ್ 13ರಂದು ಮಂಡ್ಯದಲ್ಲಿ ಸೋನು ಅವರ ಹೊಸ ಮನೆಯ ಗೃಹಪ್ರವೇಶದ ಕಾರ್ಯಕ್ರಮ ಜರುಗಲಿದೆ. ಈ ಸಂಭ್ರಮದಲ್ಲಿ ಬಿಗ್ ಬಾಸ್ ಸ್ಪರ್ಧಿಗಳು, ಕಿರುತೆರೆಯ ಕಲಾವಿದರು ಭಾಗಿಯಾಗಲಿದ್ದಾರೆ.

# ಹಾಟ್ ಅವತಾರ ತಾಳಿದ ಸಾನ್ಯ ಅಯ್ಯರ್



'ಬಿಗ್ ಬಾಸ್' ಬೆಡಗಿ ಸಾನ್ಯ ಅಯ್ಯರ್ ಸದಾ ಒಂದಲ್ಲಾ ಒಂದು ಗ್ಲ್ಯಾಮರಸ್ ಫೋಟೋಶೂಟ್‌ನಿಂದ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಹಾಟ್ ಅವತಾರದಲ್ಲಿ ಕಾಣಿಸಿಕೊಳ್ಳುವ ಮೂಲಕ ಪಡ್ಡೆಹುಡುಗರ ನಿದ್ದೆಗೆಡಿಸಿದ್ದಾರೆ.

ಗುರುತೇ ಸಿಗದಷ್ಟು ಹೊಸ ಲುಕ್‌ನಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಕಪ್ಪು ಬಣ್ಣದ ಮಿನಿ ಸ್ಕರ್ಟ್-ಶಾರ್ಟ್ಸ್ ಧರಿಸಿ, ಅದರ ಮೇಲೊಂದು ನ್ಯೂಡ್ ಕಲರ್ ಕ್ರಾಪ್ ಟಾಪ್ ಧರಿಸಿದ್ದಾರೆ. ಅದಕ್ಕೆ ಮ್ಯಾಚ್ ಆಗುವಂತೆ ಫ್ರಂಟ್ ಕಟ್ ಮಾಡಿರೋ ಹೇರ್ ಸ್ಟೈಲ್ ಮಾಡಿಸಿಕೊಂಡು, ಹೈ ಪಾನಿಟೇಲ್ ಕಟ್ಟಿ, ಕಣ್ಣಿಗೊಂದು ದೊಡ್ಡದಾದ ಕನ್ನಡಕ ಹಾಕಿದ್ದಾರೆ.

ಈ ಫೋಟೋಶೂಟ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಸಾನ್ಯ ಲುಕ್‌ಗೆ 'ಬಿಗ್ ಬಾಸ್ ಕನ್ನಡ 9'ರ ವಿನ್ನರ್ ರೂಪೇಶ್ ಶೆಟ್ಟಿ ಹಾರ್ಟ್ ಇಮೋಜಿ ಹಾಕಿದ್ದಾರೆ. ಇನ್ನೂ ಕೆಲ ನೆಟ್ಟಿಗರು ನಟಿಯನ್ನು ಮಾಜಿ ನೀಲಿ ತಾರೆ ಮಿಯಾ ಖಲೀಫಾರನ್ನು ಹೋಲಿಸಿ ಕಾಮೆಂಟ್ ಮಾಡಿದ್ದಾರೆ.

ಅಂದಹಾಗೆ, 'ಪುಟ್ಟಗೌರಿ ಮದುವೆ' ಸೀರಿಯಲ್ ಸೇರಿದಂತೆ ಅನೇಕ ಪ್ರಾಜೆಕ್ಟ್‌ಗಳಲ್ಲಿ ಬಾಲನಟಿಯಾಗಿ ಸಾನ್ಯ ಕೆಲಸ ಮಾಡಿದರು. ಆ ನಂತರ 'ಬಿಗ್ ಬಾಸ್ ಕನ್ನಡ 9'ರಲ್ಲಿ ಸ್ಪರ್ಧಿಯಾಗಿ ಗಮನ ಸೆಳೆದಿದ್ದರು.

ಈ ವರ್ಷ ಸಮರ್ಜಿತ್ ಲಂಕೇಶ್‌ಗೆ ನಾಯಕಿಯಾಗಿ ಗೌರಿ ಸಿನಿಮಾದಲ್ಲಿ ಸಾನ್ಯ ಅಯ್ಯರ್ ನಟಿಸಿದರು. ಈ ಚಿತ್ರವನ್ನು ಇಂದ್ರಜಿತ್ ಲಂಕೇಶ್ ನಿರ್ದೇಶನ ಮಾಡಿದರು. ಈ ಚಿತ್ರಕ್ಕೆ ಅಭಿಮಾನಿಗಳಿಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿತ್ತು.

# ಸಲ್ಮಾನ್, ಶಾರುಖ್ ಖಾನ್ ಮಾತ್ರವಲ್ಲ ಸೈಫ್ ಅಲಿ ಖಾನ್‌ಗೂ ಬಂದಿತ್ತು ಬೆದರಿಕೆ





ಸೈಫ್ ಅಲಿ ಖಾನ್ ಮತ್ತು ನಟಿ ಕರೀನಾ ಕಪೂರ್ ಅವರ ಬಗ್ಗೆ ಮತ್ತೆ ಹೇಳುವ ಅಗತ್ಯವಿಲ್ಲ ಅಗತ್ಯವಿಲ್ಲ. ಇವರಿಬ್ಬರೂ ಪವರ್ ಫುಲ್ ಪಾತ್ರಗಳಲ್ಲಿ ನಟಿಸುವ ಮೂಲಕ ಅಭಿಮಾನಿಗಳು ಮತ್ತು ಬಾಲಿವುಡ್ ಹೃದಯಗಳನ್ನು ಗೆದ್ದಿದ್ದಾರೆ. ಇಂದು ಕರೀನಾ ಸೈಫ್ ತಮ್ಮ ಇಬ್ಬರು ಮಕ್ಕಳು ಮತ್ತು ಕುಟುಂಬದೊಂದಿಗೆ ಸಂತೋಷದ ಜೀವನವನ್ನು ನಡೆಸುತ್ತಿದ್ದಾರೆ. ಆದರೆ ಸೈಫ್-ಕರೀನಾಗೆ ಬೆದರಿಕೆಯೊಂದು ಬಂದಿತ್ತು. ಅದರ ಹಿಂದಿನ ಕಾರಣ ಬಹಳ ವಿಚಿತ್ರ . ಅಂತರ್ಧರ್ಮೀಯ ವಿವಾಹದ ಕಾರಣ ಸೈಫ್-ಕರೀನಾಗೆ ಬೆದರಿಕೆಗಳು ಬಂದಿದ್ದವು. ಈ ಘಟನೆಯನ್ನು ಸ್ವತಃ ಸೈಫ್ ಸಂದರ್ಶನವೊಂದರಲ್ಲಿ ಬಹಿರಂಗಪಡಿಸಿದ್ದಾರೆ.

ನಿಜ ಹೇಳಬೇಕೆಂದರೆ ಸೈಫ್-ಕರೀನಾ ಮದುವೆಗೆ ಹಲವರು ವಿರೋಧ ವ್ಯಕ್ತಪಡಿಸಿದ್ದರು. ಸೈಫ್ ಅವರನ್ನು ಮದುವೆಯಾಗಬೇಡಿ ಎಂದು ಕರೀನಾಗೆ ಹಲವರು ಸಲಹೆ ಕೂಡ ನೀಡಿದ್ದರು. ಆದರೆ ಸೈಫ್-ಕರೀನಾ ಯಾವುದಕ್ಕೂ ಗಮನ ಕೊಡುವ ಬದಲು ತಮ್ಮ ಭಾವನೆಗಳಿಗೆ ಪ್ರಾಮುಖ್ಯತೆ ನೀಡಿ 2012ರ ಅಕ್ಟೋಬರ್ ನಲ್ಲಿ ವಿವಾಹವಾದರು. ಮದುವೆಯಾದ ನಂತರ ನಟನಿಗೆ ಬೆದರಿಕೆಗಳು ಬರಲಾರಂಭಿಸಿದವು.

ಸಂದರ್ಶನವೊಂದರಲ್ಲಿ ಸೈಫ್ ಅಲಿ ಖಾನ್ ಈ ಬಗ್ಗೆ ಮಾತನಾಡಿದ್ದರು. 'ನಮ್ಮ ಮದುವೆಗೆ ಹಲವರು ವಿರೋಧ ವ್ಯಕ್ತಪಡಿಸಿದ್ದರು. ನನ್ನ ಮಾವ ರಣಧೀರ್ ಕಪೂರ್ ಅವರಿಗೆ ಅನಾಮಧೇಯ ಪತ್ರ ಬಂದಿತ್ತು. ಪತ್ರದಲ್ಲಿ ನಮ್ಮ ಕುಟುಂಬವನ್ನು ಕೊಲ್ಲುವುದಾಗಿ ಮತ್ತು ನಮ್ಮ ಮನೆಯ ಬಳಿ ಬಾಂಬ್ ಸ್ಫೋಟಿಸುವುದಾಗಿ ಬೆದರಿಕೆ ಹಾಕಲಾಗಿತ್ತು. ಆದರೆ ಅದು ನಮಗೆ ಹೆಚ್ಚು ತೊಂದರೆ ಕೊಡಲಿಲ್ಲ. ಈ ಹಿಂದೆಯೂ ಕುಟುಂಬ ಇಂತಹ ಬೆದರಿಕೆಗಳನ್ನು ಎದುರಿಸಿದೆ' ಎಂದು ಹೇಳಿದ್ದರು ಅವರು.

'ಜನರು ನಮ್ಮ ಬಗ್ಗೆ ಏನು ಯೋಚಿಸುತ್ತಾರೆ ಎಂದು ನಾನು ಎಂದಿಗೂ ಯೋಚಿಸುವುದಿಲ್ಲ. ಬೆದರಿಕೆ ಹಾಕುವುದಕ್ಕೂ ಬೆದರಿಕೆಗಳನ್ನು ನಿಜವಾಗಿಸುವದಕ್ಕೂ ಬಹಳ ವ್ಯತ್ಯಾಸವಿದೆ. ಅಂತರ್ ಧರ್ಮೀಯ ವಿವಾಹವಾಗಿರುವುದರಿಂದ ನನ್ನ ಪೋಷಕರಿಗೂ ಇಂತಹ ಬೆದರಿಕೆಗಳು ಬಂದಿದ್ದವು' ಎಂದು ಸೈಫ್ ಅಲಿ ಖಾನ್ ಸಂದರ್ಶನವೊಂದರಲ್ಲಿ ಹೇಳಿಕೊಂಡಿದ್ದರು.

ಸೈಫ್ ಅಲಿ ಖಾನ್ ಪೋಷಕರ ಬಗ್ಗೆ ಹೇಳೋದಾದರೆ ಶರ್ಮಿಳಾ ಟ್ಯಾಗೋರ್ ಮತ್ತು ಮನ್ಸೂರ್ ಅಲಿ ಖಾನ್ ಪಟೌಡಿ ಕೂಡ ಅಂತರ್ಧರ್ಮೀಯ ವಿವಾಹ ಆಗಿದ್ದರು. ಸೈಫ್-ಕರೀನಾ ಕೂಡ ಕೆಲವೇ ಜನರ ಸಮ್ಮುಖದಲ್ಲಿ ಮದುವೆಯಾದರು. ಅವರ ಮದುವೆಯ ಫೋಟೋಗಳು ಮತ್ತು ವೀಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಇನ್ನೂ ವೈರಲ್ ಆಗಿದ್ದವು.

2012 ರಲ್ಲಿ ಸೈಫ್ ಅಲಿ ಖಾನ್ ಅವರನ್ನು ಮದುವೆಯಾದ ನಂತರ, ನಟಿ 2016 ರಲ್ಲಿ ತಮ್ಮ ಮೊದಲ ಮಗ ತೈಮೂರ್ ಅಲಿ ಖಾನ್ಗೆ ಜನ್ಮ ನೀಡಿದರು. ನಂತರ 2021 ರಲ್ಲಿ, ಕರೀನಾ ತನ್ನ ಎರಡನೇ ಮಗ ಜೆಹ್ ಅಲಿ ಖಾನ್‌ಗೆ ಜನ್ಮ ನೀಡಿದರು. ಈಗ ನಟಿ ನಿರಂತರವಾಗಿ ತನ್ನ ಮಕ್ಕಳೊಂದಿಗೆ ಚಿತ್ರಗಳು ಮತ್ತು ವೀಡಿಯೊಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡುತ್ತಾ ಇರುತ್ತಾರೆ.

# ಚಾಂಪಿಯನ್ಸ್ ಟ್ರೋಫಿಯಿಂದ ಪಾಕಿಸ್ತಾನ್ ಹಿಂದೆ ಸರಿಯುವ ಸಾಧ್ಯತೆ



ಚಾಂಪಿಯನ್ಸ್ ಟ್ರೋಫಿ 2025 ರಿಂದ ಪಾಕಿಸ್ತಾನ್ ತಂಡ ಹೊರಗುಳಿಯುವ ಸಾಧ್ಯತೆ ಇದೆ ಎಂದು ವರದಿಯಾಗಿದೆ. ಭಾರತ ತಂಡವು ಟೂರ್ನಿಯಲ್ಲಿ ಪಾಲ್ಗೊಳ್ಳಲು ಪಾಕಿಸ್ತಾನ್ ಹೋಗಲು ನಿರಾಕರಿಸಿರುವ ಕಾರಣ ಪಿಸಿಬಿ ಈ ನಿರ್ಧಾರ ತೆಗೆದುಕೊಳ್ಳಲು ಮುಂದಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ಭಾರತ ತಂಡವನ್ನು ಪಾಕಿಸ್ತಾನಕ್ಕೆ ಕಳುಹಿಸುವುದಿಲ್ಲ ಎಂದು ಈಗಾಗಲೇ ಬಿಸಿಸಿಐ ಸ್ಪಷ್ಟಪಡಿಸಿದೆ. ಈ ವಿಷಯವನ್ನು ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಪಾಕ್ ಸರ್ಕಾರದ ಮುಂದೆ ಪ್ರಸ್ತಾಪಿಸಿದೆ.

ಇದೇ ವೇಳೆ ಪಾಕ್ ಸರ್ಕಾರ ಟೂರ್ನಿಯಿಂದ ಹಿಂದೆ ಸರಿಯುವ ಬಗ್ಗೆ ಪಿಸಿಬಿ ಜೊತೆ ಚರ್ಚಿಸಿದೆ. ಹೀಗಾಗಿ ಭಾರತವು ಪಾಕಿಸ್ತಾನದಲ್ಲಿ ಆಡಲು ನಿರಾಕರಿಸಿದರೆ ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿಯಲು ಪಾಕ್ ಸರ್ಕಾರ ಸೂಚಿಸಲಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ಹೀಗಾಗಿ ಭಾರತದ ವಿಷಯದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯ ಮುಂದಿನ ನಡೆಯೇನು ಎಂಬುದನ್ನು ಕಾದು ನೋಡಲು ಪಾಕ್ ಕ್ರಿಕೆಟ್ ಮಂಡಳಿ ಮುಂದಾಗಿದೆ. ಅತ್ತ ಐಸಿಸಿ ಭಾರತದ ಪರ ನಿಲ್ಲುವ ಸಾಧ್ಯತೆ ಹೆಚ್ಚು. ಅಲ್ಲದೆ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿಯನ್ನು ಆಯೋಜಿಸಲು ಸೂಚಿಸುವ ಸಾಧ್ಯತೆಯಿದೆ.

ಐಸಿಸಿಯ ಈ ನಿರ್ಧಾರವು ಅಧಕೃತವಾದರೆ, ಚಾಂಪಿಯನ್ಸ್ ಟ್ರೋಫಿ ಆತಿಥ್ಯದ ವಿಷಯದಲ್ಲಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ತನ್ನ ನಿರ್ಧಾರ ತಿಳಿಸುವ ಸಾಧ್ಯತೆಯಿದೆ. ಅಲ್ಲದೆ ಟೂರ್ನಿಯನ್ನು ಬಹಿಷ್ಕರಿಸಿ ಪಾಕಿಸ್ತಾನ್ ಹೊರಗುಳಿಯಬಹುದು.

**ಆತಿಥ್ಯ ಬದಲಾವಣೆ:** ಒಂದು ವೇಳೆ ಪಾಕಿಸ್ತಾನ್ ತಂಡ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದರೆ, ಬೇರೊಂದು ದೇಶಕ್ಕೆ ಆತಿಥ್ಯದ ಹಕ್ಕು ದೊರೆಯಲಿದೆ. ಇಲ್ಲಿ 2023 ರ ಏಕದಿನ ವಿಶ್ವಕಪ್ ಅನ್ನು ಭಾರತ ಯಶಸ್ವಿಯಾಗಿ ಆಯೋಜಿಸಿರುವ ಕಾರಣ, ಈ ಆತಿಥ್ಯದ ಹಕ್ಕು ಬಿಸಿಸಿಐ ಪಾಲಾಗುವ ಸಾಧ್ಯತೆ ಹೆಚ್ಚು. ಏಕೆಂದರೆ ಭಾರತದ ಎಲ್ಲಾ ಸ್ಟೇಡಿಯಂಗಳನ್ನು ಕಳೆದ ವರ್ಷವಷ್ಟೇ ನವೀಕರಿಸಲಾಗಿದೆ. ಹೀಗಾಗಿ ದಿಢೀರ್ ಬದಲಾವಣೆಯಿಂದ ಐಸಿಸಿಯ ಮುಂದಿನ ಆಯ್ಕೆ ಭಾರತ ಆಗಿರಲಿದೆ.

**ಹೈಬ್ರಿಡ್ ಮಾದರಿ:** ಪಾಕಿಸ್ತಾನ್ ಚಾಂಪಿಯನ್ಸ್ ಟ್ರೋಫಿ ಆಯೋಜಿಸಬೇಕಿದ್ದರೆ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿಯನ್ನು ನಡೆಸಲೇಬೇಕು. ಹೈಬ್ರಿಡ್ ಮಾದರಿ ಎಂದರೆ, ಚಾಂಪಿಯನ್ಸ್ ಟ್ರೋಫಿ ಟೂರ್ನಿಯು ಪಾಕಿಸ್ತಾನದಲ್ಲೇ ಆಯೋಜನೆಗೊಂಡರೂ, ಟೀಮ್ ಇಂಡಿಯಾದ ಪಂದ್ಯಗಳು ತಟಸ್ಥ ಸ್ಥಳಗಳಲ್ಲಿ ನಡೆಯಲಿದೆ. ಅದರಂತೆ ಭಾರತದ ಪಂದ್ಯಗಳಿಗೆ ಯುಎಇ ಅಥವಾ ಶ್ರೀಲಂಕಾ ಆತಿಥ್ಯವಹಿಸುವ ಸಾಧ್ಯತೆ ದಟ್ಟವಾಗಿದೆ.

ಏಕೆಂದರೆ ಕಳೆದ ಬಾರಿಯ ಏಷ್ಯಾಕಪ್ ಆಯೋಜನೆಯ ಹಕ್ಕನ್ನು ಪಾಕ್ ಕ್ರಿಕೆಟ್ ಮಂಡಳಿ ಹೊಂದಿತ್ತು. ಆದರೆ ಭಾರತ ತಂಡವು ಪಾಕ್‌ಗೆ ತೆರಳಲು ಹಿಂದೇಟು ಹಾಕಿದ್ದರಿಂದ ಟೂರ್ನಿಯನ್ನು ಹೈಬ್ರೀಡ್ ಮಾದರಿಯಲ್ಲಿ ಆಯೋಜಿಸಲಾಗಿತ್ತು.

ಅದರಂತೆ ಪಾಕಿಸ್ತಾನ್ ಹಾಗೂ ಶ್ರೀಲಂಕಾದಲ್ಲಿ ಏಷ್ಯಾಕಪ್‌ನ್ನು ಆಯೋಜಿಸಲಾಗಿತ್ತು. ಇಲ್ಲಿ ಭಾರತ ತಂಡವು ಫೈನಲ್ ಸೇರಿದಂತೆ ತನ್ನೆಲ್ಲಾ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಿತ್ತು. ಇದೀಗ ಚಾಂಪಿಯನ್ಸ್ ಟ್ರೋಫಿಗಾಗಿ ಪಾಕಿಸ್ತಾನಕ್ಕೆ ತೆರಳಲು ಟೀಮ್ ಇಂಡಿಯಾ ಹಿಂದೇಟು ಹಾಕಿದ್ದು, ಹೀಗಾಗಿ ಚಾಂಪಿಯನ್ಸ್ ಟ್ರೋಫಿಯನ್ನು ಕೂಡ ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಬೇಕಾದ ಅನಿವಾರ್ಯತೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಮುಂದಿದೆ.

# ಗುರ್ಬಾಝ್ ಅಬ್ಬರಕ್ಕೆ ವಿರಾಟ್ ಕೊಹ್ಲಿ ಸಚಿನ್ ತೆಂಡೂಲ್ಕರ್ ದಾಖಲೆ ಉಡೀಸ್



ಶಾರ್ಜಾದಲ್ಲಿ ನಡೆದ ಬಾಂಗ್ಲಾದೇಶ್ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ರಹಮಾನುಲ್ಲಾ ಗುರ್ಬಾಝ್ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿದಿದ್ದ ಗುರ್ಬಾಝ್ 120 ಎಸೆತಗಳಲ್ಲಿ 7 ಸಿಕ್ಸ್ ಹಾಗೂ 5 ಫೋರ್ ಗಳೊಂದಿಗೆ 101 ರನ್ ಬಾರಿಸಿದ್ದರು.

ಈ ಭರ್ಜರಿ ಶತಕದೊಂದಿಗೆ ಏಕದಿನ ಕ್ರಿಕೆಟ್‌ನಲ್ಲಿ ಅತೀ ಕಡಿಮೆ ವಯಸ್ಸಿನಲ್ಲಿ ಅತ್ಯಧಿಕ ಶತಕ ಸಿಡಿಸಿದ ಏಷ್ಯನ್ ಬ್ಯಾಟರ್ ಎನಿಸಿಕೊಂಡರು. ಇದಕ್ಕೂ ಮುನ್ನ ಈ ವಿಶೇಷ ದಾಖಲೆ ವಿರಾಟ್ ಕೊಹ್ಲಿ ಹಾಗೂ ಸಚಿನ್ ತೆಂಡೂಲ್ಕರ್ ಹೆಸರಿನಲ್ಲಿತ್ತು.

ಸಚಿನ್ ತೆಂಡೂಲ್ಕರ್ ತಮ್ಮ 22ನೇ (357 ದಿನಗಳು) ವಯಸ್ಸಿನಲ್ಲಿ 8 ಏಕದಿನ ಶತಕ ಸಿಡಿಸಿದ್ದರು. ಹಾಗೆಯೇ ವಿರಾಟ್ ಕೊಹ್ಲಿ 23ನೇ (027 ದಿನಗಳು) ವಯಸ್ಸಿನಲ್ಲಿ 8 ಏಕದಿನ ಶತಕ ಬಾರಿಸಿದ್ದರು.

ಆದರೀಗ 22ನೇ (349 ದಿನಗಳು) ವಯಸ್ಸಿನಲ್ಲಿ 8ನೇ ಶತಕ ಸಿಡಿಸುವ ಮೂಲಕ ರಹಮಾನುಲ್ಲಾ ಗುರ್ಬಾಝ್ ವಿರಾಟ್ ಕೊಹ್ಲಿ ಹಾಗೂ ಸಚಿನ್ ತೆಂಡೂಲ್ಕರ್ ದಾಖಲೆ ಮುರಿದಿದ್ದಾರೆ. ಅಲ್ಲದೆ 23 ವರ್ಷದೊಳಗೆ ಅತ್ಯಧಿಕ ಏಕದಿನ ಶತಕ ಸಿಡಿಸಿದ ಏಷ್ಯನ್ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಹಾಗೆಯೇ 23 ವರ್ಷದೊಳಗೆ ಅತೀ ಹೆಚ್ಚು ಸೆಂಚುರಿ ಸಿಡಿಸಿದ ವಿಶ್ವದ ಎರಡನೇ ಬ್ಯಾಟರ್ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಈ ಪಟ್ಟಿಯಲ್ಲಿ ಸೌತ್ ಆಫ್ರಿಕಾದ ಕ್ವಿಂಟನ್ ಡಿಕಾಕ್ ಅಗ್ರಸ್ಥಾನದಲ್ಲಿದ್ದಾರೆ.

ಕ್ವಿಂಟನ್ ಡಿಕಾಕ್ 22ನೇ (312 ದಿನಗಳು) ವಯಸ್ಸಿನಲ್ಲಿ ಒಟ್ಟು 8 ಏಕದಿನ ಸೆಂಚುರಿ ಸಿಡಿಸಿ ಈ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಇದೀಗ ಈ ಪಟ್ಟಿಯಲ್ಲಿ ರಹಮಾನುಲ್ಲಾ ಗುರ್ಬಾಝ್ ದ್ವಿತೀಯ ಸ್ಥಾನಕ್ಕೇರುವಲ್ಲಿ ಯಶಸ್ವಿಯಾಗಿದ್ದಾರೆ.

ಇನ್ನು ಗುರ್ಬಾಝ್ ಅವರ ಶತಕದ ನೆರವಿನಿಂದ ಈ ಪಂದ್ಯದಲ್ಲಿ ಅಫ್ಘಾನಿಸ್ತಾನ್ ತಂಡ ಭರ್ಜರಿ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ್ ತಂಡವು 50 ಓವರ್‌ಗಳಲ್ಲಿ 244 ರನ್ ಕಲೆಹಾಕಿತು. ಈ ಗುರಿಯನ್ನು 48.2 ಓವರ್‌ಗಳಲ್ಲಿ ಚೇಸ್ ಮಾಡಿ ಅಫ್ಘಾನಿಸ್ತಾನ್ 5 ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ 3 ಪಂದ್ಯಗಳ ಸರಣಿಯನ್ನು 2-1 ಅಂತರದಿಂದ ಗೆದ್ದುಕೊಂಡಿದೆ.

# ಹೆಚ್‌ಡಿಕೆ ಬಣ್ಣದ ಬಗ್ಗೆ ಜಮೀರ್ ನಿಂದನೆ

## ವಿವಾದದ ಬಳಿಕ ಪ್ರೀತಿಯಿಂದ ಕರೆದಿದ್ದು ಅಂತ ಸ್ಪಷ್ಟನೆ




**ಬೆಂಗಳೂರು:** ಬೈ ಎಲೆಕ್ಷನ್ ಹೊತ್ತಲ್ಲಿ ಸಚಿವ ಜಮೀರ್ ವಿವಾದದ ಮೇಲೆ ವಿವಾದ ಮೈಮೇಲೆ ಎಳೆದುಕೊಳ್ತಿದ್ದಾರೆ. ವಕ್ಫ್ ಆಸ್ತಿ ವಿಚಾರ ಕೆದಕಿ ಜನಾಕ್ರೋಶಕ್ಕೆ ತುತ್ತಾಗಿರುವ ಸಚಿವ ಜಮೀರ್, ಇದೀಗ ಕುಮಾರಸ್ವಾಮಿ ಬಗ್ಗೆ ಅನುಚಿತ ಪದ ಬಳಸಿ ಮತ್ತೊಮ್ಮೆ ವಿವಾದಕ್ಕೆ ಕಾರಣರಾಗಿದ್ದಾರೆ.

ಚನ್ನಪಟ್ಟಣದಲ್ಲಿ ಪ್ರಚಾರ ವೇಳೆ ಕುಮಾರಸ್ವಾಮಿ ಬಣ್ಣದ ಬಗ್ಗೆ ಮಾತಾಡಿ ಲೇವಡಿ ಮಾಡಿದ್ದಾರೆ. ಕರಿಯಾ ಕುಮಾರಸ್ವಾಮಿ ಎಂದು ಜರೆದಿದ್ದಾರೆ. ಅಷ್ಟೇ ಅಲ್ಲ, ಇನ್ನೊಂದು ಹೆಜ್ಜೆ ಮುಂದೆ ಹೋದ ಜಮೀರ್, ಹಿಂದೆ ಹಿಜಬ್ ಬೇಡ ಎಂದಿದ್ದ ಕುಮಾರಸ್ವಾಮಿಗೆ ಈಗ ಮುಸ್ಲಿಮರ ವೋಟ್ ಬೇಕಾ ಎಂದು ಪ್ರಶ್ನಿಸಿದ್ದಾರೆ.

ನಿನ್ ರೇಟ್ ಎಷ್ಟು ಹೇಳು.. ಮುಸ್ಲಿಮರೆಲ್ಲಾ ಸೇರಿ ನಿಮ್ಮ ಕುಟುಂಬವನ್ನು ಖರೀದಿ ಮಾಡ್ತಾರೆ ಅಂತಾ ಸವಾಲ್ ಹಾಕಿದ್ದಾರೆ. ಜಮೀರ್ ಮಾತುಗಳೀಗ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ. ಇದು ಜನಾಂಗೀಯ ನಿಂದನೆ.. ಎಂದು ಜೆಡಿಎಸ್ ಟೀಕಿಸಿದೆ. ಇದು ಅಕ್ಷಮ್ಯ.. ಜಮೀರ್ ವಿರುದ್ಧ ಕ್ರಮ ಆಗ್ಬೇಕು.. ರಾಜೀನಾಮೆ ಪಡೀಬೇಕು ಎಂದು ಆಗ್ರಹಿಸಿದೆ. ಜಮೀರ್ ಹೇಳಿಕೆ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡಿದೆ. ಕೇಂದ್ರ ಸಚಿವ ಕಿರಣ್ ರಿಜಿಜು ಟ್ವೀಟ್ ಮೂಲಕ ಆಕ್ರೋಶ ಹೊರಹಾಕಿದ್ದಾರೆ. ಮಾಜಿ ಸಿಎಂ ಯಡಿಯೂರಪ್ಪ, ಅಶೋಕ್ ಸೇರಿ ಹಲವರು ಆಕ್ರೋಶ ಹೊರಹಾಕಿದ್ದಾರೆ. ಈ ಬೆನ್ನಲ್ಲೇ ಎಚ್ಚೆತ್ತ ಜಮೀರ್ ಅಹ್ಮದ್, ಕುಮಾರಸ್ವಾಮಿ ನನ್ನನ್ನು ಕುಳ್ಳ ಅಂತಾರೆ.. ನಾನು ಪ್ರೀತಿಯಿಂದ ಕರಿಯಾ ಅಂದಿದ್ದೀನಿ ಅಷ್ಟೇ.. ನಮ್ಮ ಸಮಾಜವನ್ನು ಖರೀದಿ ಮಾಡಲಾಗಲ್ಲ ಅಂದಿದ್ದೇನೆ ಅಷ್ಟೇ ಅಂತಾ ತೇಪೆ ಹಚ್ಚಲು ನೋಡಿದ್ದಾರೆ.

**ಚನ್ನಪಟ್ಟಣ ಎಲೆಕ್ಷನ್‌ಗೆ ಸ್ಟೀಲ್, ಕಾಂಟ್ರಾಕ್ಟ್ ದುಡ್ಡಾ?:** ಚನ್ನಪಟ್ಟಣ ಚುನಾವಣೆಗೆ ಸ್ಟೀಲ್ ಕಂಪನಿ ದುಡ್ಡನ್ನು ಕುಮಾರಸ್ವಾಮಿ ಹರಿಸ್ತಿದ್ದಾರೆ ಎಂಬ ಚಲುವರಾಯಸ್ವಾಮಿ ಆರೋಪಕ್ಕೆ ಜೆಡಿಎಸ್ ಗರಂ ಆಗಿದೆ.ಚ ಲುವರಾಯಸ್ವಾಮಿಯನ್ನು ಕೆರೆ ಕಳ್ಳ, ವಂಚಕ ಮಂತ್ರಿ, ಲೂಟಿಕೋರ ಎಂಬ ಪದಪುಂಜ ಬಳಸಿ ಜೆಡಿಎಸ್ ಟ್ವೀಟ್ ಮೂಲಕ ಆಕ್ರೋಶ ಹೊರಹಾಕಿದೆ. ಗುತ್ತಿಗೆದಾರನಿಗೆ ಮಂಡ್ಯ ಲೋಕಸಭೆ ಟಿಕೆಟ್ ಕೊಡಿಸಿ ಎಷ್ಟು ಸಂಪಾದಿಸಿದ್ದೀಯಾ ಅಂತಾ ಗೊತ್ತಿದೆ ಎಂದು ತರಾಟೆಗೆ ತೆಗೆದುಕೊಂಡಿದೆ. ಇದ್ರ ಮಧ್ಯೆಯೂ, ಕುಮಾರಸ್ವಾಮಿ ಕಲೆಕ್ಷನ್ ಗಿರಾಕಿ.. ಎಂದು ಚಲುವರಾಯಸ್ವಾಮಿ ಕರೆದಿದ್ದಾರೆ. ಅವರು ಎಲೆಕ್ಷನ್ ಕಲೆಕ್ಷನ್ ಹೇಗೆ ಮಾಡ್ತಾರೆ ಗೊತ್ತು ಎಂದಿದ್ದಾರೆ. ಇನ್ನು ಸ್ಟೀಲ್ ಜೊತೆಗೆ ಮೈನಿಂಗ್ ದುಡ್ಡಲ್ಲಿ ಕುಮಾರಸ್ವಾಮಿ ಎಲೆಕ್ಷನ್ ಮಾಡ್ತಿದ್ದಾರೆ ಎಂಬರ್ಥದ ಹೇಳಿಕೆಯನ್ನು ಡಿಸಿಎಂ ನೀಡಿದ್ದಾರೆ. ಇದಕ್ಕೆ ಬಿಜೆಪಿ ಕೌಂಟರ್ ನೀಡಿದೆ. ಗುತ್ತಿಗೆದಾರರಿಂದ ಸಂಗ್ರಹಿಸಿದ ಹಣದಲ್ಲಿ ಕಾಂಗ್ರೆಸ್ ಎಲೆಕ್ಷನ್ ಮಾಡ್ತಿದೆ ಎಂದು ಕೇಂದ್ರ ಸಚಿವ ಸೋಮಣ್ಣ ಪ್ರತ್ಯಾರೋಪ ಮಾಡಿದ್ದಾರೆ. ಈ ಮಧ್ಯೆ, ಹಣ ಹಂಚಿಕೆ ಆರೋಪದಡಿ ಸಚಿವ ಜಮೀರ್ ವಿರುದ್ಧ ಚುನಾವಣಾ ಆಯೋಗ ದೂರು ದಾಖಲಿಸಿಕೊಂಡಿದೆ.

# ಮಿಸ್ಟರ್ ದೇವೇಗೌಡ, ನಿಮ್ಮನ್ನ ಸಿಎಂ ಮಾಡಿದ್ದು ಯಾರು?



**ರಾಮನಗರ:** ದ್ವೇಷದ ರಾಜಕಾರಣ ಮಾಡೋದ್ರಲ್ಲಿ ದೇವೇಗೌಡರು ನಂಬರ್ 1. ಉಸಿರಿರುವ ವರೆಗೆ ಮೇಕೆದಾಟು ಮಾಡ್ತೇನೆ ಅಂದಿದ್ದಾರೆ, ಮಿಸ್ಟರ್ ದೇವೇಗೌಡ, ನಿಮ್ಮನ್ನ ಸಿಎಂ ಮಾಡಿದ್ದು ಯಾರು? ಮೇಕೆದಾಟು ಮಾಡಿಸಲು ಮೋದಿಯನ್ನ ಹಾಡಿ ಹೊಗಳ್ತೀರಿ. ಇದೇ 2019ರ ಲೋಕಸಭಾ ಚುನಾವಣೆಯಲ್ಲಿ ಮೋದಿ ಬಗ್ಗೆ ಏನು ಹೇಳಿದ್ರು? ಕುಮಾರಸ್ವಾಮಿ ಮೋದಿಯಂತಹ ಸುಳ್ಳುಗಾರ ಇಲ್ಲ ಅಂತ ಹೇಳಿದ್ದರು. ದೇವೇಗೌಡರು ಮೋದಿ ಯಾವುದೇ ಕಾರಣಕ್ಕೂ ಪ್ರಧಾನಿ ಆಗಲ್ಲ, ಒಂದು ವೇಳೆ ಪ್ರಧಾನಿ ಆದ್ರೆ ದೇಶ ಬಿಡ್ತೀನಿ ಅಂದರು, ಬಿಟ್ರಾ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈತ್ರಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರಚಾರದ ಕೊನೆಯ ದಿನದ ಭಾಗವಾಗಿ ಚನ್ನಪಟ್ಟಣದ ಕಾಂಗ್ರೆಸ್ ಸಮಾವೇಶದಲ್ಲಿ ಮಾತನಾಡಿದ ಸಿಎಂ, ಇಷ್ಟು ಸಂಖ್ಯೆಯಲ್ಲಿ ಜನ ಸೇರಿರೋದು ನೋಡಿದ್ರೆ, ಯೋಗೇಶ್ವರ್ ಗೆಲ್ಲುವ ವಿಶ್ವಾಸ ಬಂದಿದೆ. ಸೂರ್ಯ, ಚಂದ್ರ ಹುಟ್ಟೋದು ಎಷ್ಟು ಸತ್ಯವೋ ಯೋಗೇಶ್ವರ್ ಗೆಲುವು ಕೂಡಾ ಅಷ್ಟೇ ಸತ್ಯ. ಈ ಕ್ಷೇತ್ರದ ಜನರಿಗೆ ಅರ್ಥ ಆಗಿದೆ. ಯಾರು ಜನರ ಜೊತೆ ಇರ್ತಾರೆ? ಯಾರು ಅಭಿವೃದ್ಧಿ ಮಾಡ್ತಾರೆ ಅಂತ ಗೊತ್ತಿದೆ. ಯೋಗೇಶ್ವರ್ 5 ಬಾರಿ ಶಾಸಕರಾಗಿದ್ದವರು. ಅವರು ಶಾಸಕರಾಗಿದ್ದಾಗ ಸಾಕಷ್ಟು ಅಭಿವೃದ್ಧಿ ಮಾಡಿದ್ದಾರೆ. ಅವರನ್ನ ಆಧುನಿಕ ಭಗೀರಥ ಅಂತ ಕರೀತಾರೆ. ಕೆರೆಗಳಿಗೆ ನೀರು ತುಂಬಿಸಿ ರೈತರಿಗೆ ಸಹಾಯ ಮಾಡಿದ್ದಾರೆ. ನಾನು 6ನೇ ತಾರೀಖು ಬಂದಾಗ ಎಲ್ಲಾ ಕಡೆ ಹಸಿರು, ಹೈನುಗಾರಿಕೆ ಆಗ್ತಿದೆ. ಅದಕ್ಕೆ ಯೋಗೇಶ್ವರ್ ಹೇಳಿದ್ರು ಕೆರೆಗಳಿಗೆ ನೀರು ತುಂಬಿಸಿದ್ದೇನೆ ಅಂದ್ರು. ಹಾಗಾಗಿ ಈ ಕ್ಷೇತ್ರ ಎಲ್ಲಾ ಕಡೆ ಹಸಿರಾಗಿ ಕಾಣುತ್ತೆ ಎಂದು ಯೋಗೇಶ್ವರ್ ಪರ ಬ್ಯಾಟ್ ಬೀಸಿದರು.

ಪ್ರತಿ ಮನೆಯಲ್ಲೂ ಹಸುಗಳ ಸಾಕಿ, ದಿನಕ್ಕೆ 3 ಲಕ್ಷ ಲೀ. ಹಾಲು ಉತ್ಪಾದನೆ ಆಗ್ತಿದೆ. ಅದಕ್ಕೆ ಹಾಲಿನ ದರ ಏರಿಕೆಗೆ ಮನವಿ ಮಾಡಿದ್ರು. ಪಕ್ಕದ ರಾಜ್ಯಗಳಿಗೆ ಹೋಲಿಕೆ ಮಾಡಿದ್ರೆ ಕರ್ನಾಟಕದಲ್ಲಿ ರೈತರಿಗೆ ಹಾಲಿನ ದರ ಕಡಿಮೆ ಇದೆ. ಹಾಗಾಗಿ ಸಹಾಯ ಧನ ಹೆಚ್ಚು ಮಾಡಿ ಅಂತ ಮನವಿ ಮಾಡಿದ್ರು. ರೈತರ ಹಾಲಿನ ದರ, ಮಾರಟದ ದರದ ಹೆಚ್ಚಳದ ಬಗ್ಗೆ ಮನವಿ ಮಾಡಿದ್ದಾರೆ. ಚುನಾವಣೆ ಬಳಿಕ ರೈತರ ಪರವಾದ ತೀರ್ಮಾನ ಮಾಡ್ತೀನಿ ಎಂದು ಸಿಎಂ ಭರವಸೆ ನೀಡಿದರು.

ಯೋಗೇಶ್ವರ್ ಸಾಮಾನ್ಯ ಕುಟುಂಬದಿಂದ ಬಂದ ಅಭ್ಯರ್ಥಿ. ಇವರ ವಿರುದ್ಧ ನಿಖಿಲ್ ಕುಮಾರಸ್ವಾಮಿ ಅಭ್ಯರ್ಥಿ. ಪಾಪ ಈಗಾಗಲೇ ಎರಡು ಕಡೆ ಸೋತಿದ್ದಾರೆ. ಕುಮಾರಸ್ವಾಮಿ ಸಿಎಂ ಆಗಿದ್ದಾಗಲೇ ಮಂಡ್ಯದಲ್ಲಿ ಸೋತರು. ರಾಮನಗರದಲ್ಲೂ ಸೋತರು, ಕುಮಾರಸ್ವಾಮಿ ಅವರ ಬಾವನ ಗೆಲುವಿಗೆ ಯೋಗೇಶ್ವರ್ ಕೆಲಸ ಮಾಡಿದ್ರು. ಆಗ ಯೋಗೇಶ್ವರ್‌ಗೆ ಟಿಕೆಟ್ ಕೊಡುವ ಮಾತು ಕೊಟ್ಟು ಅನ್ಯಾಯ ಮಾಡಿದ್ರು. ಯಾರಿಗೆ ಟಿಕೆಟ್ ಕೊಡಬೇಕಿತ್ತು, ನಿಖಿಲ್‌ಗೆ ಟಿಕೆಟ್ ಕೊಡಬೇಕಿತ್ತಾ? ಪುತ್ರ ವ್ಯಾಮೋಹದಿಂದ ನಿಖಿಲ್‌ಗೆ ಟಿಕೆಟ್ ಕೊಟ್ರು, ಎಂದು ತಿವಿದರು.

ದೇವೇಗೌಡರು ಇದಾರಲ್ಲ, ನಾನು ಅವರ ಜೊತೆ ಇದ್ದವನು. ಅವರು ಯಾವ ಒಕ್ಕಲಿಗ ಲೀಡರ್ ಗಳನ್ನೂ ಬೆಳೆಸಲಿಲ್ಲ. ಯಾರು ಯಾರು ಒಕ್ಕಲಿಗ ಪ್ರಬುದ್ಧ ಲೀಡರ್ ಗಳಿರ್ತಾರೆ ಅವರನ್ನ ಬೆಳಿಸಿಲ್ಲ. ಸಾಕಷ್ಟು ನಾಯಕರ ಪಟ್ಟಿ ಓದಿ ದೇವೇಗೌಡರಿಗೆ ಕೌಂಟರ್ ಕೊಟ್ಟರು. ನಾನು ಹಿಂದುಳಿದ ವರ್ಗದ ನಾಯಕ ನನ್ನನ್ನ ಬಿಟ್ಟುಬಿಡಿ. ಯಾರನ್ನಾದರೂ ಒಬ್ಬ ಒಕ್ಕಲಿಗ ನಾಯಕನನ್ನ ಬೆಳೆಸಿದ್ದಾರಾ? ತೋರಿಸಲಿ. ಯಾವ ಒಕ್ಕಲಿಗ ನಾಯಕರನ್ನ ಬೆಳೆಸಿದ್ದೀರಿ ಹೇಳಿ? ಅವರು ಹೇಳಿದಂತೆ ನಡೆದುಕೊಳ್ಳಲಿಲ್ಲ ಅಂದ್ರೆ ಮುಗಿಸ್ತಾರೆ. ಈಗ ಜಿ.ಟಿ.ದೇವೇಗೌಡರಿಗೂ ಕಾಟ ಕೊಡ್ತವ್ರೆ, ಎಂದು ಆಕ್ಷೇಪ ವ್ಯಕ್ತಪಡಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com